KA/BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪ | ಬೆಂಗಳೂರು, ಗುರುವಾರ, ಅಕ್ಟೋಬರ್ ೧, ೨೦೦೯ (ಆಶ್ವಯುಜ ೯, ಶಕ ವರ್ಷ ೧೯೩೧) | ಸಂಚಿಕೆ ೩೯

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ವಸತಿ ಸಚಿವಾಲಯ

ವಿಷಯ: ಕೇಂದ್ರ ಪುರಸ್ಕೃತ ನರ್ಮ್ ಯೋಜನೆಯ ಐಹೆಚ್‌ಎಸ್‌ಡಿಪಿ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನದ ಬಿಡುಗಡೆ ಬಗ್ಗೆ.

ಓದಲಾಗಿದೆ: 1) ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಇವರ ಪತ್ರ ಸಂಖ್ಯೆ:ಕಕೊನಿಮ:ಲೆ.ಪ.ಶಾ: ನರ್ಮ್/ಐಹೆಚ್‌ಎಸ್‌ಡಿಪಿ:2009-10, ದಿ:28-04-09.

2) ಸರ್ಕಾರದ ಆದೇಶ ಸಂಖ್ಯೆ:ವಇ 60 ಕೊಮಂಲೆ 05 (ಭಾ), ದಿನಾಂಕ:06-08-07, 27-03-2008, 31-03-2008 (ತಿದ್ದುಪಡಿ), 21-08-2008.

3) ಆರ್ಥಿಕ ಇಲಾಖೆ (ವೆಚ್ಚ 3/9) ಹಿಂಬರಹ ಸಂಖ್ಯೆ:FD 324 Exp-9/09, ದಿನಾಂಕ:06-07-2009.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಆಯುಕ್ತರು ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ 25 ನಗರ/ಪಟ್ಟಣಗಳಲ್ಲಿ ನಿರ್ಮಿಸುತ್ತಿರುವ ಮನೆಗಳ ನಿರ್ಮಾಣ ಹಾಗೂ ಮೂಲಭೂತ ಸೌಲಭ್ಯಗಳ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಹಾಗೂ ನಿಗಧಿತ ಅವಧಿಯೊಳಗೆ ಕೈಗೊಂಡಿರುವ ಯೋಜನೆಯನ್ನು ಪೂರ್ಣಗೊಳಿಸುವ ಉದ್ದೇಶದಿಂದ ಮೊದಲನೇ ಕಂತಿನ ಉಳಿಕೆ ರಾಜ್ಯ ಸರ್ಕಾರದ ವಂತಿಗೆ ರೂ.3968.97 ಲಕ್ಷಗಳನ್ನು 2009-10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಮೊತ್ತದಲ್ಲಿ ಮಂಡಳಿಗೆ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಕೇಂದ್ರ ಸರ್ಕಾರದ ವಂತಿಗೆ ರೂ.7288.07 ಲಕ್ಷಗಳನ್ನು ಮತ್ತು ರಾಜ್ಯ ಸರ್ಕಾರದ ವಂತಿಗೆ ರೂ.561.55 ಲಕ್ಷಗಳನ್ನು ಉಲ್ಲೇಖ (2) ರಲ್ಲಿ ತಿಳಿಸಿರುವ ಸರ್ಕಾರಿ ಆದೇಶಗಳಲ್ಲಿ ಬಿಡುಗಡೆಗೊಳಿಸಲಾಗಿರುತ್ತದೆ ವಿವರ ಕೆಳಕಂಡಂತಿದೆ:

(ರೂ.ಲಕ್ಷಗಳಲ್ಲಿ)

ಕೇಂದ್ರದ ಪಾಲು	ರಾಜ್ಯದ ಪಾಲು
1413.49	089.51
0681.45	210.00
0895.17	262.04
1996.13	
2301.83	
ಒಟ್ಟು **7288.07**	**561.55**

ಮೊದಲನೇ ಕಂತಿನ ರಾಜ್ಯ ಸರ್ಕಾರದ ವಂತಿಗೆ ರೂ.4530.52 ಲಕ್ಷಗಳಲ್ಲಿ (IEC & O&M Cost ರೂ.2391.00 ಲಕ್ಷಗಳನ್ನು ಹೊರತುಪಡಿಸಿ) ಮನೆಗಳನ್ನು ನಿರ್ಮಿಸಲು ರೂ.561.55 ಲಕ್ಷಗಳನ್ನು ಮಾತ್ರ ಬಿಡುಗಡೆ ಮಾಡಿದ್ದು, ಮೊದಲನೇ ಕಂತಿನ ಉಳಿಕೆ ರಾಜ್ಯ ಸರ್ಕಾರದ ವಂತಿಗೆ ರೂ.3968.97 ಲಕ್ಷಗಳನ್ನು 2009–10ನೇ ಸಾಲಿನ ಆಯವ್ಯಯದಲ್ಲಿ ಐಹೆಚ್‌ಎಸ್‌ಡಿಪಿ ಲೆಕ್ಕ ಶೀರ್ಷಿಕೆ 2217–04–191–2–03 ಯಡಿಯಲ್ಲಿ ರೂ.5500.00 ಲಕ್ಷಗಳನ್ನು ಒದಗಿಸಲಾಗಿರುವುದರಿಂದ ಉಳಿಕೆ ರಾಜ್ಯದ ಪಾಲನ್ನು ಬಿಡುಗಡೆ ಮಾಡಬೇಕೆಂದು ಕೋರಿದ್ದರ ಪ್ರಸ್ತಾವನೆಗೆ ಮೇಲೆ ಓದಲಾದ ಉಲ್ಲೇಖ (3)ರಲ್ಲಿ ಸರ್ಕಾರದ ಪ್ರಸ್ತಾವನೆಯನ್ನು ಪರಿಶೀಲಿಸಿ, ಆರ್ಥಿಕ ಇಲಾಖೆಯು ತನ್ನ ಹಿಂಬರಹದಲ್ಲಿ ರೂ.16.02 ಕೋಟಿಯನ್ನು ರಾಜ್ಯ ಸರ್ಕಾರದ ಪಾಲಾಗಿ ಬಿಡುಗಡೆಗೊಳಿಸಿರುತ್ತದೆ.

ಸರ್ಕಾರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಇ 10 ಕೊಮಂಲೆ 2009, ಬೆಂಗಳೂರು, ದಿನಾಂಕ: 17ನೇ ಜುಲೈ 2009

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆಯಡಿ ಮನೆಗಳ ನಿರ್ಮಾಣ ಮತ್ತು ಮೂಲಭೂತ ಸೌಲಭ್ಯಗಳಿಗಾಗಿ ರಾಜ್ಯದ ಪಾಲಾಗಿ ರೂ.16.02 ಕೋಟಿ (ರೂಪಾಯಿ ಹದಿನಾರು ಕೋಟಿ ಎರಡು ಲಕ್ಷ ಮಾತ್ರ) ಯನ್ನು 2009–10ನೇ ಸಾಲಿನಲ್ಲಿ (ಘಟಕ ವೆಚ್ಚ ರೂ.80,000 ದಂತೆ) ಐಹೆಚ್‌ಎಸ್‌ಡಿಪಿ ಲೆಕ್ಕ ಶೀರ್ಷಿಕೆ 2217–04–191–2–03–106 ಯಡಿಯಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಗೆ ಬಿಡುಗಡೆ ಮಾಡಿ ಸರ್ಕಾರ ಆದೇಶಿಸಿದೆ.

ಕಾಲಕಾಲಕ್ಕೆ ಕೇಂದ್ರದಿಂದ ಹೊರಡಿಸುವ ಸೂಚನೆ, ಮಾರ್ಗಸೂಚನೆ, ಕೇಂದ್ರ ಸಿಎಸ್‌ಸಿ ಸಭೆಯ ನಡವಳಿಯಲ್ಲಿ ನೀಡಿರುವ ಸೂಚನೆ, ಎಸ್‌ಎಲ್‌ಇಸಿ (ಐಹೆಚ್‌ಎಸ್‌ಡಿಪಿ) ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಜೊತೆಗೆ ಕೆಳಕಂಡ ಷರತ್ತುಗಳನ್ನು ಪಾಲಿಸಬೇಕೆಂದು ಸೂಚಿಸಲಾಗಿದೆ.

1. ಈ ಮೊತ್ತವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಫಲಾನುಭವಿಗಳಿಂದ ವಂತಿಕೆಯು ನಿಯಮಿತವಾಗಿ ಪಾವತಿಯಾಗುವಂತೆ ಕ್ರಮ ವಹಿಸತಕ್ಕದ್ದು.
3. ಯೋಜನೆಯ ಅನುಷ್ಠಾನದ ಹಂತದ ಬಗ್ಗೆ ಕಾಲಕಾಲಕ್ಕೆ ವರದಿಗಳನ್ನು ರಾಜ್ಯ ಸರ್ಕಾರಕ್ಕೆ/ಕೇಂದ್ರ ಸರ್ಕಾರಕ್ಕೆ ನೀಡತಕ್ಕದ್ದು.
4. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನದ ಬಗ್ಗೆ ಪ್ರತ್ಯೇಕ ಲೆಕ್ಕವನ್ನು ಇಡತಕ್ಕದ್ದು.
5. ಸರ್ಕಾರಕ್ಕೆ ಆಡಿಟ್ ವರದಿಯನ್ನು ನಿಗದಿತ ಸಮಯಕ್ಕೆ ಸಲ್ಲಿಸತಕ್ಕದ್ದು.
6. ನಿಗಧಿತ ಅವಧಿಯೊಳಗೆ ಬಳಕೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
7. ಈ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿರುವ ಮೊತ್ತವನ್ನು ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯು, ವಸತಿ ಇಲಾಖೆಯ ಉಪ ಕಾರ್ಯದರ್ಶಿಯವರ ಮೇಲು ಸಹಿ ಪಡೆದ ನಂತರ ಪಡೆಯತಕ್ಕದ್ದು.

ಮುಂದುವರೆದು, ಕೇಂದ್ರದ ನೂತನ ಮಾರ್ಗಸೂಚಿಯನ್ವಯ ಐಹೆಚ್‌ಎಸ್‌ಡಿಪಿ ಯೋಜನೆಯಡಿ ನಿರ್ಮಿಸುವ ಮನೆಗಳ ಘಟಕ ವೆಚ್ಚವನ್ನು 2007–08 ಮತ್ತು 2008–09ನೇ ಸಾಲಿಗೆ ರೂ.80,000 ದಿಂದ ರೂ.1 ಲಕ್ಷಕ್ಕೆ ಹೆಚ್ಚಿಸಲು, ಅದರಂತೆ ರಾಜ್ಯದ ಪಾಲನ್ನು ಒದಗಿಸಲು ಆರ್ಥಿಕ ಇಲಾಖೆಯು ಅನುಮೋದನೆ ನೀಡಿದ್ದು, ಉಳಿದಂತೆ ಕೊರತೆಯನ್ನು ಫಲಾನುಭವಿಗಳು ಭರಿಸಲು (. . . for the remaining gap the beneficiary should be asked to contribute) ಕೋರಬಹುದೆಂದು ಸೂಚಿಸಿರುವುದರಿಂದ ಅದರಂತೆ ಕ್ರಮ ವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಎಫ್‌ಡಿ 324 ವೆಚ್ಚ–9/2009, ದಿನಾಂಕ:06–07–2009. ಸೂಚನೆಯಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 1883

ಜಿ.ಆರ್. ನಾಗರಾಜ

ಪೀಠಾಧಿಕಾರಿ–4, ವಸತಿ ಇಲಾಖೆ.

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ: ಕೋಲಾರ ಜಿಲ್ಲಾ ಗ್ಯಾಸೆಟಿಯರ್‌ನ ಆಂಗ್ಲ ಆವೃತ್ತಿಯ ಮುದ್ರಣ ಮತ್ತು ಪ್ರಕಟಣೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಬೆಂಗಳೂರು ಇವರ ಪತ್ರ ಸಂ:ಕಗ್ಯಾಇ/ಕೋಜಿಗ್ಯಾ/2009–10 ದಿ: 21.05.2009 ಮತ್ತು 03.07.2009

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 21.05.2009 ಮತ್ತು 03.07.2009ರ ಪತ್ರದಲ್ಲಿ ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರು 2009-10ನೇ ಸಾಲಿನ ಆಯವ್ಯಯದಲ್ಲಿ ಯೋಜನಾ ಲೆಕ್ಕಶಿರ್ಷಿಕೆಯಡಿ ರೂ.20.00 ಲಕ್ಷಗಳ ಅನುದಾನ ಮಂಜೂರು ಮಾಡಿದ್ದು, 2008-09ನೇ ಸಾಲಿನಲ್ಲಿ ಕೋಲಾರ ಜಿಲ್ಲೆಯ ಎಲ್ಲಾ ಅಧ್ಯಾಯಗಳನ್ನು ಆಂಗ್ಲ ಭಾಷೆಗೆ ಭಾಷಾಂತರಿಸಲಾಗಿದ್ದು, ಇದನ್ನು ಸಂಪಾದಿಸಿ, ಮುದ್ರಿಸಲು ಉದ್ದೇಶಿಸಲಾಗಿರುತ್ತದೆ. ಈ ಸಂಪಾದನೆ ಮತ್ತು ಮುದ್ರಣಕ್ಕೆ ತಗಲುವ ವೆಚ್ಚ ರೂ.3.50 ಲಕ್ಷಗಳನ್ನು 2009-10ನೇ ಸಾಲಿನಲ್ಲಿ ಇಲಾಖೆಗೆ ಮಂಜೂರು ಮಾಡಿರುವ ರೂ.20.00 ಲಕ್ಷಗಳಲ್ಲಿ ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಬೇಕೆಂದು ಕೋರಿರುತ್ತಾರೆ. ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 8 ಕರಾಗೆ 2009, ಬೆಂಗಳೂರು, ದಿನಾಂಕ: 20ನೇ ಆಗಸ್ಟ್ 2009

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಕೋಲಾರ ಜಿಲ್ಲಾ ಗ್ಯಾಸೆಟಿಯರ್‌ನ ಆಂಗ್ಲ ಆವೃತ್ತಿಯ ಮುದ್ರಣ ಮತ್ತು ಪ್ರಕಟಣೆಗೆ ರೂ.3,50,000-00 (ರೂಪಾಯಿ ಮೂರು ಲಕ್ಷ ಐವತ್ತು ಸಾವಿರ ಮಾತ್ರ) ಗಳನ್ನು ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಅವರಿಗೆ ಬಿಡುಗಡೆ ಮಾಡಲು ಸರ್ಕಾರದ ಅನುಮತಿ ನೀಡಲಾಗಿದೆ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ 1999 ಮತ್ತು ಅದರ ನಿಯಮಗಳು 2000ನ್ನು ಅನುಸರಿಸುವುದು.

ಈ ಮೊತ್ತವನ್ನು 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ 3454-02-110-0- 01-059 (ಯೋಜನೆ) ಇತರೆ ಖರ್ಚು ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಟಿಪ್ಪಣಿ ಸಂ: ಶಿಇ 1783 ಐಎಫ್(ಬಿ.ಎ) 2009 ದಿ: 05.08.2009 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂ:ಎಫ್.ಡಿ. 1 ಟಿ.ಎಫ್.ಪಿ 96 ದಿನಾಂಕ:10-7-96ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ನೀಡಿರುವ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಕೆ. ಧರ್ಮರಾಜಪ್ಪ

ಪಿ.ಆರ್. 2009 ಸರ್ಕಾರದ ಅಧೀನ ಕಾರ್ಯದರ್ಶಿ

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ವಿಷಯ: ಶ್ರೀ ಅಶೋಕ ಬಿ.ಎಸ್. ಇವರನ್ನು ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಪ್ತಶಾಖೆಯಲ್ಲಿ ಆಪ್ತ ಸಹಾಯಕರಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ.

ಓದಲಾಗಿದೆ: ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರ ಟಿಪ್ಪಣಿ ಸಂಖ್ಯೆ: ಕಅಪ್ರಾ/ಅ/63/09-10 ದಿನಾಂಕ:25.05.2009.

ಪ್ರಸ್ತಾವನೆ:

ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರು ಮೇಲೆ ಓದಲಾದ ದಿನಾಂಕ 25.05.2009.ರ ಪತ್ರದಲ್ಲಿ ಶ್ರೀ ಅಶೊಕ ಬಿ.ಎಸ್, ನಂ.15, ಕನಕಪುರ ಮುಖ್ಯರಸ್ತೆ, ಯಲಚೇನಹಳ್ಳಿ, ಬೆಂಗಳೂರು ಇವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಪ್ತಶಾಖೆಯಲ್ಲಿ ಆಪ್ತ ಸಹಾಯಕರಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ ಪ್ರಸ್ತಾಪಿಸಿದ್ದು, ದಿನಾಂಕ 26.05.2009ರಿಂದಲೇ ಜಾರಿಗೆ ಬರುವಂತೆ ಆಪ್ತಸಹಾಯಕರಾಗಿ ನೇಮಕ ಮಾಡಿ ಆದೇಶ ನೀಡಬೇಕೆಂದು ಕೋರಿರುತ್ತಾರೆ.

ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 31 ಕೆಜಿಎಲ್ 2009, ಬೆಂಗಳೂರು, ದಿನಾಂಕ: 22ನೇ ಆಗಸ್ಟ್ 2009

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಶ್ರೀ ಅಶೋಕ ಬಿ.ಎಸ್. ಇವರನ್ನು ದಿನಾಂಕ 26.05.2009 ರಿಂದಲೇ ಜಾರಿಗೆ ಬರುವಂತೆ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಪ್ತಶಾಖೆಯಲ್ಲಿ ಆಪ್ತ ಸಹಾಯಕರಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಇವರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ನಂತರ ಹೊರಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 611 ವೆಚ್ಚ-7/2009 ದಿನಾಂಕ 07.07.2009ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಕೆ. ಧರ್ಮರಾಜಪ್ಪ

ಪಿ.ಆರ್. 2022 ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಧಾರವಾಡ ಜಿಲ್ಲೆಯಲ್ಲಿ ಕರ್ನಾಟಕ ಕುಲ ಪುರೋಹಿತ ಅಲೂರು ವೆಂಕಟರಾವ್ ಅವರ ಸ್ಮಾರಕಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂ:ಕಸನಿ:15:ಸ್ಮಾರಕ: 2009–10, ದಿ:01.07.2009.

ಪ್ರಸ್ತಾವನೆ:

ಮೇಲೆ ಓದಲಾದ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅವರ ದಿನಾಂಕ: 01.07.2009ರ ಪತ್ರದಲ್ಲಿ 2007–08ನೇ ಸಾಲಿನ ಆಯವ್ಯಯದಲ್ಲಿ ಧಾರವಾಡ ಜಿಲ್ಲೆಯಲ್ಲಿ ಆಲೂರು ವೆಂಕಟರಾವ್ ರವರ ಸ್ಮಾರಕಕ್ಕೆ ರೂ.95.00ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಧಾರವಾಡ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದೆ. ಈ ಕಟ್ಟಡದಲ್ಲಿ ಇನ್ನು ಕೆಲವು ಕೆಲಸಗಳಾದ ವಿದ್ಯುತ್ ಶಕ್ತಿ ಜೋಡಣೆ, ವಾಚನಾಲಯಕ್ಕೆ ಪ್ರದರ್ಶನಾಂಗಣಕ್ಕೆ ಅವಶ್ಯವಿರುವ ಪೀಠೋಪಕರಣ ವ್ಯವಸ್ಥೆಗಳು ಅಗತ್ಯವಿದ್ದು, ಈ ಕಾರ್ಯಗಳಿಗೆ ಜಿಲ್ಲಾಡಳಿತವು ಈಗಾಗಲೇ ಹಣಕಾಸಿನ ಮಂಜೂರಾತಿ ನೀಡಿದ್ದು, ಬೇಡಿಕೆಯನ್ನು ಸಲ್ಲಿಸಿದ್ದು ತಕ್ಷಣವೇ ಅನುದಾನ ಒದಗಿಸುವಂತೆ ರೂ.15.00ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆಯವರು ಕೋರಿರುತ್ತಾರೆ. ಸದರಿ ಮೊತ್ತವನ್ನು ಬಿಡುಗಡೆ ಮಾಡಲು ಸರ್ಕಾರದ ಆದೇಶ ಹೊರಡಿಸಬೇಕೆಂದು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರು ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 25 ಸ್ಮಾಪ್ರನಿ 2009, ಬೆಂಗಳೂರು, ದಿನಾಂಕ: 22ನೇ ಆಗಸ್ಟ್ 2009

ಧಾರವಾಡ ಜಿಲ್ಲೆಯಲ್ಲಿ ಆಲೂರು ವೆಂಕಟರಾವ್ ಅವರ ಸ್ಮಾರಕ ನಿರ್ಮಿಸಲು ರೂ.15.00ಲಕ್ಷಗಳನ್ನು (ರೂಪಾಯಿ ಹದಿನೈದು ಲಕ್ಷಗಳು ಮಾತ್ರ)ಗಳನ್ನು ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ, ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1. ಈ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಕೆಯಾಗುವಂತೆ ಇಲಾಖೆಯು ನೋಡಿಕೊಳ್ಳತಕ್ಕದ್ದು.
2. ಈ ಮೊತ್ತವು ಸದರಿ ಯೋಜನೆಗೆ ಒಂದು ಸಮಯದ ಅನುದಾನ ವಾಗಿರುತ್ತದೆ.
3. ಈ ಸ್ಮಾರಕದ ಕಾಮಗಾರಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಸ್ತುವಾರಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ರ ಅಡಿ ಟೆಂಡರ್ ಪ್ರಕ್ರಿಯೆ ಪೂರೈಸಿ ತೆಗೆದುಕೊಳ್ಳಬೇಕೆಂದು ಹಾಗೂ ನಂತರದ ನಿರ್ವಹಣೆ ಇಲಾಖೆಯೇ ನೋಡಿಕೊಳ್ಳತಕ್ಕದ್ದು.
4. ಈ ಯೋಜನೆಗೆ ಹಿಂದಿನ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಪಡೆದು ಪ್ರಸ್ತುತ ಕಟ್ಟಡದ ಕಾಮಗಾರಿಯು ಯಾವ ಹಂತದಲ್ಲಿ ನಡೆಯುತ್ತಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವುದು.

ಈ ಮೊತ್ತವನ್ನು 2009–10ನೇ ಸಾಲಿನ ಲೆಕ್ಕ ಶೀರ್ಷಿಕೆ 2205–00–102–4–03–100 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ, ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಶಿಇ 1813 ಐಎಫ್ (ಬಿ&ಎ) 2009, ದಿನಾಂಕ: 11–08–09 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಕೆ. ಧರ್ಮರಾಜಪ್ಪ

ಪಿ.ಆರ್. 2023

ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ವಿಷಯ: ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕು ಮೊಟೆಬೆನ್ನೂರಿನಲ್ಲಿ ಹುತಾತ್ಮ ಮೈಲಾರ ಮಹದೇವಪ್ಪ ರವರ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡುವ ಕುರಿತು.

ಪ್ರಸ್ತಾವನೆ:

2009–10ನೇ ಸಾಲಿನ ಆಯವ್ಯಯದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಮೊಟೆಬೆನ್ನೂರಿನಲ್ಲಿ ಮೈಲಾರ ಮಹದೇವಪ್ಪ ರವರ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡಲು ರೂ.1.60 ಕೋಟಿಗಳನ್ನು ಮೀಸಲಿಟ್ಟಿರುತ್ತಾರೆ. ಇದನ್ನು ಕಾರ್ಯಾನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 39 ಸ್ಮಾಪ್ರನಿ 2009, ಬೆಂಗಳೂರು, ದಿನಾಂಕ: 22ನೇ ಆಗಸ್ಟ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಮೊಟೆಬೆನ್ನೂರಿನಲ್ಲಿ ಮೈಲಾರ ಮಹದೇವಪ್ಪ ರವರ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿ, ರೂ.1.00 ಕೋಟಿಗಳನ್ನು ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಷರತ್ತುಗಳು

ಅ) ಕಾಮಗಾರಿ ಪ್ರಾರಂಭವಾದ ನಂತರ ಪ್ರಗತಿ ಆಧರಿಸಿ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುವುದು.

ಆ) ಈ ಕಾಮಗಾರಿಯ ಅಂದಾಜು ವೆಚ್ಚ ರೂ.100.00 ಲಕ್ಷಗಳಿಗೆ ನಿಗದಿಪಡಿಸಿಕೊಳ್ಳುವುದು

ಇ) ಈ ಕಾಮಗಾರಿಗೆ ಅಂದಾಜು ವೆಚ್ಚ ಪಟ್ಟಿ ಹಾಗೂ ನೀಲಿ ನಕ್ಷೆಯನ್ನು ಸರ್ಕಾರಕ್ಕೆ ಕಳುಹಿಸಿ ಆಡಳಿತಾತ್ಮಕ/ತಾಂತ್ರಿಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಪಡೆಯುವುದು.

ಈ) ಕಾಮಗಾರಿಯನ್ನು ಟೆಂಡರ್ ಕರೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ರಂತೆ ಕ್ರಮ ಕೈಗೊಳ್ಳತಕ್ಕದ್ದು.

ಉ) ಜಿಲ್ಲಾಧಿಕಾರಿಗಳು ಕಾಮಗಾರಿಯ ಪ್ರಗತಿಯನ್ನು ಪ್ರತಿ ತಿಂಗಳು ಪರಾಮರ್ಶೆ ಮಾಡಿ ಈ ಸಾಲಿನಲ್ಲೇ ಕಾಮಗಾರಿ ಮುಗಿಸಲು ಕ್ರಮ ತೆಗೆದುಕೊಳ್ಳುವುದು ಹಾಗೂ ಸಕ್ಷಮ ಪ್ರಾಧಿಕಾರ ಇದರ ಮುಂದಿನ ನಿರ್ವಹಣೆ ನೋಡಿಕೊಳ್ಳುವುದು.

ಈ ಅನುದಾನವನ್ನು 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-31-059 (ಕನ್ನಡ ಮತ್ತು ಸಂಸ್ಕೃತಿಗೆ ಉತ್ತೇಜನ) ಇತರೆ ವೆಚ್ಚ ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 739 ವೆಚ್ಚ-7 2009, ದಿನಾಂಕ:10.08.2009 ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಪಿಡಿ 66 ಎಂ&ಇ 2009, ದಿನಾಂಕ: 22.07.2009 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಕೆ. ಧರ್ಮರಾಜಪ್ಪ

ಪಿ.ಆರ್. 2024 ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ವಿಷಯ: 'ಇ' ಆಡಳಿತದಲ್ಲಿ ಐ.ಟಿ. ಕಾನೂನನ್ನು ಪರಿಚಯಿಸುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ:ಕಸನಿ:/20/ಕಅ/2009-10, ದಿನಾಂಕ: 10.07.2009.

ಪ್ರಸ್ತಾವನೆ:

ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆರವರು ಮೇಲೆ ಓದಲಾದ ದಿನಾಂಕ 10.07.2009ರ ಪತ್ರದಲ್ಲಿ 'ಇ' ಆಡಳಿತದಲ್ಲಿ ಐ.ಟಿ. ಕಾನೂನನ್ನು ಪರಿಚಯಿಸುವ ಬಗ್ಗೆ ಸರ್ಕಾರಿ ಆದೇಶ ಸಂಖ್ಯೆ ಕಸಂವಾಪ್ರ 64 ಕಸನಿ 2008 ರಲ್ಲಿ ಬಿಡುಗಡೆ ಮಾಡಲಾದ ರೂ.15.00 ಲಕ್ಷಗಳು ಬಿಡುಗಡೆ ಮಾಡಿದ್ದು, ಹಣವನ್ನು ಡ್ರಾ ಮಾಡದೆ ಲ್ಯಾಪ್ಸ್ ಆಗಿರುತ್ತದೆ ಎಂದು ಹಾಗೂ ಈ ಸಾಲಿನ ಕ್ರಿಯಾಯೋಜನೆಯಲ್ಲಿ ರೂ.25.00 ಲಕ್ಷಗಳನ್ನು 'ಇ' ಆಡಳಿತದಲ್ಲಿ ಐ.ಟಿ. ಕಾನೂನನ್ನು ಪರಿಚಯಿಸಲು ತರಬೇತಿ ನೀಡುವ ಉದ್ದೇಶದಿಂದ ಹಂಚಿಕೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಈ ಯೋಜನೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು, ಕುವೆಂಪು ವಿಶ್ವವಿದ್ಯಾಲಯ, ಐ.ಟಿ. ಕಾನೂನು ಮತ್ತು ಕನ್ನಡ ಗಣಕ ಪರಿಷತ್ತಿನ ಸಹಕಾರದೊಂದಿಗೆ ಈ ಕೆಳಕಂಡ ಯೋಜನೆಗಳನ್ನು ಮಾದರಿ ಯೋಜನೆಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಈ ತರಬೇತಿ ಕಾರ್ಯಕ್ರಮಗಳಿಗೆ ಒಟ್ಟು ರೂ.23.00 ಲಕ್ಷಗಳನ್ನು ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಅಡಿಯಲ್ಲಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ತರಬೇತಿ ಕಾರ್ಯಕ್ರಮದ ವಿವರ

ಕ್ರ.ಸಂ.	'ಇ' ಆಡಳಿತ ತರಬೇತಿ ಅವಧಿ	ಒಟ್ಟು (12) ಹನ್ನೆರಡು ದಿನಗಳು
1	ಇ-ಆಡಳಿತ ಇಲಾಖೆಯಿಂದ ನೀಡುವ ತಂತ್ರಜ್ಞಾನ ತರಬೇತಿ ಅವಧಿ	ಒಟ್ಟು (6) ಆರು ದಿನಗಳು
2	ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕುವೆಂಪು ವಿಶ್ವವಿದ್ಯಾನಿಲಯದಿಂದ ನೀಡುವ ತರಬೇತಿ ಅವಧಿ	ಒಟ್ಟು (6) ಆರು ದಿನಗಳು

ಕ್ರಸಂ.	'ಇ' ಆಡಳಿತ ತರಬೇತಿ ಅವಧಿ	ಒಟ್ಟು (12) ಹನ್ನೆರಡು ದಿನಗಳು
3	ಒಂದು ತಂಡಕ್ಕೆ 40 ಅಭ್ಯರ್ಥಿಗಳಂತೆ ತರಬೇತಿಗೆ ತಗಲುವ ವೆಚ್ಚ 1*6 ತರಬೇತಿ ಇತರೆ ವೆಚ್ಚಗಳಿಗಾಗಿ	ರೂ. 3,62,800.00 ರೂ. 21,76,800.00 ರೂ. 1,23,200.00
	ಒಟ್ಟು	**ರೂ. 23,00,000.00**

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿದೆ:

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 97 ಕಸನಿ 2009, ಬೆಂಗಳೂರು ದಿನಾಂಕ: 26ನೇ ಆಗಸ್ಟ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ 'ಇ' ಆಡಳಿತದಲ್ಲಿ ಐ.ಟಿ. ಕಾನೂನು ಪರಿಚಯಿಸುವ ಬಗ್ಗೆ ತರಬೇತಿ ನೀಡಲು ರೂ.23.00 ಲಕ್ಷ (ರೂಪಾಯಿ ಇಪ್ಪತ್ತಮೂರು ಲಕ್ಷ) ಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ನ್ನು ಅನುಸರಿಸಿ ಬಿಡುಗಡೆ ಮಾಡಲು ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಸರ್ಕಾರವು ಅನುಮತಿ ನೀಡಿದೆ.

ಇದಕ್ಕೆ ತಗಲುವ ವೆಚ್ಚವನ್ನು 2009–10ನೇ ಸಾಲಿನ ಲೆಕ್ಕಶೀರ್ಷಿಕೆ 2205–00–102–4–31–059 (ಯೋಜನೆ) ಇತರ ಖರ್ಚು ಇದರ ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಶಿಇ 1844 ಐಎಫ್(ಬಿ&ಎ) 2009, ದಿನಾಂಕ 18.08.2009ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಕೆ. ಭರ್ಮರಾಜಪ್ಪ

ಪಿ.ಆರ್. 2025 ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ತಿದ್ದೋಲೆ

ಸಂಖ್ಯೆ: ಕಸಂವಾಪ್ರ 73 ಕಸನಿ 2008, ಬೆಂಗಳೂರು, ದಿನಾಂಕ: 22ನೇ ಆಗಸ್ಟ್ 2009

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 73 ಕಸನಿ 2008 ದಿನಾಂಕ: 26.06.2009 ರಲ್ಲಿನ ಆದೇಶ ಭಾಗದಲ್ಲಿನ ಮೊದಲನೇ ಕಂಡಿಕೆಯಲ್ಲಿ ನಮೂದಾಗಿರುವ **"ಲೆಕ್ಕಶೀರ್ಷಿಕೆ 2205–00–102–1–46–059ರಡಿ ಭರಿಸತಕ್ಕದ್ದು"**. ಇದನ್ನು ದಿನಾಂಕ: 26.06.2009 ರಿಂದಲೇ ಜಾರಿಗೆ ಬರುವಂತೆ ತೆಗೆದು ಹಾಕಿ ಅದರ ಬದಲಿಗೆ ಈ ಕೆಳಕಂಡಂತೆ ವಾಖ್ಯಗಳನ್ನು ಸೇರಿಸಲಾಗಿದೆ. **"ಅನುದಾನದ ಬಿಲ್ಲಿನ ಮೇಲೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಮೇಲುರುಜು ಪಡೆದು ಡ್ರಾ ಮಾಡಲು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ ಇವರಿಗೆ ಅನುಮೋದನೆ ನೀಡಲಾಗಿದೆ ಹಾಗೂ ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 2205–00–102–1–46–059 (ಯೋಜನೆ)ಯಡಿ ಭರಿಸತಕ್ಕದ್ದು"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಕೆ. ಭರ್ಮರಾಜಪ್ಪ

ಪಿ.ಆರ್. 2026 ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ವಿಷಯ: ಗದಗ ಜಿಲ್ಲಾ ಸಂಕೀರ್ಣ ಕಟ್ಟಡದಲ್ಲಿ ಇಲಾಖೆಯ ಹೊಸ ಕಚೇರಿ ಪ್ರಾರಂಭಿಸಲು ಧನಸಹಾಯ ಬಿಡುಗಡೆ ಕುರಿತು.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಪತ್ರ ಸಂಖ್ಯೆ: ಕಸನಿ/58 ದಾಸ್ತಾನು/2008–09 ದಿನಾಂಕ 19.05.2009 ಮತ್ತು 07.07.2009.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ 19.05.2009 ಹಾಗೂ 07.07.2009ರ ಪತ್ರಗಳಲ್ಲಿ ಗದಗ ಜಿಲ್ಲಾ ಸಂಕೀರ್ಣ ಕಟ್ಟಡದಲ್ಲಿ ಇಲಾಖೆಯ ಹೊಸ ಕಚೇರಿ ಪ್ರಾರಂಭಿಸಲು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಜಿಲ್ಲೆ ಇವರಿಗೆ 553.50 ಚದರ ಅಡಿ ವಿಸ್ತೀರ್ಣದ ಕೊಠಡಿಯನ್ನು ನೀಡಿದ್ದು, ಇಲ್ಲಿ ಹೊಸದಾಗಿ ಪುಸ್ತಕ ದಾಸ್ತಾನು ಕ್ಯಾಬಿನ್, ಪ್ರದರ್ಶನ ಫಲಕ, ಅಧಿಕಾರಿಗಳ ಕೊಠಡಿ ಪಾರ್ಟೀಶನ್, ಕಂಪ್ಯೂಟರ್ ಕ್ಯಾಬಿನ್ ಮತ್ತು ಟೇಬಲ್, ಕುರ್ಚಿಯ ವ್ಯವಸ್ಥೆ, ಕಿಟಕಿಗಳಿಗೆ ಕರ್ಟನ್ ಹಾಕುವುದು, ಅಲ್ಲದೆ ಹೊಸ ಕಚೇರಿಯ ಆಧುನೀಕರಣಕ್ಕಾಗಿ ಮತ್ತು ಪಿಠೋಪಕರಣಗಳ ಖರೀದಿಗಾಗಿ ಒಟ್ಟು ರೂ.2,30,000/–

ಅವಶ್ಯಕವಾಗಿ ಬೇಕಾಗಿರುತ್ತದೆ. ಈ ಕಚೇರಿಯನ್ನು ಒಟ್ಟಾರೆ ಸುಸಜ್ಜೀಕರಣಗೊಳಿಸಲು ರೂ.3,75,000/- ಗಳನ್ನು ನಿಗದಿಪಡಿಸಿದ್ದ ಮೊತ್ತವನ್ನು ರೂ.2,30,000/- ಗಳಿಗೆ ಮಾತ್ರ ಸೀಮಿತಗೊಳಿಸಿ, ಸದರಿ ಮೊತ್ತವನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರಿಗೆ ಬಿಡುಗಡೆ ಮಾಡುವಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 55 ಕಸನಿ 2009, ಬೆಂಗಳೂರು, ದಿನಾಂಕ: 25ನೇ ಆಗಸ್ಟ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಸಂಕೀರ್ಣ ಕಟ್ಟಡದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೊಸ ಕಚೇರಿ ಪ್ರಾರಂಭಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000 ರನ್ವಯ ರೂ.2,30,000/- (ರೂಪಾಯಿ ಎರಡು ಲಕ್ಷ ಮೂವತ್ತು ಸಾವಿರ) ಗಳನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಅನುದಾನವನ್ನು 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-001-0-01-059 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಶಿಇ 2019 ಐಎಫ್(ಬಿ&ಎ) 2009, ದಿನಾಂಕ 18.08.2009ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಕೆ. ಧರ್ಮರಾಜಪ್ಪ

ಪಿ.ಆರ್. 2027 ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

FOREST, ECOLOGY AND ENVIRONMENT SECRETARIAT

NOTIFICATION

No: FEE 16 FWL 2008, Bangalore, dated: 21st August 2009

Whereas the Government of Karnataka in exercise of the powers conferred by sub-section (1) of Section 35 of Wildlife Protection Act 1972 (Central Act 55 of 1972) has declared the area the situation and limits of which are specified in the schedule to Government Notification No. FEE 221 FWL 99, dated 18.08.2003 to the extent of 339.866 sq km as “Anshi National Park” for the protection, propagation and development of flora and fauna and wildlife significance of the area.

And whereas the Government of Karnataka considers it necessary to alter the limits and boundaries of the said National Park in view of the following aspects.

1. Ecological importance of the area, the environmental clearance given by the Government of India (No. 3/24/78 HCT/ENV, dt. 16.08.1979) for Kalinadi stage – II Hydro Electric Project, clearly states that, ‘ the boundary of the existing Wildlife Sanctuary at Dandeli should be expanded to cover the reservoirs created by Kalinadi Stage I and Stage II projects’. The reservoir created by Kalinadi Stage I is the Supa reservoir and those under Stage II are the Kodsalli and Kadra backwaters of river Kali. The proposed additional area falls under this clause and is sandwiched between Anshi NP and the Kali River, and situated in steep slope.
2. The area is ecologically fragile due to its steep slope and is with only one village.
3. With this the river Kali becomes the boundary of the National Park there by giving natural protection to the forests and the wildlife.
4. This area is quite unique from wildlife point of view. This area is rich in Tigers, Leopards, Gaur, Mouse Deer, Barking Deer, Sambar Deer, etc. Known for reptiles like Python, King Cobra, Vipers, etc. Home for innumerable birds and other flora.
5. Acts as a critical wildlife corridor connecting to the protected areas of Goa state and also the perennial water source i.e., Kali River.

And whereas the Government of Karnataka under its letter No: FEE 58 FWL 2005, dated: 16.05.2006 has finally taken decision to extend the boundary of Anshi National Park comprises of Reserved Forests only.

And whereas all the rights in respect of the Reserved Forests to be constituted as Anshi National Park are already vested with the State Government.

The extended Anshi National Park does not include any of the Revenue Villages, Patta Lands, Revenue Lands, Hakkal and Betta lands on the date of publication of this notification. The various rights as notified in the Village Forest Records statements of the respective reserve forests will continue.

Sl. No.	District	Taluk	Reserve Forest in Hectares
1.	Uttara Kannada	Joida	1373.49
2.	"	Karwar	6374.74
	Total		7748.23

The detailed description of the Reserve Forests constituting the National Park is as contained in the enclosed Annexure II.

Now therefore, in exercise of the powers conferred by section 35 of the Wildlife Protection Act 1972 (Central Act 53 of 1972), the Government of Karnataka hereby declares that the area specified in the schedule shall be comprised within the Anshi National Park and the said area shall be National Park called "Anshi National Park" with effect from the date of publication of this notification.

Schedule

Name of the District : Uttara Kannada

Taluk/s : Joida and Karwar

Area : 7748.23 Ha

77.4823 sq km

(Excluding the Revenue Villages, Patta Lands, Revenue lands, Hakkal and Betta land on the date of publication of this notification)

Annexure I

Boundary Description

The boundary of the proposed additional forest area to be included in Anshi National Park, starts at the point at northeast side where Vakinala joins Kali River which is also South-East side of Anshi National Park and South – West side of Dandeli Wildlife Sanctuary at Suligeri and runs towards West all along the Kali River until it reaches Sakalihalla at South-West side. Then it traverses along North side all along the Sakalihalla and reaches the existing Anshi National Park boundary in North-West side, then runs towards East along the existing Anshi National Park boundary till it reaches the starting point.

By order and in the name of the Governor of Karnataka,

P.R. KALAVATHI

Under Secretary to Government,

Forest, Ecology & Environment Department.

Annexure (II) - TO GOVERNMENT NOTIFICATION

Sl. No.	District	Taluka & Range	Village	Survey No.	Extent in Ha.
1	Uttar Kannada	Joida	Birkol	1	258.10
				2	281.64
				3	298.69

Sl. No.	District	Taluka & Range	Village	Survey No.	Extent in Ha.
				4	283.82
				5	249.02
				15	2.21
				Total:	**1373.49**
2	Uttar Kannada	Karwar	Balemane	1	137.67
				2	109.43
				3	133.36
				4	143.62
				5	137.46
				6	108.67
				7	139.68
				14A	158.12
				16	120.06
				17	204.08
				18	119.96
				19	152.90
				20	118.74
				35	137.21
				37	130.61
				38	154.02
				39	111.86
				40	151.60
				41	95.33
				42	108.02
				43	148.53
				44	174.42
				45	124.86
				46	147.67
				21	0.88
				22	0.20
				47	2.71
				Total:	**3271.66**
3	Uttar Kannada	Karwar	Kadra	1A	87.82
				14	134.19
				24	144.52
				25	167.02
				26	179.89

Sl. No.	District	Taluka & Range	Village	Survey No.	Extent in Ha.
				30	115.34
				31	88.22
				32	41.43
				33	139.24
				34	158.97
				35	126.58
	Uttar Kannada	Karwar	Kadra	36	110.65
				37	152.51
				38	186.78
				39	202.68
				40	131.53
				41	81.18
				42	73.70
				43	3.01
				59A1	113.74
				62	108.06
				63	112.18
				67	169.18
				68	122.23
				71A1A1	127.31
				13	1.79
				60	1.48
				61	6.51
				64	6.40
				65	4.96
				66	1.34
				69	2.62
				Total:	**3103.08**
				Grand Total:	**7748.23**

P.R. 2028

P.R. KALAVATHI
Under Secretary to Government,
Forest, Ecology & Environment Department.

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ವಿಷಯ: ಶ್ರೀ ಸಿ.ಪಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ, ಇವರುಗಳು ಎಸಗಿರುವರೆನ್ನಲಾದ ಆರೋಪಗಳ ಕುರಿತು ಇಲಾಖಾ ವಿಚಾರಣೆ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ: 1) ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಜಿಪಂ:ಲೆಕ್ಕ-1 (ಖಾಗ್ರಾ) 33/2003 ದಿ: 06.09.2003, 13.10.2003 ಮತ್ತು 09.07.2004.

2) ಕೈಗಾರಿಕಾಭಿವೃದ್ಧಿ ಆಯುಕ್ತರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕೈವಾಇ/ ನಿರೀ-2: ಬೆಂನ:ಶಿ:ಕ್ರ-18/ 2003-04 ದಿ: 14.11.2003, ದಿ: 29.06.2004 ಹಾಗೂ ದಿ: 03.08.2004.

3) ಸರ್ಕಾರಿ ಆದೇಶ ಸಂಖ್ಯೆ: ವಾಕೈ 178 ಕೈಸೇವಿ 2003, ದಿ: 12.08.2004.

4) ಸರ್ಕಾರಿ ಆದೇಶ ಸಂಖ್ಯೆ: ವಾಕೈ 178 ಕೈಸೇವಿ 2003, ದಿ: 20.11.2004.

5) ಸರ್ಕಾರದ ಕಾರಣ ಕೇಳುವ ನೋಟೀಸು ದಿ: 27.12.2004.

6) ಕಾರಣ ಕೇಳುವ ನೋಟೀಸಿಗೆ ಅಧಿಕಾರಿ/ ನೌಕರರ ಹೇಳಿಕೆ ದಿ: 02.03.2005 ಹಾಗೂ ದಿ: 21.03.2005.

7) ಸರ್ಕಾರಿ ಆದೇಶ ಸಂಖ್ಯೆ: ವಾಕೈ 305 ಕೈಸೇವಿ 2005, ದಿ: 21.03.2006.

8) ಇಲಾಖಾ ವಿಚಾರಣಾ ವರದಿ ದಿ: 30.04.2009.

9) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 10 ಸೇಇವಿ 2003 ದಿ: 12.11.2003.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, (ನಗರ) ಬೆಂಗಳೂರು ರವರು ಹಾಗೂ ಮೇಲೆ ಓದಲಾದ (2) ರ ಪತ್ರದಲ್ಲಿ ಕೈಗಾರಿಕಾಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ರವರು ಸರ್ಕಾರಕ್ಕೆ ಬರೆದಿರುವ ಪತ್ರಗಳಲ್ಲಿ ಬಹು ಮುಖ್ಯವಾಗಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ರವರು 2002-03ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆಯ ವಿಶೇಷ ಘಟಕ ಯೋಜನೆಯಡಿ ಲೆಕ್ಕಶೀರ್ಷಿಕೆ 2225-01-793-0-01 (ಯೋಜನೆ) ಅಡಿಯಲ್ಲಿ ಅನುದಾನ ಬಿಡುಗಡೆಯಾಗದಿದ್ದರೂ ತರಬೇತಿ ವೆಚ್ಚ ಭರಿಸಲು ಆರ್ಥಿಕ ಸಂಹಿತೆಯನ್ನು ಉಲ್ಲಂಘನೆ ಮಾಡಿ ರೂ. 6.00 ಲಕ್ಷಗಳನ್ನು ಖಜಾನೆಯಿಂದ ಡ್ರಾ ಮಾಡಲು ಇವರು ಕಛೇರಿ ಆದೇಶವನ್ನು ನೀಡಿರುತ್ತಾರೆ ಹಾಗೂ ಎಲ್ಲಾ ಬಿಲ್ಲುಗಳ ಮೇಲೆ ಸಹಿ ಮಾಡಿರುತ್ತಾರೆ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಕರು, ರವರು ಈ ಬಿಲ್ಲುಗಳ ಮೇಲೆ ಹಣ ಡ್ರಾ ಮಾಡಿರುತ್ತಾರೆಂದು ತಿಳಿಸುತ್ತಾ ಇವರಿಬ್ಬರು ಈ ಪ್ರಕರಣದಲ್ಲಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದರಿಂದ ಇವರುಗಳ ವಿರುದ್ಧ ಜಂಟಿ ವಿಚಾರಣೆ ಮಾಡಲು ಹಾಗೂ ಜಂಟಿ ವಿಚಾರಣೆ ಕಾಯ್ದಿರಿಸಿ ಕೆ.ಸಿ.ಎಸ್ (ಸಿಸಿಎ) ನಿಯಮಾವಳಿ 1957ರ ನಿಯಮ 10 (1) (a) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಇವರನ್ನು ಅಮಾನತ್ತಿನಲ್ಲಿರಿಸಲು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರದ ಆದೇಶದಲ್ಲಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು, ಇವರು 2002-03ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ವಿಶೇಷ ಘಟಕ ಯೋಜನೆಯಡಿ ಅನುದಾನ ಬಿಡುಗಡೆಯಾಗದಿದ್ದರೂ ರೂ. 6.00 ಲಕ್ಷಗಳನ್ನು ಡ್ರಾ ಮಾಡಲು ಕಛೇರಿ ಆದೇಶ ನೀಡಿ ಎಲ್ಲಾ ಬಿಲ್ಲುಗಳಿಗೆ ಮೇಲು ಸಹಿ ಮಾಡಿರುವುದರಿಂದ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಕರು, ರವರು ಈ ಬಿಲ್ಲುಗಳನ್ನು ಡ್ರಾ ಮಾಡಿ ಅಕ್ರಮ ಎಸಗಿರುವುದು ಮೇಲ್ನೋಟಕ್ಕೆ ಸತ್ಯಾಂಶದಿಂದ ಕೂಡಿರುವುದರಿಂದ ಇವರುಗಳ ವಿರುದ್ಧ ಇಲಾಖಾ ವಿಚಾರಣೆ/ ಕ್ರಿಮಿನಲ್ ಮೊಕದ್ದಮೆಯನ್ನು ಕಾಯ್ದಿರಿಸಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಕರು, ಇವರುಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10 (1) (ಡಿ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಸರ್ಕಾರಿ ಆದೇಶದಲ್ಲಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಕರು, ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10ರ ಉಪ ನಿಯಮ 5 (ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಇವರುಗಳ ವಿರುದ್ಧದ ಆರೋಪಗಳ ಬಗ್ಗೆ ಕ್ರಿಮಿನಲ್ ಮೊಕದ್ದಮೆ ಹೂಡುವುದನ್ನು ಕೈಬಿಟ್ಟು ಹಾಗೂ ಸದರಿ ಪ್ರಕರಣದಲ್ಲಿ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಇವರುಗಳ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಕರು, ಇವರುಗಳು ಎಸಗಿರುವ ಆರೋಪಗಳ ಬಗ್ಗೆ ಕೆ.ಸಿ.ಎಸ್ (ಸಿಸಿಎ) ನಿಯಮಾವಳಿ 1957 ರ ನಿಯಮ 11 ರಡಿ ಇಲಾಖಾ ವಿಚಾರಣೆ ನಡೆಸಲು ಉದ್ದೇಶಿಸಿ ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷಾರೋಪಣಾ ಪಟ್ಟಿ ಮತ್ತಿತರ ಅನುಬಂಧಗಳನ್ನು ದಿ: 27.12.2004 ರಂದು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಕಾರಣ ಕೇಳುವ ನೋಟೀಸ್‌ಗೆ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು ಇವರು ಲಿಖಿತ ರಕ್ಷಣಾ ಹೇಳಿಕೆಯನ್ನು ಸಲ್ಲಿಸಿ 2002-03ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆಯ

ವಿಶೇಷ ಘಟಕ ಯೋಜನೆಯಡಿ ರೂ. 6.00 ಲಕ್ಷಗಳನ್ನು ದುರುಪಯೋಗ ಪಡಿಸಿಕೊಂಡು ಕರ್ತವ್ಯ ಲೋಪ ಎಸಗಿರುವುದಿಲ್ಲ ಮೇಲಾಗಿ ಯೋಜನೆಯನ್ನು ಯಶಸ್ಸುಗೊಳಿಸಿರುವುದಾಗಿ ತಿಳಿಸಿ ಹೇಳಿಕೆ ನೀಡಿ ಆರೋಪಗಳಿಂದ ಮುಕ್ತಗೊಳಿಸುವಂತೆ ಕೋರಿದ್ದಾರೆ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, ಇವರು ಲಿಖಿತ ರಕ್ಷಣಾ ಹೇಳಿಕೆಯನ್ನು ಸಲ್ಲಿಸಿ ತನ್ನ ಮೇಲೆ ಹೊರಿಸಿರುವ ಆರೋಪಗಳನ್ನು ಕೈಬಿಟ್ಟು ಆರೋಪ ಮುಕ್ತಗೊಳಿಸುವಂತೆ ಕೋರಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (7) ರ ಸರ್ಕಾರಿ ಆದೇಶದಲ್ಲಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, ಇವರುಗಳು ಈ ಹಿಂದೆ (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದರೆನ್ನಲಾದ ಆರೋಪಗಳಿಗೆ ಸಂಬಂಧಿಸಿದಂತೆ ಅವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಡಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣದಲ್ಲಿ ನಿವೃತ್ತ ನ್ಯಾಯಾಧೀಶರಾದ ಶ್ರೀ ಬಿ.ಎಲ್. ಶ್ರೀಕಂಠಯ್ಯ ಹಾಗೂ ಶಿಸ್ತು ಪ್ರಾಧಿಕಾರದ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಗಳ ಮುಂದೆ ಮಂಡಿಸಲು ಉಪ ನಿರ್ದೇಶಕರು, (ಆಡಳಿತ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರದ ಆದೇಶವನ್ನು ಹೊರಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (8) ರ ವಿಚಾರಣಾ ವರದಿಯಲ್ಲಿ ಶ್ರೀ ಬಿ.ಎಲ್. ಶ್ರೀಕಂಠಯ್ಯ ನಿವೃತ್ತ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಸದರಿ ಪ್ರಕರಣದ ವಿಚಾರಣಾ ವರದಿಯನ್ನು ದಾಖಲಾತಿಗಳೊಂದಿಗೆ ಸರ್ಕಾರಕ್ಕೆ ಕಳುಹಿಸಿ ವಿಚಾರಣಾ ವರದಿಯಲ್ಲಿ ವಿಚಾರಣಾಧಿಕಾರಿಗಳು ಒಂದನೇ ಆರೋಪಿತ ಅಧಿಕಾರಿಯಾದ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ರವರು ಎಸಗಿರುವ ಆರೋಪಗಳ ಬಗ್ಗೆ ವಿಚಾರಣೆ ಪ್ರಕ್ರಿಯೆ ಪ್ರಗತಿಯಲ್ಲಿದ್ದ ಅವಧಿಯಲ್ಲಿ ಇವರು ದಿ: 29.08.2007 ರಂದು ಮೃತಪಟ್ಟಿರುವುದಾಗಿ ದಿ: 08.10.2007 ರ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಪತ್ರದ ಮೂಲಕ ವರದಿ ಮಾಡಿರುವುದರಿಂದ ಇವರ ಮೇಲಿನ ಪ್ರಕರಣವು Abate ಆಗಿರುತ್ತದೆ. ಆದುದರಿಂದ, ಒಂದನೇ ಆಪಾದಿತರ ಮೇಲೆ ಮಾಡಿರುವ ಆರೋಪವನ್ನು ಪರಿಗಣಿಸಲು ಅಗತ್ಯವಿರುವುದಿಲ್ಲವೆಂದು ಸರ್ಕಾರಕ್ಕೆ ವರದಿ ಮಾಡಿದ್ದಾರೆ. ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ರವರು ಎಸಗಿರುವ ಆರೋಪಗಳ ಬಗ್ಗೆ ವಿಚಾರಣಾಧಿಕಾರಿಗಳು ಆರೋಪಿತರ ವಿರುದ್ಧ ಮಾಡಿರುವ ಆರೋಪವು ರುಜುವಾತಾಗಿರುವುದಿಲ್ಲವೆಂದು ಆರೋಪಿತರು ನಿರ್ದೋಷಿಯೆಂದು ವಿಚಾರಣಾ ವರದಿಯಲ್ಲಿ ಘೋಷಿಸಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (9) ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಯುತ್ತಿದ್ದಾಗ ಸರ್ಕಾರಿ ನೌಕರನು ಮೃತನಾದಾಗ ಇಲಾಖಾ ವಿಚಾರಣೆಯ ಮುಂದಿನ ಕ್ರಮದ ಬಗ್ಗೆ ಸ್ಪಷ್ಟವಾಗಿ ಮಾರ್ಗದರ್ಶನ ನೀಡಿರುತ್ತದೆ.

ಅದರಂತೆ, ವಿಚಾರಣಾ ವರದಿಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಅಂತಿಮ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ವಾಕೈ 305 ಕೈಸೇವಿ 2005. ಬೆಂಗಳೂರು, ದಿನಾಂಕ: 25ನೇ ಆಗಸ್ಟ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಿವಂಗತ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಹಿಂದೆ ಉಪ ನಿರ್ದೇಶಕರು, (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಇವರುಗಳು ಎಸಗಿರುವರೆನ್ನಲಾದ ಆರೋಪಗಳ ವಿರುದ್ಧ ನಿಯಮಾವಳಿಯನುಸಾರ ಇಲಾಖಾ ವಿಚಾರಣೆ ನಡೆಸಿ ಹಾಗೂ ಇಲಾಖಾ ವಿಚಾರಣಾ ವರದಿಯಲ್ಲಿನ ಶಿಫಾರಸ್ಸುಗಳನ್ನು ಒಪ್ಪಿ ಶ್ರೀ ಸಿ.ವಿ. ಪ್ರಹ್ಲಾದಾಚಾರ್, ದೈವಾಧೀನರಾದ್ದರಿಂದ ಅವರ ಮೇಲಿನ ವಿಚಾರಣೆಯನ್ನು Abate ಎಂದು ಪರಿಗಣಿಸಿ ಸ್ಥಗಿತಗೊಳಿಸಿದೆ ಹಾಗೂ ಶ್ರೀ ಇಂದುಶೇಖರ್, ಜೇನುಕೃಷಿ ಸಂಘಟಿಕರು, (ಖಾಗ್ರಾ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಇವರ ವಿರುದ್ಧ ಆರೋಪಗಳು ರುಜುವಾತು (ಸಾಬೀತು) ಆಗಿರುವುದಿಲ್ಲವೆಂದು ವಿಚಾರಣಾ ವರದಿಯಲ್ಲಿ ತಿಳಿಸಿರುವುದರಿಂದ ಕಾರ್ಯ ನಿರ್ವಹಣೆಯಲ್ಲಿ ಇನ್ನೂ ಜಾಗರೂಕತೆಯನ್ನು ವಹಿಸಬೇಕಿತ್ತಾದ್ದರಿಂದ, ಇವರಿಗೆ ವಾಗ್ದಂಡನೆಯನ್ನು ವಿಧಿಸಿ ಆದೇಶ ಹೊರಡಿಸಿದೆ. ವಾಗ್ದಂಡನೆಯನ್ನು ವಿಧಿಸಿದ ಬಗ್ಗೆ ಅವರ ಸೇವಾ ಪುಸ್ತಕದಲ್ಲಿ ನಮೂದಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಬಿ.ಸಿ. ಪ್ರಕಾಶ್

ಪಿ.ಆರ್. 2032

ಸರ್ಕಾರದ ಅಧೀನ ಕಾರ್ಯದರ್ಶಿ,

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, (ಸೇವೆಗಳು)

ವಸತಿ ಸಚಿವಾಲಯ

ವಿಷಯ: ಇಂದಿರಾ ಆವಾಸ್ ಯೋಜನೆಯಡಿ ಮನೆಗಳ ನಿರ್ಮಾಣದ ಘಟಕ ವೆಚ್ಚವನ್ನು 35,000/– ರೂ.ಗಳಿಂದ 40,000/– ರೂ.ಗಳಿಗೆ ಸಹಾಯಧನವನ್ನಾಗಿ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1. ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಪತ್ರ ಸಂ. ಪಿಐ ಆರ್‌ಜಿಆರ್‌ಹೆಚ್‌ಸಿಎಲ್/02/ಐಎವೈ/05/2009 ದಿನಾಂಕ 20.04.2009.

2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂ. ಆಇ/407/ವೆಚ್ಚ–9/2009 ದಿನಾಂಕ 10.07.2009.

ಪ್ರಸ್ತಾವನೆ:

ವಸತಿ ಇಲಾಖೆಯ ವತಿಯಿಂದ ರಾಜ್ಯದಲ್ಲಿ ಕೈಗೊಂಡ ಗ್ರಾಮೀಣ ಆಶ್ರಯ ಮತ್ತು ಗ್ರಾಮೀಣ ಅಂಬೇಡ್ಕರ್ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣದ ಘಟಕ ವೆಚ್ಚವು 40,000/– ರೂ.ಗಳಾಗಿರುತ್ತದೆ. ಇಂದಿರಾ ಆವಾಸ್ ಯೋಜನೆಯ ನಿರ್ವಹಣೆಗಾಗಿ, ಕೇಂದ್ರ ಸರ್ಕಾರವು ಪ್ರತಿಶತ 75ರಷ್ಟು ಅನುದಾನ ನೀಡುತ್ತಿದ್ದು ಉಳಿದ ಪ್ರತಿಶತ 25ರಷ್ಟು ಅನುದಾನವನ್ನು ರಾಜ್ಯ ಸರ್ಕಾರ ಭರಿಸುತ್ತಿದೆ. ಈ ಯೋಜನೆಯಡಿಯಲ್ಲಿ 2008–09ನೇ ಸಾಲಿನಿಂದ ಘಟಕ ವೆಚ್ಚವು 35,000/– ರೂ.ಗಳಾಗಿರುತ್ತದೆ. ಗ್ರಾಮೀಣ ಆಶ್ರಯ ಮತ್ತು ಗ್ರಾಮೀಣ ಅಂಬೇಡ್ಕರ್ ಯೋಜನೆಗಳಲ್ಲಿ ಘಟಕ ವೆಚ್ಚವು 40,000/– ರೂ.ಗಳಾಗಿರುವುದರಿಂದ ಸಹಜವಾಗಿಯೇ ಫಲಾನುಭವಿಗಳು ರಾಜ್ಯ ಸರ್ಕಾರದ ಯೋಜನೆಗಳಿಗೆ ಆದ್ಯತೆ ನೀಡುತ್ತಿದ್ದು, ಇಂದಿರಾ ಆವಾಸ್ ಯೋಜನೆಯ ಪ್ರಗತಿಯು ಕುಂಠಿತಗೊಂಡಿರುತ್ತದೆ. ಈ ಕುರಿತು, 8–4–09ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ, ಕೇಂದ್ರ ಸರ್ಕಾರ ಪ್ರಾಯೋಜಿತ (ಸಿಸಿಎಸ್) ಮತ್ತು ಬಾಹ್ಯ ನೆರವಿನ ಯೋಜನೆಗಳ ಪರಿಶೀಲನಾ ಸಭೆಯಲ್ಲಿ ಚರ್ಚಿಸಿ, ಇಂದಿರಾ ಆವಾಸ್ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿರುವುದರಿಂದ ಅದು ಬಿಡುಗಡೆ ಮಾಡುವ ಅನುದಾನವನ್ನು ಸಮರ್ಪಕವಾಗಿ ಉಪಯೋಗಿಸಿಕೊಳ್ಳಲು, ಈ ಯೋಜನೆಗೆ ಆದ್ಯತೆ ನೀಡಿ ನಂತರ ರಾಜ್ಯ ಸರ್ಕಾರದ ಯೋಜನೆಗಳಿಗೆ ಆದ್ಯತೆ ನೀಡಬೇಕು; ಮತ್ತು ಇಂದಿರಾ ಆವಾಸ್ ಯೋಜನೆಯಡಿಯಲ್ಲಿ ಘಟಕ ವೆಚ್ಚವನ್ನು 40,000/–ರೂ.ಗಳಿಗೆ ಹೆಚ್ಚಿಸಬೇಕು ಹಾಗೂ ಹೆಚ್ಚುವರಿಯಾಗಿ ಬೇಕಾಗಿರುವ ಅನುದಾನ 5,000 ರೂ.ಗಳನ್ನು ರಾಜ್ಯ ಸರ್ಕಾರ ಭರಿಸಬೇಕು ಎಂದು ನಿರ್ಣಯಿಸಲಾಗಿದೆ. ಆರ್ಥಿಕ ಇಲಾಖೆಯು ಘಟಕ ವೆಚ್ಚದಲ್ಲಿನ ಮೊತ್ತವನ್ನು 35,000/– ರೂ.ಗಳಿಂದ 40,000/– ರೂ.ಗಳಿಗೆ ಸಹಾಯಧನವನ್ನಾಗಿ ಹೆಚ್ಚಿಸಲು ಮೇಲೆ (2)ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಒಪ್ಪಿರುತ್ತದೆ. ಈ ಹಿನ್ನಲೆಯಲ್ಲಿ ಕೆಳಗಿನಂತೆ ಆದೇಶವನ್ನು ಪ್ರಸ್ತಾಪಿಸಲಾಗಿದೆ.

ಸರ್ಕಾರದ ಆದೇಶ ಸಂ. ವಇ 02 ಹೆಚ್‌ಎವೈ 2009, ಬೆಂಗಳೂರು, ದಿನಾಂಕ: 24ನೇ ಆಗಸ್ಟ್ 2009

ಇಂದಿರಾ ಆವಾಸ್ ಯೋಜನೆಯಡಿ ನಿರ್ಮಿಸಲಿರುವ ಮನೆಗಳಿಗೆ ಸಂಬಂಧಿಸಿದಂತೆ ಆಯಾ ಸಾಲಿನ ಆಯವ್ಯಯದಲ್ಲಿ ಸೂಚಿಸಿದ ಅನುದಾನಕ್ಕೆ ಸೀಮಿತವಾಗಿ, 2009–10ನೇ ಸಾಲಿನಿಂದ ಜಾರಿಗೆ ಬರುವಂತೆ ಹೊಸ ಸರಣಿ ಮನೆಗಳ ಘಟಕ ವೆಚ್ಚವನ್ನು 35,000/– ರೂ.ಗಳಿಂದ 40,000/– ರೂ.ಗಳಿಗೆ ಸಹಾಯಧನದ ರೂಪದಲ್ಲಿ ಹೆಚ್ಚಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ. ಆಇ/407/ವೆಚ್ಚ–9/2009 ದಿನಾಂಕ 10.07.2009ರಲ್ಲಿನ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2097

ಕೆ. ಆರ್. ವಲ್ಲೂರ

ಪೀಠಾಧಿಕಾರಿ–2, ವಸತಿ ಇಲಾಖೆ.

ವಿಷಯ: ಡಾ. ಡಿ. ಎಂ. ನಂಜುಂಡಪ್ಪನವರ ವರದಿಯಲ್ಲಿ ಸೂಚಿಸಿದ ರಾಜ್ಯದ 114 ಹಿಂದುಳಿದ ತಾಲ್ಲೂಕುಗಳನ್ನು ಗುಡಿಸಲುರಹಿತ ತಾಲ್ಲೂಕುಗಳನ್ನಾಗಿ ಮಾಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂ. ವ ಇ 86 ಹೆಚ್‌ಎಎಮ್ 2009 ದಿನಾಂಕ 25.06.2009

(2) ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಪತ್ರ ಸಂ. MD´RGRHCL 03 RAS 05 2009 ದಿನಾಂಕ 30.07.2009.

ಪ್ರಸ್ತಾವನೆ:

ಡಾ. ಡಿ. ಎಂ. ನಂಜುಂಡಪ್ಪನವರ ವರದಿಯಲ್ಲಿ ಗುರುತಿಸಿರುವಂತೆ ರಾಜ್ಯದ 114 ಹಿಂದುಳಿದ ತಾಲ್ಲೂಕುಗಳನ್ನು ಗುಡಿಸಲುರಹಿತ ತಾಲ್ಲುಕುಗಳನ್ನಾಗಿ ಮಾಡಲು, ಸವಿವರ ಯೋಜನಾ ವರದಿಗಳನ್ನು (Detailed Project Report) ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲು ಹಮ್ಮಿಕೊಂಡಿರುವ ಕೆಲಸ–ಕಾರ್ಯಗಳನ್ನು ಸಂಘಟಿಸಲು ರಾಜ್ಯದ ಎಲ್ಲ ವಿಭಾಗಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಒಟ್ಟು ಐದು ಜನ ಸಮನ್ವಯ ಅಧಿಕಾರಿಗಳನ್ನು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ನೇಮಕ ಮಾಡಲಾಗಿತ್ತು. ಇವರಲ್ಲಿ ಮೈಸೂರು ವಿಭಾಗಕ್ಕೆ ನೇಮಕ ಮಾಡಲಾಗಿದ್ದ ಶ್ರೀ ಕೆ.ಪಿ. ಶಿವಕುಮಾರ್, ಅಧೀಕ್ಷಕ

ಅಭಿಯಂತರರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ಇವರು ವರ್ಗಾವಣೆಯಾಗಿದ್ದರಿಂದ ಇವರ ಸ್ಥಾನದಲ್ಲಿ ಬೇರೆ ಅಧಿಕಾರಿಗಳನ್ನು ನೇಮಕ ಮಾಡುತ್ತ ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂ. ವಇ 80 ಬೆಜ್‌ಎಎಮ್ 2009, ಬೆಂಗಳೂರು, ದಿನಾಂಕ: 28ನೇ ಆಗಸ್ಟ್ 2009

ಡಾ. ಡಿ. ಎಂ. ನಂಜುಂಡಪ್ಪನವರ ವರದಿಯಲ್ಲಿ ಗುರುತಿಸಿರುವಂತೆ ರಾಜ್ಯದ 114 ಹಿಂದುಳಿದ ತಾಲ್ಲೂಕುಗಳನ್ನು [illegible] ತಾಲ್ಲೂಕುಗಳನ್ನಾಗಿ ಮಾಡಲು. ಸವಿವರ ಯೋಜನಾ ವರದಿಗಳನ್ನು (Detailed Project Report) ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲು ಹಮ್ಮಿಕೊಂಡಿರುವ ಕೆಲಸ-ಕಾರ್ಯಗಳನ್ನು ಸಂಘಟಿಸಲು ಮೈಸೂರು ವಿಭಾಗಕ್ಕೆ ಸಮನ್ವಯ ಅಧಿಕಾರಿಯಾಗಿ ನೇಮಕಗೊಂಡಿದ್ದ ಶ್ರೀ ಕೆ. ಬಿ. ಶಿವಕುಮಾರ್. ಅಧೀಕ್ಷಕ ಅಭಿಯಂತರರು. ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ಇವರ ಬದಲಾಗಿ ಶ್ರೀ ಭಾಸ್ಕರ್. ಉಪ ನಿರ್ದೇಶಕರು. ಕರ್ನಾಟಕ ರಾಜ್ಯ ನಿರ್ಮಾಣ ಕೇಂದ್ರ. ಬೆಂಗಳೂರು ಹಾಗೂ ಶ್ರೀ ಕುಮಾರ್ ಎಸ್.ಡಿ.. ಉಪ ನಿರ್ದೇಶಕರು. ಕರ್ನಾಟಕ ರಾಜ್ಯ ನಿರ್ಮಾಣ ಕೇಂದ್ರ. ಬೆಂಗಳೂರು ಇವರನ್ನು ಮೈಸೂರು ವಿಭಾಗಕ್ಕೆ ಸಮನ್ವಯ ಅಧಿಕಾರಿಗಳನ್ನಾಗಿ ತಕ್ಷಣದಿಂದಾಗಿ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ.

ಸಮನ್ವಯ ಅಧಿಕಾರಿಗಳ ಕರ್ತವ್ಯಗಳು ಈ ಕೆಳಗಿನಂತಿವೆ:

1. ಸಮನ್ವಯ ಅಧಿಕಾರಿಗಳು ತಮ್ಮ ಇಲಾಖೆಯ ದಿನನಿತ್ಯದ ಕೆಲಸಗಳೊಂದಿಗೆ ಸಮನ್ವಯ ಅಧಿಕಾರಿಯ ಕರ್ತವ್ಯವನ್ನೂ ನಿರ್ವಹಿಸುವರು. ಅನುಬಂಧದಲ್ಲಿನ ಪಟ್ಟಿಯಂತೆ ತಮ್ಮ ವ್ಯಾಪ್ತಿಗೆ ಬರುವ ತಾಲ್ಲೂಕುಗಳನ್ನು ಗುರುತಿಸಿಕೊಳ್ಳುವುದು.
2. ಗುಡಿಸಲುವಾಸಿಗಳ ಪಟ್ಟಿ ತಯಾರಿಸಲು ಎಲ್ಲ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈಗಾಗಲೇ ಸೂಚನೆಗಳನ್ನು ನೀಡಲಾಗಿದ್ದು, ಅದರಂತೆ ಅವರೊಂದಿಗೆ ಸತತ ಸಂಪರ್ಕದಲ್ಲಿದ್ದು, ಈ ಕಾರ್ಯಕ್ರಮವನ್ನು ನಿಗದಿತ ಅವಧಿಯೊಳಗಾಗಿ ಸಂಪೂರ್ಣಗೊಳಿಸುವುದು.
3. ಗುಡಿಸಲುವಾಸಿಗಳ ಪಟ್ಟಿ ತಯಾರಿಸುವಲ್ಲಿ ಎದುರಿಸಬಹುದಾದ ತೊಡಕುಗಳನ್ನು ಸ್ಥಳೀಯ ಚುನಾಯಿತ ಪ್ರತಿನಿಧಿಗಳ ಅಥವಾ ಜಿಲ್ಲಾಧಿಕಾರಿಗಳ ಉಪಸ್ಥಿತಿಯಲ್ಲಿ ನಿವಾರಿಸುವುದು.
4. ಸಮನ್ವಯ ಅಧಿಕಾರಿಗಳ ಈ ಕಾರ್ಯನಿರ್ವಹಣೆಯಲ್ಲಿ ಭರಿಸಬಹುದಾದ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಗಳನ್ನು ತಮ್ಮ ಕಛೇರಿಯಿಂದಲೇ ನಿಯಮಾನುಸಾರ ಪಡೆಯಲು ಅರ್ಹರಾಗಿರುತ್ತಾರೆ. ಈ ವೆಚ್ಚಗಳಲ್ಲದೆ ಸವಿವರ ಯೋಜನಾ ವರದಿ ಮತ್ತಿತರ ವರದಿಗಳನ್ನು ಸಿದ್ಧಪಡಿಸುವ ಸಲುವಾಗಿ ಸರ್ಕಾರೇತರ ಸಂಸ್ಥೆಗಳ ನೇಮಕಾತಿ ಮತ್ತಿತರ ವೆಚ್ಚಗಳಿಗಾಗಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮೂಲಕ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಭರಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಕೆ. ಆರ್. ವಲ್ಲೂರ
ಪೀಠಾಧಿಕಾರಿ-2, ವಸತಿ ಇಲಾಖೆ.

ಅನುಬಂಧ

Identification of Regional Backwardness Based on the Comprehensive Composite Development Index, 2001

Sl. No.	District	Most Backward Taluks (index in the range from 0.53 to 0.79)	Index	More Backward Taluks (index in the range from 0.80 to 0.88)	Index	Backward Taluks (index in the range from 0.89 to 0.99)	Index
1	Bellary	Sandur	0.75	Siruguppa	0.86		
	Bellary	Kidligi	0.74	H.B.Halli	0.84		
	Bellary			Hadagali	0.81		
2	Bidar	Bhalki	0.74				
	Bidar	Humnabad	0.73				
	Bidar	Basavakalyan	0.69				
	Bidar	Aurad	0.65				
3	Gulbarga	Sedam	0.72			Gulbarga	0.89
	Gulbarga	Shorapur	0.70				
	Gulbarga	Yadgir	0.67				
	Gulbarga	Chittapur	0.65				

Sl. No.	District	Most Backward Taluks (index in the range from 0.53 to 0.79)	Index	More Backward Taluks (index in the range from 0.80 to 0.88)	Index	Backward Taluks (index in the range from 0.89 to 0.99)	Index
	Gulbarga	Afzalpur	0.62				
	Gulbarga	Shahapur	0.62				
	Gulbarga	Aland	0.61				
	Gulbarga	Chincholi	0.57				
	Gulbarga	Jevargi	0.57				
4	Koppal	Kushtagi	0.64	Koppal	0.81	Gangavathi	0.93
	Koppal	Yalburga	0.63				
5	Raichur	Sindhanur	0.78	Raichur	0.87		
	Raichur	Manvi	0.69				
	Raichur	Lingsugur	0.63				
	Raichur	Devdurga	0.53				
I	**Gulbarga Division**	21		5		2	
6	Bagalkot	Bilagi	0.77	Hunugund	0.85		
	Bagalkot			Badami	0.82		
7	Belgaum			Athani	0.88	Raybag	0.97
	Belgaum			Gokak	0.86	Bailhongala	0.95
	Belgaum			Soundatti	0.86	Raidurg	0.90
						Hukkeri	0.89
8	Bijapur	Muddebihal	0.69			Bijapur	0.92
	Bijapur	B. Bagewadi	0.69				
	Bijapur	Indi	0.66				
	Bijapur	Sindgi	0.64				
9	Dharwad			Kalghatagi	0.84	Navalgund	0.99
						Kundagol	0.95
10	Gadag			Mundaragi	0.88	Ron	0.92
	Gadag					Shirahatti	0.89
11	Haveri			Savanur	0.87	Haveri	0.99
	Haveri			Shiggaon	0.84	Byadagi	0.97
				Hirekerur	0.88	Hanagal	0.92
12	Uttara Kannada			Supa (Joida)	0.87	Ankola	0.98
	Uttara Kannada			Bhatkal	0.82	Siddapur	0.92
II	**Belgaum Division**	5		12		14	
13	Bangalore (U)					Anekal	0.90
14	Bangalore (R)	Kanakapura	0.74			Hosakote	0.97
		Magadi	0.79			Chennapatna	0.95
15	Chitradurga	Hosadurga	0.78	Hiriyur	0.87		
	Chitradurga			Molakalmuru	0.84		
	Chitradurga			Holalkere	0.84		
				Challakere	0.81		

Sl. No.	District	Most Backward Taluks (index in the range from 0.53 to 0.79)	Index	More Backward Taluks (index in the range from 0.80 to 0.88)	Index	Backward Taluks (index in the range from 0.89 to 0.99)	Index
16	Davanagere	Channagiri	0.78	Honnali	0.86		
	Davanagere	Harapanahalli	0.72	Jagalur	0.80		
17	Kolar	Bagepalli	0.76	Mulbagal	0.88	Srinivasapura	0.98
	Kolar			Gudibanda	0.84	Chintamani	0.97
	Kolar			Gowribidanur	0.83	Bangarpet	0.96
	Kolar					Malur	0,93
	Kolar					Sidlaghatta	0.91
18	Shimoga			Soraba	0.82	Shikaripura	0.92
19	Tumkur	Kunigal	0.79	Turuvekere	0.86		
	Tumkur	Madhugiri	0.74	Koratagere	0.83		
	Tumkur	Gubbi	0.73	C.N.Halli	0.83		
	Tumkur	Sira	0.73				
		Pavagada	0.72				
III	**Bangalore Division**	**11**		**13**		**9**	
20	Chamarajanagar	Chamarajanagar	0.78	Gundlupet	0.81		
	Chamarajanagar			Kollegal	0.80		
21	Chikmagalur			Kadur	0.81	Tarikere	0.89
22	Dakshina Kannada						
23	Hassan			Arakalgud	0.84	Holenarasipura	0.97
						Belur	0.94
						Channarayapatna	0.92
						Arasikere	0.91
24	Kodagu						
25	Mandya			Malavalli	0.84	Srirangapattana	0.98
	Mandya			Nagamangala	0.83	Maddur	0.95
	Mandya			Krishnarajpet	0.80	Pandavapura	0.94
26	Mysore	H.D. Kote	0.72	Hunsur	0.88	Periyapatna	0.97
	Mysore			T.Narasipur	0.87	K.R.Nagar	0.92
	Mysore			Nanjanagud	0.87		
27	Udupi						
IV	**Mysore Division**	**2**		**10**		**10**	
A	Northern Region (I + II)	26		17		16	59
B	Southern Region (III + IV)	13		23		19	55
	Grand Total	**39**		**40**		**35**	**114**

Note: Blanks in the columns indicate that there are no taluks under concerned groups.

6. The division-wise breakup of these 114 taluks is as follows:

Divisions	Most Backward	More Backward	Backward	Total
Gulbarga	21	5	2	28
Belgaum	5	12	14	31
Bangalore	11	13	9	33
Mysore	2	10	10	22
Total	**39**	**40**	**35**	**114**

7. While apparently there seems to be an insignificant regional disparity, there being 59 backward taluks in the Northern Region as against 55 backward taluks in the Southern Region, a closer inspection reveals that, at the lowest strata of development, the Northern Region is definitely worse off, considering that it has 26 "Most Backward Taluks" as against only 13 in the Southern Region. The North-South divide is clearly apparent.

ಕೆ. ಆರ್. ವಲ್ಲೂರ

ಪಿ.ಆರ್. 2098 ಪೀಠಾಧಿಕಾರಿ–2, ವಸತಿ ಇಲಾಖೆ.

ವಿಷಯ: ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ಶೇರುದಾರರ ಬದಲಾವಣೆ ಕುರಿತು.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ವಇ 183 ಹೆಚ್‌ಎಹೆಚ್ 99, ದಿನಾಂಕ: 31.3.2003.

2) ಸರ್ಕಾರದ ಆದೇಶ ಸಂಖ್ಯೆ: ವಇ 09 ಹೆಚ್‌ಎಹೆಚ್ 2007, ದಿನಾಂಕ: 20.8.2007.

ಪ್ರಸ್ತಾವನೆ:

ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತವು ಒಂದು ಸಾರ್ವಜನಿಕ ನಿಯಮಿತ ಸಂಸ್ಥೆಯಾಗಿದ್ದು, ತಲಾ 100/– ರೂ.ಗಳ ಒಟ್ಟು 3.00 ಲಕ್ಷ ಷೇರುಗಳ ಸಂದಾಯಿತ ಬಂಡವಾಳ ಹೊಂದಿರುತ್ತದೆ. ಇದರಲ್ಲಿ 2,99,993 ಶೇರುಗಳು ಘನತೆವೆತ್ತ ರಾಜ್ಯಪಾಲರು ಹೊಂದಿದ್ದು, ಉಳಿದ 7 ಶೇರುಗಳು ಕರ್ನಾಟಕ ಸರ್ಕಾರದ ವತಿಯಿಂದ 7 ಅಧಿಕಾರಿಗಳ ಹೆಸರಿನಲ್ಲಿರುತ್ತದೆ. ಈ ಅಧಿಕಾರಿಗಳು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಆಡಳಿತ ಮಂಡಳಿಯ ನಿರ್ದೇಶಕರಾಗಿದ್ದು, ಅವರು ವರ್ಗಾವಣೆಯಾದಂತೆ ಆ ಸ್ಥಾನಗಳನ್ನು ವಹಿಸಿಕೊಂಡ ಅಧಿಕಾರಿಗಳ ಹೆಸರುಗಳಿಗೆ ಶೇರುಗಳು ವರ್ಗಾವಣೆಯಾಗ ಬೇಕಾಗಿರುತ್ತದೆ. ಅಂತೆಯೇ ಈ ಕೆಳಕಾಣಿಸಿದ ಆದೇಶ.

ಸರ್ಕಾರದ ಆದೇಶ ಸಂ. ವಇ 80 ಹೆಚ್‌ಎಎಂ 2009, ಬೆಂಗಳೂರು, ದಿನಾಂಕ: 29ನೇ ಆಗಸ್ಟ್ 2009

ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ಸಂಸ್ಥಾ ನಿವೇದನಾ ಪತ್ರದ ಅನುಚ್ಛೆದ 63 ರಿಂದ 69ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಈ ಕೆಳಕಾಣಿಸಿದಂತೆ ಶೇರುಗಳನ್ನು ಅಧಿಕಾರಿಗಳಿಗೆ ವರ್ಗಾಯಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

ಕ್ರ. ಸಂ.	ಶೇರು ಹೊಂದಿರುವ ಅಧಿಕಾರಿಗಳ ಹೆಸರು	ಶೇರುಗಳನ್ನು ವರ್ಗಾಯಿಸಲ್ಪಡಬೇಕಾಗಿರುವ ಅಧಿಕಾರಿಗಳ ಹೆಸರು
1	ಶ್ರೀಮತಿ ಶೋಭ ನಂಬೀಷನ್ ಐ.ಎ.ಎಸ್.	ಶ್ರೀ ಜಿ.ವಿ. ಕೊಂಗವಾಡ, ಐ.ಎ.ಎಸ್. ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ.
2	ಶ್ರೀ ಎಂ.ಆರ್. ಶ್ರೀನಿವಾಸ ಮೂರ್ತಿ, ಐ.ಎ.ಎಸ್.	ಶ್ರೀ ಅನಿಲ್ ಕುಮಾರ್ ಝಾ, ಐ.ಎ.ಎಸ್. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3.	ಶ್ರೀ ಬಾಬುರಾವ್ ಮುಡಬಿ, ಐ.ಎ.ಎಸ್.	ಶ್ರೀ ಬಿ.ಹೆಚ್. ಅನಿಲ್‌ಕುಮಾರ್, ಐ.ಎ.ಎಸ್. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
4.	ಶ್ರೀ ಪಿ. ಬೋರೇಗೌಡ, ಕೆ.ಎ.ಎಸ್.	ಶ್ರೀ ಎಸ್. ಪುಟ್ಟಸ್ವಾಮಿ, ಕೆ.ಎ.ಎಸ್. ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ
5.	ಶ್ರೀ ಹೆಚ್.ವಿ. ಪಾರ್ಶ್ವನಾಥ್, ಐ.ಎ.ಎಸ್.	ಶ್ರೀ ಎಸ್.ಎಸ್. ಪಟ್ಟನಶೆಟ್ಟಿ, ಐ.ಎ.ಎಸ್. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಿತ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ವಲ್ಲೂರ

ಪಿ.ಆರ್. 2099 ಪೀಠಾಧಿಕಾರಿ–2, ವಸತಿ ಇಲಾಖೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: ಎನ್.ಆರ್.ಹೆಚ್.ಎಂ. ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಶೇ. 15 ರಷ್ಟು ವಂತಿಗೆಯನ್ನು 2009–10ನೇ ಸಾಲಿನ ಆಯವ್ಯಯದಲ್ಲಿ ಕಲ್ಪಿಸುವ ಬಗ್ಗೆ.

ಓದಲಾಗಿದೆ: ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: 264 ವೆಚ್ಚ–5–2009, ದಿನಾಂಕ: 26–03–2009

ಪ್ರಸ್ತಾವನೆ:

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಭಿಯಾನದ ಅಡಿ ರಾಜ್ಯದಲ್ಲಿ ಸಾರ್ವಜನಿಕ ಆರೋಗ್ಯ ಸುಧಾರಣೆಗಾಗಿ ಹಲವಾರು ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ. ಈ ಬಗ್ಗೆ ಕೇಂದ್ರ ಸರ್ಕಾರವು ಅಗತ್ಯ ಅನುದಾನವನ್ನು ಮಂಜೂರು ಮಾಡುತ್ತದೆ. ಕೇಂದ್ರ ಸರ್ಕಾರವು ಎನ್.ಆರ್.ಹೆಚ್.ಎಂ.ಗೆ ಅನುದಾನ ಬಿಡುಗಡೆ ಮಾಡಬೇಕಾದಲ್ಲಿ ರಾಜ್ಯ ಸರ್ಕಾರದ ವಂತಿಕೆಯಾಗಿ ಶೇ. 15 ರಷ್ಟು ಅನುದಾನವನ್ನು ಜಮೆ ಮಾಡಬೇಕೆಂದು ಷರತ್ತು ವಿಧಿಸಿರುತ್ತದೆ.

2009–10ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಅಂದಾಜು ರೂ. 500 ಕೋಟಿಗಳಿಗಿಂತಲೂ ಹೆಚ್ಚು ಸಹಾಯಾನುಧನ ದೊರೆಯಲಿದೆ. ಇದಕ್ಕೆ ಪೂರಕವಾಗಿ ಕೇಂದ್ರ ಸರ್ಕಾರ ವಿಧಿಸಿರುವ ಷರತ್ತಿನಂತೆ ರಾಜ್ಯ ಸರ್ಕಾರದ ಭಾಗವಾಗಿ ಶೇ. 15 ರಷ್ಟು ಅನುದಾನವನ್ನು ರಾಜ್ಯ ಆಯವ್ಯಯದಲ್ಲಿ ಒದಗಿಸಿ, ರಾಜ್ಯ ಆರೋಗ್ಯ ಸಂಘದ ಮೂಲಕ ಬಿಡುಗಡೆ ಮಾಡಬೇಕಿದೆ.

2009–10ನೇ ಸಾಲಿನ ಆಯವ್ಯದ ಕರಡು ಅಂದಾಜುಗಳನ್ನು ಈಗಾಗಲೇ ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ರೂ. 146.15 ಕೋಟಿಗಳಷ್ಟು ಅನುದಾನವನ್ನು ರಾಜ್ಯ ಆರೋಗ್ಯ ಸಂಘದ ಮೂಲಕ ಬಿಡುಗಡೆ ಮಾಡಲು ಪರಿಗಣಿಸಿ, ರಾಜ್ಯ ಆಯವ್ಯಯದಲ್ಲಿ ಓದಲಾದ ಕ್ರಮ ಸಂಖ್ಯೆ (1)ರ ಟಿಪ್ಪಣಿಯಲ್ಲಿ 2009–10ನೇ ಸಾಲಿಗೆ ಒದಗಿಸಲಾಗಿರುವ ಅನುದಾನ ಈ ಕೆಳಗಿನಂತೆ ಹಂಚಿಕೆ ಮಾಡಿದೆ.

(ರೂ. ಲಕ್ಷಗಳಲ್ಲಿ)

ಕ್ರ. ಸಂ	ಲೆಕ್ಕ ಶೀರ್ಷಿಕೆ	2009–10 ರಲ್ಲಿ ಒದಗಿಸಿರುವುದು
1	2210–80–800–0–17 ತಾಯಿ ಭಾಗ್ಯ	1000.00
2	2210–80–800–0–18 ಆರೋಗ್ಯ ಕವಚ (ಇ.ಎಂ.ಆರ್.ಐ.)	1000.00
3	2211–00–103–0–73 ಮಡಿಲು ಕಿಟ್	412.00
4	2210–80–800–0–15 ಸುವರ್ಣ ಸುರಕ್ಷ (ಆಪತ್ಬಾಂಧವ)	2000.00
5	2210–01–110–2–40 ಟೆಲಿಮೆಡಿಷಿನ್	100.00
6	2210–01–110–2–41 ಜೆರಿಯಾಟ್ರಿಕ್ ಸೇವೆಗಳು	110.00
7	2210–01–800–0–06 ಆರೋಗ್ಯ ಸೇವೆಗಾಗಿ 12ನೇ ಹಣಕಾಸು ಆಯೋಗದ ಅನುದಾನ	3750.00
8	2210–06–800–0–81 ಕೆ.ಹೆಚ್.ಎಸ್.ಡಿ.ಆರ್.ಪಿ. ಆರ್ಗನೈಸೇಸನ್ ಡೆವಲಪ್‌ಮೆಂಟ್	488.00
9	2210–06–800–0–82 ಕೆ.ಹೆಚ್.ಎಸ್.ಡಿ.ಆರ್.ಪಿ. (ಪಿ.ಹೆಚ್.ಸಿ.ಎಫ್.)	1560.00
10	2210–06–800–0–83 ಕೆ.ಹೆಚ್.ಎಸ್.ಡಿ.ಆರ್.ಪಿ. ಹೆಲ್ತ್ ಫೈನಾನ್ಸಿಂಗ್	766.00
11	2210–06–800–0–85 ಕೆ.ಹೆಚ್.ಎಸ್.ಡಿ.ಆರ್.ಪಿ. ಸರ್ವಿಸ್ ಇಂಪ್ರೂಮೆಂಟ್ ಚಾಲೆಂಜ್ ಫಂಡ್	1845.00
	ಒಟ್ಟು	**13,031–00**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 11 ಎಫ್.ಪಿ.ಆರ್. 2009, ಬೆಂಗಳೂರು, ದಿನಾಂಕ: 17ನೇ ಆಗಸ್ಟ್ 2009

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು 2009–10ನೇ ಸಾಲಿಗೆ ಆಯವ್ಯಯದಲ್ಲಿ ಕರ್ನಾಟಕ ರಾಜ್ಯಕ್ಕೆ ರೂ. 13031–00

(ಹದಿಮೂರು ಸಾವಿರದ ಮೂವತ್ತೊಂದು ಲಕ್ಷ ರೂ.ಗಳು ಮಾತ್ರ) ಲಕ್ಷಗಳನ್ನು ಹಂಚಿಕೆ ಮಾಡಿದ್ದು, ಈ ಹಣವನ್ನು ರಾಜ್ಯ ಆರೋಗ್ಯ ಸಂಘಕ್ಕೆ ಬಿಡುಗಡೆ ಮಾಡಿ ಸರ್ಕಾರದ ತನ್ನ ಪಾಲಿನ ಶೇ. 15 ರಷ್ಟು ವಂತಿಗೆಯೆಂದು ಪರಿಗಣಿಸಿ ಬಿಡುಗಡೆ ಮಾಡಲು ಆದೇಶಿಸಿದೆ.

ಕೇಂದ್ರ ಸರ್ಕಾರದ ಸೂಚನೆಗಳ ಅನ್ವಯ ಆಯವ್ಯಯ ಒದಗಿಸುವ ನಿಟ್ಟಿನಲ್ಲಿ ಈ ಆದೇಶವನ್ನು ಹೊರಡಿಸಲಾಗಿದೆ. ಆದುದರಿಂದ ಪ್ರತಿ ಕಾರ್ಯಕ್ರಮದ ಮೇಲುಸ್ತುವಾರಿಯು ಆಯಾ ಇಲಾಖಾ ಮುಖ್ಯಸ್ಥರ ಅಂದರೆ, ಆಯುಕ್ತರು/ ಕೆ.ಹೆಚ್.ಎಸ್.ಡಿ.ಆರ್.ಪಿ./ ಆಡಳಿತಾಧಿಕಾರಿ/ಎನ್.ಆರ್.ಹೆಚ್.ಎಂ. ಅಭಿಯಾನ ನಿರ್ದೇಶಕರ ಜವಾಬ್ದಾರಿಯಾಗಿರುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/662/ವೆಚ್ಚ–5/ 2009, ದಿನಾಂಕ: 4–07–2009 ಮತ್ತು ಆಇ/657/ವೆಚ್ಚ–5/2009, ದಿನಾಂಕ: 22–05–2009 ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಚಿಕ್ಕೇಗೌಡ

ಪಿ.ಆರ್. 1999 ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ: ಶ್ರೀ ಹೆಚ್. ಚಂದ್ರಶೇಖರಯ್ಯ, ನಿವೃತ್ತ ಮುಖ್ಯ ಇಂಜಿನಿಯರ್, ಇವರ ವಿರುದ್ಧದ ಇಲಾಖಾ ವಿಚಾರಣೆ ದಂಡನೆ ವಿಧಿಸಿ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂ. ಸಿಆಸುಇ 63 ಎಸ್ಇಎನ್ 2005, ದಿನಾಂಕ: 07.11.2007.
2. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು, ಇವರ ಪತ್ರ ದಿನಾಂಕ: 26.06.2008.
3. ನೋಟೀಸ್ ಸಂಖ್ಯೆ: ಸಿಆಸುಇ 63 ಎಸ್ಇಎನ್ 2005, ದಿನಾಂಕ: 09.07.2008.
4. ಪತ್ರ ಸಂಖ್ಯೆ: ಸಿಆಸುಇ 63 ಎಸ್ಇಎನ್ 2005, ದಿನಾಂಕ: 13.04.2009.
5. ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 27/ಸಿಎನ್ಎಸ್ 09 ದಿನಾಂಕ:17.06.2009.

ಪ್ರಸ್ತಾವನೆ :

ಶ್ರೀ ಹೆಚ್. ಚಂದ್ರಶೇಖರಯ್ಯ, ನಿವೃತ್ತ ಮುಖ್ಯ ಇಂಜಿನಿಯರ್, ಇವರು 2003–04ನೇ ಸಾಲಿನಲ್ಲಿ ಕಾಡಾ ನೀರಾವರಿ ಯೋಜನೆಗಳ ವಲಯ, ಗುಲ್ಬರ್ಗಾ, ಪಾಧಿಕಾರದಲ್ಲಿ ಆಡಳಿತಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ, 2003–04ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ ಅಡಿಯಲ್ಲಿ ಟೆಂಡರ್ ಇತ್ಯರ್ಥ ಪಡಿಸುವಾಗ ಕಡಿಮೆ ದರ ನಮೂದಿಸಿದ ಸಂಸ್ಥೆಯನ್ನು ವಿನಾಕಾರಣ ತಿರಸ್ಕರಿಸಿ ಅದಕ್ಕಿಂತ ಹೆಚ್ಚಿನ ದರ ನಮೂದಿಸಿದ ಸಂಸ್ಥೆಯಿಂದ ನ್ಯಾಪ್‌ಸಾಕ್ ಸ್ಪ್ರೇಯರ್ ಹಾಗೂ ಪವರ್ ಸ್ಪ್ರೇಯರ್‌ಗಳನ್ನು ಸರಬರಾಜು ಮಾಡಲು ಆದೇಶ ನೀಡುವ ಮೂಲಕ ದುರ್ನಡತೆ ಎಸಗಿದ ಆರೋಪಕ್ಕಾಗಿ ಮೇಲೆ (1) ರಲ್ಲಿ ಓದಲಾದ ದಿನಾಂಕ: 07.11.2007ರ ಸರ್ಕಾರಿ ಆದೇಶದಲ್ಲಿ ಅವರ ವಿರುದ್ಧ ಇಲಾಖಾ ವಿಚಾರಣೆಯನ್ನು ಆದೇಶಿಸಿ ಪ್ರಾಥಮಿಕ ಆಯುಕ್ತರು, ಬೆಂಗಳೂರು, ಅವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಯಿತು. ವಿಚಾರಣೆ ನಡೆಸಿದ ವಿಚಾರಣಾಧಿಕಾರಿಯವರು ಮೇಲೆ (2) ರಲ್ಲಿ ಓದಲಾದ ದಿನಾಂಕ: 26.06.2008ರ ವಿಚಾರಣಾ ವರದಿ ಸಲ್ಲಿಸಿ, ಆರೋಪ ಕುರಿತಂತೆ ಈ ಕೆಳಕಂಡ ನಿರ್ಣಯ ನೀಡಿದರು.

ಟೆಂಡರ್ ಅಧಿಸೂಚನೆಗೆ ಉತ್ತರವಾಗಿ 5 ಬಿಡ್ಡುಗಳು ಬಂದಿದ್ದು, ಇದರಲ್ಲಿ ಇಬ್ಬರು ಅಧಿಕೃತ ಮಾನ್ಯತೆ ಪಡೆಯದ ಕಾರಣ ಅವರಿಬ್ಬರನ್ನು ಹೊರತುಪಡಿಸಿ, ಉಳಿದ ಮೂವರಲ್ಲಿನ ಜೈಕಿಸಾನ್ ಆಗ್ರೋ ಕಂಪನಿಯ ಐಟಂಗೆ ರೂ. 1045/– ಹಾಕಿದ್ದು, ನಂತರ ಉಳಿದ ಐಟಂಗಳಿಗೆ ದರ ಸೂಚಿಸಿಲ್ಲದ ಕಾರಣ ಅವರ ಟೆಂಡರ್‌ನ್ನು ತಿರಸ್ಕರಿಸಲಾಯಿತು ಎಂದು ತಿಳಿಸಿ ಉಳಿದ ಇಬ್ಬರಲ್ಲಿ ಕಡಿಮೆ ದರ ರೂ. 1163/– ನಮೂದಿಸಿದ ಮೆ: ಶಹಾ ಮಿಷನರಿ ಸ್ಟೋರ್ಸ್, ಗುಲ್ಬರ್ಗಾ ಅವರಿಗೆ ಟೆಂಡರ್ ನೀಡಲಾಯಿತು. ಇದರಲ್ಲಿ ಕರ್ನಾಟಕ ಕೆ.ಟಿ.ಟಿ.ಪಿ. ಕಾಯ್ದೆಯನ್ವಯ ಯಾವುದೇ ಅಂಶವು ಉಲ್ಲಂಘನೆಯಾಗಿಲ್ಲವೆಂದು ಆರೋಪಿಯು ವಾದಿಸಿದ್ದಾನೆ. ಆದರೆ ಸಾಕ್ಷಿಗಳ ಹೇಳಿಕೆ ಹಾಗೂ ಟೆಂಡರ್ ದಾಖಲೆಗಳನ್ನು ಪರಿಶೀಲಿಸಿದಾಗ, ಅಪೂರ್ಣ ಟೆಂಡರ್‌ಗಳನ್ನು ಮಾತ್ರ ತಿರಸ್ಕರಿಸಲಾಗುವುದೆಂಬ ಷರತ್ತು ಮಾತ್ರ ಟಂಡರ್ ದಾಸ್ತಾನು ಯೋಜನೆಯಲ್ಲಿದೆ. ಎಲ್ಲಾ ಐಟಂಗಳಿಗೆ ಕಡ್ಡಾಯವಾಗಿ ದರವನ್ನು ನಮೂದಿಸಬೇಕೆಂದು ಟೆಂಡರ್ ದಾಸ್ತಾನು ಯೋಜನೆಯಲ್ಲಿ ಎಲ್ಲಿಯೂ ಸಹ ನಮೂದಿಸಿರುವುದಿಲ್ಲ. ಟೆಂಡರ್ ದಾಸ್ತಾನು ಯೋಜನೆಯಲ್ಲಿ ಇಲ್ಲದೆ ಷರತ್ತುಗಳನ್ನು ತಾವೇ ಭಾವಿಸಿಕೊಂಡು, ಟೆಂಡರ್ ನಿಯಮಗಳಿಗೆ ವಿರುದ್ಧವಾಗಿ ಒಂದು ಐಟಂಗೆ ಕಡಿಮೆ ದರ ನಮೂದಿಸಿರುವ ಸಂಸ್ಥೆಯನ್ನು ಬಿಟ್ಟು ಹೆಚ್ಚಿನ ದರ ನಮೂದಿಸಿರುವ ಸಂಸ್ಥೆಗೆ ಸರಬರಾಜು ಆದೇಶ ನೀಡಿರುವ ದುರ್ನಡತೆಯಾಗಿದೆ. ಆದ್ದರಿಂದ ಕಾಡಾ ಪ್ರಾಧಿಕಾರಕ್ಕೆ ರೂ. 29,235/– ಗಳ ನಷ್ಟ ಉಂಟಾಗಿದೆ ಎಂಬ ಆರೋಪ ಸಾಬೀತಾಗಿದೆ.

ಮೇಲೆ (3) ರಲ್ಲಿ ಓದಲಾದ ದಿನಾಂಕ: 17.07.2008ರ ನೋಟೀಸ್‌ನೊಡನೆ ವಿಚಾರಣಾ ವರದಿಯ ಪ್ರತಿಯನ್ನು ಆರೋಪಿ ಅಧಿಕಾರಿಗೆ ಒದಗಿಸಿ ವಿಚಾರಣಾ ವರದಿಯ ಕುರಿತು ಯಾವುದಾದರೂ ಅಹವಾಲು ಇದ್ದಲ್ಲಿ, ಸಲ್ಲಿಸಲು ಅವಕಾಶ ಕಲ್ಪಿಸಲಾಯಿತು. ನೋಟೀಸನ್ನು ದಿನಾಂಕ:21.07.2008 ರಂದು ಸ್ವೀಕರಿಸಿದ ಅಧಿಕಾರಿಯು ತನ್ನ ಉತ್ತರವನ್ನು ಸಲ್ಲಿಸಲಿಲ್ಲ. ವಿಚಾರಣಾ ವರದಿಯನ್ನು ದಾಖಲೆಗಳೊಡನೆ ಪರಿಶೀಲಿಸಲಾಗಿ, ಸಾಕ್ಷಿಗಳ ವಿಚಾರಣೆಯು ಸಮರ್ಪಕವಾಗಿ ನಡೆದಿದೆ. ಆರೋಪಿಯೂ ಸಹ ತಮ್ಮ ವಾದವನ್ನು ಸಮರ್ಥವಾಗಿ ಮಂಡಿಸಿದ್ದಾರೆ. ಟೆಂಡರ್ ದಾಸ್ತಾನು ಯೋಜನೆಯಡಿಯಲ್ಲಿ ನಮೂದಿಸಿರುವ ಎಲ್ಲಾ ಅಂಶಗಳನ್ನು ವಿಚಾರಣಾಧಿಕಾರಿಗಳು ದಾಖಲೆಗಳೊಡನೆ ಪರಿಶೀಲಿಸಿದ್ದು, ಕನಿಷ್ಟ ದರ ನಮೂದಿಸಿರುವ ಸಂಸ್ಥೆಯನ್ನು ಬಿಟ್ಟು ಹೆಚ್ಚಿನ ದರ ನಮೂದಿಸಿರುವ ಸಂಸ್ಥೆಗೆ ಆದೇಶ ನೀಡಿರುವುದು ಹಾಗೂ ಈ ಕ್ರಮದಿಂದ ರೂ. 29,736/– ಹೆಚ್ಚುವರಿ ಆರ್ಥಿಕ ಹೊರೆ ಉಂಟಾಗಿದ್ದು ಸಾಬೀತಾಗಿದೆ ಹಾಗೂ ಸದರಿ ಮೊತ್ತ ನಷ್ಟವಾಗಿದೆ. ಆದ್ದರಿಂದ ವಿಚಾರಣಾಧಿಕಾರಿಗಳ ನಿರ್ಣಯವನ್ನು ಸರ್ಕಾರವು ಒಪ್ಪುತ್ತದೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಸಹಮತಿಯೊಡನೆ ದಂಡನೆ ವಿಧಿಸಲು ತೀರ್ಮಾನಿಸಿ ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 63, ಎಸ್‌ಇಎನ್ 2005, ಬೆಂಗಳೂರು, ದಿನಾಂಕ: 1ನೇ ಆಗಸ್ಟ್ 2009

ಕರ್ನಾಟಕ ನಾಗರೀಕ ಸೇವಾ ನಿಯಮಾನುಸಾರ 214ನೇ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಶ್ರೀ ಹೆಚ್. ಚಂದ್ರಶೇಖರಯ್ಯ, ನಿವೃತ್ತ ಮುಖ್ಯ ಇಂಜಿನಿಯರ್, ಅವರ ಮಾಸಿಕ ವಿಶ್ರಾಂತಿ ವೇತನದಿಂದ ರೂ. 1,000/– (ಒಂದು ಸಾವಿರ ರೂಪಾಯಿ)ಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ 5 ವರ್ಷಗಳ ಅವಧಿಗೆ ಕಡಿತಗೊಳಿಸಬೇಕೆಂದು ಮತ್ತು ಇವರ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾದ ನಷ್ಟ ರೂ. 29,736/– ಗಳನ್ನು ಪಾವತಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಶೇಕಡಾ 8ರಷ್ಟು ಬಡ್ಡಿಯೊಡನೆ 15 ಸಮಾನ ಕಂತುಗಳಲ್ಲಿ ವಸೂಲು ಮಾಡಬೇಕೆಂದು ಈ ಮೂಲಕ ಆದೇಶಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವೆಗಳು–3)

ಪಿ.ಆರ್. 1903

ವಿಷಯ: ಮೈಸೂರು ಅರಮನೆ ಉಸ್ತುವಾರಿಗಾಗಿ ಮಂಜೂರಾಗಿರುವ ತಾತ್ಕಾಲಿಕ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂ. ಡಿಪಿಎಆರ್ 2 ಪಿಎಸ್‌ಆರ್ 76, ದಿನಾಂಕ: 26.02.1976.
2. ಸರ್ಕಾರದ ಆದೇಶ ಸಂ. ಸಿಆಸುಇ 29, ಸೇಅವಿ 2001, ದಿನಾಂಕ: 09.08.2002
3. ಸರ್ಕಾರದ ಆದೇಶ ಸಂ.: ಸಿಆಸುಇ 24 ಸೇಅವಿ 2008, ದಿನಾಂಕ: 04.04.2008
4. ಕಾರ್ಯನಿರ್ವಹಣಾಧಿಕಾರಿ, ಅರಮನೆ ಮಂಡಲಿ, ಮೈಸೂರು, ಇವರ ಪತ್ರ ಸಂ: ಕಾನಿಅ: ಅಮಂ: ಇಎಸ್‌ಟಿ–1: ತಾತ್ಕಾಲಿಕ ಹುದ್ದೆ: 2008–09: 598, ದಿನಾಂಕ: 28.01.2009.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಮೈಸೂರು ಅರಮನೆ ಉಸ್ತುವಾರಿಗಾಗಿ ಕೆಲವು ತಾತ್ಕಾಲಿಕ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಮೇಲೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರೂ. 5,200 – 9,500ರ ವೇತನ ಶ್ರೇಣಿಯ ಒಂದು ಕಛೇರಿ ಅಧೀಕ್ಷಕರ ಹುದ್ದೆಯನ್ನು ತಾತ್ಕಾಲಿಕವಾಗಿ ಸೃಜಿಸಲಾಗಿದೆ. ಈ ಎಲ್ಲಾ ಹುದ್ದೆಗಳನ್ನು ಕಾಲಕಾಲಕ್ಕೆ ಮುಂದುವರೆಸುತ್ತಾ ಬಂದಿದ್ದು, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ 114 ವಿವಿಧ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ: 01.04.2008 ರಿಂದ 31.03.2009ರವರೆಗೆ ಮುಂದುವರೆಸಲಾಗಿದೆ. ಮೇಲೆ (4) ರಲ್ಲಿ ಓದಲಾಗಿರುವ ಪತ್ರದಲ್ಲಿ ಕಾರ್ಯನಿರ್ವಾಹಕಾಧಿಕಾರಿ, ಮೈಸೂರು ಅರಮನೆ ಮಂಡಲಿ, ಮೈಸೂರು, ಇವರು ಮೇಲೆ ಉಲ್ಲೇಖಿಸಿರುವ 114 ವಿವಿಧ ಹುದ್ದೆಗಳ ಅವಧಿಯು ದಿನಾಂಕ: 31.03.2009ಕ್ಕೆ ಅಂತ್ಯಗೊಳ್ಳುವುದರಿಂದ ಎಲ್ಲಾ ಹುದ್ದೆಗಳನ್ನು ದಿನಾಂಕ: 01:04.2009 ರಿಂದ 31.03.2010ರವರೆಗೆ ಒಂದು ವರ್ಷದ ಅವಧಿಗೆ ಮುಂದುವರೆಸಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಪ್ರಸ್ತಾವನೆಯನನ್ನು ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದ ಸರ್ಕಾರವು 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2205–00–107–0–04 ಯೋಜನೇತರಡಿ ಮೈಸೂರು ಅರಮನೆ ನಿರ್ವಹಣೆಗೆ ಒಟ್ಟು 113 ಹುದ್ದೆಗಳು ಅಪೆಂಡಿಕ್ಸ್ – ಬಿ ನಲ್ಲಿರುವುದರಿಂದ ಒಂದು ಬೆರಳಚ್ಚುಗಾರರ ಹುದ್ದೆಯನ್ನು ಹೊರತುಪಡಿಸಿ 113 ಹುದ್ದೆಗಳನ್ನು ಮುಂದುವರೆಸಲು ನಿರ್ಣಯಿಸಿದೆ. ಅದರಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 20 ಸೇಅವಿ 2009, ಬೆಂಗಳೂರು, ದಿನಾಂಕ: 3ನೇ ಆಗಸ್ಟ್ 2009

ಮೈಸೂರು ಅರಮನೆ ಮಂಡಲಿ, ಮೈಸೂರು, ಇಲ್ಲಿ ಅರಮನೆ ಉಸ್ತುವಾರಿಗಾಗಿ ಸೃಜಿಸಲಾಗಿರುವ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ–1 ರಿಂದ 9ರವರೆಗೆ ನಮೂದಿಸಿರುವ 113 ವಿವಿಧ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ 01.04.2009 ರಿಂದ 31.03.2010ರವರೆಗೆ ತಾತ್ಕಾಲಿಕವಾಗಿ ಮುಂದುವರೆಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 205–ಕಲೆ ಮತ್ತು ಸಂಸ್ಕೃತಿ 107 – ಸಂಗ್ರಹಾಲಯ – 04 ಮೈಸೂರು ಅರಮನೆ ಉಸ್ತುವಾರಿ ವೇತನ (ಯೋಜನೇತರ) ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 1996 ದಿನಾಂಕ: 10–07–1996 ರಲ್ಲಿ ಇಲಾಖೆಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. (ಸೇವೆಗಳು–3)

ಸರ್ಕಾರಿ ಆದೇಶ ಸಂ: ಸಿಆಸುಇ 20 ಸೇಅವಿ 2009, ದಿನಾಂಕ: 03.08.2009

ಅನುಬಂಧ – 1

ಕ್ರ. ಸಂ.	ಪದನಾಮ		ಹುದ್ದೆಗಳ ಸಂಖ್ಯೆ
1.	ಸಹಾಯಕ ಇಂಜಿನಿಯರ್ (ಸಿವಿಲ್)	:	2
2.	ಪ್ರಥಮ ದರ್ಜೆ ಅಕೌಂಟ್ಸ್ ಸಹಾಯಕ	:	1
3.	ಪ್ರಥಮ ದರ್ಜೆ ಪಿ. ಡಬ್ಲ್ಯು.ಡಿ. ಸಹಾಯಕರು	:	1
4.	ಪ್ರಥಮ ದರ್ಜೆ ಸ್ಟೋರ್ಸ್ ಕೀಪರ್	:	1
5.	ಎರಡನೇ ದರ್ಜೆ ಸ್ಟೋರ್ಸ್ ಕೀಪರ್	:	1
6.	ಎರಡನೇ ದರ್ಜೆ ಪಿ. ಡಬ್ಲ್ಯು.ಡಿ. ಸಹಾಯಕರು	:	2
7.	ಬೆರಳಚ್ಚುಗಾರ	:	1
8.	ಅಟೆಂಡರ್	:	3
9.	ಸಹಾಯಕ ತೋಟಗಾರಿಕೆ ಅಧಿಕಾರಿ (ಗ್ರೇಡ್–1)	:	1
10.	ತೋಟಗಾರಿಕಾ ಸಹಯಾಕ (ದರ್ಜೆ–3)	:	2
11.	ವಾಚ್‌ಮನ್	:	1
12.	ಸ್ವೀಪರ್	:	23
13.	ಮಾಲಿ	:	29
14.	ಪ್ಯೂನ್‌ಗಳು	:	2
15.	ಪ್ಲಂಬರ್	:	1
	ಅನುಬಂಧ–2		
1.	ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ (ಎಲೆಕ್ಟ್ರಿಕಲ್)	:	1
2.	ಸಹಾಯಕ ಇಂಜಿನಿಯರ್	:	2
3.	ಮೊದಲನೇ ದರ್ಜೆ ಸ್ಟೋರ್ ಕೀಪರ್	:	1
ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಈ ಪ್ರಕರಣದಲ್ಲಿನ ಆರೋಪಿಗಳು ಉದ್ದೇಶ ಪೂರ್ವಕವಾಗಿ ಅಕ್ರಮದಲ್ಲಿ ಭಾಗಿಯಾಗಿದ್ದರಿಂದಲೇ ಓಡಿ ಹೋಗಿದ್ದು, ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾಧ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳ ಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43(ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಅಬಕಾರಿ ನಿರೀಕ್ಷಕರು, ತರೀಕೆರೆ ವಲಯ ಇವರ ಪ್ರ.ವ.ವ. ಸಂ:22/2008-09, ದಿನಾಂಕ:29.03.2009 ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಸಂಖ್ಯೆ: ಕೆಎ-14-ಜೆ-1589 (ಸುಜುಕಿ ಸಮುರಾಯ್ ಬೈಕ್) ಹಾಗೂ ಸೇಂದಿಯ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 19 ಲೀಟರ್ ಸೇಂದಿಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 24ನೇ ಜುಲೈ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.762

ಅಧಿಕಾರಯುತ ಅಧಿಕಾರಿ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ
ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ
ಡಿ.ಟಿ.ಸಿ.ಆರ್. ನಂ.157/2008-09, ದಿನಾಂಕ:24ನೇ ಜುಲೈ, 2009

ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರ ಪ್ರ.ವ.ವ. ನಂ.8/2008-09, ದಿನಾಂಕ:16.12.2008

ಉಪಸ್ಥಿತರು: ಕೆ.ಸಿ. ಹರಿದಾಸ್
ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಅಬಕಾರಿ ನಿರೀಕ್ಷಕರು, ಕಡೂರು ವಲಯ.	ಮಹೇಶ್ ಬಿನ್ ಗೋವಿಂದಪ್ಪ ಮತ್ತು ಇತರರು

ಪ್ರಕರಣದ ಮುಖ್ಯಾಂಶಗಳು

ದಿನಾಂಕ:16.12.2008 ರಂದು ಬೆಳಿಗ್ಗೆ ಸುಮಾರು 6.30 ಗಂಟೆ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರು ಖಚಿತ ವರ್ತಮಾನದ ಮೇರೆಗೆ ಸಿಬ್ಬಂದಿ ಮತ್ತು ಪಂಚಾಯ್ತಿದಾರರೊಂದಿಗೆ, ಕಡೂರು ತಾಲ್ಲೂಕು ಕಸಬಾ ಹೋಬಳಿ ಎನ್.ಹೆಚ್. 206 ರಸ್ತೆಯ ಬೀರನಹಳ್ಳಿಗೆ ಹೋಗುವ ರಸ್ತೆ ಕ್ರಾಸ್‌ನಲ್ಲಿ ರಸ್ತೆ ಕಾವಲು ನಡೆಸುತ್ತಿದ್ದಾಗ, ಕುರುಬರಹಳ್ಳಿ ತಾಂಡ್ಯ ಕಡೆಯಿಂದ ಎರಡು ಮೋಟಾರ್ ಬೈಕ್‌ನಲ್ಲಿ ಮೂರು ಜನ ವ್ಯಕ್ತಿಗಳು ತುಂಬಿದ ಪ್ಲಾಸ್ಟಿಕ್ ಕ್ಯಾನ್‌ಗಳನ್ನು ಹೊಂದಿ ಬರುತ್ತಿರುವುದನ್ನು ಗಮನಿಸಿ, ಅನುಮಾನದ ಮೇರೆಗೆ ವಾಹನಗಳನ್ನು ತಡೆದು ನಿಲ್ಲಿಸಿ ತಪಾಸಣೆ ಮಾಡಲಾಗಿ ಮೊದಲನೇ ವಾಹನ ಸಂಖ್ಯೆ: ಎಪಿ-02-ಆರ್-1828 (ಟಿ.ವಿಎಸ್. ಫ್ಲೇಮ್ ಬೈಕ್) ನಲ್ಲಿ ಎರಡು ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ತಲಾ 20 ಲೀಟರ್‌ನಂತೆ 40 ಲೀಟರ್ ಸೇಂದಿ ಇದ್ದು, ವಾಹನ ಚಾಲನೆ ಮಾಡುತ್ತಿದ್ದ ವ್ಯಕ್ತಿ ಮಹೇಶ್ ಬಿನ್ ಗೋವಿಂದಪ್ಪ, ಜಿ. ಕಾರೇಹಳ್ಳಿ ವಾಸ, ಕಸಬಾ ಹೋಬಳಿ, ಕಡೂರು ತಾ: ಮತ್ತೊಬ್ಬ ವ್ಯಕ್ತಿ ರಾಜು ಬಿನ್ ಗೋವಿಂದಪ್ಪ, ಜಿ. ಕಾರೇಹಳ್ಳಿ ವಾಸ, ಕಸಬಾ ಹೋಬಳಿ ಇವರುಗಳು ಹಾಗೂ ಮತ್ತೊಂದು ಬೈಕ್ ಸಂಖ್ಯೆ: ಕೆಎ-02-ಇಸಿ-8523 (ಯಮಹ ಕ್ರಕ್ಸ್ ಬೈಕ್) ನಲ್ಲಿ ಎರಡು ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ತಲಾ 20 ಲೀಟರ್‌ನಂತೆ 40 ಲೀಟರ್ ಸೇಂದಿ ಇದ್ದು, ಇದರಲ್ಲಿದ್ದ ವ್ಯಕ್ತಿ ಈಶನಾಯ್ಕ್ ಅಲಿಯಾಸ್ ನಾನ್ಯಾನಾಯ್ಕ್ ಬಿನ್ ಲೇಟ್ ತಾವರೆ ನಾಯ್ಕ್, ಕುರುಬರಹಳ್ಳಿ ತಾಂಡ್ಯ ವಾಸಿ, ಕಡೂರು ತಾಲ್ಲೂಕು ಇವರುಗಳು ಸೇಂದಿ ಸಾಗಾಣಿಕೆಗೆ ಸಂಬಂಧಿಸಿದಂತೆ ಅಧಿಕೃತ ರಹದಾರಿ ಪತ್ರ ಅಥವಾ ಸಂಬಂಧಿಸಿದ ದಾಖಲಾತಿಗಳನ್ನು ಹಾಜರುಪಡಿಸದೆ ಇದ್ದುದರಿಂದ ಅಕ್ರಮವಾದುದೆಂದು ದೃಢಪಡಿಸಿಕೊಂಡು ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ದೊರೆತ ಸೇಂದಿಯನ್ನು ಎರಡು ಬೈಕ್‌ಗಳು ಹಾಗೂ ಇನ್ನಿತರೆ ವಸ್ತುಗಳೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಆರೋಪಿಗಳನ್ನು ದಸ್ತಗಿರಿಗೊಳಿಸಿ, ಕ್ರೈಂ ನಂ. 8/2008-09 ರಲ್ಲಿ ಪ್ರಕರಣವನ್ನು ದಾಖಲಿಸಿ ತನಿಖೆ ಮುಂದುವರೆಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳು ಹಾಗೂ ಸೇಂದಿಗೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಬೆಂಗಳೂರು ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಲಾಯಿತು.

ವಾಹನಗಳು ಜಫ್ತಾಗಿ ಸುಮಾರು ಆರು ತಿಂಗಳು ಕಳೆದರೂ ಈ ಅವಧಿಯಲ್ಲಿ ವಾಹನಗಳ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನಗಳ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನಗಳ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ ಜನಮಿತ್ರ ಪತ್ರಿಕೆಯಲ್ಲಿ ಪ್ರಚುರಗೊಂಡಿರುತ್ತದೆ. ಪ್ರಚುರಗೊಂಡ ನಂತರದಲ್ಲೂ ವಾಹನಗಳ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನಗಳ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನಗಳು ಜಪ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನಗಳ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾದ್ಯವಾಗಿದ್ದಲ್ಲಿ, ಯಾರೋಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳ ಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43 (ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರ ಪ್ರ.ವ.ವ. ನಂ.8/2008–09, ದಿನಾಂಕ: 16–12–2008 ರಲ್ಲಿ ವಶಪಡಿಸಿಕೊಳ್ಳಲಾದ ವಾಹನಗಳ ಸಂಖ್ಯೆ: ಎಪಿ–02–ಆರ್–1828 (ಟಿ.ವಿಎಸ್. ಫ್ಲೇಮ್ ಬೈಕ್) ಹಾಗೂ ಕೆಎ–02–ಇಸಿ–8523 (ಯಮಹ ಕ್ರಕ್ಸ್ ಬೈಕ್)ಗಳನ್ನು, ಸೇಂದಿಯ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 78 ಲೀಟರ್ ಸೇಂದಿ ಹಾಗೂ ಎರಡು ಸೇಂದಿ ತಯಾರಿಸಲು ಬಳಸುವ ಕಬ್ಬಿಣದ ಕತ್ತಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 24ನೇ ಜುಲೈ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.763

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ. 24/2008–09, ದಿನಾಂಕ:26ನೇ ಜೂನ್, 2009

ಪೊಲೀಸ್ ಉಪ ನಿರೀಕ್ಷಕರು, ಸಖರಾಯಪಟ್ಟಣ ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 12/2008, ದಿನಾಂಕ:29.01.2008

ಉಪಸ್ಥಿತರು: ಕೆ.ಸಿ. ಹರಿದಾಸ್
ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಪೊಲೀಸ್ ಉಪ ನಿರೀಕ್ಷಕರು, ಸಖರಾಯಪಟ್ಟಣ ಪೊಲೀಸ್ ಠಾಣೆ.	ಪ್ರಸನ್ನ ಬಿನ್ ಮಂಜೇಹಳ್ಳಿ ಸಣ್ಣಪ್ಪ ಮತ್ತು ಇತರರು

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:29.01.2008 ರಂದು ರಾತ್ರಿ ಪೊಲೀಸ್ ಉಪ ನಿರೀಕ್ಷಕರು, ಸಖರಾಯಪಟ್ಟಣ ಪೊಲೀಸ್ ಠಾಣೆ ಇವರು ಖಚಿತ ವರ್ತಮಾನದ ಮೇರೆಗೆ ಸಿಬ್ಬಂದಿ ಮತ್ತು ಪಂಚಾಯಿತ್ತುದಾರರೊಂದಿಗೆ, ಜೋಡಿಲಿಂಗದಹಳ್ಳಿ-ಸಿದ್ಧಾಪುರ ಮಧ್ಯೆ ಟಾರ್ ರಸ್ತೆಯಲ್ಲಿ ಗಸ್ತು ನಿರ್ವಹಿಸುತ್ತಿದ್ದಾಗ, ಜಾವಗಲ್ ಕಡೆಯಿಂದ ಒಂದು ಜೀಪ್ ಬರುತ್ತಿರುವುದನ್ನು ಗಮನಿಸಿ, ಅನುಮಾನದ ಮೇರೆಗೆ ತಡೆದು ನಿಲ್ಲಿಸಿ ತಪಾಸಣೆ ಮಾಡಲಾಗಿ ಜೀಪಿನ ಒಳಭಾಗದಲ್ಲಿ 4 ರಟ್ಟಿನ ಪೆಟ್ಟಿಗೆಗಳಲ್ಲಿ 180 ಮಿಲಿಯ 192 ಸೀಸೆ ರಾಜಾವಿಸ್ಕಿ ಬಾಟಲುಗಳಿದ್ದು ಇವುಗಳ ಸಾಗಾಣಿಕೆಗೆ ಸಂಬಂಧಿಸಿದಂತೆ ವಾಹನದಲ್ಲಿದ್ದ ವ್ಯಕ್ತಿಗಳಾದ (1) ಪ್ರಸನ್ನ ಬಿನ್ ಮಂಜಿಹಳ್ಳಿ ಸಣ್ಣಪ್ಪ, (ಓಡಿಹೋಗಿರುತ್ತಾನೆ) (2) ಬಿ.ಆರ್. ತಿಮ್ಮಶೆಟ್ಟಿ ಬಿನ್ ರಂಗಶೆಟ್ಟಿ, ಜೋಡಿಲಿಂಗದಹಳ್ಳಿ, (3) ಹೆಚ್.ಸಿ. ತಮ್ಮಯ್ಯ ಬಿನ್ ಚೌಡಪ್ಪ, ಹುಲಿಕೆರೆ, (4) ಎಸ್.ಎಸ್. ಸೋಮಶೇಖರ್ ಬಿನ್ ಶಂಕರಪ್ಪ, ವಾಹನ ಚಾಲಕ ಸಿದ್ಧಾಪುರ ಇವರುಗಳು ಯಾವುದೇ ಅಧಿಕೃತ ರಹದಾರಿ ಪತ್ರಗಳನ್ನಾಗಲಿ ಅಥವಾ ದಾಖಲಾತಿ ಪತ್ರಗಳನ್ನಾಗಲಿ ಹಾಜರುಪಡಿಸದೆ ಇದ್ದುದರಿಂದ, ಅಕ್ರಮವಾದುದೆಂದು ದೃಢಪಡಿಸಿಕೊಂಡು, ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ದೊರೆತ ಮದ್ಯವನ್ನು ವಾಹನ ಸಂಖ್ಯೆ: ಕೆಎ-02-ಎಂ-1503 (ಜೀಪ್) ನೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಆರೋಪಿಗಳನ್ನು ದಸ್ತಗಿರಿಗೊಳಿಸಿ ಕ್ರೈಂ ನಂ.12/2008 ರಲ್ಲಿ ಪ್ರಕರಣವನ್ನು ದಾಖಲಿಸಿ ವಶಪಡಿಸಿಕೊಂಡ ವಾಹನ ಮತ್ತು ಮದ್ಯವನ್ನು ಮುಂದಿನ ವಿಲೇವಾರಿ ಕುರಿತು ಈ ಪ್ರಾಧಿಕಾರದ ಅನುಮತಿ ಪಡೆದು ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರಿಗೆ ಹಸ್ತಾಂತರಿಸಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಕ್ರಮವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ರಾಜಾಜಿನಗರ ಬೆಂಗಳೂರು ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದಿದ್ದು, ವಾಹನದ ತಿರುವಳಿ ಪತ್ರವನ್ನು ಹಾಸನ ಪ್ರಾದೇಶಿಕ ಸಾರಿಗೆ ಕಛೇರಿಗೆ ಕಳುಹಿಸಿರುವ ಬಗ್ಗೆ ವಿವರ ಲಭ್ಯವಾದ ಮೇರೆಗೆ ಹಾಸನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಮಾಲೀಕತ್ವದ ವಿವರ ಕೋರಿ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಲಾಯಿತು.

ವಾಹನವು ಜಫ್ತಾಗಿ ಸುಮಾರು ಒಂದು ವರ್ಷ ಐದು ತಿಂಗಳು ಕಳೆದರೂ ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನದ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನದ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ ಜನಮಿತ್ರ ಪತ್ರಿಕೆಯಲ್ಲಿ ಪ್ರಚುರಗೊಂಡಿರುತ್ತದೆ. ಪ್ರಚುರಗೊಂಡ ನಂತರದಲ್ಲೂ ವಾಹನದ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಆಬಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 43 ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾದ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳ ಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ

ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43(ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಪೋಲೀಸ್ ಉಪ ನಿರೀಕ್ಷಕರು, ಸಖರಾಯಪಟ್ಟಣ ಪೋಲೀಸ್ ಠಾಣೆ ಇವರ ಕ್ರೈಂ ನಂ.12/2008, ದಿನಾಂಕ:29.01.2008 ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಸಂಖ್ಯೆ: ಕೆಎ-02-ಎಂ-1503 (ಜೀಪ್) ಹಾಗೂ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 34.380 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 26ನೇ ಜೂನ್ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.651

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ.208/2007-08 , ದಿನಾಂಕ:26ನೇ ಜೂನ್, 2009

ಅಬಕಾರಿ ಸಬ್ ಇನ್ಸ್‌ಪೆಕ್ಟರ್ ನಂ.2, ಕಡೂರು ವಲಯ ಇವರ ಪ್ರ.ಮಾ.ವ. ನಂ.18/2007-08, ದಿನಾಂಕ:26.04.2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಅಬಕಾರಿ ಸಬ್ ಇನ್ಸ್‌ಪೆಕ್ಟರ್ ನಂ.2, ಕಡೂರು ವಲಯ.	ಕರಿಯಪ್ಪ ಬಿನ್ ಲೇ. ದಾಸಪ್ಪ ಸಾಕಿನ್ ಕುಂಕನಾಡು, ಯಗಟಿ ಹೋಬಳಿ, ಕಡೂರು ತಾಲ್ಲೂಕು.

ಪ್ರಕರಣದ ಮುಖ್ಯಾಂಶಗಳು

ದಿನಾಂಕ:26.04.2008 ರಂದು ರಾತ್ರಿ ಸುಮಾರು 8.30 ಗಂಟೆ ಸಮಯದಲ್ಲಿ ಅಬಕಾರಿ ಸಬ್ ಇನ್ಸ್‌ಪೆಕ್ಟರ್ ನಂ.2, ಕಡೂರು ವಲಯ ಇವರು ಸಿಬ್ಬಂದಿ ಮತ್ತು ಪಂಚಾಯ್ತಿದಾರರೊಂದಿಗೆ, ಕಡೂರು ತಾಲ್ಲೂಕು ಯಗಟಿ ಹೋಬಳಿ ಕುಂಕನಾಡಿನಿಂದ ಮರವಂಜಿಗೆ ಹೋಗುವ ರಸ್ತೆಯಲ್ಲಿರುವ ಕಲ್ಲೇದೇವರಹಳ್ಳಿ ಗೇಟ್ ಬಳಿ ಗಸ್ತು ನಿರ್ವಹಿಸುತ್ತಿದ್ದಾಗ, ಒಂದು ಟಿ.ವಿ.ಎಸ್. ವಾಹನದಲ್ಲಿ ಒಬ್ಬ ಆಸಾಮಿಯು ಒಂದು ತುಂಬಿದ ರಟ್ಟಿನ ಪೆಟ್ಟಿಗೆಯನ್ನು ಇಟ್ಟುಕೊಂಡು ಬರುತ್ತಿರುವುದನ್ನು ಗಮನಿಸಿ, ಅನುಮಾನದ ಮೇರೆಗೆ ನಿಲ್ಲಿಸಲು ವಾಹನ ಚಾಲಕನಿಗೆ ಸೂಚಿಸಿದಾಗ ವಾಹನವನ್ನು ಬಿಟ್ಟು ಓಡಿ ಹೋಗಿದ್ದರಿಂದ ವಾಹನದ ಬಳಿ ಬಂದು ತಪಾಸಣೆ ಮಾಡಲಾಗಿ ಒಂದು ರಟ್ಟಿನ ಪೆಟ್ಟಿಗೆಯಲ್ಲಿ 180 ಮಿಲಿಯ 48 ಸೀಸೆ ರಾಜಾವಿಸ್ಕಿ ಬಾಟಲಿಗಳು ಇದ್ದು ಇವುಗಳ ಸಾಗಾಣಿಕೆಗೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ರಹದಾರಿ ಪತ್ರಗಳನ್ನಾಗಲಿ ಅಥವಾ ದಾಖಲಾತಿ ಪತ್ರಗಳನ್ನಾಗಲಿ ಹಾಜರುಪಡಿಸಲು ಸ್ಥಳದಲ್ಲಿ ಯಾರು ಇಲ್ಲದೆ ಇದ್ದುದರಿಂದ, ಅಕ್ರಮವಾದುದೆಂದು ದೃಢಪಡಿಸಿಕೊಂಡು, ಓಡಿ ಹೋದ ವ್ಯಕ್ತಿಯ ಬಗ್ಗೆ ವಿಚಾರಿಸಿದಾಗ ಕರಿಯಪ್ಪ ಬಿನ್ ಲೇಟ್ ದಾಸಪ್ಪ, ಕುಂಕನಾಡು ವಾಸ, ಯಗಟಿ ಹೋಬಳಿ ಕಡೂರು ತಾಲ್ಲೂಕು ಎಂದು ತಿಳಿದು ಬಂದಿದ್ದರಿಂದ ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ದೊರೆತ ಮದ್ಯವನ್ನು ವಾಹನ (ನೋಂದಣಿ ಸಂಖ್ಯೆ ಇರುವುದಿಲ್ಲ) ಚಾರ್ಸಿ ನಂ.A706E655513 ನೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಓಡಿ ಹೋದ ಆರೋಪಿಯ ವಿರುದ್ಧ ಕ್ರೈಂ ನಂ.18/2007-08 ರಲ್ಲಿ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿ ಹಾಗೂ ಸ್ವತ್ತಿನ ಪಟ್ಟಿಯನ್ನು ಘನ ನ್ಯಾಯಾಲಯಕ್ಕೂ ಹಾಗೂ ಮೇಲಾಧಿಕಾರಿಗಳಿಗೆ ಸಲ್ಲಿಸಿ ತನಿಖೆ ಮುಂದುವರೆಸಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ

ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಲಾಯಿತು.

ವಾಹನವು ಜಫ್ತಾಗಿ ಸುಮಾರು ಒಂದು ವರ್ಷ ಎರಡು ತಿಂಗಳು ಕಳೆದರೂ ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನದ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನದ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ ಜನಮಿತ್ರ ಪತ್ರಿಕೆಯಲ್ಲಿ ಪ್ರಚುರಗೊಂಡಿರುತ್ತದೆ. ಪ್ರಚುರಗೊಂಡ ನಂತರದಲ್ಲೂ ವಾಹನದ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 43 ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾಧ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43 (ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಅಬಕಾರಿ ಸಬ್ ಇನ್ಸ್‌ಪೆಕ್ಟರ್ ನಂ.2, ಕಡೂರು ವಲಯ ಇವರ ಪ್ರ.ಮಾ.ವ. ನಂ.18/2007-08, ದಿನಾಂಕ:26.04.2008 ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಟಿ.ವಿ.ಎಸ್. ಎಕ್ಸಲ್ (ನಂಬರ್ ಇರುವುದಿಲ್ಲ) ಚಾರ್ಸಿ ನಂ.A706E655513 ಹಾಗೂ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 4.320 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 26ನೇ ಜೂನ್ 2009 ರಂದು ಬೆರಳಚ್ಚುಗಾರರಿಗೆ ಉಕ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.652

III-F-2-(★)

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ.29/2008-09 ದಿನಾಂಕ:26ನೇ ಜೂನ್, 2009

ಪೊಲೀಸ್ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 144/2008, ದಿನಾಂಕ:18.05.2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಪೊಲೀಸ್ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ.	ಮಂಜ ಬಿನ್ ವೆಂಕಬೋವಿ ಮತ್ತು ಇತರರು

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:18.05.2008 ರಂದು ಸಂಜೆ ಸುಮಾರು 5.00 ಗಂಟೆ ಸಮಯದಲ್ಲಿ ಪೊಲೀಸ್ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಇವರು ಸಿಬ್ಬಂದಿ ಮತ್ತು ಪಂಚಾಯ್ತಿದಾರರೊಂದಿಗೆ, ಕಡೂರು ಟೌನ್ ಕೆ.ಎಂ. ರಸ್ತೆಯ ಕನಕ ವೃತ್ತದ ಹತ್ತಿರ ಗಸ್ತು ನಿರ್ವಹಿಸುತ್ತಿದ್ದಾಗ, ಒಂದು ಟಿ.ವಿ.ಎಸ್. ವಾಹನದಲ್ಲಿ ಒಬ್ಬ ಆಸಾಮಿಯು ಒಂದು ತುಂಬಿದ ರಟ್ಟಿನ ಪೆಟ್ಟಿಗೆಯನ್ನು ಇಟ್ಟುಕೊಂಡು ಬರುತ್ತಿರುವುದನ್ನು ಗಮನಿಸಿ, ಅನುಮಾನದ ಮೇರೆಗೆ ತಡೆದು ನಿಲ್ಲಿಸಿ ತಪಾಸಣೆ ಮಾಡಲಾಗಿ ರಟ್ಟಿನ ಪೆಟ್ಟಿಗೆಯಲ್ಲಿ 180 ಮಿಲಿಯ 60 ಸೀಸೆ ನಂ.1 ಹೈವೇವಿಸ್ಕಿ ಬಾಟಲಿಗಳು ಇದ್ದು ಇವುಗಳ ಸಾಗಾಣಿಕೆಗೆ ಸಂಬಂಧಿಸಿದಂತೆ ವಾಹನದಲ್ಲಿದ್ದ ವ್ಯಕ್ತಿಗಳಾದ ಮಂಜ ಬಿನ್ ವೆಂಕಬೋವಿ, ಲಕ್ಷ್ಮೀಪುರ ಕಡೂರು ತಾ: ಮತ್ತು ಇನ್ನೊಬ್ಬ ವ್ಯಕ್ತಿ ನಾಗರಾಜ ಬಿನ್ ಯಲ್ಲಬೋವಿ, ಲಕ್ಷ್ಮೀಪುರ, ಕಡೂರು ತಾ: (ಓಡಿಹೋಗಿರುತ್ತಾನೆ) ಇವರುಗಳು ಯಾವುದೇ ಅಧಿಕೃತ ರಹದಾರಿ ಪತ್ರಗಳನ್ನಾಗಲಿ ಅಥವಾ ದಾಖಲಾತಿ ಪತ್ರಗಳನ್ನಾಗಲಿ ಹಾಜರುಪಡಿಸದೆ ಇದ್ದುದರಿಂದ, ಅಕ್ರಮವಾದುದೆಂದು ದೃಢಪಡಿಸಿಕೊಂಡು, ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ದೊರೆತ ಮದ್ಯವನ್ನು ವಾಹನ ಸಂಖ್ಯೆ: ಸಿ.ಎನ್.ಟಿ.6203 (ಟಿ.ವಿ.ಎಸ್. ಮ್ಯಾಕ್ಸ್ 100 ಬೈಕ್) ನೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಆರೋಪಿಯನ್ನು ದಸ್ತಗಿರಿಗೊಳಿಸಿ ಕ್ರೈಂ ನಂ.144/2008 ರಲ್ಲಿ ಪ್ರಕರಣವನ್ನು ದಾಖಲಿಸಿ ವಶಪಡಿಸಿಕೊಂಡ ವಾಹನ ಮತ್ತು ಮದ್ಯವನ್ನು ಮುಂದಿನ ವಿಲೇವಾರಿ ಕುರಿತು ಈ ಪ್ರಾಧಿಕಾರದ ಅನುಮತಿ ಪಡೆದು ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರಿಗೆ ಹಸ್ತಾಂತರಿಸಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಕ್ರಮವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತುಮಕೂರು ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಿ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ತುಮಕೂರು ಇವರಿಂದ ಪಡೆಯಲಾದ "ಬಿ" ವರದಿಯ ಪ್ರಕಾರ ಬಿ.ಟಿ. ಸಸ್ಮಿತ್‌ಗೌಡ ಬಿನ್ ತಿಮ್ಮೇಗೌಡ, ಬಾಣಸಂದ್ರ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ಇವರು ವಾಹನದ ಮಾಲೀಕರೆಂದು ತಿಳಿದು ಬಂದಿದ್ದು, ವಾಹನದ ಮಾಲೀಕರಿಗೆ ಪ್ರಕರಣದಲ್ಲಿ ಜಫ್ತುಪಡಿಸಿದ ಮದ್ಯ ಹಾಗೂ ವಾಹನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ಕಾರಣ ಕೇಳಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಬಿ) ಅಡಿಯಲ್ಲಿ ನೋಟಿಸ್ ಜಾರಿ ಮಾಡಲು ಕ್ರಮ ಕೈಗೊಳ್ಳಲಾಗಿತ್ತು.

ವಾಹನವು ಜಫ್ತಾಗಿ ಸುಮಾರು ಒಂದು ವರ್ಷ ಕಳೆದರೂ ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನದ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನದ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ ಜನಮಿತ್ರ ಪತ್ರಿಕೆಯಲ್ಲಿ ಪ್ರಚುರಗೊಂಡಿರುತ್ತದೆ. ಪ್ರಚುರಗೊಂಡ ನಂತರದಲ್ಲೂ ವಾಹನದ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು

ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 43 ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾಧ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43 (ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಪೊಲೀಸ್ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಇವರ ಕ್ರೈಂ ನಂ.144/2008, ದಿನಾಂಕ:18.05.2008 ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಸಂಖ್ಯೆ: ಸಿ.ಎನ್.ಟಿ. 6203 (ಟಿ.ವಿ.ಎಸ್. ಮ್ಯಾಕ್ಸ್ 100 ಬೈಕ್) ಹಾಗೂ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 10.620 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 26ನೇ ಜೂನ್ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.654

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ. 27/2008-09, ದಿನಾಂಕ:29ನೇ ಮೇ, 2009

ಆರಕ್ಷಕ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 119/2008, ದಿನಾಂಕ:02.05.2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಆರಕ್ಷಕ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ.	ರವಿ ಬಿನ್ ಚನ್ನಪ್ಪ ಸಾಕಿನ್ ಸರಸ್ವತಿ ಪುರ, ಕಡೂರು ತಾಲ್ಲೂಕು.

ಪ್ರಕರಣದ ಮುಖ್ಯಾಂಶಗಳು

ದಿನಾಂಕ:02.05.2008 ರಂದು ಬೆಳಿಗ್ಗೆ 11.00 ಗಂಟೆಯ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಇವರು ಕಡೂರು ತಾಲ್ಲೂಕು ಚಿಕ್ಕಪಟ್ಟಣಗೆರೆ ಗೇಟ್ ಹತ್ತಿರ ವಾಹನ ಸಂಖ್ಯೆ: KA-18-E-9296 ಟಿ.ವಿ.ಎಸ್. ಛಾಂಪ್ ಅನ್ನು ಪರಿಶೀಲಿಸಲಾಗಿ ರವಿ ಎಂಬುವರು ವಾಹನದ ಪಕ್ಕದಲ್ಲಿ ಒಂದು ಪ್ಲಾಸ್ಟಿಕ್ ಚೀಲವನ್ನು ಹೊಂದಿದ್ದು, ಅದರಲ್ಲಿ 180 ಮಿಲಿಯ ನಂ.1 ಹೈವೇ ವಿಸ್ಕಿ ಮದ್ಯದ 48 ಸೀಸೆಗಳಂತೆ 2 ರಟ್ಟಿನ ಪೆಟ್ಟಿಗೆಗಳಲ್ಲಿ ಒಟ್ಟು 96 ಸೀಸೆಯಲ್ಲಿ 17.280 ಲೀಟರ್ ಮದ್ಯವಿದ್ದು, ಸದರಿ ಮದ್ಯ ಸಾಗಾಣಿಕೆಗೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ರಹದಾರಿ ಪತ್ರಗಳು ಇಲ್ಲವೆಂದು ತಿಳಿಸಿದ ಮೇರೆಗೆ ಅಕ್ರಮವಾದುದೆಂದು ದೃಢಪಡಿಸಿಕೊಂಡು ಪಂಚರ ಸಮಕ್ಷಮ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಆರೋಪಿಯನ್ನು ದಸ್ತಗಿರಿಗೊಳಿಸಿ ವಾಹನದೊಂದಿಗೆ ಮದ್ಯವನ್ನು ವಶಪಡಿಸಿಕೊಂಡು ಠಾಣೆಗೆ ಕರೆತಂದು ಮೊಕದ್ದಮೆ ಸಂ:

119/2008ರಲ್ಲಿ ಮೊಕದ್ದಮೆ ದಾಖಲು ಮಾಡಿ ಪ್ರಥಮ ಮಾಹಿತಿ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿ ತನಿಖೆಯನ್ನು ಮುಂದುವರೆಸಿ ಜಫ್ತುಪಡಿಸಿದ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ಹೊರತುಪಡಿಸಿದ ಮದ್ಯ ಹಾಗೂ ವಾಹನವನ್ನು ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರಿಗೆ ಹಸ್ತಾಂತರಿಸಿದ್ದು, ಸದರಿಯವರು ಈ ಪ್ರಾಧಿಕಾರಕ್ಕೆ ದಿನಾಂಕ:13.08.2008 ರಂದು ವರದಿ ಮಾಡಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ಪ್ರಕರಣದ ಮುಟ್ಟುಗೋಲಿನ ನಡವಳಿಗಳನ್ನು ಮುಂದುವರೆಸಲಾಯಿತು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಚಿಕ್ಕಮಗಳೂರು ಇವರು ನೀಡಿರುವ "ಬಿ"ವರದಿಯ ಪ್ರಕಾರ ಎಸ್.ಆರ್. ಕೃಷ್ಣಮೂರ್ತಿ ಬಿನ್ ಎಂ. ರಾಮಯ್ಯ, ಮಲಿಯಮ್ಮ ಟೆಂಪಲ್ ರಸ್ತೆ, ಪೇಟೆ, ಕಡೂರು ಇವರು ವಾಹನದ ಮಾಲೀಕರೆಂದು ತಿಳಿದುಬಂದಿರುತ್ತದೆ. ಹಾಗೂ ವಾಹನಕ್ಕೆ ರೂ.3,000/- (ಮೂರು ಸಾವಿರ ರೂಪಾಯಿಗಳು ಮಾತ್ರ) ಗಳ ಮೌಲ್ಯ ನಿಗದಿಪಡಿಸಿರುತ್ತಾರೆ.

ವಾಹನದ ಮಾಲೀಕರಿಗೆ ಪ್ರಕರಣದಲ್ಲಿ ಜಫ್ತುಪಡಿಸಿದ ಮದ್ಯ ಹಾಗೂ ವಾಹನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ಕಾರಣ ಕೇಳಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಬಿ) ಅಡಿಯಲ್ಲಿ ನೊಂದಾಯಿತ ಅಂಚೆ ಮೂಲಕ ನೋಟಿಸ್ ಜಾರಿ ಮಾಡಲು ಕ್ರಮ ಕೈಗೊಂಡಿದ್ದು, ನೋಟಿಸ್ ಜಾರಿಯಾಗದೇ "ಐಡಿ" ಎಂಬ ಷರಾದೊಂದಿಗೆ ಪ್ರಾಧಿಕಾರಕ್ಕೆ ಮರಳಿ ಬಂದಿದ್ದು, ವಾಹನದ ಮಾಲೀಕರಿಗೆ ತನಿಖಾಧಿಕಾರಿಗಳ ಮುಖಾಂತರ ನೋಟಿಸ್‌ನ್ನು ದಿನಾಂಕ:04.12.2008 ರಂದು ಜಾರಿಗೊಳಿಸಲಾಗಿರುತ್ತದೆ.

ವಾಹನದ ಮಾಲೀಕರು ಈ ಪ್ರಾಧಿಕಾರದಿಂದ ನೀಡಲಾದ ಕಲಂ 43 (ಬಿ) ನೋಟಿಸ್‌ನ್ನು ಸ್ವೀಕರಿಸಿಯೂ ಸಹ, ಅದಕ್ಕೆ ಪೂರಕವಾಗಿ ಆಪಾದನೆಯನ್ನು ಅಲ್ಲಗಳೆಯಲು ಯಾವುದೇ ದಾಖಲೆಗಳ ಮೂಲಕವಾಗಲಿ ಅಥವಾ ಸಾಕ್ಷ್ಯಗಳ ಮೂಲಕವಾಗಲಿ ತಾವು ಕೃತ್ಯದಲ್ಲಿ ಭಾಗಿಯಾಗಿಲ್ಲ ಮತ್ತು ಈ ಕೃತ್ಯಕ್ಕೆ ವಾಹನವನ್ನು ಬಳಸಲಾಗಿಲ್ಲವೆಂಬ ಬಗ್ಗೆ ನಿರೂಪಿಸದೇ ಇರುವ ಅಂಶಗಳು, ಸಾಕ್ಷ್ಯಗಳು ಹಾಗೂ ಪ್ರಾಧಿಕಾರದ ಮುಂದೆ ಇರುವ ದಾಖಲೆಗಳನ್ನು ಸಹಾಯಕ ಅಭಿಯೋಗ ನಿರ್ದೇಶಕರು, ಪ್ರಾಧಿಕಾರದ ಮುಂದೆ ಮಂಡಿಸಿ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಮೊಕದ್ದಮೆ ದಾಖಲಾಗಿ ಒಂದು ವರ್ಷ ಅವಧಿ ಕಳೆದಿದ್ದು ವಾಹನದ ಮಾಲೀಕರು ವಾಹನವನ್ನು ಈ ಕೃತ್ಯಕ್ಕೆ ಬಳಸಿಲ್ಲ ಎಂಬುದನ್ನು ಸಾಕ್ಷಧಾರಗಳ ಮುಖಾಂತರ ಪ್ರಾಧಿಕಾರದ ಮುಂದೆ ಇದುವರೆವಿಗೂ ತಾವಾಗಲೀ ಅಥವಾ ತಮ್ಮ ನ್ಯಾಯವಾದಿಗಳ ಮುಖಾಂತರವಾಗಲಿ ಹಾಜರಾಗಿ ಸಾಬೀತುಪಡಿಸದೇ ಇರುವುದರಿಂದ ಹಾಗೂ ವಾಹನದ ಮಾಲೀಕರಿಗೆ ಗೊತ್ತಿದ್ದು ಈ ಕೃತ್ಯ ನಡೆದಿರುವುದರಿಂದಲೇ ವಾಹನದ ಮಾಲೀಕರು ವಾಹನದ ಬಗ್ಗೆ ಯಾವುದೇ ಆಸಕ್ತಿ ತೋರಿಸದೆ ಇರುವ ಅಂಶವು ಸಹಾಯಕ ಅಭಿಯೋಗ ನಿರ್ದೇಶಕರವರ ವಾದದಿಂದ ಮೇಲ್ನೋಟಕ್ಕೆ ಸಾಬೀತಾಗುವುದರಿಂದ ಅಲ್ಲದೇ ವಾಹನದ ಮಾಲೀಕರಿಗೆ ಸಾಕಷ್ಟು ಸಮಯಾವಕಾಶ ನೀಡಿದಾಗಲೂ ಪ್ರಾಧಿಕಾರದ ಮುಂದೆ ಹಾಜರಾಗಿ ವಾಹನದ ಮೇಲೆ ಹಕ್ಕು ಸಾಧಿಸದೇ ಇರುವುದರಿಂದ ಹಾಗೂ ಜಫ್ತಾಗಿರುವ ವಾಹನವು ಇಲಾಖಾ ವಶದಲ್ಲಿಯೇ ಇರುವುದರಿಂದ ತಟಸ್ಥ ಸ್ಥಿತಿಯಲ್ಲಿ ಹಾಗೆಯೇ ಬಿಟ್ಟಲ್ಲಿ ಪ್ರಕೃತಿಯ ವೈಪರೀತ್ಯಗಳಿಗನುಗುಣವಾಗಿ ಹಾಳಾಗಿ ಸರ್ಕಾರದ ರಾಜಸ್ವಕ್ಕೆ ಧಕ್ಕೆ ಉಂಟಾಗುವ ಸಂಭವವಿರುವುದರಿಂದ ಹಾಗೂ ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿಯಿಂದ ವಶಪಡಿಸಿಕೊಂಡ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆ ಯಾಗಿರುವುದರಿಂದ ಈ ಕೆಳಕಂಡ ಆದೇಶ

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಆರಕ್ಷಕ ಉಪ ನಿರೀಕ್ಷಕರು, ಕಡೂರು ಪೊಲೀಸ್ ಠಾಣೆ ಇವರ ಕ್ರೈಂ ನಂ.119/2008, ರಲ್ಲಿ ವಶಪಡಿಸಿಕೊಂಡ ವಾಹನ ಸಂಖ್ಯೆ: ಕೆಎ-18-ಇ-9296 ಟಿ.ವಿ.ಎಸ್. ಛಾಂಪ್‌ನೊಂದಿಗೆ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 17.100 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 29ನೇ ಮೇ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.490

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ. 26/2008-09, ದಿನಾಂಕ:29ನೇ ಮೇ, 2009

ಆರಕ್ಷಕ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 23/2008, ದಿನಾಂಕ: 01-05-2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	ಆಪಾದಿತರು
ಆರಕ್ಷಕ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ.	ಎ:1 ರೂಪೇಶ್ ಬಿನ್ ಪುರುಷೋತ್ತಮ್ ಮತ್ತು ಇತರರು.

ಪ್ರಕರಣದ ಮುಖ್ಯಾಂಶಗಳು

ದಿನಾಂಕ:01.05.2008 ರಂದು ಆರಕ್ಷಕ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಇವರು ಸಿಬ್ಬಂದಿಯೊಂದಿಗೆ ರಾತ್ರಿ 7.00 ಗಂಟೆಯ ಸಮಯದಲ್ಲಿ ಕಡೂರು ತಾಲ್ಲೂಕು ಕರಿಕಲ್ಲು ಹೋಳಿಯ ಹತ್ತಿರ ಜಯಂತಿ ಫಾರಂ ಬಳಿ ಗಸ್ತು ನಿರ್ವಹಿಸುತ್ತಿದ್ದ ಸಮಯದಲ್ಲಿ ಕಡೂರು ಕಡೆಯಿಂದ ಮೋಟಾರ್ ಸೈಕಲ್ ಸಂ: ಕೆಎ-18-ಇ-2120 ರಲ್ಲಿ (ಹಿರೋಹೊಂಡಾ ಸಿ.ಡಿ.100) ಇಬ್ಬರು ಅಸಾಮಿಗಳು, ಮಧ್ಯದಲ್ಲಿ ಒಂದು ಗೋಣಿಚೀಲವನ್ನು ಇಟ್ಟುಕೊಂಡು ಬರುತ್ತಿರುವುದನ್ನು ಕಂಡು ಅನುಮಾನದ ಮೇರೆಗೆ ತಡೆದು ನಿಲ್ಲಿಸಿ ಪರಿಶೀಲಿಸಿ ನೋಡಿದಾಗ ಗೋಣಿಚೀಲದ ಒಳಗೆ 180 ಎಂ.ಎಲ್. ನ 35 ನಂ.1 ಹೈವೇ ವಿಸ್ಕಿ ಬಾಟಲಿಗಳಿದ್ದು, ಸದರಿ ಮದ್ಯ ಸಾಗಾಣಿಕೆಗೆ ಸಂಬಂಧಿಸಿದಂತೆ ವಾಹನದಲ್ಲಿದ್ದ ವ್ಯಕ್ತಿಗಳು ಯಾವುದೇ ಪರವಾನಗಿ ಇತ್ಯಾದಿ ಹಾಜರುಪಡಿಸದೇ ಇದ್ದುದರಿಂದ, ಅಕ್ರಮವಾದುದೆಂದು ದೃಡಪಡಿಸಿಕೊಂಡು ಪಂಚರ ಸಮಕ್ಷಮ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ವಾಹನ ಮತ್ತು ಮದ್ಯವನ್ನು ಅಮಾನತ್ತುಪಡಿಸಿಕೊಂಡು, ಆರೋಪಿಯನ್ನು ದಸ್ತಗಿರಿಗೊಳಿಸಿ ಠಾಣಾ ಮೊಕದ್ದಮೆ ಸಂಖ್ಯೆ: 23/2008 ರಲ್ಲಿ ಮೊಕದ್ದಮೆ ದಾಖಲು ಮಾಡಿ ಪ್ರಥಮ ಮಾಹಿತಿ ವರದಿಯನ್ನು ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿ ತನಿಖೆಯನ್ನು ಮುಂದುವರೆಸಿ ಜಪ್ತುಪಡಿಸಿದ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ ಮದ್ಯ ಹಾಗೂ ವಾಹನವನ್ನು ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರಿಗೆ ಹಸ್ತಾಂತರಿಸಿದ್ದು, ಸದರಿಯವರು ಈ ಪ್ರಾಧಿಕಾರಕ್ಕೆ ದಿನಾಂಕ:13.08.2008 ರಂದು ವರದಿ ಮಾಡಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ಪ್ರಕರಣದ ಮುಟ್ಟುಗೋಲಿನ ನಡವಳಿಗಳನ್ನು ಮುಂದುವರೆಸಲಾಯಿತು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಚಿಕ್ಕಮಗಳೂರು ಇವರು ನೀಡಿರುವ "ಬಿ"ವರದಿಯ ಪ್ರಕಾರ ಪಿ. ಪ್ರಭಾಕರರಾವ್ ಬಿನ್ ಗರತಯ್ಯ, ಮಂಜು ವೆಂಕಟೇಶ್ವರ ಎಂಟರ್‌ಪ್ರೈಸಸ್, ಚಿಕ್ಕಮಗಳೂರು ಇವರು ವಾಹನದ ಮಾಲೀಕರೆಂದು ತಿಳಿದುಬಂದಿರುತ್ತದೆ. ಹಾಗೂ ವಾಹನಕ್ಕೆ ರೂ.13,000/- (ಹದಿಮೂರು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಮೌಲ್ಯ ನಿಗದಿಪಡಿಸಿರುತ್ತಾರೆ.

ವಾಹನದ ಮಾಲೀಕರಿಗೆ ಪ್ರಕರಣದಲ್ಲಿ ಜಪ್ತುಪಡಿಸಿದ ಮದ್ಯ ಹಾಗೂ ವಾಹನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ಕಾರಣ ಕೇಳಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಬಿ) ಅಡಿಯಲ್ಲಿ ನೊಂದಾಯಿತ ಅಂಚೆ ಮೂಲಕ ನೋಟಿಸ್ ಜಾರಿ ಮಾಡಲು ಕ್ರಮ ಕೈಗೊಂಡಿದ್ದು, ನೋಟಿಸ್ ದಿನಾಂಕ:28.03.2009 ರಂದು ಜಾರಿಯಾದ ಬಗ್ಗೆ ಸ್ವೀಕೃತಿ ಈ ಪ್ರಾಧಿಕಾರಕ್ಕೆ ಮರಳಿ ಬಂದಿರುತ್ತದೆ.

ವಾಹನದ ಮಾಲೀಕರು ಈ ಪ್ರಾಧಿಕಾರದಿಂದ ನೀಡಲಾದ ಕಲಂ 43 (ಬಿ) ನೋಟಿಸ್‌ನ್ನು ಸ್ವೀಕರಿಸಿದರೂ ಸಹ ಅದಕ್ಕೆ ಪೂರಕವಾಗಿ ಆಪಾದನೆಯನ್ನು ಅಲ್ಲಗಳೆಯಲು ಯಾವುದೇ ದಾಖಲೆಗಳ ಮೂಲಕವಾಗಲೀ ಅಥವಾ ಸಾಕ್ಷ್ಯಗಳ ಮೂಲಕವಾಗಲಿ ತಾವು ಕೃತ್ಯದಲ್ಲಿ ಭಾಗಿಯಾಗಿಲ್ಲ ಮತ್ತು ಈ ಕೃತ್ಯಕ್ಕೆ ವಾಹನವನ್ನು ಬಳಸಲಾಗಿಲ್ಲವೆಂಬ ಬಗ್ಗೆ ನಿರೂಪಿಸದೇ ಇರುವ ಅಂಶಗಳು, ಸಾಕ್ಷ್ಯಗಳು ಹಾಗೂ ಪ್ರಾಧಿಕಾರದ ಮುಂದೆ ಇರುವ ದಾಖಲೆಗಳನ್ನು ಸಹಾಯಕ ಅಭಿಯೋಗ ನಿರ್ದೇಶಕರು, ಪ್ರಾಧಿಕಾರದ ಮುಂದೆ ಮಂಡಿಸಿ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಮೊಕದ್ದಮೆ ದಾಖಲಾಗಿ ಒಂದು ವರ್ಷ ಅವಧಿ ಕಳೆದಿದ್ದು ವಾಹನದ ಮಾಲೀಕರು ವಾಹನವನ್ನು ಈ ಕೃತ್ಯಕ್ಕೆ ಬಳಸಿಲ್ಲ ಎಂಬುದನ್ನು ಸಾಕ್ಷಧಾರಗಳ ಮುಖಾಂತರ ಪ್ರಾಧಿಕಾರದ ಮುಂದೆ ಇದುವರೆವಿಗೂ ತಾವಾಗಲೀ ಅಥವಾ ತಮ್ಮ

ನ್ಯಾಯವಾದಿಗಳ ಮುಖಾಂತರವಾಗಲಿ ಹಾಜರಾಗಿ ಸಾಬೀತುಪಡಿಸದೇ ಇರುವುದರಿಂದ ಹಾಗೂ ವಾಹನದ ಮಾಲೀಕರಿಗೆ ಗೊತ್ತಿದ್ದು ಈ ಕೃತ್ಯ ನಡೆದಿರುವುದರಿಂದಲೇ ವಾಹನದ ಮಾಲೀಕರು ವಾಹನದ ಬಗ್ಗೆ ಯಾವುದೇ ಆಸಕ್ತಿ ತೋರಿಸದೆ ಇರುವ ಅಂಶವು ಸಹಾಯಕ ಅಭಿಯೋಗ ನಿರ್ದೇಶಕರವರ ವಾದದಿಂದ ಮೇಲ್ನೋಟಕ್ಕೆ ಸಾಬೀತಾಗುವುದರಿಂದ ಅಲ್ಲದೇ ವಾಹನದ ಮಾಲೀಕರಿಗೆ ಸಾಕಷ್ಟು ಸಮಯಾವಕಾಶ ನೀಡಿದಾಗಲೂ ಪ್ರಾಧಿಕಾರದ ಮುಂದೆ ಹಾಜರಾಗಿ ವಾಹನದ ಮೇಲೆ ಹಕ್ಕು ಸಾಧಿಸದೇ ಇರುವುದರಿಂದ ಹಾಗೂ ಜಫ್ತಾಗಿರುವ ವಾಹನವು ಇಲಾಖಾ ವಶದಲ್ಲಿಯೇ ಇರುವುದರಿಂದ ತಟಸ್ಥ ಸ್ಥಿತಿಯಲ್ಲಿ ಹಾಗೆಯೇ ಬಿಟ್ಟಲ್ಲಿ ಪ್ರಕೃತಿಯ ವೈಪರೀತ್ಯಗಳಿಗನುಗುಣವಾಗಿ ಹಾಳಾಗಿ ಸರ್ಕಾರದ ರಾಜಸ್ವಕ್ಕೆ ಧಕ್ಕೆ ಉಂಟಾಗುವ ಸಂಭವವಿರುವುದರಿಂದ ಹಾಗೂ ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿಯಿಂದ ವಶಪಡಿಸಿಕೊಂಡ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 43 (ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆ ಯಾಗಿರುವುದರಿಂದ ಈ ಕೆಳಕಂಡ ಆದೇಶ

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಆರಕ್ಷಕ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಇವರ ಕ್ರೈಂ ನಂ.23/2008, ದಿನಾಂಕ:01.05.2008 ರಲ್ಲಿ ವಶಪಡಿಸಿಕೊಂಡ ವಾಹನ ಸಂಖ್ಯೆ: ಕೆಎ–18–ಇ–2120 (ಹಿರೋಹೊಂಡಾ ಸಿ.ಡಿ. 100 ಬೈಕ್) ನೊಂದಿಗೆ, ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 6.300 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 29ನೇ ಮೇ 2009 ರಂದು ಬೆರಳಚ್ಚುಗಾರರಿಗೆ ಉಕ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.491

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಪರ ಆಯುಕ್ತರು (ಆಸ್ತಿಗಳು) ರವರ ಕಛೇರಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್. ವೃತ್ತ, ಬೆಂಗಳೂರು

ತಿದ್ದುಪಡಿ

ಸಂಖ್ಯೆ: ಎಲ್1/ಪಿಆರ್/112/06–07, ದಿನಾಂಕ:15ನೇ ಸೆಪ್ಟೆಂಬರ್, 2009

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ:32, ಬಿನ್ನಿಪೇಟೆ ಉಪವಿಭಾಗ, ಕೆಂಪಾಪುರ ಅಗ್ರಹಾರದ ಸರ್ವೆ ನಂ.100ರ ಭುವನೇಶ್ವರಿ ನಗರದಲ್ಲಿನ 6ನೇ ಮುಖ್ಯರಸ್ತೆಯನ್ನು 15ನೇ ಅಡ್ಡರಸ್ತೆಗೆ ಸಂಪರ್ಕ ಕಲ್ಪಿಸುವಲ್ಲಿ ಅಡ್ಡಲಾಗಿರುವ ಸ್ವತ್ತಿನ ಸಂಖ್ಯೆ:75ರ ಭಾಗಶಃ ಜಾಗ ಶ್ರೀ ಎಂ.ಎ. ಅರವಿಂದ ಮತ್ತು ಎಸ್.ಶುಭಾ ಇವರ ಹೆಸರಿನಲ್ಲಿ ಜಂಟಿ ಖಾತೆ ಇದ್ದು, ಇದರಲ್ಲಿ ರಸ್ತೆ ನಿರ್ಮಾಣಕ್ಕೆ 988 ಚ.ಅಡಿ ಜಾಗ ಬೇಕಾಗಿದೆ ಎಂದು 1894ರ ಭೂಸ್ವಾಧೀನ ಕಾಯ್ದೆಯನ್ವಯ ಕಲಂ 4(1)ರ ಅಧಿಸೂಚನೆಯು ದಿನಾಂಕ:25.12.2008 ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾಗಿದ್ದು, ಭೂಸ್ವಾಧೀನಕ್ಕೆ ಬೇಕಾಗಿರುವ ವಿಸ್ತೀರ್ಣವನ್ನು 1053.89 ಚ.ಅಡಿ ಎಂದು ಓದಿಕೊಳ್ಳುವುದು.

ಅಪರ ಆಯುಕ್ತರು (ಆಸ್ತಿಗಳು)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪಿ.ಡಿ.60

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ. 120/2008–09, ದಿನಾಂಕ:26ನೇ ಜೂನ್, 2009

ಆರಕ್ಷಕ ಉಪ ನಿರೀಕ್ಷಕರು, ಶೃಂಗೇರಿ ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 115/2008, ದಿನಾಂಕ:10.08.2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	ಆಪಾದಿತರು
ಆರಕ್ಷಕ ಉಪ ನಿರೀಕ್ಷಕರು, ಶೃಂಗೇರಿ ಪೊಲೀಸ್ ಠಾಣೆ.	ರಾಮಪ್ಪ ಬಿನ್ ಲೇ: ನಾಗಪ್ಪ ಗೌಡ

ಪ್ರಕರಣದ ಮುಖ್ಯಾಂಶಗಳು

ದಿನಾಂಕ:10.08.2008 ರಂದು ಬೆಳಿಗ್ಗೆ 11.00 ಗಂಟೆಗೆ ಖಚಿತ ವರ್ತಮಾನದ ಮೇರೆಗೆ ಆರಕ್ಷಕ ಉಪ ನಿರೀಕ್ಷಕರು, ಶೃಂಗೇರಿ ಪೊಲೀಸ್ ಠಾಣೆ ಇವರು ಠಾಣೆಗೆ ಪಂಚಾಯ್ತಿದಾರರು ಮತ್ತು ಸಿಬ್ಬಂದಿಯೊಂದಿಗೆ ವೀರಪ್ಪಗೌಡ ಸರ್ಕಲ್‌ನಲ್ಲಿ ಗಸ್ತು ಕಾರ್ಯ ನಿರ್ವಹಿಸುತ್ತಿದ್ದಾಗ ವಾಹನ ಸಂಖ್ಯೆ: ಕೆಎ-18-ಹೆಚ್-5275 (ಎಂ.80) ಮೋಟಾರ್ ಬೈಕ್‌ನಲ್ಲಿ ಒಬ್ಬ ಅಸಾಮಿಯು ಬರುತ್ತಿದ್ದದನ್ನು ಗಮನಿಸಿ ವಾಹನವನ್ನು ತಡೆದು ನಿಲ್ಲಿಸಿ ಪರಿಶೀಲಿಸಿದಾಗ ಬ್ಯಾಗಿನಲ್ಲಿ ಮದ್ಯ ತುಂಬಿರುವ 180 ಮಿಲಿಯ 25 ಸುಪರ್ ಜಾಕ್ ವಿಸ್ಕಿ ಹಾಗೂ 180 ಮಿಲಿಯ 20 ಕ್ಯಾಪ್ಟನ್ ಮಾರ್ಟಿನ್ ವಿಸ್ಕಿ ಕ್ವಾರ್ಟರ್ ಬಾಟಲಿಗಳನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದು, ಈ ಬಗ್ಗೆ ರಹದಾರಿ, ವಗೈರೆ ಇತ್ಯಾದಿ ದಾಖಲಾತಿಗಳನ್ನು ಹಾಜರುಪಡಿಸದೇ ಇದ್ದುದರಿಂದ, ಸಾಗಾಣಿಕೆಯಾಗುತ್ತಿದ್ದ ಮದ್ಯವು ಅಕ್ರಮ ಮದ್ಯವೆಂದು ದೃಢಪಡಿಸಿಕೊಂಡು, (ಅಸಾಮಿಯು ರಾಮಪ್ಪ ಬಿನ್ ಲೇಟ್ ನಾಗಪ್ಪ ವಯಸ್ಸು ಸುಮಾರು 40 ವರ್ಷ, ಕೈಮನೆ, ಅಂಗಡಿ ವ್ಯಾಪಾರ ಎಂದು ತಿಳಿಸಿದ್ದು) ಪಂಚರ ಸಮಕ್ಷಮದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಸ್ಥಳದಲ್ಲಿ ಜರುಗಿಸಿ ಆರೋಪಿಯನ್ನು ದಸ್ತಗಿರಿಗೊಳಿಸಿ ವಾಹನದೊಂದಿಗೆ ಮದ್ಯವನ್ನು ಅಮಾನತ್ತುಪಡಿಸಿಕೊಂಡು ಠಾಣಾ ಕ್ರೈಂ ನಂ. 115/2008 ರಲ್ಲಿ ಮೊಕದ್ದಮೆ ದಾಖಲು ಮಾಡಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಪ್ರ.ವ.ವ. ವನ್ನು ಸಲ್ಲಿಸಿ ಪ್ರಕರಣದ ತನಿಖೆಯನ್ನು ಮುಂದುವರೆಸಿ ಪ್ರಾಧಿಕಾರದ ಅನುಮತಿಯ ಮೇರೆಗೆ ಅಮಾನತ್ತುಪಡಿಸಿದ ವಾಹನ ಮತ್ತು ರಾಸಾಯನಿಕ ಪರೀಕ್ಷೆಗೆ ಮಾದರಿ ಹೊರತುಪಡಿಸಿ ಉಳಿದ 7.740 ಲೀಟರ್ ಮದ್ಯವನ್ನು ಅಬಕಾರಿ ನಿರೀಕ್ಷಕರು, ಕೊಪ್ಪ ವಲಯ ಇವರಿಗೆ ಹಸ್ತಾಂತರಿಸಿದ್ದು, ಸದರಿಯವರು ದಿನಾಂಕ:05.11.2008 ರಂದು ವರದಿ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ಪ್ರಕರಣದ ಮುಟ್ಟುಗೋಲಿನ ನಡವಳಿಗಳನ್ನು ಮುಂದುವರೆಸಲಾಯಿತು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಚಿಕ್ಕಮಗಳೂರು ಇವರು ನೀಡಿರುವ "ಬಿ" ವರದಿಯ ಪ್ರಕಾರ ಶ್ರೀ ಜೆ.ಜಿ. ನಾಗರಾಜ ಭಟ್ ಬಿನ್ ಗಣೇಶ್‌ಭಟ್ ಹೆರ್‌ವರಿ ಹೌಸ್, ನಲ್ಲು ಅಂಚೆ, ಶೃಂಗೇರಿ ಇವರು ವಾಹನದ ಮಾಲೀಕರಾಗಿರುವುದಾಗಿ ಹಾಗೂ ವಾಹನಕ್ಕೆ ರೂ.3,000/- (ಮೂರು ಸಾವಿರ ರೂಪಾಯಿಗಳು ಮಾತ್ರ) ಗಳ ಮೌಲ್ಯ ನಿಗದಿಪಡಿಸಿರುತ್ತಾರೆ.

ವಾಹನದ ಮಾಲೀಕರಿಗೆ ಪ್ರಕರಣದಲ್ಲಿ ಜಫ್ತುಪಡಿಸಿದ ಮದ್ಯ ಹಾಗೂ ವಾಹನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ಕಾರಣ ಕೇಳಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಬಿ) ಅಡಿಯಲ್ಲಿ ನೊಂದಾಯಿತ ಅಂಚೆ ಮೂಲಕ ಹಾಗೂ ತನಿಖಾಧಿಕಾರಿಗಳ ಮೂಲಕ ನೋಟಿಸ್ ಜಾರಿ ಮಾಡಲು ಕ್ರಮ ಕೈಗೊಂಡಿದ್ದು, ನೋಟಿಸ್ ದಿನಾಂಕ:13.03.2009 ರಂದು ಜಾರಿಯಾಗಿ ಬಗ್ಗೆ ಸ್ವೀಕೃತಿ ಪ್ರಾಧಿಕಾರಕ್ಕೆ ಮರಳಿ ಬಂದಿರುತ್ತದೆ.

ವಾಹನದ ಮಾಲೀಕರಾದ ಶ್ರೀ ಟಿ.ಜಿ. ನಾಗರಾಜ ಭಟ್ ಇವರು ದಿನಾಂಕ:13.03.2009 ರಂದು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ಮೊಕದ್ದಮೆಯಲ್ಲಿ ಜಫ್ತುಪಡಿಸಿಕೊಡಿಸಿರುವ ವಾಹನವನ್ನು ದಿನಾಂಕ:25.12.2005 ರಂದು ಈ ಪ್ರಕರಣದಲ್ಲಿ ಆರೋಪಿಯಾಗಿರುವ ರಾಮಪ್ಪ ಬಿನ್ ನಾಗಪ್ಪಗೌಡ ಇವರಿಗೆ ಮಾರಾಟ ಮಾಡಿರುತ್ತೇನೆಂದು ತಿಳಿಸುತ್ತಾ, ಡೆಲಿವರಿ ನೋಟ್‌ನ್ನು ಸಲ್ಲಿಸಿ ನನಗೂ ಈ ಪ್ರಕರಣದಲ್ಲಿ ವಶಪಡಿಸಿಕೊಂಡಿರುವ ವಾಹನಕ್ಕೂ ಯಾವುದೇ ರೀತಿಯ ಸಂಬಂಧವಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಪ್ರಾಧಿಕಾರದ ಮುಂದೆ ಇರುವ ದಾಖಲೆಗಳನ್ನು ಸಹಾಯಕ ಅಭಿಯೋಗ ನಿರ್ದೇಶಕರು, ಪ್ರಾಧಿಕಾರದ ಮುಂದೆ ಮಂಡಿಸಿ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಮೊಕದ್ದಮೆ ದಾಖಲಾಗಿ ಹತ್ತು ತಿಂಗಳ ಅವಧಿ ಕಳೆದಿದ್ದು ವಾಹನದ ಮಾಲೀಕರು ವಾಹನದ ಈ ಪ್ರಾಧಿಕಾರಕ್ಕೆ ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಾವು ವಾಹನವನ್ನು ಈ ಹಿಂದೆಯೇ ಈ ಪ್ರಕರಣದ ಆರೋಪಿಗೆ ಮಾರಾಟ ಮಾಡಿರುವುದಾಗಿ ತಿಳಿಸಿ ಡೆಲಿವರಿ ನೋಟ್ ಲಗತ್ತಿಸಿರುವುದರಿಂದ ವಾಹನದ ಹಕ್ಕುದಾರರು ಈ ಕೃತ್ಯಕ್ಕೆ ವಾಹನವನ್ನು ಬಳಸಿಲ್ಲ ಎಂಬುದನ್ನು ಸಾಕ್ಷಧಾರಗಳ ಮುಖಾಂತರ ಪ್ರಾಧಿಕಾರದ ಮುಂದೆ ಇದುವರೆವಿಗೂ ತಾವಾಗಲೀ ಅಥವಾ ತಮ್ಮ ನ್ಯಾಯವಾದಿಗಳ ಮುಖಾಂತಗವಾಗಲಿ ಹಾಜರಾಗಿ ಸಾಬೀತುಪಡಿಸದೇ ಇರುವುದರಿಂದ ಹಾಗೂ ವಾಹನದ ಮಾಲೀಕರಿಗೆ ಗೊತ್ತಿದ್ದು ಈ ಕೃತ್ಯ ನಡೆದಿರುವುದರಿಂದಲೇ ಹಾಗೂ ಕೃತ್ಯದಲ್ಲಿ ಶಾಮೀಲಾಗಿರುವುದರಿಂದ ವಾಹನದ ಮಾಲೀಕರು ವಾಹನದ ಬಗ್ಗೆ ಯಾವುದೇ ಆಸಕ್ತಿ ತೋರಿಸದೆ ಇರುವ ಅಂಶವು ಸಹಾಯಕ ಅಭಿಯೋಗ ನಿರ್ದೇಶಕರವರ ವಾದದಿಂದ ಮೇಲ್ನೋಟಕ್ಕೆ ಸಾಬೀತಾಗುವುದರಿಂದ ಅಲ್ಲದೇ ವಾಹನದ ಮಾಲೀಕರಿಗೆ ಸಾಕಷ್ಟು ಸಮಯಾವಕಾಶ ನೀಡಿದಾಗಲೂ ಪ್ರಾಧಿಕಾರದ ಮುಂದೆ ಹಾಜರಾಗಿ ವಾಹನದ ಮೇಲೆ ಹಕ್ಕು ಸಾಧಿಸದೇ ಇರುವುದರಿಂದ ಹಾಗೂ ಜಫ್ತಾಗಿರುವ ವಾಹನವು ಇಲಾಖಾ ವಶವಲ್ಲಿಯೇ

ಇರುವುದರಿಂದ ತಟಸ್ಥ ಸ್ಥಿತಿಯಲ್ಲಿ ಹಾಗೆಯೇ ಬಿಟ್ಟಲ್ಲಿ ಪ್ರಕೃತಿಯ ವೈಪರೀತ್ಯಗಳಿಗನುಗುಣವಾಗಿ ಹಾಳಾಗಿ ಸರ್ಕಾರದ ರಾಜಸ್ವಕ್ಕೆ ಧಕ್ಕೆ ಉಂಟಾಗುವ ಸಂಭವವಿರುವುದರಿಂದ ಹಾಗೂ ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿಯಿಂದ ವಶಪಡಿಸಿಕೊಂಡ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆ ಯಾಗಿರುವುದರಿಂದ ಈ ಕೆಳಕಂಡ ಆದೇಶ

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಆರಕ್ಷಕ ಉಪ ನಿರೀಕ್ಷಕರು, ಶೃಂಗೇರಿ ಪೊಲೀಸ್ ಠಾಣೆ ಇವರ ಕ್ರೈಂ ನಂ.115/2008, ರಲ್ಲಿ ವಶಪಡಿಸಿಕೊಂಡ ವಾಹನ ಸಂಖ್ಯೆ: ಕೆ.ಎ. 18. ಹೆಚ್:5275 ಎಂ.80 ಮೋಟಾರ್‌ಬೈಕ್‌ನೊಂದಿಗೆ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 7.740 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಲಂ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಕಲಂ 43 (ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 26ನೇ ಜೂನ್ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಪಿ.ಆರ್.639 ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ.23/2008-09, ದಿನಾಂಕ:3ನೇ ಜುಲೈ, 2009

ಪೊಲೀಸ್ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 53/2007, ದಿನಾಂಕ: 28-11-2007

ಉಪಸ್ಥಿತರು: ಕೆ.ಸಿ. ಹರಿದಾಸ್
ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಪೊಲೀಸ್ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ.	ವೈ. ಜಯಣ್ಣ ಮತ್ತು ಇತರರು

ಪ್ರಕರಣದ ಮುಖ್ಯಾಂಶಗಳು

ದಿನಾಂಕ:28.11.2007 ರಂದು ಬೆಳಿಗ್ಗೆ ಸುಮಾರು 5.30 ಗಂಟೆ ಸಮಯದಲ್ಲಿ ಪೊಲೀಸ್ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಇವರು ಸಿಬ್ಬಂದಿ ಹಾಗೂ ಪಂಚಾಯ್ತಿದಾರರೊಂದಿಗೆ ಖಚಿತ ವರ್ತಮಾನದ ಮೇರೆಗೆ ಕಡೂರು ತಾ: 9ನೇ ಮೈಲಿಕಲ್ಲು ಮತ್ತು ಕರಿಕಲ್ಲು ಹೊಳೆ ಕಡೂರು ರಸ್ತೆಯಲ್ಲಿ ಗಸ್ತು ನಿರ್ವಹಿಸುತ್ತಿರುವಾಗ ಬೆಳಿಗ್ಗೆ ಸುಮಾರು 6.00 ಗಂಟೆಗೆ 9ನೇ ಮೈಲಿಕಲ್ಲು ಕಡೆಯಿಂದ 2 ಬೈಕ್‌ನಲ್ಲಿ 3 ಜನ ವ್ಯಕ್ತಿಗಳು ಬರುತ್ತಿರುವುದನ್ನು ಗಮನಿಸಿ ತಡೆದು ನಿಲ್ಲಿಸಿದಾಗ 1 ಹಿರೋಹೊಂಡ ಬೈಕ್‌ನಲ್ಲಿದ್ದ ವ್ಯಕ್ತಿಯು ಬೈಕ್ ಬಿಟ್ಟು ಓಡಿ ಹೋಗಿದ್ದು, ಪರಿಶೀಲಿಸಲಾಗಿ ಅದರಲ್ಲಿ 2 ರಟ್ಟಿನ ಪೆಟ್ಟಿಗೆಗಳಲ್ಲಿ 180 ಮಿಲಿಯ ತಲಾ 48 ರಂತೆ 96 ಸೀಸೆ ರಾಜಾ ವಿಸ್ಕಿ ಬಾಟಲಿಗಳಿದ್ದು, ಇನ್ನೊಂದು ಬೈಕ್‌ನಲ್ಲಿ ಒಟ್ಟು 3 ರಟ್ಟಿನ ಪೆಟ್ಟಿಗೆಗಳಲ್ಲಿ 180 ಮಿಲಿಯ 48 ರಂತೆ ಒಟ್ಟು 144 ಸೀಸೆ ರಾಜಾ ವಿಸ್ಕಿ ಬಾಟಲಿಗಳಿದ್ದು, ಸದರಿ ಮದ್ಯ ಸಾಗಾಣಿಕೆಗೆ ಸಂಬಂಧಿಸಿದಂತೆ ವಾಹನದಲ್ಲಿದ್ದ ವ್ಯಕ್ತಿಗಳಾದ ಮೆಹಬೂಬ್ ಬಿನ್ ಮೈಯುದ್ದಿನ್ ಸಾಬ್, ಬೆಲಗೂರು, ಹೊಸದುರ್ಗ ತಾ: ಚಿತ್ರದುರ್ಗ ಜಿಲ್ಲೆ ಮತ್ತೊಬ್ಬ ವ್ಯಕ್ತಿ ಬಿ.ಎನ್. ಕರಿಯಪ್ಪ ಬಿನ್ ನಾಗಪ್ಪ, ಬೆಲಗೂರು, ಹೊಸದುರ್ಗ ತಾ: ಚಿತ್ರದುರ್ಗ ಜಿಲ್ಲೆ ಇವರುಗಳು ಯಾವುದೇ ಅಧಿಕೃತ ರಹದಾರಿ ಪತ್ರಗಳನ್ನಾಗಲಿ ಅಥವಾ ದಾಖಲೆಗಳನ್ನಾಗಲಿ ಹಾಜರುಪಡಿಸದೇ ಇದ್ದುದರಿಂದ ಅಕ್ರಮವಾದುದೆಂದು ದೃಢಪಡಿಸಿಕೊಂಡು ಪಂಚರ ಸಮಕ್ಷಮ ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಹಿರೋಹೊಂಡ ಬೈಕ್‌ನ ನೊಂದಣಿ ಸಂಖ್ಯೆ: ಪರಿಶೀಲಿಸಲಾಗಿ ಕೆಎ-01-ಇ-8063 ಆಗಿದ್ದು, ಓಡಿ ಹೋದ ವ್ಯಕ್ತಿಯ ಬಗ್ಗೆ ವಿಚಾರಿಸಲಾಗಿ ವೈ. ಜಯಣ್ಣ ಬಿನ್ ಯಲ್ಲಮರಿಯಪ್ಪ, ಶಂಕರಪುರ, ಕಡೂರು ತಾ: ಚಿಕ್ಕಮಗಳೂರು ಜಿಲ್ಲೆ ಎಂದು ತಿಳಿದುಬಂದಿದ್ದು, ಅಸಾಮಿಗಳಿದ್ದ ಬೈಕ್ ಟಿ.ವಿ.ಎಸ್. ವಿಕ್ಟರ್ ಜಿಎಲ್ ಆಗಿದ್ದು, ನಂಬರ್ ಇರುವುದಿಲ್ಲ, ಚಾರ್ಸಿ ನಂ.N 3211 F 272169, ಇಂಜಿನ್ ನಂ. N3211 M 274223 ಆಗಿರುತ್ತದೆ. ಹಾಗೂ ಸದರಿ ಮದ್ಯವನ್ನು ಬೆಲಗೂರು ರವಿ ವೈನ್ಸ್‌ನಿಂದ ರವಿ ಬಿನ್ ರಾಮಚಂದ್ರಪ್ಪ, ಬೆಲಗೂರು, ಹೊಸದುರ್ಗ ತಾಲ್ಲೂಕು ಇವರು ಮಾರಾಟ ಮಾಡಲು ಕಳುಹಿಸಿಕೊಟ್ಟಿರುವುದು ತಿಳಿದು ಬಂದಿದ್ದರಿಂದ ದೊರೆತ ವಸ್ತುಗಳನ್ನು

2 ಬೈಕ್‌ಗಳೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಆರೋಪಿಗಳನ್ನು ದಸ್ತಗಿರಿಗೊಳಿಸಿ ಠಾಣೆಗೆ ಹಿಂದಿರುಗಿ ಕ್ರೈಂ ನಂ.53/2007 ರಲ್ಲಿ ಪ್ರಕರಣವನ್ನು ದಾಖಲಿಸಿ ವಶಪಡಿಸಿಕೊಂಡ ವಾಹನ ಮತ್ತು ದೊರೆತ ವಸ್ತುಗಳನ್ನು ಮುಂದಿನ ವಿಲೇವಾರಿ ಕುರಿತು ಅಬಕಾರಿ ನಿರೀಕ್ಷಕರು, ಕಡೂರು ವಲಯ ಇವರಿಗೆ ಹಸ್ತಾಂತರಿಸಿದ ಮೇರೆಗೆ ಸದರಿಯವರು ಪ್ರಾಧಿಕಾರಕ್ಕೆ ವರದಿ ಮಾಡಿರುತ್ತಾರೆ.

ವಶಪಡಿಸಿಕೊಂಡ ವಾಹನಗಳು ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಕ್ರಮವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಬೆಂಗಳೂರು ಕೇಂದ್ರ ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಲಾಗಿರುತ್ತದೆ.

ವಾಹನಗಳು ಜಫ್ತಾಗಿ ಸುಮಾರು ಒಂದು ವರ್ಷ ಏಳು ತಿಂಗಳು ಕಳೆದರೂ ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನದ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನದ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ ಜನಮಿತ್ರ ಪತ್ರಿಕೆಯಲ್ಲಿ ಪ್ರಚುರಗೊಂಡಿರುತ್ತದೆ. ಪ್ರಚುರಗೊಂಡ ನಂತರದಲ್ಲೂ ವಾಹನದ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನಗಳು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಹಾಗೂ ವಾಹನವನ್ನು ಇಂತಹ ಅಕ್ರಮ ಕೃತ್ಯಗಳಿಗೆ ಬಳಸುವ ಉದ್ದೇಶದಿಂದಲೇ ವಾಹನದ ನೋಂದಣಿ ಸಂಖ್ಯೆ ತೋರಿಸುವ ಬೋರ್ಡ್ ಹಾಕದೇ ಇರುವ ಅಂಶಗಳಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 43 ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾದ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳ ಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43 (ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಪೊಲೀಸ್ ಉಪ ನಿರೀಕ್ಷಕರು, ಸಿಂಗಟಗೆರೆ ಪೊಲೀಸ್ ಠಾಣೆ ಇವರ ಕ್ರೈಂ ಸಂಖ್ಯೆ: 53/2007, ದಿನಾಂಕ:28.11.2007ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಸಂಖ್ಯೆ: ಕೆಎ-01-ಇ-8063 (ಹಿರೋಹೊಂಡ ಬೈಕ್) ಮತ್ತು ಟಿ.ವಿ.ಎಸ್. ವಿಕ್ಟರ್ ಜಿಎಲ್ ಬೈಕ್ (ನಂಬರ್ ಇರುವುದಿಲ್ಲ ಚಾರ್ಸಿ ನಂ.N 3211 F 272169 ಇಂಜಿನ್ ನಂ. N 3211 M 274223), ಗಳನ್ನು ಹಾಗೂ ವಶಪಡಿಸಿಕೊಂಡ ಮದ್ಯದ ಪೈಕಿ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 42.300 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43 (ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 3ನೇ ಜುಲೈ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.726

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ.199/2007-08 , ದಿನಾಂಕ:3ನೇ ಜುಲೈ, 2009

ಪೊಲೀಸ್ ಉಪ ನಿರೀಕ್ಷಕರು ಎನ್.ಆರ್. ಪುರ ಪೊಲೀಸ್ ಠಾಣಾ ಇವರ ಮೊಕದ್ದಮೆ ನಂ.30/2008, ದಿನಾಂಕ:01.04.2008

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಪೊಲೀಸ್ ಉಪ ನಿರೀಕ್ಷಕರು, ಎನ್.ಆರ್. ಪುರ ಪೊಲೀಸ್ ಠಾಣೆ.	ಮುರುಳಿಧರ ಮತ್ತು ಇತರರು

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:01.04.2008 ರಂದು ಸಂಜೆ ಸುಮಾರು 4.00 ಗಂಟೆ ಸಮಯದಲ್ಲಿ ಪೊಲೀಸ್ ವೃತ್ತ ನಿರೀಕ್ಷಕರು, ಎನ್.ಆರ್. ಪುರ ಇವರ ಆದೇಶಗಳಂತೆ ಸಿಬ್ಬಂದಿಗಳಾದ ಸಿ. ಹೆಚ್.ಸಿ. 140, ಸಿ.ಪಿ.ಸಿ. 22, ಸಿ.ಪಿ.ಸಿ 429 ಮತ್ತು ಎ.ಪಿ.ಸಿ. 165 ಇವರುಗಳು ಪಂಚಾಯ್ತಿದಾರರೊಂದಿಗೆ, ಎನ್.ಆರ್. ಪುರ ಪೊಲೀಸ್ ಠಾಣಾ ಸರಹದ್ದಿನ ಸೀತೂರು ಗ್ರಾಮದ ಕೆರೆಗದ್ದೆ ದೇವಾಲಯದ ಬಳಿ ತೆರಳಿದಾಗ ಪೊಲೀಸ್‌ನವರನ್ನು ನೋಡಿ ಮದ್ಯ ತಯಾರು ಮಾಡುತ್ತಿದ್ದವರು ಕಾಡಿನೊಳಗೆ ಓಡಿ ಹೋಗಿದ್ದು, ಬೆನ್ನಟ್ಟಿದಾಗ ಸಿಕ್ಕಿಬಿದ್ದ ಮುರುಳಿಧರ ಬಿನ್ ರಾಮ, ಮಲವಗೊಪ್ಪ, ಶಿವಮೊಗ್ಗ, ಈತನಿಂದ ಒಟ್ಟು 72 ಲೀಟರ್ ಸ್ಪಿರಿಟ್, 180 ಮಿಲಿಯ 115 ಸೀಸೆ ಮದ್ಯ ತುಂಬಿದ ಕ್ವಾರ್ಟರ್ ಬಾಟಲಿಗಳು, ಕೆರಮಲ್, ಕಲರ್ ಮಿಕ್ಸಿಂಗ್, ಕೆಎ.30 – ಎಂ:559 (ಅಂಬಾಸಿಡರ್ ಕಾರ್) ಇತರ ಪರಿಕರಗಳನ್ನು ವಶಪಡಿಸಿಕೊಂಡು ಓಡಿ ಹೋದ ವ್ಯಕ್ತಿಗಳಾದ ಶೈಲೇಶ್‌ಕುಮಾರ್, ಬದ್ರಿ ಅಲಿಯಾಸ್ ವೀರಭದ್ರ, ಉಮೇಶ್, ಪ್ರಕಾಶ, ಅಣ್ಣಪ್ಪ, ಗುಂಡಾ, ನಾಗು, ಭಾಸ್ಕರ, ಇವರುಗಳು ಯಾವುದೇ ಅಧಿಕೃತ ರಹದಾರಿ ಪತ್ರಗಳನ್ನಾಗಲಿ ಅಥವಾ ದಾಖಲಾತಿ ಪತ್ರಗಳನ್ನಾಗಲಿ ಹಾಜರುಪಡಿಸದೆ ಇದ್ದುದರಿಂದ, ಅಕ್ರಮವಾದುದೆಂದು ದೃಢಪಡಿಸಿಕೊಂಡು, ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ದೊರೆತ ವಸ್ತುಗಳನ್ನು ವಾಹನ ಸಂಖ್ಯೆ: ಕೆಎ.30 – ಎಂ:559 (ಅಂಬಾಸಿಡರ್ ಕಾರ್) ನೊಂದಿಗೆ ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಆರೋಪಿಯನ್ನು ದಸ್ತಗಿರಿಗೊಳಿಸಿ ಠಾಣಾಧಿಕಾರಿಗಳ ಮುಂದೆ ಹಾಜರುಪಡಿಸಿದ ಮೇರೆಗೆ ಕ್ರೈಂ ನಂ.30/2008 ರಲ್ಲಿ ಪ್ರಕರಣವನ್ನು ದಾಖಲಿಸಿ ವಶಪಡಿಸಿಕೊಂಡ ವಾಹನ ಮತ್ತು ದೊರೆತ ವಸ್ತುಗಳನ್ನು ಮುಂದಿನ ವಿಲೇವಾರಿ ಕುರಿತು ಈ ಪ್ರಾಧಿಕಾರದ ಅನುಮತಿ ಪಡೆದು ಅಬಕಾರಿ ನಿರೀಕ್ಷಕರು, ಎನ್.ಆರ್. ಪುರ ವಲಯ ಇವರಿಗೆ ಹಸ್ತಾಂತರಿಸಿರುತ್ತಾರೆ.

ವಶಪಡಿಸಿಕೊಂಡ ವಾಹನ, ಮದ್ಯಸಾರ ಮತ್ತು ಇನ್ನಿತರೆ ವಸ್ತುಗಳಿಗೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಕ್ರಮವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಕಾರವಾರ ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ನಡವಳಿಗಳನ್ನು ಮುಂದುವರೆಸಿ, ಮಾಲೀಕತ್ವ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಸಾಗರ, ಶಿವಮೊಗ್ಗ ಇವರಿಗೆ ಪತ್ರ ಬರೆಯಲಾಗಿರುತ್ತದೆ.

ವಾಹನವು ಜಪ್ತಾಗಿ ಸುಮಾರು ಒಂದು ವರ್ಷ ಕಳೆದರೂ ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರಾಗಲಿ ಅಥವಾ ವಾಹನದ ಮಾಲೀಕರಾಗಲೀ ಯಾರೊಬ್ಬರು ಪ್ರಾಧಿಕಾರದ ಮುಂದೆ ಹಾಜರಾಗಿ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ಹಕ್ಕು ಸಾಧಿಸದೆ ಇದ್ದುದರಿಂದ, ಅಂತಿಮವಾಗಿ ವಾಹನದ ಮಾಲೀಕರಿಗೆ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರಾಧಿಕಾರಕ್ಕೆ ಲಿಖಿತ ಮನವಿ ಸಲ್ಲಿಸಿ ವಾಹನದ ಮೇಲೆ ಹಕ್ಕು ಸಾಧಿಸಲು ಏಳು ದಿನಗಳ ಕಾಲಾವಕಾಶ ನೀಡಿ, "ಸಂಬಂಧಿಸಿದವರ ತಿಳುವಳಿಕೆಗಾಗಿ" ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಪತ್ರಿಕಾ ಪ್ರಕಟಣೆ ದಿನಾಂಕ:10.06.2009 ರಂದು ರಾಜ್ಯ ಮಟ್ಟದ ದಿನಪತ್ರಿಕೆಯಾದ ವಿಜಯ ಕರ್ನಾಟಕ ಮತ್ತು ಜಿಲ್ಲಾ ಮಟ್ಟದ ದಿನಪತ್ರಿಕೆಯಾದ

ಜನಮಿತ್ರ ಪತ್ರಿಕೆಯಲ್ಲಿ ಪ್ರಚಾರಗೊಂಡಿರುತ್ತದೆ. ಪ್ರಚಾರಗೊಂಡ ನಂತರದಲ್ಲೂ ವಾಹನದ ಮಾಲೀಕರು ಪ್ರಾಧಿಕಾರದ ಮುಂದೆ ಹಾಜರಾಗಿ ಲಿಖಿತ ಮನವಿಯನ್ನು ಸಲ್ಲಿಸಿರುವುದಿಲ್ಲ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರ ಅಭಿಪ್ರಾಯ ಪಡೆಯಲಾಯಿತು. ಸಹಾಯಕ ಅಭಿಯೋಗ ನಿರ್ದೇಶಕರು ತಮ್ಮ ಅಭಿಪ್ರಾಯದಲ್ಲಿ ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಫ್ತಾದಾಗಿನಿಂದ ಈವರೆವಿಗೂ ದೀರ್ಘಕಾಲಾವಧಿಯ ಸಮಯದಲ್ಲಿ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯಾವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ.

ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 43 ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾಧ್ಯವಾಗಿದ್ದಲ್ಲಿ, ಯಾರೋಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

"ಆದೇಶ"

ಕೆ.ಸಿ. ಹರಿದಾಸ್, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ 43(ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಪೊಲೀಸ್ ಉಪ ನಿರೀಕ್ಷಕರು, ಎನ್.ಆರ್. ಪುರ ಪೊಲೀಸ್ ಠಾಣೆ ಇವರ ಕ್ರೈಂ ನಂ.30/2008, ದಿನಾಂಕ:01.04.2008 ರಲ್ಲಿ ವಶಪಡಿಸಿಕೊಳ್ಳಲಾದ ವಾಹನ ಸಂಖ್ಯೆ: ಕೆಎ-30-ಎಂ-559 (ಅಂಬಾಸಿಡರ್ ಕಾರ್) ಅನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 3ನೇ ಜುಲೈ 2009 ರಂದು ಬೆರಳಚ್ಚುಗಾರರಿಗೆ ಉಖ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಪಿ.ಆರ್.727

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್. ನಂ. 182/2005-06 ದಿನಾಂಕ:3ನೇ ಜುಲೈ, 2009

ಪೊಲೀಸ್ ಉಪ ನಿರೀಕ್ಷಕರು, ಟೌನ್ ಪೊಲೀಸ್ ಠಾಣೆ ಕ್ರೈಂ ಸಂಖ್ಯೆ: 192/2006, ದಿನಾಂಕ:25.04.2006

ಉಪಸ್ಥಿತರು: ಕೆ.ಸಿ. ಹರಿದಾಸ್

ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು	**ಆಪಾದಿತರು**
ಪೊಲೀಸ್ ಉಪ ನಿರೀಕ್ಷಕರು, ಟೌನ್ ಪೊಲೀಸ್ ಠಾಣೆ.	ವಿರೇಗೌಡ ಬಿನ್ ರಂಗೇಗೌಡ ಮತ್ತು ಇತರರು.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:25.04.2006 ರಂದು ಸಂಜೆ ಸುಮಾರು 4.30 ಗಂಟೆ ಸಮಯದಲ್ಲಿ ಪೊಲೀಸ್ ಉಪ ನಿರೀಕ್ಷಕರು, ಟೌನ್ ಪೊಲೀಸ್ ಠಾಣೆ ಇವರು ಸಿಬ್ಬಂದಿ ಮತ್ತು ಪಂಚಾಯ್ತಿದಾರರೊಂದಿಗೆ, ಚಿಕ್ಕಮಗಳೂರು ಟೌನ್ ಕೆ.ಎಂ. ರಸ್ತೆಯಲ್ಲಿನ ಐ.ಬಿ.ಪಿ.

(2) ಜಿಲ್ಲಾಧಿಕಾರಿಯವರು ಪ್ರಮಾಣ ಪತ್ರವನ್ನು ಸ್ವೀಕರಿಸಿದ ಮೇಲೆ, ಅದರಲ್ಲಿ ಹೇಳಿರುವ ಮೊಬಲಗನ್ನು ಭೂ ಕಂದಾಯದ ಬಾಕಿಯಂತೆ ವಸೂಲು ಮಾಡಲು ಕ್ರಮ ಕೈಗೊಳ್ಳತಕ್ಕದ್ದು.

(3) ಬ್ಯಾಂಕಿಂಗ್ ಕಂಪನಿಯು ಸಲ್ಲಿಸಿದ ಅರ್ಜಿಯ ಮೇಲೆ ಮತ್ತು ಸಾಮಾಜಿಕವಾಗಿ ಅಪೇಕ್ಷಣೀಯವಾದ ಕಾರ್ಯಯೋಜನೆಯ ಮೇರೆಗೆ ಯಾರೇ ವ್ಯಕ್ತಿಗೆ ನೀಡಿದ ಸಾಲಕ್ಕೆ ಸಂಬಂಧಪಟ್ಟಂತೆ ಆ ಯಾರೇ ವ್ಯಕ್ತಿಯಿಂದ ಅದಕ್ಕೆ ಬರಬೇಕಾದ ಯಾವುದೇ ಮೊತ್ತಕ್ಕೆ ಸಂಬಂಧಪಟ್ಟಂತೆ ಲೆಕ್ಕಪತ್ರಗಳ ವಿವರ ಪತ್ರವನ್ನು ಅದು ಒದಗಿಸಿದ ಮೇಲೆ, ನಿಯಮಿಸಿದ ಅಧಿಕಾರಿಯು, ತಾನು ಸೂಕ್ತವೆಂದು ಭಾವಿಸಬಹುದಾದಂಥ ವಿಚಾರಣೆಯನ್ನು ಮಾಡಿದ ತರುವಾಯ ಮತ್ತು ಅಂಥ ವ್ಯಕ್ತಿಗೆ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡಿದ ತರುವಾಯ, ಬಾಕಿ ಇರುವ ಮೊತ್ತವನ್ನು ನಿರ್ದಿಷ್ಟಪಡಿಸಿ ಪ್ರಮಾಣ ಪತ್ರವನ್ನು ನೀಡಬಹುದು.

(4) ನಿಯಮಿಸಿದ ಅಧಿಕಾರಿಯು ಹಾಗೆ ನೀಡಿದ ಪ್ರಮಾಣ ಪತ್ರವು ಅಂತಿಮವಾದುದಾಗಿರತಕ್ಕದ್ದು ಮತ್ತು ಬ್ಯಾಂಕಿಂಗ್ ಕಂಪನಿಯು ಅದನ್ನು ಜಿಲ್ಲಾಧಿಕಾರಿಯವರಿಗೆ ಕಳುಹಿಸಬಹುದು. ಬಾಕಿಯಿದೆ ಎಂದು ಅದರಲ್ಲಿ ಹೇಳಿದ ಮೊತ್ತವು ಮತ್ತು ವಸೂಲಿಯ ದಿನಾಂಕದವರೆಗೆ ಅದರ ಮೇಲಿನ, [1][ಭಾರತದ ರಿಸರ್ವ್ ಬ್ಯಾಂಕು ಮತ್ತು ಇತರ ಸರ್ಕಾರಿ ಹಣಕಾಸು ಅಥವಾ ಪುನರ್ ಹಣಕಾಸು ಸಂಸ್ಥೆಗಳು ಕಾಲಕಾಲಕ್ಕೆ ಗೊತ್ತುಪಡಿಸಿದ ಪರಿಮಿತಿಯೊಳಗೆ ಒಪ್ಪಿಕೊಂಡ ದರದಲ್ಲಿ][1] ಬಡ್ಡಿಯು ವ್ಯವಹರಣೆಗಳ ವೆಚ್ಚದೊಂದಿಗೆ ಭೂಕಂದಾಯದ ಬಾಕಿಯಂತೆ ವಸೂಲಿ ಮಾಡಬಹುದಾದುದಾಗಿರತಕ್ಕದ್ದು. ಜಿಲ್ಲಾಧಿಕಾರಿಯವರಿಗೆ ಕಳುಹಿಸಿದ ಪ್ರಮಾಣ ಪತ್ರವನ್ನು ಯಾವುದೇ ಸಮಯದಲ್ಲಿ ಹಿಂತೆಗೆದುಕೊಳ್ಳಬಹುದು.

1. ಅಧಿನಿಯಮ 1985ರ 37ರ ಮೂಲಕ 21.10.1985 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.

(5) ಮೇಲೆ ಹೇಳಿದ ಯಾವುದೇ ಬಾಕಿ ಮೊತ್ತದ ವಸೂಲಿಗಾಗಿ ಅದನ್ನು ವಸೂಲು ಮಾಡುವ ವ್ಯವಹರಣೆಗಳು ಜಿಲ್ಲಾಧಿಕಾರಿಯವರ ಮುಂದೆ ಇತ್ಯರ್ಥದಲ್ಲಿದ್ದರೆ, ಅದರಲ್ಲಿ ಉಲ್ಲೇಖಿಸಿದ ಯಾರೇ ವ್ಯಕ್ತಿಯ ವಿರುದ್ಧ ಸಿವಿಲ್ ನ್ಯಾಯಾಲಯದಲ್ಲಿ ಯಾವುದೇ ದಾವೆಯನ್ನು ಹೂಡಲು ಅವಕಾಶವಿರತಕ್ಕದ್ದಲ್ಲ:

ಪರಂತು, ಅಂಥ ಯಾವುದೇ ಮೊತ್ತವನ್ನು ನ್ಯಾಯಾಲಯದ ಮೂಲಕ ವಸೂಲಿ ಮಾಡಲು ಕಾಲಪರಿಮಿತಿ ಅವಧಿಯನ್ನು ಲೆಕ್ಕ ಹಾಕುವಾಗ, ಯಾವ ಅವಧಿಯಲ್ಲಿ ದಾವೆಯನ್ನು ನ್ಯಾಯಾಲಯದಲ್ಲಿ ದಾಖಲುಮಾಡಲು ಪ್ರತಿಷೇಧಿಸಲಾಗಿದೆಯೋ ಆ ಅವಧಿಯನ್ನು ಹೊರತುಪಡಿಸತಕ್ಕದ್ದು.

4. ಉಳಿಸುವಿಕೆಗಳು.– 3ನೇ ಪ್ರಕರಣದಲ್ಲಿ ಇರುವುದು ಯಾವುದೂ,–

(ಎ) ಯಾವುದೇ ಅಡಮಾನ, ಋಣಭಾರ, ಒತ್ತೆ ಅಥವಾ ಇತರ ಪೂರ್ವಾಧಿಯ ಮೂಲಕ ಯಾವುದೇ ಸ್ವತ್ತಿನಲ್ಲಿ ಸೃಜಿಸಲಾದ ರಾಜ್ಯ ಸರ್ಕಾರದ, ನಿಗಮದ, ಸರ್ಕಾರಿ ಕಂಪನಿಯ ಅಥವಾ ಯಾವುದೇ ಬ್ಯಾಂಕಿಂಗ್ ಕಂಪನಿಯ ಯಾವುದೇ ಹಿತಾಸಕ್ತಿಗೆ ಬಾಧಕ ಉಂಟುಮಾಡತಕ್ಕದ್ದಲ್ಲ; ಅಥವಾ

(ಬಿ) ಆ ಪ್ರಕರಣದಲ್ಲಿ ಉಲ್ಲೇಖಿಸಿದ ಒಪ್ಪಂದಕ್ಕೆ ಸಂಬಂಧಿಸಿದಂತೆ ಅಥವಾ (ಎ) ಖಂಡದಲ್ಲಿ ಉಲ್ಲೇಖಿಸಿದ ಯಾವುದೇ ಹಿತಾಸಕ್ತಿಗೆ ಸಂಬಂಧಿಸಿದಂತೆ ಮಾಡಿಕೊಂಡ ಕರಾರಿಗೆ ಅಥವಾ ನಷ್ಟ ಭರ್ತಿಗೆ ಅಥವಾ ಖಾತರಿಗೆ ಸಂಬಂಧಿಸಿದಂತೆ ಆ ಪ್ರಕರಣದಲ್ಲಿ ಉಲ್ಲೇಖಿಸಿದ ವ್ಯಕ್ತಿಯನ್ನು ಹೊರತುಪಡಿಸಿ ಯಾರೇ ವ್ಯಕ್ತಿಯ ಯಾವುದೇ ಹಕ್ಕಿಗೆ ಅಥವಾ ಪರಿಹಾರಕ್ಕೆ ಬಾಧಕವನ್ನುಂಟುಮಾಡತಕ್ಕದ್ದಲ್ಲ.

(2) 3ನೇ ಪ್ರಕರಣದಲ್ಲಿ ಉಲ್ಲೇಖಿಸಿದ ಯಾರೇ ವ್ಯಕ್ತಿಯ ಸ್ವತ್ತು ರಾಜ್ಯ ಸರ್ಕಾರದ, ನಿಗಮದ, ಸರ್ಕಾರಿ ಕಂಪನಿಯ ಅಥವಾ ಬ್ಯಾಂಕಿಂಗ್ ಕಂಪನಿಯ ಹೆಸರಿಗೆ ಮಾಡಿದ ಯಾವುದೇ ಅಡಮಾನಕ್ಕೆ, ಋಣಭಾರಕ್ಕೆ, ಒತ್ತೆಗೆ ಅಥವಾ ಇತರ ಪೂರ್ವಾಧಿಗೆ ಒಳಪಟ್ಟಿರುವಲ್ಲಿ, ಆಗ,-

(ಎ) ಸರಕುಗಳನ್ನು ಒತ್ತೆ ಇಟ್ಟಿರುವ ಅಥವಾ ಅಡಮಾನ ಮಾಡಿರುವ ಪ್ರತಿಯೊಂದು ಸಂದರ್ಭದಲ್ಲೂ, ಒತ್ತೆ ಇಟ್ಟ ಅಥವಾ ಅಡಮಾನ ಮಾಡಿದ ಸರಕುಗಳ ಮಾರಾಟದ ಬಗ್ಗೆ ಮೊದಲು ವ್ಯವಹರಣೆಗಳನ್ನು ಕೈಗೊಳ್ಳತಕ್ಕದ್ದು ಮತ್ತು ಅಂಥ ಮಾರಾಟದಿಂದ ಬಂದ ಉತ್ಪತ್ತಿಗಳು ಬಾಕಿ ಇರುವ ಮೊತ್ತಕ್ಕಿಂತ ಕಡಿಮೆಯಿದ್ದರೆ, ಆಗ ಉಳಿದ ಶಿಲ್ಕನ್ನು ಭೂ ಕಂದಾಯದ ಬಾಕಿಯಾಗಿದ್ದರೆ ಹೇಗೋ ಹಾಗೆ ವಸೂಲು ಮಾಡಲು ವ್ಯವಹರಣೆಯನ್ನು ಕೈಗೊಳ್ಳತಕ್ಕದ್ದು:

ಪರಂತು, ರಾಜ್ಯ ಸರ್ಕಾರವು, ಸಂದರ್ಭಾನುಸಾರ, ತನಗೆ ಅಥವಾ ನಿಗಮಕ್ಕೆ, ಸರ್ಕಾರಿ ಕಂಪನಿಗೆ ಅಥವಾ ಬ್ಯಾಂಕಿಂಗ್ ಕಂಪನಿಗೆ ಬರಬೇಕಾದ ಬಾಕಿ ಮೊತ್ತದ ವಸೂಲಿಯನ್ನು ಭದ್ರಪಡಿಸಿಕೊಳ್ಳುವುದಕ್ಕಾಗಿ ಒತ್ತೆ ಇಟ್ಟ ಸರಕುಗಳನ್ನು ಮಾರಾಟ ಮಾಡಲು ಕ್ರಮವನ್ನು ಕೈಗೊಳ್ಳುವುದಕ್ಕೆ ಮುಂಚೆ ಅಥವಾ ಅದೇ ಸಮಯದಲ್ಲಿ ಬಾಕಿ ಇರುವ ಮೊತ್ತವನ್ನು ಭೂ ಕಂದಾಯದ ಬಾಕಿಯಂತೆ ವಸೂಲು ಮಾಡಲು ವ್ಯವಹರಣೆಗಳನ್ನು ಕೈಗೊಳ್ಳಬೇಕೆಂದು ನಿರ್ದೇಶಿಸುವುದು ಅವಶ್ಯಕವೆಂದು ಅಭಿಪ್ರಾಯಪಟ್ಟರೆ, ಅದು ಕಾರಣಗಳನ್ನು ದಾಖಲಿಸಿ ಹಾಗೆ ಮಾಡಬಹುದು.

(ಬಿ) ಸ್ಥಿರಸ್ವತ್ತಿನ ಅಡಮಾನ, ಋಣಭಾರ ಅಥವಾ ಇತರ ಪೂರ್ವಾಧಿ ಇರುವ ಪ್ರತಿಯೊಂದು ಸಂದರ್ಭದಲ್ಲಿ, ಸಂದರ್ಭಾನುಸಾರ, ಅಂಥ ಸ್ವತ್ತನ್ನು ಅಥವಾ ಅದರಲ್ಲಿ ಬಾಕಿದಾರನು ಹೊಂದಿರುವ ಹಿತಾಸಕ್ತಿಯನ್ನು, ಆ ವ್ಯಕ್ತಿಯು ಸಂದಾಯ ಮಾಡಬೇಕಾದ ಬಾಕಿ ಮೊತ್ತಕ್ಕಾಗಿ, ಭೂ ಕಂದಾಯದ ಬಾಕಿಯಾಗಿದ್ದರೆ ಹೇಗೋ ಹಾಗೆ ಅದನ್ನು ವಸೂಲಿ ಮಾಡುವ ವ್ಯವಹರಣೆಗಳಲ್ಲಿ ಮೊದಲು ಅದನ್ನು ಮಾರಾಟ ಮಾಡತಕ್ಕದ್ದು, ಮತ್ತು ಬಾಕಿ ಇರುವ ಇಡೀ ಮೊಬಲಗನ್ನು ಸೂಕ್ತ ಕಾಲದೊಳಗೆ ಮೊದಲು ಹೇಳಿದ ಕಾರ್ಯವಿಧಾನದ ಮೂಲಕ ವಸೂಲು ಮಾಡಲು ಸಾಧ್ಯವಿಲ್ಲವೆಂದು ಜಿಲ್ಲಾಧಿಕಾರಿಯು ಪ್ರಮಾಣೀಕರಿಸಿದ ತರುವಾಯ ಮಾತ್ರ ಯಾವುದೇ ಇತರ ವ್ಯವಹರಣೆಗಳನ್ನು ಕೈಗೊಳ್ಳಬಹುದು.

5. ನಿಯಮವನ್ನು ರಚಿಸಲು ಅಧಿಕಾರ.- ರಾಜ್ಯ ಸರ್ಕಾರವು, ಪೂರ್ವ ಪ್ರಕಟಣೆಯ ತರುವಾಯ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವ ಸಲುವಾಗಿ ನಿಯಮಗಳನ್ನು ರಚಿಸಬಹುದು.

(2) ಈ ಪ್ರಕರಣದ ಮೇರೆಗೆ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ, ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಒಂದಾದಮೇಲೊಂದರಂತೆ ಅನುಕ್ರಮವಾಗಿ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಇಡತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನದ ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಅಧಿವೇಶನದ ನಿಕಟೋತ್ತರದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಪರಿಣಾಮಕಾರಿಯಾಗಿರತಕ್ಕದ್ದಲ್ಲ; ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟುಮಾಡತಕ್ಕದ್ದಲ್ಲ.

6. ನಿರಸನ ಮತ್ತು ಸಿಂಧುತ್ವ, ಇತ್ಯಾದಿ.- (1) ಕರ್ನಾಟಕ ಸಾರ್ವಜನಿಕ ಹಣ (ಬಾಕಿ ವಸೂಲಿ) ಅಧಿನಿಯಮ, 1976 (ಕರ್ನಾಟಕ ಅಧಿನಿಯಮ ಸಂಖ್ಯೆ 1976ರ 79) ಇದನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಯಾವುದೇ ನ್ಯಾಯಾಲಯದ ಯಾವುದೇ ತೀರ್ಪು, ಡಿಕ್ರಿ ಅಥವಾ ಆದೇಶವೇನೇ ಇದ್ದರೂ, ಕರ್ನಾಟಕ ಸಾರ್ವಜನಿಕ ಹಣ (ಬಾಕಿ ವಸೂಲಿ) ಅಧಿನಿಯಮ, 1976ರ ಮೇರೆಗೆ (ಇಲ್ಲಿ ಇನ್ನು ಮುಂದೆ 1976ರ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) ಮಾಡಿದ ಯಾವುದೇ ಕಾರ್ಯವು ಅಥವಾ ಕೈಗೊಂಡ ಯಾವುದೇ ಕ್ರಮವು (ಯಾವುದೇ ಮೊಬಲಗನ್ನು ವಸೂಲು ಮಾಡಲು ಮಾಡಿದ ನಿಯಮಗಳು ಅಥವಾ ಆದೇಶಗಳು ಹೊರಡಿಸಿದ ನೋಟೀಸುಗಳು ಅಥವಾ ಪ್ರಮಾಣ

ಪತ್ರಗಳು ಮತ್ತು ಪ್ರಾರಂಭಿಸಿದ ಕ್ರಮಗಳೂ ಸೇರಿದಂತೆ) ಅಥವಾ ಮಾಡಲಾಗಿದೆಯೆಂದು ಅಥವಾ ಕೈಗೊಳ್ಳಲಾಗಿದೆಯೆಂದು ತಾತ್ಪರ್ಯವಾಗುವ ಯಾವುದೇ ಕಾರ್ಯವು ಅಥವಾ ಕ್ರಮವು, ಅಂಥ ಕಾರ್ಯವನ್ನು ಅಥವಾ ಕ್ರಮವನ್ನು ಈ ಅಧಿನಿಯಮದ ಸಂಬಾದಿ ಉಪಬಂಧಗಳ ಮೇರೆಗೆ ಮಾಡಲಾಗಿದ್ದರೆ ಅಥವಾ ಕೈಗೊಳ್ಳಲಾಗಿದ್ದರೆ ಹೇಗೋ ಹಾಗೆ ಸಿಂಧುವಾಗಿದೆಯೆಂದು ಅಥವಾ ಪರಿಣಾಮಕಾರಿಯಾಗಿದೆಯೆಂದು ಭಾವಿಸತಕ್ಕದ್ದು. ಈ ಅಧಿನಿಯಮದ 1ನೇ ಪ್ರಕರಣದ (3)ನೇ ಉಪಪ್ರಕರಣದ ಮೇರೆಗೆ 1976ರ ಜೂನ್ 15ನೇ ದಿನದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ 1976ರ ಅಧಿನಿಯಮವನ್ನು ರಾಷ್ಟ್ರಪತಿಯವರ ಸಮ್ಮತಿಗಾಗಿ ಕಾಯ್ದಿರಿಸಿಲ್ಲದಿರುವುದರಿಂದ ಮತ್ತು ರಾಷ್ಟ್ರಪತಿಯವರ ಸಮ್ಮತಿ ಪಡೆದಿಲ್ಲದಿರುವುದರಿಂದ ಸದರಿ ಅಧಿನಿಯಮವು ಸಂವಿಧಾನ ಬಾಹಿರವಾಗಿದೆ ಎಂಬ ಅಥವಾ ಶೂನ್ಯವಾಗಿದೆ ಎಂಬ ಕಾರಣದ ಮೇಲೆ 1976ರ ಅಧಿನಿಯಮದ ಮೇರೆಗೆ ಮಾಡಿದ ಅಥವಾ ಕೈಗೊಂಡ ಅಥವಾ ಮಾಡಲಾಗಿದೆಯೆಂದು ಅಥವಾ ಕೈಗೊಳ್ಳಲಾಗಿದೆಯೆಂದು ತಾತ್ಪರ್ಯವಾಗುವ ಯಾವುದೇ ಕಾರ್ಯದ ಅಥವಾ ಕ್ರಮದ ಸಿಂಧುತ್ವವನ್ನು ಪ್ರಶ್ನಿಸಿ ಯಾವುದೇ ನ್ಯಾಯಾಲಯದಲ್ಲಿ ಯಾವುದೇ ದಾವೆಯನ್ನು ಅಥವಾ ಇತರ ಕಾನೂನು ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ ಅಥವಾ ಮುಂದುವರೆಸತಕ್ಕದ್ದಲ್ಲ.

The above translation of the Karnataka Public Moneys (Recovery of Dues) Act, 1979 (Karnataka Act 16 of 1980) shall be authoritative text in the Kannada Language under section 5A of the Karnataka Official Language Act, 1963.

GOVERNOR OF KARNATAKA

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ. ಬೋರೇಗೌಡ

ಪಿ.ಆರ್. 524

ಸರ್ಕಾರದ ಕಾರ್ಯದರ್ಶಿ,

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಕಾಇ 4 ಕಾಬಾಸೇ 2009, ಬೆಂಗಳೂರು, ದಿನಾಂಕ:25ನೇ ಆಗಸ್ಟ್ 2009

ಇಂಡಿಯನ್ ಬಾಯ್ಲರ್ಸ್ ಕಾಯ್ದೆ, 1923 ಕೇಂದ್ರ ಕಾಯ್ದೆ, 1923ರ ಸಂಖ್ಯೆ (5)ರ ಕಲಂ 29 ಮತ್ತು ಬಾಯ್ಲರುಗಳ ಅಟೆಂಡೆಂಟ್ಸ್ ನಿಯಮಗಳು 1962ರ ನಿಯಮಗಳು 9 (1), (2) ಮತ್ತು (10)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ ಕರ್ನಾಟಕ ಸರ್ಕಾರವು ಈ ಕೆಳಕಂಡವರನ್ನೊಳಗೊಂಡ ಬಾಯ್ಲರ್ ಅಟೆಂಡೆಂಟ್‌ಗಳ ಪರೀಕ್ಷಾ ಮಂಡಳಿಯನ್ನು ಮೂರು ವರ್ಷಗಳ ಅವಧಿಯವರೆಗೆ ರಚಿಸಿ ಆದೇಶಿಸಿದೆ.

ಕ್ರ.ಸಂ	ಹೆಸರು ಮತ್ತು ವಿಳಾಸ	ಪದನಾಮ
1	ನಿರ್ದೇಶಕರು, ಕಾರ್ಖಾನೆ ಮತ್ತು ಬಾಯ್ಲರುಗಳ ಇಲಾಖೆ, ಕಾರ್ಮಿಕ ಭವನ, 2ನೇ ಮಹಡಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು–29	ಪದನಿಮಿತ್ತ ಅಧ್ಯಕ್ಷರು
2	ಬಾಯ್ಲರುಗಳ ಸಹಾಯಕ ನಿರ್ದೇಶಕರು, ಬಾಯ್ಲರ್ ಟೆಸ್ಟಿಂಗ್ ಅಂಡ್ ಎಕ್ಸಾಮಿನೇಷನ್ ಸೆಲ್, ಕಾರ್ಖಾನೆ ಮತ್ತು ಬಾಯ್ಲರುಗಳ ಇಲಾಖೆ, ಬೆಂಗಳೂರು	ಸದಸ್ಯ ಕಾರ್ಯದರ್ಶಿ
3	ಶ್ರೀ ಸುರೇಂದ್ರ ಕುಮಾರ್ ವರ್ಮಾ, ಅಸೋಸಿಯೇಟ್ ವೈಸ್ ಪ್ರೆಸಿಡೆಂಟ್ (ಇಂಜಿನಿಯರಿಂಗ್), ಮೆ: ಜುಬಿಲೆಂಟ್ ಆರ್ಗೋನೋಸಿಸ್ ಲಿ., ನಂ. 56, ಇಂಡಸ್ಟ್ರಿಯಲ್ ಏರಿಯಾ, ನಂಜನಗೂಡು, ಮೈಸೂರು –571302.	ಸದಸ್ಯರು
4	ಶ್ರೀ ಟಿ.ವಿ. ವಿಶ್ವನಾಥ್, ಮ್ಯಾನೇಜಿಂಗ್ ಪಾರ್ಟ್ನರ್, ಮೆ:ವಿ.ಆರ್. ಅಂಡ್ ಬ್ರದರ್ಸ್, ಪ್ಲಾಟ್ ನಂ. 17, ಮೇಟಗಳ್ಳಿ, ಕೆ.ಆರ್.ಎಸ್. ರಸ್ತೆ ಮೈಸೂರು–570016.	ಸದಸ್ಯರು
5	ಶ್ರೀ ಎಲ್.ಎನ್. ಹನುಮಂತ ರೆಡ್ಡಿ, ಡೆಪ್ಯೂಟಿ ಮ್ಯಾನೇಜರ್, ಬೆಂಗಳೂರು ಡೈರಿ, ಡಾ. ಎಂ.ಹೆಚ್. ಮರಿಗೌಡ ರಸ್ತೆ, ಬೆಂಗಳೂರು–560029	ಸದಸ್ಯರು

ಕ್ರ.ಸಂ	ಹೆಸರು ಮತ್ತು ವಿಳಾಸ	ಪದನಾಮ
6	ಶ್ರೀ ಎಂ.ವಿ. ಕಾಂತರಾಜು, ನಂ. 17, 2ನೇ ಅವಿನ್ಯೂ, ಪೋರ್ಟ್ ಕಾಲೋನಿ, ಹೊಸಬೆಟ್ಟು, ಕುಲಾಯ್ ಪೋಸ್ಟ್, ಮಂಗಳೂರು–575026	ಸದಸ್ಯರು
7	ಶ್ರೀ ವಿ. ಗೋವಿಂದರಾಜು, ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಆಪರೇಷನ್ (ಸ್ಟೀಂ ಪ್ಲಾಂಟ್), ನಂ.ಸಿ–5, ಹಿಂಡಾಕೊ ಕಾಲೋನಿ, ನೆಹರು ನಗರ ಪೋಸ್ಟ್, ಬೆಳಗಾಂ–590010.	ಸದಸ್ಯರು
8	ಶ್ರೀ ಪ್ರತಾಪ್ ಆರ್. ನಂ.ಸಿ–16/5, ಗ್ರಾಸಿಂ ಸ್ಟಾಫ್ ಕಾಲೋನಿ, ಕುಮಾರಪಟ್ಟಣಂ–581123, ಹಾವೇರಿ ಜಿಲ್ಲೆ	ಸದಸ್ಯರು
9	ಶ್ರೀ ಎಂ.ವಿ. ಶೇಷಾದ್ರಿ, ಡೆಪ್ಯೂಟಿ ಜನರಲ್ ಮ್ಯಾನೇಜರ್ (ಪ್ರೊಡಕ್ಷನ್ ಅಂಡ್ ಯುಟಿಲಿಟೀಸ್), ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್ ಲಿಮಿಟೆಡ್, ಬೆಂಗಳೂರು–560055.	ಸದಸ್ಯರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಶಿವರಾಮ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ

ಕಾರ್ಮಿಕ ಇಲಾಖೆ (ಕಾರ್ಖಾನೆ ಮತ್ತು ಬಾಯ್ಲರುಗಳು)

ಪಿ.ಆರ್. 525

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 37 ರೇಉನಿ 2009, ಬೆಂಗಳೂರು, ದಿನಾಂಕ: 3ನೇ ಸೆಪ್ಟೆಂಬರ್, 2009

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಆರ್ಟಿಕಲ್ ಆಫ್ ಅಸೋಸಿಯೇಷನ್ ಆರ್ಟಿಕಲ್ 8(ಎ)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ಪರಮೇಶ್ ಪಾಂಡೆ, ಭಾಆಸೇ., ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಇವರನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಗೆ ನಿರ್ದೇಶಕರನ್ನಾಗಿ ಶ್ರೀ ಜಿ.ಎಲ್. ಚಂದ್ರಶೇಖರಯ್ಯ, ಭಾಆಸೇ., ಹಿಂದಿನ ವ್ಯವಸ್ಥಾಪಕ ನಿರ್ದೇಶಕರು ಇವರ ಸ್ಥಾನದಲ್ಲಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಭಾರತಿ ಆರ್. ನಾಯಕ್

ಪೀಠಾಧಿಕಾರಿ (ರೇಷ್ಮೆ)

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಪಿ.ಆರ್. 526

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ ಸಂಖ್ಯೆ: ನಅಇ 125 ಎಂಎಲ್ಆರ್ 2008 (C–36), ಬೆಂಗಳೂರು, ದಿನಾಂಕ: 29ನೇ ಆಗಸ್ಟ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 352 (1b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸಿದ್ದಾಪುರ ಪಟ್ಟಣ ಪಂಚಾಯಿತಿಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಸುರೇಶ ತಿಮ್ಮಪ್ಪ ನಾಯ್ಕ, ರವೀಂದ್ರನಗರ, ಸಿದ್ದಾಪುರ (ಉ.ಕ)
2. ಶ್ರೀಮತಿ ರೇಣುಕಾ ಬಸವರಾಜ ಮಡಿವಾಳ, ಕೊಂಡ್ಲಿ, ಸಿದ್ದಾಪುರ (ಉ.ಕ)
3. ಶ್ರೀ ಚಂದ್ರಶೇಖರ ಹನುಮಂತಪ್ಪ, ಲಮಾಣಿ ಹಾಳದಕಟ್ಟಾ, ಕೊಂಡ್ಲಿ, ಸಿದ್ದಾಪುರ (ಉ.ಕ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಿ.ಆರ್. ರವೀಂದ್ರ

ಸರ್ಕಾರದ ಅಧೀನ ಕಾರ್ಯದರ್ಶಿ

ನಗರಾಭಿವೃದ್ಧಿ ಇಲಾಖೆ

ಪಿ.ಆರ್. 527

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಇ 201 ಎಂಆರ್ಇ 2009, ಬೆಂಗಳೂರು, ದಿನಾಂಕ: 31ನೇ ಆಗಸ್ಟ್, 2009

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಹೊಸಪೇಟೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ.

ಕ್ರ.ಸಂ	ಸದಸ್ಯರ ಹೆಸರು
1	ಶ್ರೀ ಪಿ. ಬಾಬು ತಂದೆ, ಶ್ರೀ ಪಿ. ವೆಂಕಟಪತಿ, ಕಮಲಾಪುರ, ಹೊಸಪೇಟೆ ತಾಲ್ಲೂಕು. ಬಳ್ಳಾರಿ ಜಿಲ್ಲೆ
2	ಶ್ರೀಮತಿ ಉಷಾ ಕೋಂ ಶ್ರೀ ಪಂಪಾಪತಿ, 31ನೇ ವಾರ್ಡ್, ನೆಹರೂ ಕಾಲೋನಿ, ಹೊಸಪೇಟೆ ನಗರ, ಬಳ್ಳಾರಿ ಜಿಲ್ಲೆ
3	ಶ್ರೀ ಬಿ. ರಾಘವೇಂದ್ರ ಶೆಟ್ಟಿ, ತಂದೆ ಶ್ರೀ ಬಿ. ಶೀನಪ್ಪ ಶೆಟ್ಟಿ ಜೆ.ಪಿ.ನಗರ, ವಾಸವಿ ಹೈಸ್ಕೂಲ್ ಹತ್ತಿರ, ಹೊಸಪೇಟೆ ನಗರ, ಬಳ್ಳಾರಿ ಜಿಲ್ಲೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಿ.ಕೆ. ವಾಸುದೇವಮೂರ್ತಿ

ಪಿ.ಆರ್. 528

ಸರ್ಕಾರದ ಅಧೀನ ಕಾರ್ಯದರ್ಶಿ

ಸಹಕಾರ ಇಲಾಖೆ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ತಿದ್ದೋಲೆ ಸಂಖ್ಯೆ: ಸಿಆಸುಇ 312 ಸಅಸೇ 2009, ಬೆಂಗಳೂರು, ದಿನಾಂಕ: 24ನೇ ಆಗಸ್ಟ್ , 2009

ಅಧಿಸೂಚನೆ ಸಂಖ್ಯೆ ಸಿಆಸುಇ 596 ಸಅಸೇ 2007, ದಿನಾಂಕ:20.5.2009ರಲ್ಲಿ 4ನೇ ಸಾಲಿನಲ್ಲಿ "ಕರ್ನಾಟಕ ನಾಗರೀಕ ಸೇವಾ (ಆರ್‌ಪಿಪಿ) ನಿಯಮಾವಳಿ 1957 ನಿಯಮ 2(ಎ)" ಎಂಬುದರ ಬದಲಾಗಿ "ಕರ್ನಾಟಕ ನಾಗರೀಕ ಸೇವಾ (ಆರ್‌ಪಿಪಿ) ನಿಯಮಾವಳಿ 1978 ರ ನಿಯಮ 2(1)(ಎ)" ಎಂದು ತಿದ್ದಿ ಓದಿಕೊಳ್ಳತಕ್ಕದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಎಸ್. ಶಿವರಾಮ್

ಪಿ.ಆರ್. 529

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ ಸಂಖ್ಯೆ: ನಅಇ 125 ಎಂಎಲ್ ಆರ್ 2008 (B-61), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 11(1)(**b**) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಶ್ರೀರಂಗಪಟ್ಟಣ ಪುರಸಭೆಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಎನ್. ಲಕ್ಷ್ಮೀನಾರಾಯಣ ಬಿನ್ ಎ.ಆರ್. ನಾಗರಾಜು, ಕೇರಾಫ್ ರಾಮಕೃಷ್ಣ ನಿವೃತ್ತ ಶಿಕ್ಷಕರು, ಕಾಳಮ್ಮಗುಡಿ ಬೀದಿ, ಶ್ರೀರಂಗಪಟ್ಟಣ
2. ಶ್ರೀ ಎಸ್. ಶೇಷಾದ್ರಿ ಬಿನ್ ಶಂಕರ್, ಬಂಡಿಕೇರಿ ಬೀದಿ, ಶ್ರೀರಂಗಪಟ್ಟಣ
3. ಶ್ರೀಮತಿ ಮಮತ ಕೋಂ ಮಹದೇವಸ್ವಾಮಿ, ಪೇಟೆ ಬೀದಿ, ಗಂಜಾಂ, ಶ್ರೀರಂಗಪಟ್ಟಣ
4. ಶ್ರೀ ಚೆಲುವರಾಜು ಬಿನ್ ವೈರಮುಡಿಯ್ಯ, ಕರೀಘಟ್ಟ ರಸ್ತೆ, ಗಂಜಾಂ, ಶ್ರೀರಂಗಪಟ್ಟಣ
5. ಶ್ರೀ ಆರುಗ್ಗ ಉ. ಕಿಶೋರ್ ಬಿನ್ ಕುಪ್ಪಣ್ಣ, ಎಸ್. 1616, ಗಾಂಧಿನಗರ, ಶ್ರೀರಂಗಪಟ್ಟಣ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಿ.ಆರ್. ರವೀಂದ್ರ

ಪಿ.ಆರ್. 530

ಸರ್ಕಾರದ ಅಧೀನ ಕಾರ್ಯದರ್ಶಿ

ನಗರಾಭಿವೃದ್ಧಿ ಇಲಾಖೆ

ಅಧಿಸೂಚನೆ

ಸಂಖ್ಯೆ: ನಅಇ 125 ಎಂಎಲ್ಆರ್ 2008 (B-63), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 11(1)(b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮಾಗಡಿ ಪುರಸಭೆಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಎಂ.ಆರ್. ರಾಘವೇಂದ್ರ ಬಿನ್ ವರದರಾಜು, ನೇಯ್ಗೆ ಬೀದಿ, ವಾರ್ಡ್ ನಂ. 17, ಮಾಗಡಿ, ರಾಮನಗರ ಜಿಲ್ಲೆ
2. ಶ್ರೀಮತಿ ಜಯಮ್ಮ ಕೋಂ ಅಶ್ವತ್ಥ್, ಕೊಟ್ಟಣಗೆರೆ ಬೀದಿ, ವಾರ್ಡ್ ನಂ. 20, ಕೆಂಪೇಗೌಡ ಸರ್ಕಲ್, ಮಾಗಡಿ, ರಾಮನಗರ ಜಿಲ್ಲೆ
3. ಶ್ರೀ ಹೆಚ್.ಕೆ. ಲೋಕೇಶ್ ಬಿನ್ ಹೆಚ್.ಜಿ. ಕೃಷ್ಣಪ್ಪ, ಜವರಪ್ಪ ಗಲ್ಲಿ, ಹೊಸಪೇಟೆ, ಮಾಗಡಿ, ರಾಮನಗರ ಜಿಲ್ಲೆ
4. ಶ್ರೀ ರೇಣುಕಪ್ಪ ಬಿನ್ ಲೇ. ಪರ್ವತಪ್ಪ, ಅರಳೇಪೇಟೆ, 3ನೇ ಅಡ್ಡರಸ್ತೆ, ಮಾಗಡಿ, ರಾಮನಗರ ಜಿಲ್ಲೆ.
5. ಶ್ರೀ ಶಶಿಧರ ಬಿನ್ ವೆಂಕಟೇಶಪ್ಪ, ಸೋಮೇಶ್ವರ ಕಾಲೋನಿ, ವಾರ್ಡ್ ನಂ. 14, ಮಾಗಡಿ, ರಾಮನಗರ ಜಿಲ್ಲೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ.ಆರ್. ರವೀಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 531

ಅಧಿಸೂಚನೆ

ಸಂಖ್ಯೆ: ನಅಇ 125 ಎಂಎಲ್ ಆರ್ 2008 (C-28), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 352(1b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತುರುವೇಕೆರೆ ಪಟ್ಟಣ ಪಂಚಾಯಿತಿಗೆ ಸರ್ಕಾರವು ಅಧಿಸೂಚನೆ ಸಂಖ್ಯೆ:ನಅಇ 125 ಎಂಎಲ್ಆರ್ 2008 (**C-28**) ದಿನಾಂಕ:28.5.2009ರಲ್ಲಿ 3 ಜನರನ್ನು ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿ ಹೊರಡಿಸಿರುವ ಆದೇಶವನ್ನು ರದ್ದುಪಡಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಗುಬ್ಬಿ ಪಟ್ಟಣ ಪಂಚಾಯಿತಿಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಆರ್. ನರಸಿಂಹಮೂರ್ತಿ ಬಿನ್ ಡಿ. ರಂಗಣ್ಣ, ಹೊಸ ಎ.ಕೆ. ಕಾಲೋನಿ, ಗುಬ್ಬಿ
2. ಶ್ರೀ ಜಿ.ಆರ್. ಬಸವರಾಜು ಬಿನ್ ಜಿ.ಪಿ. ರಾಮಲಿಂಗಪ್ಪ, ಸಿಡಿಲು ಬಸವೇಶ್ವರನಗರ, ಗುಬ್ಬಿ
3. ಶ್ರೀಮತಿ ತಾರಾಮಣಿ ಕೋಂ ಜಿ.ಎಚ್. ಕುಮಾರ್, ಜ್ಯೋತಿನಗರ, ಗುಬ್ಬಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ.ಆರ್. ರವೀಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 532

ಅಧಿಸೂಚನೆ

ಸಂಖ್ಯೆ: ನಅಇ 125 ಎಂಎಲ್ಆರ್ 2008 (C-34), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 352(1b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಗುರುಮಿಠಕಲ್ ಪಟ್ಟಣ ಪಂಚಾಯಿತಿಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ವಿಶ್ವನಾಥ ಬಿನ್ ನರಪ್ಪ, ಗುರುಮಿಠಕಲ್.
2. ಶ್ರೀಮತಿ ರುಕ್ಮಿಣಿ ಕೋಂ ಭೀಮಾ ನಿರಾಟೆ ಜಣಿ, ಗುರುಮಿಠಕಲ್.
3. ಶ್ರೀ ಹುಸೇನಪ್ಪ ಬಿನ್ ಶಂಕರಪ್ಪ, ಗುರುಮಿಠಕಲ್.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ.ಆರ್. ರವೀಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 533

ಅಧಿಸೂಚನೆ

ಸಂಖ್ಯೆ: ನಅಇ 125 ಎಂಎಲ್ಆರ್ 2008 (C-35), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 352(1b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಲೂರು ಪಟ್ಟಣ ಪಂಚಾಯಿತಿಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಕರಿಯಯ್ಯ ಬಿನ್ ವೀರಭದ್ರಯ್ಯ, ಅಂಬೇಡ್ಕರ್ ಕಾಲೋನಿ, ಆಲೂರು
2. ಶ್ರೀ ಶಿವಮೂರ್ತಿ ಬಿನ್ ಚಿಕ್ಕೇಗೌಡ, ಮರಸು ಕೊಪ್ಪಲ್, ಆಲೂರು ಪೋಸ್ಟ್
3. ಶ್ರೀ ಎ.ಹೆಚ್. ಲಕ್ಷ್ಮಣ್ ಬಿನ್ ಹನುಮೇಗೌಡ, ಹಳೇ ಆಲೂರು, ಆಲೂರು ಪೋಸ್ಟ್

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ.ಆರ್. ರವೀಂದ್ರ
ಪಿ.ಆರ್. 534 ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಅಧಿಸೂಚನೆ ಸಂಖ್ಯೆ: ನಅಇ 125 ಎಂಎಲ್ಆರ್ 2008 (A-32), ಬೆಂಗಳೂರು, ದಿನಾಂಕ: 7ನೇ ಸೆಪ್ಟೆಂಬರ್, 2009

ಕರ್ನಾಟಕ ಪುರಸಭೆ ಕಾಯ್ದೆ 1964ರ ಪ್ರಕರಣ 11(1)(b) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಯಾದಗಿರಿ ನಗರಸಭೆಗೆ ಸದಸ್ಯರನ್ನಾಗಿ ಸರ್ಕಾರವು ನಾಮ ನಿರ್ದೇಶನ ಮಾಡಿದೆ.

1. ಶ್ರೀ ಸ್ವಾಮಿದೇವ್ ಬಿನ್ ಹನುಮಂತದಾಸನಕೇರಿ, ಅಂಬೇಡ್ಕರ್ ನಗರ, ಯಾದಗಿರಿ
2. ಶ್ರೀ ವಿನೋದ್ ಜೈನ್, ಗಾಂಧಿಚೌಕ ಮೈನ್ ರಸ್ತೆ, ಯಾದಗಿರಿ
3. ಶ್ರೀ ಅಂಬರೀಶ್ ಗಡ್ಡಿಮನಿ, ಬಸವೇಶ್ವರನಗರ, ಯಾದಗಿರಿ
4. ಶ್ರೀಮತಿ ವೀಣಾಮೋದಿ, ವೀರಶೈವ ಕಲ್ಯಾಣ ಮಂಟಪ, ಯಾದಗಿರಿ
5. ಶ್ರೀ ಪೀರು ಅಹಮದ್, ಕೊಲಿವಾಡ, ಯಾದಗಿರಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ.ಆರ್. ರವೀಂದ್ರ
ಪಿ.ಆರ್. 535 ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಅಧಿಸೂಚನೆ ಸಂಖ್ಯೆ: ನಅಇ 194 ಬೆಂರೂಪ್ರಾ 2009, ಬೆಂಗಳೂರು, ದಿನಾಂಕ: 10ನೇ ಸೆಪ್ಟೆಂಬರ್, 2009

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4(ಸಿ) ಉಪ ಪ್ರಕರಣದ 3(i) ಮತ್ತು (iv) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಕಂಡವರನ್ನು ನೆಲಮಂಗಲ ಯೋಜನಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸದಸ್ಯರನ್ನಾಗಿ ಸರ್ಕಾರದ ಇಚ್ಛಾನುಸಾರ ಅಥವಾ ಮೂರು ವರ್ಷಗಳ ಅವಧಿಯವರೆಗೆ ಇವುಗಳಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ನಾಮ ನಿರ್ದೇಶನ ಮಾಡಲಾಗಿದೆ.

ಕ್ರ.ಸಂ	ಹೆಸರು ಮತ್ತು ವಿಳಾಸ	ಪದನಾಮ
1	ಶ್ರೀ ಆನಂದ್ ಕೆ.ಪಿ. ಬಿನ್ ಪುಟ್ಟಯ್ಯ, ಮಾಜಿ ಗ್ರಾ.ಪಂ. ಅಧ್ಯಕ್ಷರು, ಕನಕೇನಹಳ್ಳಿ, ಎಣ್ಣೆಗೆರೆ ಅಂಚೆ, ಸೋಲೂರು ಹೋಬಳಿ	ಅಧ್ಯಕ್ಷರು
2.	ಜಿ. ನಾಗರಾಜು ಬಿನ್ ಚಿಕ್ಕಗಂಗಬೈರಯ್ಯ, ನರಸೀಪುರ ಅಂಚೆ, ಸೋಂಪುರ ಹೋಬಳಿ	ಸದಸ್ಯರು
3	ಶ್ರೀ ಮಂಜುನಾಥ್ ನಂ. 67, 1ನೇ ಮುಖ್ಯರಸ್ತೆ, ಸದಾಶಿವನಗರ, ನೆಲಮಂಗಲ	ಸದಸ್ಯರು
4.	ಶ್ರೀ ಡಿ. ಚಿಕ್ಕಣ್ಣ ಬಿನ್ ದೊಡ್ಡಯ್ಯ, ಯೆಂಟಗಾನಹಳ್ಳಿ, ಮಹದೇವಪುರ, ಕಸಬಾ ಹೋಬಳಿ	ಸದಸ್ಯರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಪಿ.ಆರ್. 536 ಸಿ.ಟಿ. ನಾರಾಯಣಸ್ವಾಮಿ
ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.

KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಅಕ್ಟೋಬರ್ ೧, ೨೦೦೯ (ಆಶ್ವಯುಜ ೯, ಶಕ ವರ್ಷ ೧೯೩೧)	ಸಂಚಿಕೆ ೩೯

ಭಾಗ - ೬

ಬೆಂಗಳೂರು ವಿಭಾಗಕ್ಕೆ ಮತ್ತು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು.

ವಿಶೇಷ ಭೂಸ್ವಾಧೀನಾಧಿಕಾರಿಗಳ ಕಾರ್ಯಾಲಯ, ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ, (ದಾವಣಗೆರೆ ಜಿಲ್ಲೆ)

ಕರ್ನಾಟಕ ಭೂಸ್ವಾಧೀನ ಕಾಯ್ದೆ 1894 ರ ಕಲಂ.16(2) ಅಡಿ (ಕಲಂ.17(4)ರಲ್ಲಿ ತಿಳಿಸಲಾದಂತೆ)

(ರೈಲ್ವೆ ಮಾರ್ಗದ ಅಗಲೀಕರಣಕ್ಕಾಗಿ/ಜೆ.ಎಂ.ಸಿ.ಹೆಚ್ಚುವರಿಗಾಗಿ) ಅಧಿಸೂಚನೆ

ಸಂ.ಕಂ/ವಿಭೂಸ್ವಾ/ಕೊಹರೈಲ್ವೆ/ಎಲ್‌ಎಆರ್/01/2005-06 (ಭಾಗ-2), ದಿನಾಂಕ: 7ನೇ ಆಗಸ್ಟ್ 2009

ಕರ್ನಾಟಕ ಸರ್ಕಾರದವರು 1961ನೇ ಸಾಲಿನ ಕರ್ನಾಟಕ ಅಧಿನಿಯಮ ಕ್ರಮ ಸಂಖ್ಯೆ 16 ರಲ್ಲಿ ತಿದ್ದುಪಡಿಯಾದ 1894ನೇ ಸಾಲಿನ ಭೂ ಸಂಗ್ರಹಣಾ ಅಧಿನಿಯಮದ (1894ನೇ ಸಾಲಿನ ಕೇಂದ್ರ ಅಧಿನಿಯಮ 1ರ ಪ್ರಕರಣ 16(2)ರ ಮೇರೆಗೆ ಈ ಮೂಲಕ ಅನುಸೂಚಿಯಡಿ ಸೂಚಿಸಲಾದ ಜಮೀನುಗಳನ್ನು ಒಂದು ಸಾರ್ವಜನಿಕ ಉದ್ದೇಶಕ್ಕಾಗಿ, ಅಂದರೆ ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣಕ್ಕಾಗಿ ಅಧಿಕೃತವಾಗಿ ಸದರಿ ಭೂಸ್ವಾಧೀನ ಅಧಿನಿಯಮದ ಪ್ರಕರಣ 16(1)ರಂತೆ ವಶಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಹಾಗೂ ನೈರುತ್ಯ ರೈಲ್ವೆ ಇಲಾಖೆಯ ಪರವಾಗಿ ಭೂಸ್ವಾಧೀನಪಡಿಸಲಾಗಿದೆ.

ಅನುಸೂಚಿ

ಜಿಲ್ಲೆ: ದಾವಣಗೆರೆ ತಾಲ್ಲೂಕು: ಹರಿಹರ ಹೋಬಳಿ: ಕಸಬಾ ಗ್ರಾಮ: ಅಮರಾವತಿ

ಕ್ರ. ಸಂ.	ಸರ್ವೆ ನಂಬರು	ತರಹೆ	ವಿಸ್ತೀರ್ಣ ಎಕರೆ-ಗುಂಟೆ	ಆಕಾರ ರೂ-ಪೈ	ವಶಪಡಿಸಿಕೊಂಡ ದಿನಾಂಕ
1.	24/3B ಪೈಕಿ	ಖುಷ್ಕಿ	1-21 1/2	3-31	11.04.2007
2.	25/3 ಪೈಕಿ	ಖುಷ್ಕಿ	0-39	1-81	11.04.2007
3.	27/3 ಪೈಕಿ	ಖುಷ್ಕಿ	0-09 1/2	0-54	11.04.2007
4.	28/2 ಪೈಕಿ	ಖುಷ್ಕಿ	0-10	0-59	11.04.2007
5.	29/3 ಪೈಕಿ	ಖುಷ್ಕಿ	0-03	0-15	11.04.2007
6.	29/2 ಪೈಕಿ	ಖುಷ್ಕಿ	0-04 1/2	0-25	11.04.2007
7.	30 ಪೈಕಿ	ಖುಷ್ಕಿ	0-01	0-56	11.04.2007

ಕ್ರ. ಸಂ.	ಸರ್ವೆ ನಂಬರು	ತರಹೆ	ವಿಸ್ತೀರ್ಣ ಎಕರೆ-ಗುಂಟೆ	ಆಕಾರ ರೂ-ಪೈ	ವಶಪಡಿಸಿಕೊಂಡ ದಿನಾಂಕ
8.	33 ಪೈಕಿ	ಖುಷ್ಕಿ	0-22	0-28	11.04.2007
9.	34/1 ಪೈಕಿ	ಖುಷ್ಕಿ	0-01	0-02	11.04.2007
10.	34/2 ಪೈಕಿ	ಖುಷ್ಕಿ	0-10	0-37	11.04.2007
11.	35 ಪೈಕಿ	ಖುಷ್ಕಿ	0-39	1-81	11.04.2007
12.	41/2 ಪೈಕಿ	ಖುಷ್ಕಿ	0-15	0-54	11.04.2007
13.	41/1 ಪೈಕಿ	ಖುಷ್ಕಿ	0-16	0-35	11.04.2007
	ಒಟ್ಟು		**5-31 $^{1}/_{2}$**		

ಟಿ. ಮಲ್ಲಪ್ಪ

ಪಿ.ಆರ್. 370 ವಿಶೇಷ ಭೂಸ್ವಾಧೀನಾಧಿಕಾರಿಗಳು,

ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ.

ವಿಶೇಷ ಭೂಸ್ವಾಧೀನಾಧಿಕಾರಿಗಳ ಕಾರ್ಯಾಲಯ, ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ, (ದಾವಣಗೆರೆ ಜಿಲ್ಲೆ)

ಕರ್ನಾಟಕ ಭೂಸ್ವಾಧೀನ ಕಾಯ್ದೆ 1894 ರ ಕಲಂ.16(2) ಅಡಿ (ಕಲಂ.17(4)ರಲ್ಲಿ ಓದಲಾದಂತೆ)

(ರೈಲ್ವೆ ಮಾರ್ಗದ ಅಗಲೀಕರಣಕ್ಕಾಗಿ/ಜೆ.ಎಂ.ಪಿ.ಹೆಚ್ಚುವರಿಗಾಗಿ) ಅಧಿಸೂಚನೆ

ನಂ.ಕಂ/ವಿಭೂಸ್ವಾ/ಕೊಹರೈಲ್ವೆ/ಸಿಆರ್/02/2005-06 (ಭಾಗ-2), ದಿನಾಂಕ: 7ನೇ ಆಗಸ್ಟ್ 2009

ಕರ್ನಾಟಕ ಸರ್ಕಾರದವರು 1961ನೇ ಸಾಲಿನ ಕರ್ನಾಟಕ ಅಧಿನಿಯಮ ಕ್ರಮ ಸಂಖ್ಯೆ 16 ರಲ್ಲಿ ತಿದ್ದುಪಡಿಯಾದ 1894ನೇ ಸಾಲಿನ ಭೂ ಸಂಗ್ರಹಣ ಅಧಿನಿಯಮದ (1894ನೇ ಸಾಲಿನ ಕೇಂದ್ರ ಅಧಿನಿಯಮ 1ರ ಪ್ರಕರಣ 16(2)ರ ಮೇರೆಗೆ ಈ ಮೂಲಕ ಅನುಸೂಚಿಯಡಿ ಸೂಚಿಸಲಾದ ಜಮೀನುಗಳನ್ನು ಒಂದು ಸಾರ್ವಜನಿಕ ಉದ್ದೇಶಕ್ಕಾಗಿ, ಅಂದರೆ ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣಕ್ಕಾಗಿ ಅಧಿಕೃತವಾಗಿ ಸದರಿ ಭೂಸ್ವಾಧೀನ ಅಧಿನಿಯಮದ ಪ್ರಕರಣ 16(2)ರಂತೆ ವಶಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಹಾಗೂ ನೈರುತ್ಯ ರೈಲ್ವೆ ಇಲಾಖೆಯ ಪರವಾಗಿ ಭೂಸ್ವಾಧೀನಪಡಿಸಲಾಗಿದೆ.

ಅನುಸೂಚಿ

ಜಿಲ್ಲೆ: ದಾವಣಗೆರೆ **ತಾಲ್ಲೂಕು:** ದಾವಣಗೆರೆ **ಹೋಬಳಿ:** ಕಸಬಾ **ಗ್ರಾಮ:** ಕೋಡಿಹಳ್ಳಿ

ಕ್ರ. ಸಂ.	ಸರ್ವೆ ನಂಬರು	ತರಹೆ	ವಿಸ್ತೀರ್ಣ ಎಕರೆ-ಗುಂಟೆ	ಆಕಾರ ರೂ-ಪೈ	ವಶಪಡಿಸಿಕೊಂಡ ದಿನಾಂಕ
1.	35/1 ಪೈಕಿ	ಖುಷ್ಕಿ	0-09 $^{1}/_{4}$	0-52	9.04.2007
			0-09 $^{1}/_{4}$	0-52	
2.	40 ಪೈಕಿ	ಖುಷ್ಕಿ	0-09 $^{1}/_{2}$	0-52	9.04.2007
3.	41 ಪೈಕಿ	ಖುಷ್ಕಿ	0-09 $^{1}/_{2}$	0-52	9.04.2007
4.	42 ಪೈಕಿ	ಖುಷ್ಕಿ	0-02 $^{1}/_{2}$	0-14	9.04.2007
			0-03	0-14	
			0-03	0-14	
5	43 ಪೈಕಿ	ಖುಷ್ಕಿ	0-09 $^{1}/_{2}$	0-52	9.04.2007
6	45 ಪೈಕಿ	ಖುಷ್ಕಿ	0-04 $^{1}/_{2}$	0-18	9.04.2007
			0-03	0-12	
7	46 ಪೈಕಿ	ಖುಷ್ಕಿ	0-03	0-13	9.04.2007
			0-02 $^{1}/_{2}$	0-10	
			0-03	0-13	
8	48/2 ಪೈಕಿ	ಖುಷ್ಕಿ	0-05	0-30	9.04.2007
	ಒಟ್ಟು		**1-35**	**3-88**	

ಟಿ. ಮಲ್ಲಪ್ಪ

ಪಿ.ಆರ್. 371 ವಿಶೇಷ ಭೂಸ್ವಾಧೀನಾಧಿಕಾರಿಗಳು,

ಕೊಟ್ಟೂರು-ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ:ಸಿ.ಆರ್:8/09-10, ದಿನಾಂಕ: 20ನೇ ಆಗಸ್ಟ್ 2009

ಬೆಂಗಳೂರು ನಗರದ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ ಇರುವ 44 ಕುಟುಂಬಗಳ ಗುಡಿಸಲುಗಳು ಹಾಗೂ 237 ಜನಸಂಖ್ಯೆಯುಳ್ಳ ಕೊಳಚೆ ಪ್ರದೇಶ ಅತ್ಯಂತ ಅನಾರೋಗ್ಯ ಮತ್ತು ಮಾಲಿನ್ಯದಿಂದ ಕೂಡಿದ್ದು, ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಬೀದಿದೀಪ, ಚರಂಡಿ, ರಸ್ತೆ, ಶೌಚಾಲಯ ಇತ್ಯಾದಿಗಳಿಂದ ವಂಚಿತವಾಗಿದ್ದು ಹಾಗೂ 1993 ರಿಂದಲೂ ಕೊಳಚೆ ಪ್ರದೇಶ ಅಸ್ತಿತ್ವದಲ್ಲಿರುವ ಬಗ್ಗೆ ಮತದಾರರ ಪಟ್ಟಿಯಲ್ಲಿ ಇವರ ಹೆಸರುಗಳಿರುತ್ತವೆ ಮತ್ತು ಈ ಪ್ರದೇಶವು ಬೆಂಗಳೂರು ಮೆಟ್ರೋ ರೈಲು ಈ ಕೆಳಗೆ ಸುರಂಗಮಾರ್ಗದಲ್ಲಿ ಅಂದಾಜು 50 ಮೀಟರ್‌ನಷ್ಟು ಸಂಚರಿಸುವುದರಿಂದ, ಸದರಿ ಪ್ರದೇಶವನ್ನು ಅವರ ಮೂಲ ಸ್ಥಳದಿಂದ ತೆರವುಗೊಳಿಸಿ, ಈ ಪ್ರದೇಶದ 44 ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸುವುದು ಅತ್ಯಾವಶ್ಯವಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 11(1)ರ ಅಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಿಸುವುದು ಅವಶ್ಯವೆಂದು ಕಂಡುಬಂದಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 11(1) ರಡಿ ಹಾಗೂ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಕಾರ್ಯದರ್ಶಿಗಳು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಹದಿನೈದು (15) ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೆಂಗಳೂರು ದಕ್ಷಿಣ ತಾಲ್ಲೂಕು, ಚಿಕ್ಕಪೇಟೆ ಗ್ರಾಮದ ಗಣೇಶ ಗುಡಿ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ. ಸಂ.	ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ. ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	ಗಣೇಶ ಗುಡಿ ಕೊಳಚೆ ಪ್ರದೇಶ ಚಿಕ್ಕಪೇಟೆ ಗ್ರಾಮ, ಬೆಂಗಳೂರು ದಕ್ಷಿಣ ತಾಲ್ಲೂಕು	ಸರ್ಕಾರ	ಸಿ.ಟಿ.ಎಸ್ 3480	0-0.4.08	ಉರ್ದು ಸ್ಕೂಲ್ ಮತ್ತು ಸಿಎಂಎ ಹಾಸ್ಟಲ್	ಎ.ಎಸ್. ಚಾರ್ ಸ್ಟ್ರೀಟ್	ಸಿ.ಎಂ.ಎ. ಹಾಸ್ಟಲ್ ರೋಡ್	ಹಣ್ಣಿನ ಅಂಗಡಿಗಳು ಮತ್ತು ಸರ್ಕಾರಿ ಸಮುದಾಯ ಪಾಠಶಾಲೆ

ಜಿ.ಎನ್. ನಾಯಕ್

ಪಿ.ಆರ್. 385 ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ-27

ನಂ.ಎಲ್‌ಎನ್‌ಡಿ.ಸಿಆರ್.206/08-09, ದಿನಾಂಕ: 7ನೇ ಆಗಸ್ಟ್ 2009

ವಿಷಯ: ಶಿಡ್ಲಘಟ್ಟ ತಾಲ್ಲೂಕು, ಕಸಬಾ ಹೋಬಳಿ, ಕುಂದಲಗುರ್ಕಿ ಗ್ರಾಮದ ಸ.ನಂ.140 ರಲ್ಲಿ 5-00 ಎಕರೆ ಜಮೀನನ್ನು ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆಗಾಗಿ ಮಂಜೂರು ಮಾಡಲು ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.103/08-09, ದಿನಾಂಕ:24/12/2008.

3. ತಹಸೀಲ್ದಾರ್, ಶಿಡ್ಲಘಟ್ಟ ತಾಲ್ಲೂಕು ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.41/08-09, ದಿನಾಂಕ: 25/07/2008 ಮತ್ತು 28/04/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಗೋಮಾಳ ಬೆಟ್ಟ' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 67ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಗೋಮಾಳಬೆಟ್ಟ ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಪೋಟ ಖರಾಬ್ ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳಿಸಲು ಉದ್ದೇಶಿಸಿರುವುದಾಗಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಗೋಮಾಳ ಬೆಟ್ಟ' ಪ್ರದೇಶದಲ್ಲಿ ಅಥವಾ ಅದರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮಕ್ಕೆ ಸಂಭವಿಸಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಶಿಡ್ಲಘಟ್ಟ
ಹೋಬಳಿ	:	ಕಸಬಾ
ಗ್ರಾಮ	:	ಕಾಂದಲಗುರ್ಕಿ

ಸ.ನಂ.140 ರ 'ಗೋಮಾಳ ಬೆಟ್ಟ' 5-00 ಎಕರೆ ಜಮೀನು ಸಾರ್ವಜನಿಕ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚಕ್ಕುಬಂದಿ

ಪೂರ್ವಕ್ಕೆ	:	ಇದೇ ಸ.ನಂ.ನ ಉಳಿಕೆ ಜಮೀನು
ಪಶ್ಚಿಮಕ್ಕೆ	:	ಇದೇ ಸ.ನಂ.ನ ಉಳಿಕೆ ಜಮೀನು
ಉತ್ತರಕ್ಕೆ	:	ಇದೇ ಸ.ನಂ.ನ ಉಳಿಕೆ ಜಮೀನು
ದಕ್ಷಿಣಕ್ಕೆ	:	ಇದೇ ಸ.ನಂ.ನ ಉಳಿಕೆ ಜಮೀನು

ಪಿ.ಆರ್. 382

ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ಸಂ.ಎಲ್‌ಎನ್‌ಡಿ.ಸಿಆರ್.17/08–09, ದಿನಾಂಕ: 7ನೇ ಆಗಸ್ಟ್ 2009

ವಿಷಯ: ಚಿಕ್ಕಬಳ್ಳಾಪುರ ತಾಲ್ಲೂಕು, ನಂದಿ ಹೋಬಳಿ, ತೇಲಿನಹಳ್ಳಿ ಗ್ರಾಮದ ಸ.ನಂ.1 ರ ಪೈಕಿ 0–18 ಗುಂಟೆ ಜಮೀನನ್ನು ಸಾರ್ವಜನಿಕ ಸ್ಮಶಾನ ಹಾಗೂ 0–02 ಗುಂಟೆ ಪ್ರದೇಶವನ್ನು ಸಂಪರ್ಕ ರಸ್ತೆಗಾಗಿ ಕಾಯ್ದಿರಿಸುವ ಸಲುವಾಗಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.2/07–08, ದಿನಾಂಕ:03/04/2008

3. ತಹಸೀಲ್ದಾರ್, ಚಿಕ್ಕಬಳ್ಳಾಪುರ ತಾಲ್ಲೂಕು ರವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.47/03–04, ದಿನಾಂಕ 10/03/2008 ಮತ್ತು 06/01/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ

ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ ಖರಾಬು ಪ್ರದೇಶದ ಜಮೀನಿನ ಮೇಲಿನ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಚಿಕ್ಕಬಳ್ಳಾಪುರ
ಹೋಬಳಿ	:	ನಂದಿ
ಗ್ರಾಮ	:	ತೌಡನಹಳ್ಳಿ

ಸರ್ವೆ ನಂಬರು 1 ರ ಪೈಕಿ 0–08 ಗುಂಟೆ ಜಮೀನು ಸಾರ್ವಜನಿಕ ಸ್ಮಶಾನ ಹಾಗೂ 0–02 ಗುಂಟೆ ಜಮೀನು ಸಂಪರ್ಕ ರಸ್ತೆಗಾಗಿ ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಸ.ನಂ.1 ರ ಉಳಿಕೆ ಜಮೀನು
ಪಶ್ಚಿಮಕ್ಕೆ	:	ಸ.ನಂ.1 ರ ಉಳಿಕೆ ಜಮೀನು
ಉತ್ತರಕ್ಕೆ	:	ಸ.ನಂ.1 ರ ಉಳಿಕೆ ಜಮೀನು
ದಕ್ಷಿಣಕ್ಕೆ	:	ಸ.ನಂ.8, 7 ರ ಹಿಡುವಳಿದಾರರು

ಪಿ.ಆರ್. 383 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ಸಂ.ಎಲ್‌ಎನ್‌ಡಿ.ಸಿಆರ್.171/08–09, ದಿನಾಂಕ: 7ನೇ ಆಗಸ್ಟ್ 2009

ವಿಷಯ: ಚಿಕ್ಕಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಅಮಾನಿಪೂರ್ಣಸಾಗರಕೆರೆ ಗ್ರಾಮದ ಸ.ನಂ.141 ರ ಪೈಕಿ 2–00 ಎಕರೆ ಜಮೀನನ್ನು ಇನ್‌ಮುಂಚೇನಹಳ್ಳಿ ಗ್ರಾಮದ ಪರಿಶಿಷ್ಟ ಜನಾಂಗದವರಿಗೆ ಸ್ಮಶಾನಕ್ಕಾಗಿ ಕಾಯ್ದಿರಿಸುವ ಸಂಬಂಧ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.181/08–09, ದಿನಾಂಕ:03/12/2008.

3. ತಹಶೀಲ್ದಾರ್, ಚಿಕ್ಕಬಳ್ಳಾಪುರ ತಾಲ್ಲೂಕು ರವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.155/08–09, ದಿನಾಂಕ: 25/10/2008 ಮತ್ತು 02/03/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಸರ್ಕಾರಿ ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ

ಖರಾಬು ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಸರ್ಕಾರಿ ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆಯುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಚಿಕ್ಕಬಳ್ಳಾಪುರ
ಹೋಬಳಿ	:	ಕಸಬಾ
ಗ್ರಾಮ	:	ಅಮಾನಿಪೂರ್ಣಸಾಗರ ಕೆರೆ

ಸರ್ವೆ ನಂಬರು 141 ರ ಪೈಕಿ 2-00 ಎಕರೆ ಜಮೀನು ಪರಿಶಿಷ್ಟ ಜನಾಂಗದವರ ಸ್ಮಶಾನಕ್ಕಾಗಿ ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಸ.ನಂ.141 ರ ಉಳಿಕೆ ಜಮೀನು
ಪಶ್ಚಿಮಕ್ಕೆ	:	ಸ.ನಂ.141 ರ ಉಳಿಕೆ ಜಮೀನು
ಉತ್ತರಕ್ಕೆ	:	ಗಡಿ
ದಕ್ಷಿಣಕ್ಕೆ	:	ಸ.ನಂ.128 ರ ಜಮೀನು

ಪಿ ಆರ್. 386 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 81 ಎಲ್‌ಆರ್‌ಎಂ 2008, ಬೆಂಗಳೂರು, ದಿನಾಂಕ: 11ನೇ ಆಗಸ್ಟ್ 2009

ಕರ್ನಾಟಕ ಎಜುಕೇಷನ್ ಸೊಸೈಟಿ, ಬೆಂಗಳೂರು, ಇವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ದಿಬ್ಬೂರು ಗ್ರಾಮದ ಸ.ನಂ.20/4 ರಲ್ಲಿ 3.12 ಎಕರೆ, ಸ.ನಂ.21/1 ರಲ್ಲಿ 3.07.3/4 ಗುಂಟೆ ಮತ್ತು ಇಟಗಲ್‌ಪುರ ಗ್ರಾಮದ ಸ.ನಂ. 78 ರಲ್ಲಿ 1.10 ಗುಂಟೆ ಮತ್ತು ಸ.ನಂ.85 ರಲ್ಲಿ 1.05 ಗುಂಟೆ ಹಾಗೂ ಸ.ನಂ.84 ರಲ್ಲಿ 1.00 ಎಕರೆ ಹೀಗೆ ಒಟ್ಟು 9 ಎಕರೆ 34 3/4 ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಪಡೆಯಲು ನಮೂನೆ 15-ಎ ಮತ್ತು ನಮೂನೆ 15-ಎ ಎ, ಗಳಲ್ಲಿನ ಮಾಹಿತಿ ಅನುಸರಿಸಿ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಇವರ ಪತ್ರ ಸಂಖ್ಯೆ:ಎಲ್‌ಆರ್‌ಎಫ್/ ಸಿ.ಆರ್.3/2008-09 ದಿನಾಂಕ:16.09.2008 ರಲ್ಲಿ ಪ್ರಸ್ತಾಪಿತ ಮೇಲ್ಕಂಡ 9 ಎಕರೆ 34 3/4 ಗುಂಟೆ ಜಮೀನನ್ನು ಖರೀದಿಸಲು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 (1ಎ) ರಡಿ ಅನುಮೋದನೆ/ವಿನಾಯಿತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣವನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆಯು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38-ಬಿ ಮತ್ತು 38-ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಕರ್ನಾಟಕ ಎಜುಕೇಷನ್ ಸೊಸೈಟಿ, ಬೆಂಗಳೂರು, ಇವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ದಿಬ್ಬೂರು ಗ್ರಾಮದ ಸ.ನಂ.20/4 ರಲ್ಲಿ 3.12 ಎಕರೆ, ಸ.ನಂ.21/1 ರಲ್ಲಿ 3.07.3/4 ಗುಂಟೆ ಮತ್ತು ಇಟಗಲ್‌ಪುರ ಗ್ರಾಮದ ಸ.ನಂ.78 ರಲ್ಲಿ 1.10 ಗುಂಟೆ ಮತ್ತು ಸ.ನಂ.85 ರಲ್ಲಿ 1.05 ಗುಂಟೆ ಹಾಗೂ ಸ.ನಂ.84 ರಲ್ಲಿ 1.00 ಎಕರೆ ಹೀಗೆ ಒಟ್ಟು 9 ಎಕರೆ 34 8/4 ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಪಡೆಯಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109 ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:-

ಷರತ್ತುಗಳು

1. ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷದೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.
2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956 ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
3. ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.
4. ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.
5. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.
6. ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.
7. ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.
8. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 387

ಟಿ.ಎನ್. ನಾರಾಯಣಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಸುಧಾರಣೆ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಅಧಿಕೃತ ಜ್ಞಾಪನ ಪತ್ರ

ನಂ: ಎಲ್.ಆರ್.ಎಫ್ (ಎನ್.ಎ)(109)ಪಿ.ಆರ್:7/09-10, ಬೆಂಗಳೂರು, ದಿನಾಂಕ: 24ನೇ ಆಗಸ್ಟ್ 2009

ವಿಷಯ: ಲತೀಫ್ ಎಜುಕೇಷನಲ್ ಫೌಂಡೇಷನ್ ಟ್ರಸ್ಟ್, ನಂ.96, 6ನೇ ಸಿ ಮೈನ್, ಅಪ್ಪಣ್ಣ ಬ್ಲಾಕ್, ಆರ್.ಟಿ.ನಗರ ಅಂಚೆ, ಬೆಂಗಳೂರು ರವರು ಬೆಂಗಳೂರು ಉತ್ತರ(ಅಪರ) ತಾಲ್ಲೂಕು, ಜಾಲ ಹೋಬಳಿ, ಮಾರೇನಹಳ್ಳಿ ಗ್ರಾಮದ ಸ.ನಂ. 69/1 ರಲ್ಲಿ 0-20 ಗುಂಟೆ, 69/2 ರಲ್ಲಿ 0-21 ಗುಂಟೆ, ಸ.ನಂ.69/3 ರಲ್ಲಿ 1-02 ಎಕರೆ:ಗುಂಟೆ ಒಟ್ಟು 2-03 ಎಕರೆ:ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109 ರಡಿ ಕ್ರಯಕ್ಕೆ ಖರೀದಿಸಲು ಅನುಮತಿ ಕೋರಿರುವ ಬಗ್ಗೆ.

ಲತೀಫ್ ಎಜುಕೇಷನಲ್ ಫೌಂಡೇಷನ್ ಟ್ರಸ್ಟ್, ನಂ.96, 6ನೇ ಸಿ ಮೈನ್, ಅಪ್ಪಣ್ಣ ಬ್ಲಾಕ್, ಆರ್.ಟಿ.ನಗರ ಅಂಚೆ, ಬೆಂಗಳೂರು ರವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಜಾಲ ಹೋಬಳಿ, ಮಾರೇನಹಳ್ಳಿ ಗ್ರಾಮದ ಸ.ನಂ. 69/1 ರಲ್ಲಿ 0–20 ಗುಂಟೆ, 69/2 ರಲ್ಲಿ 0–21 ಗುಂಟೆ ಸ.ನಂ.69/3 ರಲ್ಲಿ 1–02 ಎಕರೆ:ಗುಂಟೆ ಒಟ್ಟು 2–03 ಎಕರೆ:ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109 ರಡಿ ಖರೀದಿಸಲು ಮಾಡಿರುವ ಬೇಡಿಕೆ ಹಾಗೂ ನಮೂನೆ-15ಎ ಮತ್ತು ನಮೂನೆ-15ಎಎ ರಲ್ಲಿ ನೀಡಿದ ಮಾಹಿತಿ ಅನುಸರಿಸಿ ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ ಎಲ್.ಆರ್.ಎಫ್:ಬಿ.ಎನ್.ಎ/ಸಿ.ಆರ್: 2/09–10, ದಿನಾಂಕ: 17.08.2009 ರಲ್ಲಿ ಪ್ರಸ್ತಾವಿತ ಮಾರೇನಹಳ್ಳಿ ಗ್ರಾಮದ ಸ.ನಂ. 69/1 ರಲ್ಲಿ 0–20 ಗುಂಟೆ, 69/2 ರಲ್ಲಿ 0–21 ಗುಂಟೆ, ಸ.ನಂ.69/3 ರಲ್ಲಿ 1-02 ಎಕರೆ:ಗುಂಟೆ ಒಟ್ಟು 2–03 ಎಕರೆ:ಗುಂಟೆ ಜಮೀನನ್ನು ಖರೀದಿಸಲು ಸದರಿ ಸಂಸ್ಥೆಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961 ರ ಕಲಂ 109(1)(II) ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಸಂಸ್ಥೆಯು ನೋಂದಣಿ ಸಂಖ್ಯೆ: GNR-4-00113/2008, ದಿನಾಂಕ: 30.12.2008 ರಲ್ಲಿ ನೊಂದಾಯಿಸಲ್ಪಟ್ಟಿದೆ. ಖಾತೆದಾರರಿಂದ ಜಮೀನು ಖರೀದಿಸಲು ಕರಾರು ಪತ್ರ ಮಾಡಿಕೊಂಡಿರುತ್ತಾರೆ.

ಪ್ರಸ್ತಾವಿತ ಜಮೀನು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಕಾಯ್ದೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109 ರ ಪ್ರಕಾರ ಶೈಕ್ಷಣಿಕ ಉದ್ದೇಶಕ್ಕೆ 4 ಯೂನಿಟ್‌ಗಳವರೆಗೆ ಜಮೀನು ಹೊಂದಲು ಅವಕಾಶ ಕಲ್ಪಿಸಿದೆ. ಈ ಪ್ರಸ್ತಾವನೆ ಕರ್ನಾಟಕ ತಿದ್ದುಪಡಿ ಕಾಯ್ದೆ 1995ರ ಪ್ರಕಾರ ಕಲಂ 109 (i)(II) ಮತ್ತು ಕರ್ನಾಟಕ ಭೂ ಸುಧಾರಣೆ ತಿದ್ದುಪಡಿ ಕಾಯಿದೆ 1961 ಕಲಂ 63, 79ಎ, 79ಬಿ ಅಥವಾ 80ಕ್ಕೆ ವಿನಾಯ್ತಿ ನೀಡಿ ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಜಾಲ ಹೋಬಳಿ, ಮಾರೇನಹಳ್ಳಿ ಗ್ರಾಮದ ಸ.ನಂ. 69/1 ರಲ್ಲಿ 0–20 ಗುಂಟೆ, 69/2 ರಲ್ಲಿ 0–21 ಗುಂಟೆ, ಸ.ನಂ.69/3 ರಲ್ಲಿ 1–02 ಎಕರೆ:ಗುಂಟೆ ಒಟ್ಟು 2–03 ಎಕರೆ:ಗುಂಟೆ ಜಮೀನನ್ನು ಲತೀಫ್ ಎಜುಕೇಷನಲ್ ಫೌಂಡೇಷನ್ ಟ್ರಸ್ಟ್, ನಂ.96, 6ನೇ ಸಿ ಮೈನ್, ಅಪ್ಪಣ್ಣ ಬ್ಲಾಕ್, ಆರ್.ಟಿ.ನಗರ ಅಂಚೆ, ಬೆಂಗಳೂರು ರವರಿಗೆ ಶೈಕ್ಷಣಿಕ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961 ರ ಕಲಂ 109 (1)(ii) ರಡಿ ಹಾಗೂ ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಕಂಇ 47 ಶಾಸನ 2001 ಬೆಂಗಳೂರು, ದಿನಾಂಕ: 25.04.2005 ರಂತೆ ಶೈಕ್ಷಣಿಕ ಉದ್ದೇಶಕ್ಕೆ 2 ಯುನಿಟ್‌ಗಳಿದ್ದು, ಜಮೀನನ್ನು ಹೊಂದಲು ಅವಕಾಶ ಕಲ್ಪಿಸಿದೆ. ಹಾಗೂ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅನುಮತಿ ನೀಡಿದೆ.

ಷರತ್ತುಗಳು

1. ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷದೊಳಗಾಗಿ ಉಪಯೋಗಿಸಿಕೊಳ್ಳತಕ್ಕದ್ದು ಮತ್ತು ಈ ಬಗ್ಗೆ ತಹಸೀಲ್ದಾರ್‌ರವರ ಮೂಲಕ ಈ ಕಛೇರಿಗೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.
2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1995 ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 55 ಪೇಯಿಡ್ ಅಪ್ ಷೇರು ಬಂಡವಾಳ ಹೊಂದಿರುವ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಸಂಘ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
3. ಸದರಿ ಜಮೀನು ಸಿ.ಡಿ.ಪಿ ಪ್ರಕಾರ ಹಸಿರು ವಲಯದಲ್ಲಿ ಬರುತ್ತಿದ್ದು, ಶೈಕ್ಷಣಿಕ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳತಕ್ಕದ್ದು. ಇದನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮತಿ ಪಡೆಯದೆ ಹಾಗೂ ಅನ್ಯಕ್ರಾಂತ ಪಡಿಸದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
4. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಭೂ ಕಂದಾಯ ಕಾಯಿದೆ 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯಬೇಕು. ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸುವ ಷರತ್ತಿಗೆ ಒಳಪಡಿಸಿದೆ.
5. ಈ ಜಮೀನು ನಗರಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಂದ ಸಿ.ಡಿ.ಪಿ, ಒ.ಡಿ.ಪಿ ಮತ್ತು ಹಸಿರು ವಲಯ ವ್ಯಾಪ್ತಿಯೊಳಗೆ ಬಂದರೆ ಅದರಂತೆ ಅನುಮತಿ ಪಡೆದು ಉಪಯೋಗಿಸಿಕೊಳ್ಳತಕ್ಕದ್ದು.
6. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾದ ಅನುಮತಿಯನ್ನು ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣ ಮುಕ್ತವಾಗಿಸಿ ಸರ್ಕಾರದಲ್ಲಿ ನಿಹಿತ ಮಾಡಲಾಗುವುದು.
7. ಈ ಅನುಮತಿ ಭೂ ಸುಧಾರಣೆ ಕಾಯಿದೆ 1961 ರ ಕಲಂ 109 ರನ್ವಯ ಮಾತ್ರ ಮಾಡಿರುತ್ತದೆ. ಬೇರೆ ಕಾನೂನುಗಳಿಗೆ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

ವಿಶೇಷ ಜಿಲ್ಲಾಧಿಕಾರಿಗಳು (ಕಂ),
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪಿ.ಆರ್. 388

ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಕಾರ್ಯಾಲಯ, ಮಂಗಳೂರು

ಅಧಿಸೂಚನೆ

ವಿಷಯ: ಪುತ್ತೂರು ತಾಲೂಕು ಉಪ್ಪಿನಂಗಡಿ ಗ್ರಾಮ ಪಂಚಾಯತ್‌ನಲ್ಲಿ ನಿಯಮಾನುಸಾರ ಸಾಮಾನ್ಯ ಸಭೆ ಜರುಗಿಸದಿರುವ ಕುರಿತು.

ಉಲ್ಲೇಖ: 1. ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ.ಪುತ್ತೂರು ಇವರ ಪತ್ರ ಸಂ: ತಾ.ಪಂ.ಪು;ಗ್ರಾಪಂ: 2049(ಎ):09–10 ದಿನಾಂಕ:1–8–2009

2. ದಿನಾಂಕ: 14–09–2009ರಂದು ನಡೆದ ಜಿ.ಪಂ.ಸಾಮಾನ್ಯ ಸಭೆಯ ನಿರ್ಣಯ ಸಂಖ್ಯೆ 10

3. ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಾರಣ ಕೇಳುವ ನೋಟೀಸು ಸಂಖ್ಯೆ;ದಕಜಿಪ/ಗ್ರಾಪಂ/ಸಿಆರ್/81/09–10 ದಿನಾಂಕ: 14–09–2009.

4. ಕಾರ್ಯದರ್ಶಿ, ಉಪ್ಪಿನಂಗಡಿ ಗ್ರಾ.ಪಂ.ಇವರ ಪತ್ರ;ಉಗ್ರಾ.ಪಂ.70/09–10 ದಿನಾಂಕ: 25–09–2009.

ಪ್ರಸ್ತಾವನೆ:

ಪುತ್ತೂರು ತಾಲೂಕು ಉಪ್ಪಿನಂಗಡಿ ಗ್ರಾಮ ಪಂಚಾಯತ್‌ನಲ್ಲಿ ಕೋರಂ ಇಲ್ಲದೆ ಸತತವಾಗಿ 5 ಬಾರಿ ಸಾಮಾನ್ಯ ಸಭೆ ಮುಂದೂಡಿರುವುದಾಗಿ ಪುತ್ತೂರುತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿಯವರು ಉಲ್ಲೇಖ(1)ರಂತೆ ಈ ಕಛೇರಿಗೆ ವರದಿ ಮಾಡಿರುತ್ತಾರೆ.

ದಿನಾಂಕ:14–09–2009ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚೆಯಾಗಿ ಕರ್ನಾಟಕ ಪಂ.ರಾಜ್ ಅಧಿನಿಯಮದ ಪ್ರಕರಣ 268ರಡಿಯಲ್ಲಿ ಮುಂದಿನ ಕ್ರಮ ಜರುಗಿಸಲು ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯ ಸಂಖ್ಯೆ 10ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಅಧಿಕಾರವನ್ನು ನೀಡುವುದೆಂದು ನಿರ್ಣಯಿಸಲಾಗಿದೆ. ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯದಂತೆ ಕರ್ನಾಟಕ ಪಂ.ರಾಜ್ ಅಧಿನಿಯಮ 1993 ಪ್ರಕರಣ 268(3)ರಂತೆ ಈ ಕಛೇರಿಯ ಉಲ್ಲೇಖ(3)ರಲ್ಲಿ ಉಪ್ಪಿನಂಗಡಿ ಗ್ರಾಮ ಪಂಚಾಯತ್‌ಗೆ ಕಾರಣ ಕೇಳುವ ನೋಟೀಸು ನೀಡಿ 7 ದಿನಗಳೊಳಗೆ ಉತ್ತರಿಸುವಂತೆ ತಿಳಿಸಲಾಗಿತ್ತು.

ಉಲ್ಲೇಖ(4)ರ ಪತ್ರದಲ್ಲಿ ಗ್ರಾಮ ಪಂಚಾಯತು ಕಾರ್ಯದರ್ಶಿ ವರದಿ ಸಲ್ಲಿಸಿದ್ದು, ಜಿಲ್ಲಾ ಪಂಚಾಯತ್ ಕಛೇರಿಯಿಂದ ನೀಡಿರುವ ಕಾರಣ ಕೇಳುವ ನೋಟೀಸಿನ ತರುವಾಯ ದಿನಾಂಕ ಉಪ್ಪಿನಂಗಡಿ ಗ್ರಾಮ ಪಂಚಾಯತ್ ಅಧ್ಯಕ್ಷರು ಇದುವರೆಗೆ ಸಾಮಾನ್ಯ ಸಭೆ ಜರುಗಿಸಲು ದಿನಾಂಕವನ್ನು ನೀಡಿರುವುದಿಲ್ಲ ಹಾಗೂ ಪತ್ರಕ್ಕೆ ಯಾವುದೇ ಉತ್ತರವನ್ನು ನೀಡಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಆದುದರಿಂದ ಗ್ರಾಮ ಪಂಚಾಯತ್ ಕೋರಂಗಿಂತ ಕಡಿಮೆ ಸದಸ್ಯರನ್ನು ಇಟ್ಟುಕೊಂಡು ಗ್ರಾಮ ಪಂಚಾಯತ್‌ನ್ನು ಮುಂದುವರಿಸಲು ಕಾನೂನಿನಡಿ ಅವಕಾಶವಿರುವುದಿಲ್ಲ. ಕರ್ನಾಟಕ ಪಂ.ರಾಜ್ ಅಧಿನಿಯಮದಡಿಯಲ್ಲಿ ವಹಿಸಿರುವ ಕರ್ತವ್ಯಗಳನ್ನು ನಿರ್ವಹಿಸಲು ವಿಫಲವಾಗಿರುವುದರಿಂದ ಮತ್ತು ಸದರಿ ಗ್ರಾಮ ಪಂಚಾಯತ್ ಕರ್ನಾಟಕ ಪಂ.ರಾಜ್ ಕಾಯಿದೆಯಡಿಯಲ್ಲಿ ಕರ್ತವ್ಯ ನಿರ್ವಹಿಸಿಕೊಂಡು ಮುಂದುವರಿಯಲು ಸಾಧ್ಯವಿಲ್ಲದೆ ಇರುವುದರಿಂದ ಕರ್ನಾಟಕ ಪಂ.ರಾಜ್ ಅಧಿನಿಯಮ 1993ರ ಪ್ರಕರಣ 268(1)ರಡಿಯಲ್ಲಿ ವಿಸರ್ಜನೆ ಮಾಡುವುದು ಅನಿವಾರ್ಯವಾಗಿರುವುದರಿಂದ ಈ ಆದೇಶ.

ಆದೇಶ ನಂ: ದಕಜಿಪಂ/ಗ್ರಾಪಂ.ಸಿಆರ್/81/09–10, ದಿನಾಂಕ: 26ನೇ ಸೆಪ್ಟೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಕರ್ನಾಟಕ ಪಂ.ರಾಜ್ ಅಧಿನಿಯಮದಂತೆ ತನ್ನ ಕರ್ತವ್ಯಗಳನ್ನು ನಿರ್ವಹಿಸಲು ಗ್ರಾಮ ಪಂಚಾಯತ್ ವಿಫಲವಾಗಿರುವುದರಿಂದ ಹಾಗೂ ಅಲ್ಲಿನ ಜನತೆಗೆ ನೀಡಬೇಕಾದ ಸೇವೆಯಲ್ಲಿ ಹಿಂದೆ ಬಿದ್ದು, ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತಗೊಂಡಿರುವುದರಿಂದ ಪುತ್ತೂರು ತಾಲೂಕಿನ ಉಪ್ಪಿನಂಗಡಿ ಗ್ರಾಮ ಪಂಚಾಯತನ್ನು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ1993ರ ಪ್ರಕರಣ 268(1)ರನ್ವಯ ಸರಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ವಿಸರ್ಜಿಸಿ ಆದೇಶಿಸಿದೆ. ಕರ್ನಾಟಕ ಪಂ.ರಾಜ್ ಅಧಿನಿಯಮ 1993ರ ಪ್ರಕರಣ 268(7)(ಎ) ಅಡಿಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯತ್ ಪುತ್ತೂರು ಇವರನ್ನು ಸದರಿ ಪಂಚಾಯತ್ ವಿಸರ್ಜನೆಗೊಂಡ ದಿನಾಂಕದಿಂದ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ದ.ಕ.ಜಿಲ್ಲಾ ಪಂಚಾಯತ್, ಮಂಗಳೂರು.

ಪಿ.ಡಿ. 22

ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಕಾರ್ಯಾಲಯ, ಮಂಗಳೂರು

ಅಧಿಸೂಚನೆ

ವಿಷಯ: ಮಂಗಳೂರು ತಾಲೂಕು ಜೋಕಟ್ಟೆ ಗ್ರಾಮ ಪಂಚಾಯತ್‌ನಲ್ಲಿ ನಿಯಮಾನುಸಾರ ಸಾಮಾನ್ಯ ಸಭೆ ಜರುಗಿಸದಿರುವ ಕುರಿತು.

ಉಲ್ಲೇಖ: 1. ಜೋಕಟ್ಟೆ ಗ್ರಾಮ ಪಂಚಾಯತ್ ಸದಸ್ಯರ ಮನವಿ ದಿನಾಂಕ: 31–07–2009.

2. ದಿನಾಂಕ: 14–09–2009ರಂದು ನಡೆದ ಜಿ.ಪಂ.ಸಾಮಾನ್ಯ ಸಭೆಯ ನಿರ್ಣಯ ಸಂಖ್ಯೆ 9

3. ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಾರಣ ಕೇಳುವ ನೋಟೀಸು ಸಂಖ್ಯೆ:ದಕಜಿಪ/ಗ್ರಾಪಂ/ಸಿಆರ್/83/09-10 ದಿನಾಂಕ: 14-09-2009.

4. ಕಾರ್ಯದರ್ಶಿ, ಜೋಕಟ್ಟೆ ಗ್ರಾ.ಪಂ. ಇವರ ಪತ್ರ:ಜೋಗ್ರಾ.ಪಂ.2/09-10 ದಿನಾಂಕ: 17-09-2009.

ಪ್ರಸ್ತಾವನೆ:

ಮಂಗಳೂರು ತಾಲೂಕು ಜೋಕಟ್ಟೆ ಗ್ರಾಮ ಪಂಚಾಯತ್‌ನಲ್ಲಿ ದಿನಾಂಕ:12-11-2008ರಿಂದ ಯಾವುದೇ ಸಾಮಾನ್ಯ ಸಭೆ ನಡೆದಿರುವುದಿಲ್ಲವೆಂದು ಜೋಕಟ್ಟೆ ಗ್ರಾಮ ಪಂಚಾಯತ್ ಸದಸ್ಯರು ಉಲ್ಲೇಖ(1)ರಂತೆ ಈ ಕಛೇರಿಗೆ ವರದಿ ಮಾಡಿರುತ್ತಾರೆ.

ದಿನಾಂಕ:14-09-2009ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚೆಯಾಗಿ ಕರ್ನಾಟಕ ಪಂ.ರಾಜ್ ಅಧಿನಿಯಮದ ಪ್ರಕರಣ 268ರಡಿಯಲ್ಲಿ ಮುಂದಿನ ಕ್ರಮ ಜರುಗಿಸಲು ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯ ಸಂಖ್ಯೆ 9ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಅಧಿಕಾರವನ್ನು ನೀಡುವುದೆಂದು ನಿರ್ಣಯಿಸಲಾಗಿದೆ. ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯದಂತೆ ಕರ್ನಾಟಕ ಪಂ.ರಾಜ್ ಅಧಿನಿಯಮ 1993 ಪ್ರಕರಣ 268(3)ರಂತೆ ಈ ಕಛೇರಿಯ ಉಲ್ಲೇಖ(3)ರಲ್ಲಿ ಜೋಕಟ್ಟೆ ಗ್ರಾಮ ಪಂಚಾಯತ್‌ಗೆ ಕಾರಣ ಕೇಳುವ ನೋಟೀಸು ನೀಡಿ 7 ದಿನಗಳೊಳಗೆ ಉತ್ತರಿಸುವಂತೆ ತಿಳಿಸಲಾಗಿತ್ತು.

ಉಲ್ಲೇಖ(4)ರ ಪತ್ರದಲ್ಲಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ವರದಿ ಸಲ್ಲಿಸಿದ್ದು, ಜಿಲ್ಲಾ ಪಂಚಾಯತ್ ಕಛೇರಿಯಿಂದ ನೀಡಿರುವ ಕಾರಣ ಕೇಳುವ ನೋಟೀಸಿನ ತರುವಾಯ ದಿನಾಂಕ: 29-09-2009ರಂದು ಗ್ರಾಮ ಪಂಚಾಯತ್ ಸಾಮಾನ್ಯ ಸಭೆ ಜರುಗಿಸಲು ದಿನ ನಿಗದಿಪಡಿಸಿರುತ್ತಾರೆ ಎಂದು ತಿಳಿಸಿರುತ್ತಾರೆ. ಈ ಕಚೇರಿಯ ಉಲ್ಲೇಖ(3)ರ ಕಾರಣ ಕೇಳುವ ನೋಟೀಸನ್ನು ದಿನಾಂಕ: 16-09-2009ರಂದು ಸ್ವೀಕೃತಿ ಪಡೆಯಲಾಗಿದೆ. ಅಲ್ಲಿಂದ 7 ದಿನಗಳವರೆಗೆ ಅಂದರೆ 23-09-2009ರೊಳಗೆ ಸಾಮಾನ್ಯ ಸಭೆಯನ್ನು ನಡೆಸಲು ಈ ಕಛೇರಿಯಿಂದ ನೋಟೀಸು ನೀಡಲಾಗಿತ್ತು. ಕರ್ನಾಟಕ ಪಂ.ರಾಜ್ ಅಧಿನಿಯಮ 1993ರ ಪ್ರಕರಣ 268(1)ರಡಿ ಸಾಮಾನ್ಯ ಸಭೆಯನ್ನು 7 ದಿನಗಳ ಅವಧಿಯಲ್ಲಿ ಕರೆಯಲು ಅವಕಾಶವಿರುತ್ತದೆ. ಅಲ್ಲದೆ ವಿಶೇಷ ಸಭೆ ಕರೆಯಲು 3 ದಿನಗಳ ಅವಕಾಶವಿರುತ್ತದೆ. ತುರ್ತು ಸಭೆಯನ್ನು 24 ಗಂಟೆಯೊಳಗೆ ಕರೆಯಲು ಅವಕಾಶವಿರುತ್ತದೆ. ಆದಾಗ್ಯೂ ಕೂಡ ಜಿಲ್ಲಾ ಪಂಚಾಯತ್ ನೀಡಿದ ನೋಟೀಸಿನ ಅವಧಿಯೊಳಗೆ ಗ್ರಾಮ ಪಂಚಾಯತ್ ಸಭೆ ಕರೆಯಲು ವಿಫಲವಾಗಿರುತ್ತದೆ. ಈಗಾಗಲೇ ಈ ಕಛೇರಿಯ ನೋಟೀಸು ದಿನಾಂಕ 31-07-2009ರ ಕಾರಣ ಕೇಳುವ ನೋಟೀಸು ಸಂಖ್ಯೆ:ದಕಜಿಪ/ಆಡಳಿತ/ಶಿಸ್ತು/ಸಿಆರ್-16/09-10/ಎ6 ರಲ್ಲಿ ಕರ್ನಾಟಕ ಪಂ.ರಾಜ್.ಅಧಿನಿಯಮ 1993ರ ಪ್ರಕರಣ 234ಸಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನಿರ್ದೇಶನವನ್ನು ನೀಡಿ ಸಾಮಾನ್ಯ ಸಭೆಯನ್ನು ನಡೆಸಲು ತಿಳಿಸಿದಾಗಲೂ ಕೂಡ ಜೋಕಟ್ಟೆ ಗ್ರಾಮ ಪಂಚಾಯತ್ ಸಾಮಾನ್ಯ ಸಭೆಯನ್ನು ಕರೆಯಲು ವಿಫಲವಾಗಿರುತ್ತದೆ. ಸದರಿ ಗ್ರಾಮ ಪಂಚಾಯತ್ ದಿನಾಂಕ:12-11-2008ರಿಂದ ಸಾಮಾನ್ಯ ಸಭೆಯನ್ನು ಜರುಗಿಸದೇ ಗ್ರಾಮ ಪಂಚಾಯತ್ ತೆಗೆದುಕೊಳ್ಳಬೇಕಾದ ಎಲ್ಲ ತೀರ್ಮಾನಗಳನ್ನು ಸುಮಾರು 9 ತಿಂಗಳುಗಳಿಂದ ತೆಗೆದುಕೊಳ್ಳಲು ಸಾಧ್ಯವಾಗದೇ ಜನಸಾಮಾನ್ಯರಿಗೆ ನೀಡಬೇಕಾದ ಎಲ್ಲ ಸೇವೆಗಳನ್ನು ನೀಡಲು ಹಾಗೂ ಕರ್ತವ್ಯ ಪಾಲನೆ ಮಾಡಲು ವಿಫಲವಾಗಿರುತ್ತದೆ. ಈಗಲೂ ಕೂಡ ಜಿಲ್ಲಾ ಪಂಚಾಯತ್ ನಿರ್ದೇಶನವನ್ನು ಪಾಲಿಸದೇ ಸಾಮಾನ್ಯ ಸಭೆ ನಡೆಸುವ ಬಗ್ಗೆ ಹಾರಿಕೆ ಉತ್ತರವನ್ನು ಗ್ರಾಮ ಪಂಚಾಯತ್ ಕಾರ್ಯದರ್ಶಿಯವರು ನೀಡಿರುತ್ತಾರೆ. ಇದೇ ರೀತಿ ಗ್ರಾಮ ಪಂಚಾಯತ್ ಮುಂದುವರಿಸಿದರೆ ಜನ ಸಾಮಾನ್ಯರಿಗೆ ಗ್ರಾಮ ಪಂಚಾಯತ್ ಕಡ್ಡಾಯವಾಗಿ ನೀಡಬೇಕಾದ ಸೇವೆಯನ್ನು ನೀಡಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಜೋಕಟ್ಟೆ ಗ್ರಾ.ಪಂ.ಕಾರ್ಯದರ್ಶಿಯವರು ನೀಡಿರುವ ಹಾರಿಕೆ ಉತ್ತರವನ್ನು ಒಪ್ಪಲು ಬರುವುದಿಲ್ಲ. ಗ್ರಾಮ ಪಂಚಾಯತ್ ಕೋರಂಗಿಂತ ಕಡಿಮೆ ಸದಸ್ಯರನ್ನು ಇಟ್ಟುಕೊಂಡು ಗ್ರಾಮ ಪಂಚಾಯತ್‌ನ್ನು ಮುಂದುವರಿಸಲು ಕಾನೂನಿನಡಿ ಅವಕಾಶವಿರುವುದಿಲ್ಲ. ಜೋಕಟ್ಟೆ ಗ್ರಾಮ ಪಂಚಾಯತ್ ಕರ್ನಾಟಕ ಪಂ.ರಾಜ್ ಅಧಿನಿಯಮದಡಿಯಲ್ಲಿ ವಹಿಸಿರುವ ಕರ್ತವ್ಯಗಳನ್ನು ನಿರ್ವಹಿಸಲು ವಿಫಲವಾಗಿರುವುದರಿಂದ ಮತ್ತು ಸದರಿ ಗ್ರಾಮ ಪಂಚಾಯತ್ ಕರ್ನಾಟಕ ಪಂ.ರಾಜ್ ಕಾಯಿದೆಯಡಿಯಲ್ಲಿ ಕರ್ತವ್ಯ ನಿರ್ವಹಿಸಿಕೊಂಡು ಮುಂದುವರಿಯಲು ಸಾಧ್ಯವಿಲ್ಲದೆ ಇರುವುದರಿಂದ ಕರ್ನಾಟಕ ಪಂ.ರಾಜ್ ಅಧಿನಿಯಮ 1993ರ ಪ್ರಕರಣ 268(1)ರಡಿಯಲ್ಲಿ ವಿಸರ್ಜನೆ ಮಾಡುವುದು ಅನಿವಾರ್ಯವಾಗಿರುವುದರಿಂದ ಈ ಆದೇಶ.

ಆದೇಶ ಸಂ: ದಕಜಿಪಂ/ಗ್ರಾಪಂ.ಸಿಆರ್/83/09-10, ದಿನಾಂಕ: 26ನೇ ಸೆಪ್ಟೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಕರ್ನಾಟಕ ಪಂ.ರಾಜ್ ಅಧಿನಿಯಮದಂತೆ ತನ್ನ ಕರ್ತವ್ಯಗಳನ್ನು ನಿರ್ವಹಿಸಲು ಗ್ರಾಮ ಪಂಚಾಯತ್ ವಿಫಲವಾಗಿರುವುದರಿಂದ ಹಾಗೂ ಅಲ್ಲಿನ ಜನತೆಗೆ ನೀಡಬೇಕಾದ ಸೇವೆಯಲ್ಲಿ ಹಿಂದೆ ಬಿದ್ದು, ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತಗೊಂಡಿರುವುದರಿಂದ ಮಂಗಳೂರು ತಾಲೂಕಿನ ಜೋಕಟ್ಟೆ ಗ್ರಾಮ ಪಂಚಾಯತನ್ನು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ1993ರ ಪ್ರಕರಣ 268(1)ರನ್ವಯ ಸರಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ವಿಸರ್ಜಿಸಿ ಆದೇಶಿಸಿದೆ. ಕರ್ನಾಟಕ ಪಂ.ರಾಜ್ ಅಧಿನಿಯಮ 1993ರ ಪ್ರಕರಣ 268(7)(ಎ) ಅಡಿಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳೂರು ಗ್ರಾಮಾಂತರ ಇವರನ್ನು ಸದರಿ ಪಂಚಾಯತ್ ವಿಸರ್ಜನೆಗೊಂಡ ದಿನಾಂಕದಿಂದ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ದ.ಕ.ಜಿಲ್ಲಾ ಪಂಚಾಯತ್, ಮಂಗಳೂರು.

ಪಿ.ಡಿ. 23

ಜಿಲ್ಲಾಧಿಕಾರಿಗಳ ಕಾರ್ಯಾಲಯ, ರಾಮನಗರ ಜಿಲ್ಲೆ, ರಾಮನಗರ
ಭೂ ಆರ್ಜನೆ ಅಧಿನಿಯಮದ 4(1)ನೇ ಪ್ರಕರಣದ ಮೇರೆಗಿನ ಅಧಿಸೂಚನೆ.
ಕ್ರಮಾಂಕ:ಎಲ್ಎಕ್ಯೂಎಸ್.ಆರ್:1/2009-10, ದಿನಾಂಕ: 16ನೇ ಸೆಪ್ಟೆಂಬರ್ 2009

ಇದರ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಭೂಮಿಗಳು ಸಾರ್ವಜನಿಕ ಉದ್ದೇಶಕ್ಕಾಗಿ ಎಂದರೆ ಇಗ್ಗಲೂರು ಜಲಾಶಯ ಯೋಜನೆಯ ಸಿ-2 ಬಿಂದುವಿಗೆ ಜಮೀನು ಅಗತ್ಯವಾಗಲಿದೆಯೆಂದು ಕರ್ನಾಟಕ ಸರ್ಕಾರಕ್ಕೆ ಕಂಡು ಬಂದಿರುವುದರಿಂದ:

ಕರ್ನಾಟಕ ಅಧಿನಿಯಮ ಸಂಖ್ಯೆ 33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂಸ್ವಾಧೀನ ಅಧಿನಿಯಮ ಸಂಖ್ಯೆ 1894 (ಕೇಂದ್ರ ಅಧಿನಿಯಮ ಸಂಖ್ಯೆ 1894ರ 1) 4ನೇ ಪ್ರಕರಣದ (1)ನೇ ಉಪ ಪ್ರಕರಣದ ಉಪಬಂಧಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಆ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ. ಹಾಗೂ ಕರ್ನಾಟಕ ಸರ್ಕಾರವು ಅಧಿನಿಯಮದ 4(2)ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ವಿಶೇಷ ಭೂ ಆರ್ಜನೆ ಅಧಿಕಾರಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡುತ್ತದೆ.

ಸದರಿ ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 5(ಎ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರನ್ನು ನೇಮಕ ಮಾಡಿದೆ.

ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುದಾದರೂ ಇದ್ದರೆ, ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು ದಿನಗಳ ಅವಧಿಯೊಳಗೆ ಅಥವಾ ಅದಕ್ಕೆ ಮುಂಚೆ, ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಆರ್ಜನೆ ಅಧಿನಿಯಮ 1394ರ 3(ಸಿ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರಿಗೆ ಲಿಖಿತದಲ್ಲಿ ಸಲ್ಲಿಸಬಹುದು.

ಸದರಿ ಆರ್ಜನೆ ಉದ್ದೇಶಕ್ಕಾಗಿ ಸದರಿ ಭೂಮಿಗಳ ಮೇಲೆ ನಿಯೋಜಿತರಾದ ಯಾವುದೇ ಅಥವಾ ಇತರೆ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಸದರಿ ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದ ನಂತರ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆ ಬೆಂಗಳೂರು ರವರ ಅನುಮತಿಯಿಲ್ಲದೆ, ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿಯ ಮೂಲಕ ಸದರಿ ಭೂಮಿಗಳ ವಿಲೇಗಾಗಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಆರ್ಜನೆ ಮಾಡಿಕೊಳ್ಳಲಾಗುವ ಸದರಿ ಭೂಮಿಗಳ ಅಂತಹ ಭಾಗಗಳ ಪರಿಹಾರಕ್ಕಾಗಿ ನಿರ್ಧರಣೆ ಮಾಡುವ ಅಧಿಕಾರಿಯು ಸದರಿ ಅಧಿನಿಯಮ (ಏಳನೇ ಖಂಡ) 2ನೇ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಕಛೇರಿಯಲ್ಲಿ ಭೂಮಿಗಳ ಸ್ಥೂಲ ನಕಾಶೆಯನ್ನು ಪರಿಶೀಲನೆಗಾಗಿ ಇಡಲಾಗಿದೆ (ಎಲ್ಎಕ್ಯೂಎಸ್ಆರ್ **05/09-10)**

ಅನುಸೂಚಿ

ಜಿಲ್ಲೆ: ರಾಮನಗರ **ತಾಲ್ಲೂಕು: ಚನ್ನಪಟ್ಟಣ** **ಹೋಬಳಿ: ವಿರೂಪಾಕ್ಷಿಪುರ** **ಗ್ರಾಮ: ಇಗ್ಗಲೂರು**

ಕ್ರ. ಸಂ	ಖಾತೆದಾರರ ಹೆಸರು	ಅನುಭವದಾರರ ಹೆಸರು	ಸ.ನಂ	ತರಹೆ	ಚಕ್ಕುಬಂದಿ				ಅಗತ್ಯವಾದ ಅಂದಾಜು	ಮೌಲ್ಯ ನಿರ್ಧರಣೆ
					ಪೂರ್ವ ಸ.ನಂ.	ಪಶ್ಚಿಮ ಸ.ನಂ.	ಉತ್ತರ ಸ.ನಂ.	ದಕ್ಷಿಣ ಸ.ನಂ.	ವಿಸ್ತೀರ್ಣ ಎ.ಗುಂ	ಕಂದಾಯ ರೂ. ಪೈ
1	ಯಡಿಯೂರಪ್ಪ ಬಿನ್ ಸಂಗಪ್ಪ	ಯಡಿಯೂರಪ್ಪ ಬಿನ್ ಸಂಗಪ್ಪ	28/1	ಖುಷ್ಕಿ	ರಿ.ಸ 28/2	ರಿಸ.ನಂ. ನದಿ	ರಿ.ಸ.ನಂ. 29 ಮತ್ತು 454 ರ ಜಮೀನು	ರಿ.ಸ.ನಂ. ರಸ್ತೆ	0.22	0-60

ಪಿ.ಆರ್. 421

ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ರಾಮನಗರ ಜಿಲ್ಲೆ, ರಾಮನಗರ

ಭೂ ಆರ್ಜನೆ ಅಧಿನಿಯಮದ 4(1)ನೇ ಪ್ರಕರಣದ ಮೇರೆಗಿನ ಅಧಿಸೂಚನೆ

ಕ್ರಮಾಂಕ:ಎಲ್‌ಎಕ್ಯೂ.ಸಿ.ಆರ್:16/2009–10, ದಿನಾಂಕ: 25ನೇ ಜುಲೈ 2009

ಇದರ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಭೂಮಿಗಳು ಸಾರ್ವಜನಿಕ ಉದ್ದೇಶಕ್ಕಾಗಿ ಎಂದರೆ ಮಾಗಡಿ ಪಟ್ಟಣಕ್ಕೆ ಒಳಚರಂಡಿ ಘಟಕ ಸ್ಥಾಪಿಸಲು ಜಮೀನು ಅಗತ್ಯವಾಗಲಿದೆಯೆಂದು ಕರ್ನಾಟಕ ಸರ್ಕಾರಕ್ಕೆ ಕಂಡು ಬಂದಿರುವುದರಿಂದ:

ಕರ್ನಾಟಕ ಅಧಿನಿಯಮ ಸಂಖ್ಯೆ 33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂಸ್ವಾಧೀನ ಅಧಿನಿಯಮ ಸಂಖ್ಯೆ 1894 (ಕೇಂದ್ರ ಅಧಿನಿಯಮ ಸಂಖ್ಯೆ 1894ರ 1) 4ನೇ ಪ್ರಕರಣದ (1)ನೇ ಉಪ ಪ್ರಕರಣದ ಉಪಬಂಧಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಆ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ. ಹಾಗೂ ಕರ್ನಾಟಕ ಸರ್ಕಾರವು ಅಧಿನಿಯಮದ 4(2)ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ವಿಶೇಷ ಭೂ ಆರ್ಜನೆ ಅಧಿಕಾರಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡುತ್ತದೆ.

ಸದರಿ ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 5(ಎ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರನ್ನು ನೇಮಕ ಮಾಡಿದೆ.

ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುದಾದರೂ ಇದ್ದರೆ, ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು ದಿನಗಳ ಅವಧಿಯೊಳಗೆ ಅಥವಾ ಅದಕ್ಕೆ ಮುಂಚೆ, ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಆರ್ಜನೆ ಅಧಿನಿಯಮ 1894ರ 3(ಸಿ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರಿಗೆ ಲಿಖಿತದಲ್ಲಿ ಸಲ್ಲಿಸಬಹುದು.

ಸದರಿ ಆರ್ಜನೆ ಉದ್ದೇಶಕ್ಕಾಗಿ ಸದರಿ ಭೂಮಿಗಳ ಮೇಲೆ ನಿಯೋಜಿತರಾದ ಯಾವುದೇ ಅಥವಾ ಇತರೆ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಸದರಿ ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದ ನಂತರ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆ ಬೆಂಗಳೂರು ರವರ ಅನುಮತಿಯಿಲ್ಲದೆ, ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿಯ ಮೂಲಕ ಸದರಿ ಭೂಮಿಗಳ ವಿಲೇಗಾಗಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಆರ್ಜನೆ ಮಾಡಿಕೊಳ್ಳಲಾಗುವ ಸದರಿ ಭೂಮಿಗಳ ಅಂತಹ ಭಾಗಗಳ ಪರಿಹಾರಕ್ಕಾಗಿ ನಿರ್ಧರಣೆ ಮಾಡುವ ಅಧಿಕಾರಿಯು ಸದರಿ ಅಧಿನಿಯಮ (ಏಳನೇ ಖಂಡ) 2ನೇ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಕಛೇರಿಯಲ್ಲಿ ಭೂಮಿಗಳ ಸ್ಥೂಲ ನಕಾಶೆಯನ್ನು ಪರಿಶೀಲನೆಗಾಗಿ ಇಡಲಾಗಿದೆ (**ಎಲ್‌ಎಕ್ಯೂ.ಎಸ್‌ಆರ್: 01/09–10**)

ಅನುಸೂಚಿ

ಜಿಲ್ಲೆ: ರಾಮನಗರ **ತಾಲ್ಲೂಕು: ಮಾಗಡಿ** **ಹೋಬಳಿ: ಮಾಡಬಾಳ್** **ಗ್ರಾಮ: ಪುರ**

ಕ್ರ ಸಂ	ಖಾತೆದಾರರ ಹೆಸರು	ಅನುಭವದಾರರ ಹೆಸರು	ಸ.ನಂ	ತರಹೆ	ಚಕ್ಕುಬಂದಿ				ಅಗತ್ಯವಾದ ಅಂದಾಜು	ಮೌಲ್ಯ ನಿರ್ಧರಣೆ
					ಪೂರ್ವ ಸ.ನಂ.	ಪಶ್ಚಿಮ ಸ.ನಂ.	ಉತ್ತರ ಸ.ನಂ.	ದಕ್ಷಿಣ ಸ.ನಂ.	ವಿಸ್ತೀರ್ಣ ಎ.ಗುಂ	ಕಂದಾಯ ರೂ. ಪೈ
1	ಚಿಕ್ಕ ನರಸಪ್ಪ ಬಿನ್ ಸೀನಪ್ಪ ಉ.ನರಸಪ್ಪ	ಚಿಕ್ಕ ನರಸಪ್ಪ ಬಿನ್ ಸೀನಪ್ಪ ಉ.ನರಸಪ್ಪ	42/2	ಖುಷ್ಕಿ	53	43	ಪಿ.ಜಿ. ನಾಗರತ್ನಮ್ಮ	ವೀರಭದ್ರಯ್ಯ	1–36	7.00

ಕ್ರ ಸಂ	ಖಾತೆದಾರರ ಹೆಸರು	ಅನುಭವದಾರರ ಹೆಸರು	ಸ.ನಂ	ತರಹೆ	ಚಕ್ಕುಬಂದಿ				ಅಗತ್ಯವಾದ ಅಂದಾಜು	ಮೌಲ್ಯ ನಿರ್ಧರಣೆ
					ಪೂರ್ವ ಸ.ನಂ.	ಪಶ್ಚಿಮ ಸ.ನಂ.	ಉತ್ತರ ಸ.ನಂ.	ದಕ್ಷಿಣ ಸ.ನಂ.	ವಿಸ್ತೀರ್ಣ ಎ.ಗುಂ	ಕಂದಾಯ ರೂ. ಪೈ
2	ವೀರಭದ್ರಯ್ಯ ಬಿನ್ ವೀರಣ್ಣ	ವೀರಭದ್ರಯ್ಯ ಬಿನ್ ವೀರಣ್ಣ	42/2	ಖುಷ್ಕಿ	53	43	ಚಿಕ್ಕ ನರಸಪ್ಪ	ರಾಮಕ್ಕ	1–00	4.00
3	ರಾಮಕ್ಕ ಕೋಂ ದೊಡ್ಡ ಮಾರಯ್ಯ	ರಾಮಕ್ಕ ಕೋಂ ದೊಡ್ಡ ಮಾರಯ್ಯ	42/2	ಖುಷ್ಕಿ	53	43	ವೀರಭದ್ರಯ್ಯ	43 ಹಾಗೂ 41	3–10 0–07 ಖರಾಬು	13.00
4	ಗುಡ್ಡಯ್ಯ ಬಿನ್ ರಂಗಯ್ಯ	ಗುಡ್ಡಯ್ಯ ಬಿನ್ ರಂಗಯ್ಯ	42/2	ಖುಷ್ಕಿ	ನಂಜಪ್ಪ ಕಾಲಯ್ಯ	ರಾಮಕ್ಕ	ಸ.ನಂ.53	ಸ.ನಂ.10	1–36 0–19 ಖರಾಬು	7.00
5	ನಂಜಪ್ಪ ಬಿನ್ ಮಹಾಮಕ್ಕಯ್ಯ	ನಂಜಪ್ಪ ಬಿನ್ ಮಹಾಮಕ್ಕಯ್ಯ	42/2	ಖುಷ್ಕಿ	ಸ.ನಂ.53	ಗುಡ್ಡಯ್ಯ ಜಿ. ವೆಂಕಟೇಶ್	ಸ.ನಂ.53	ಸ.ನಂ.10	2–05 0–05 ಖರಾಬು	9.00
6	ಜಿ. ವೆಂಕಟೇಶ್ ಬಿನ್ ಲೇ॥ ಗೋವಿಂದಯ್ಯ	ಜಿ. ವೆಂಕಟೇಶ್ ಬಿನ್ ಲೇ॥ ಗೋವಿಂದಯ್ಯ	42/2	ಖುಷ್ಕಿ	ನಂಜಪ್ಪ ಕಾಲಯ್ಯ	ಸ.ನಂ.41 ರಾಮಕ್ಕ	ಗುಡ್ಡಯ್ಯ	ಸ.ನಂ.10	0–32 0–10 ಖರಾಬು	3.00
								ಒಟ್ಟು	10–39ಐನ್ 1–01 ಖರಾಬು	7.00

ಪಿ.ಆರ್. 422

ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ರಾಮನಗರ ಜಿಲ್ಲೆ, ರಾಮನಗರ

ಭೂ ಆರ್ಜನೆ ಅಧಿನಿಯಮದ 4(1)ನೇ ಪ್ರಕರಣದ ಮೇರೆಗಿನ ಅಧಿಸೂಚನೆ

ಕ್ರಮಾಂಕ:ಎಲ್‌ಎಕ್ಯೂ.ಎಸ್.ಆರ್:83/2008–09, ದಿನಾಂಕ: 16ನೇ ಸೆಪ್ಟೆಂಬರ್ 2009

ಇದರ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಭೂಮಿಗಳು ಸಾರ್ವಜನಿಕ ಉದ್ದೇಶಕ್ಕಾಗಿ ಎಂದರೆ ಇಗ್ಗಲೂರು ಜಲಾಶಯ ಯೋಜನೆಯ ಡಿ ಪಾಯಿಂಟ್‌ಗೆಂದು ಜಮೀನು ಅಗತ್ಯವಾಗಲಿದೆಯೆಂದು ಕರ್ನಾಟಕ ಸರ್ಕಾರಕ್ಕೆ ಕಂಡು ಬಂದಿರುವುದರಿಂದ:

ಕರ್ನಾಟಕ ಅಧಿನಿಯಮ ಸಂಖ್ಯೆ 33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂಸ್ವಾಧೀನ ಅಧಿನಿಯಮ ಸಂಖ್ಯೆ 1894 (ಕೇಂದ್ರ ಅಧಿನಿಯಮ ಸಂಖ್ಯೆ 1894ರ 1) 4ನೇ ಪ್ರಕರಣದ (1)ನೇ ಉಪ ಪ್ರಕರಣದ ಉಪಬಂಧಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಆ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ. ಹಾಗೂ ಕರ್ನಾಟಕ ಸರ್ಕಾರವು ಅಧಿನಿಯಮದ 4(2)ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ವಿಶೇಷ ಭೂ ಆರ್ಜನೆ ಅಧಿಕಾರಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡುತ್ತದೆ.

ಸದರಿ ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 5(ಎ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರನ್ನು ನೇಮಕ ಮಾಡಿದೆ.

ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುವಾದರೂ ಇದ್ದರೆ, ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು ದಿನಗಳ ಅವಧಿಯೊಳಗೆ ಅಥವಾ ಅದಕ್ಕೆ ಮುಂಚೆ, ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಅರ್ಜನೆ ಅಧಿನಿಯಮ 1894ರ 3(ಸಿ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸಲು ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಉಪ ವಿಭಾಗ, ರಾಮನಗರ ಇವರಿಗೆ ಲಿಖಿತದಲ್ಲಿ ಸಲ್ಲಿಸಬಹುದು.

Notice is hereby given that a petition has been made to this Court Under Sec 372 of the Indian Succession Act, for grant of Succession Certificate in respect of the amount of the deceased late Sri P.Paranjyothi, Who died on 17/5/09 at Bangalore.

Be it known that No caveat has been entered and the said petition is posted for hearing on 07/10/2009 at 11'O clock. Any person's claiming to have any interest may come and participate in the proceedings before grant of Succession certificate to the petitioner.

SCHEDULE

To receive the terminal Benefit amount from the Rail Wheel Factory.

Given under my hand and the seal of the Court, this the 11th day of September 2009.

By Order of the Court

P.D. 113 Asst. Registrar, City Civil Court, Mayohall Unit, Bangalore.

IN THE COURT OF THE IV ADDL. CITY CIVIL JUDGE MAYOHALL BANGALORE CCH-21

P & SC No.25019/2009 HG: 03/10/2009

PETITIONERS

1. Mrs. Rajini A.Maney 50 yrs W/o late Arun R.Maney
2. Miss. Shwetha A.Maney 30 yrs D/o late Arun R.Maney
3. Mr. Sharath A.Maney 26 yrs S/o late Arun R.Maney petitioner 1 to 3 reside at No.18, Lavelle Road, Bangalore.

V/s

RESPONDENTS Nil

PUBLIC NOTICE

Notice is hereby given that a petition has been made to this Court Under Sec 372 of the Indian Succession Act, for grant of Succession Certificate in respect of the amount of deceased late Arun R.Maney, Who died on 12/2/08 at Bangalore.

Be it known that no caveat has been entered and the said petition is posted for hearing on 03/10/2009 at 11'O clock. Any person's claiming to have any interest may come and participate in the proceedings before grant of Succession certificate to the petitioner.

SCHEDULE

Government of India 8% Savings (Taxable) Bonds-2003 issued through the HDFC Bank Ltd., 26-A, Narayan properties Ltd., Chandivili, Off Saki Vihar Road, Andheri (E) Mumbai 400072 for Rs.8,00,000/- 9 Rupees Eight lakhs only) and bearing Bond ledger No TBH5106010-4982 with interest @ 8% due from 12.2.08.

Given under my hand and the seal of this Court, this the 8th day of September 2009.

By Order of the Court

P.D. 114 Asst. Registrar, City Civil Court, Mayohall Unit, Bangalore.

IN THE COURT OF THE FAMILY JUDGE AT BANGALORE

G & W.C. No: 104/2009 HG: 6/10/2009

BETWEEN:

Smt. R.S. Karthika & --- Petitioners
Sri K. Shyam Kumar

AND

Nil : Respondent

PUBLIC NOTICE

That whereas Smt. R.S. Karthika and Sri K. Syam Kumar have filed a petition under section 7 of the Guardians and Wards Act seeking to declare them as the legal guardians of Master Ritesh.

Any person having any objection to the same may appear before the court on 6th October 2009 either personally or through a pleader.

By Order of the Court

P.D. 115 Sheristedar, Family Court, Bangalore.

ಗೌರವಾನ್ವಿತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ಘನ ನ್ಯಾಯಾಲಯ, ತುಮಕೂರು

ಪಿ.ಅಂಡ್ ಎಸ್.ಸಿ. 24/2009

ಅರ್ಜಿದಾರರು : ರಂಗಸ್ವಾಮಯ್ಯ

ವಿರುದ್ಧ

ಎದುರುದಾರರು : ಯಾರೂ ಇಲ್ಲ

ಸಾರ್ವಜನಿಕ ಪ್ರಕಟಣೆ

ಅರ್ಜಿದಾರರು ಈ ಘನ ನ್ಯಾಯಾಲಯದಲ್ಲಿ ಪ್ರೊಬೇಟ್‌ಗಾಗಿ ಅರ್ಜಿ ಸಲ್ಲಿಸಿದ್ದು, ಈ ಪ್ರಕಟಣೆಯ ಷೆಡ್ಯೂಲ್‌ನಲ್ಲಿ ಕೊಟ್ಟಿರುವ ಸ್ವತ್ತು ಅರ್ಜಿದಾರರಿಗೆ ಲೇಟ್ ಶ್ರೀಮತಿ ಲಕ್ಷ್ಮಕ್ಕ ಕೋಂ ಭೀಮಯ್ಯ ಎಂಬುವರು ದಿನಾಂಕ:08.11.1993ರಲ್ಲಿ ಬರೆದುಕೊಟ್ಟ ವಿಲ್ ಮೂಲಕ ಅವರ ಹಕ್ಕು ಸ್ವಾಧೀನಾನುಭವಕ್ಕೆ ಬಂದಿದ್ದು, ಸದರಿ ಸ್ವತ್ತಿಗೆ ಅವರೆ ಮಾಲೀಕರಾಗಿದ್ದು, ಹಾಗೂ ವಿಲ್ ಲೇಟ್ ಶ್ರೀಮತಿ ಲಕ್ಷ್ಮಕ್ಕಳ ಆಖೈರ್ ವಿಲ್ ಆಗಿರುತ್ತದೆ ಎಂಬುದಾಗಿ ನ್ಯಾಯಾಲಯದಿಂದ ಪ್ರೊಬೇಟ್ ಕೋರಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟವರು ಯಾರಾದರು ಸದರಿ ಸ್ವತ್ತಿನ ಮೇಲಾಗಲೀ ಅಥವಾ ಶ್ರೀಮತಿ ಲಕ್ಷ್ಮಕ್ಕಳ ವಾರಸುದಾರರಾಗಲೀ ಆಕ್ಷೇಪಣೆಗಳು ಇದ್ದಲ್ಲಿ ಖುದ್ದಾಗಲೀ ಅಥವಾ ತಮ್ಮ ಪರ ವಕೀಲರ ಮುಖೇನ ಈ ಘನ ನ್ಯಾಯಾಲಯದ ಮುಂದೆ ದಿನಾಂಕ: 21.10.09 ರಂದು ಬೆಳಿಗ್ಗೆ 11.00 ಗಂಟೆಗೆ ಹಾಜರಾಗಬೇಕಾಗಿ ಈ ಮೂಲಕ ತಿಳಿಸಲಾಗಿದೆ. ಒಂದು ವೇಳೆ ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲು ನ್ಯಾಯಾಲಯವು ಕ್ರಮಕೈಗೊಳ್ಳಬೇಕಾಗುತ್ತದೆ.

Given under my hand and seal of this court this 16th day of September 2009

ಷೆಡ್ಯೂಲ್

ಸರ್ವೆ ನಂ.88ರ ವಿಸ್ತೀರ್ಣ 1–00 ಎಕರೆ, ಆಕಾರ 1–40 ಪೈಸೆ, ಮೆಳೇಹಳ್ಳಿ ಗ್ರಾಮ, ಕೋರ ಹೋಬಳಿ, ತುಮಕೂರು ತಾಲ್ಲೂಕು, ಇದಕ್ಕೆ ಚಕ್ಕುಬಂದಿ:

ಪೂರ್ವಕ್ಕೆ : ಲಕ್ಷ್ಮಕ್ಕಳ ಜಮೀನು

ಪಶ್ಚಿಮಕ್ಕೆ : ಮಾರಯ್ಯನವರ ಜಮೀನು

ಉತ್ತರಕ್ಕೆ : ಭೀಮಯ್ಯನವರ ಜಮೀನು

ದಕ್ಷಿಣಕ್ಕೆ : ರೇಣುಕಮ್ಮನರ ಜಮೀನು

ನ್ಯಾಯಾಲಯದ ಆದೇಶದ ಮೇರೆಗೆ

ಪಿ.ಡಿ. 117 ಚೀಫ್ ಅಡ್ಮಿನಿಸ್ಟ್ರೇಟೀವ್ ಆಫೀಸರ್, ಜಿಲ್ಲಾ ಹಾಗೂ ಸತ್ರ ನ್ಯಾಯಾಲಯ, ತುಮಕೂರು.

ತೋಟಗಾರಿಕೆ ಉಪ ನಿರ್ದೇಶಕರ ಕಛೇರಿ, ಕಬ್ಬನ್ ಉದ್ಯಾನವನ, ಬೆಂಗಳೂರು

ಟೆಂಡರ್ ಪ್ರಕಟಣೆ

ಸಂಖ್ಯೆ: ತೋಉನಿ/ಕಉ/ ವಿನಿ2/17/2009–10, ಬೆಂಗಳೂರು, ದಿನಾಂಕ: 31ನೇ ಆಗಸ್ಟ್ 2009

ವಿಧಾನಸೌಧದಲ್ಲಿರುವ ಮುಖ್ಯ ಕಛೇರಿ / ಕೊಠಡಿಗಳಲ್ಲಿ ವಾರದಲ್ಲಿ ಎರಡು ಬಾರಿಯಂತೆ ಹೂದಾನಿಗಳ ಜೋಡಣೆ ಮಾಡಿ ಜೋಡಿಸಬೇಕಾಗಿರುತ್ತದೆ. ಈ ಬಗ್ಗೆ ಅಧಿಕೃತ ಹೂವಿನ ಮಾರಾಟಗಾರರು/ಸರಬರಾಜುದಾರರಿಂದ, ಒಂದು ವರ್ಷದ ಅವಧಿಗೆ ದರಪಟ್ಟಿ ಕರೆಯಲಾಗಿದೆ. ದೊಡ್ಡ ಪ್ರಮಾಣದ ಹೂದಾನಿ, ಮಧ್ಯಮ ಪ್ರಮಾಣದ ಹೂದಾನಿ, ಸಣ್ಣ ಪ್ರಮಾಣದ ಹೂದಾನಿ, ವೇದಿಕೆಯ ಮೇಲೆ ಅಲಂಕಾರಿಕ ಹೂಗಳ ಜೋಡಣೆಗೆ, ಹೂಗಳ ಸರಬರಾಜು ಮತ್ತು ಸಿದ್ಧತೆ ಮಾಡಲು ಇಚ್ಚಿಸುವವರು ಈ ಕೆಳಗೆ ಸೂಚಿಸಿದ ವಿವರಗಳ / ಷರತ್ತು ನಿಬಂಧನೆಗಳ ರೀತಿ ನಿಮ್ಮ ಟೆಂಡರ್‌ಗಳನ್ನು ದಿನಾಂಕ: 13.10.2009 ರೊಳಗೆ ಈ ಕಛೇರಿಗೆ ನೀಡಲು ಕೋರುತ್ತೇನೆ. ಹೆಚ್ಚಿನ ವಿಷಯಗಳಿಗೆ ಈ ಕಛೇರಿಯಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದು.

ವಿವಿಧ ಬಣ್ಣದ ಗುಲಾಬಿ ಹೂವುಗಳು	ಸುಗಂಧರಾಜ
ಕಾರ್ನೆಷನ್ಸ್	ಆಲ್‌ಫಿನಿಯಾ

ಏಷಿಯಾ ಟಿಕ್ ಲಿಲ್ಲಿ	ಸ್ಪಾರೆಡೈಸಿ (ಬಿಳಿದು)
ಕ್ರೀಸಾಂತಮಮ್	ಜಿಂಜರ್ ಲಿಲ್ಲಿ
ಆಂತೋರಿಯಂ	ಡೇಲಿಯಾ
ಜರಬಲಾ	ಆಲ್‌ಸ್ಟ್ರೋಮೇರಿಯ
ಲಿಲ್ಲಿಯಮ್ಸ್	ಆಸಫರಾಗಸ್
ಗ್ಲಾಡಿಯೋಲಸ್	ಫೋಲಿಯಜ್
ಕಾಲಲಿಲ್ಲಿ	ಫಿಷ್ ಲೀವ್ಸ್
ಆರ್ಕಿಡ್ಸ್	ಬರ್ಡ ಆಫ್ ಪ್ಯಾರಡೈಸ್
	ಇತರೆ ಹೂಗಳು

ಷರತ್ತು ಮತ್ತು ನಿಬಂಧನೆಗಳು:-

1. ಭದ್ರತಾ ಠೇವಣಿ ರೂ. 10,000/- ಬ್ಯಾಂಕ್ ಡಿಮಾಂಡ್ ಡ್ರಾಫ್ಟನ್ನು ಸದಸ್ಯ ಕಾರ್ಯದರ್ಶಿಗಳು, "ಸುವರ್ಣ ಕರ್ನಾಟಕ ಉದ್ಯಾನವನಗಳ ಪ್ರತಿಷ್ಠಾನ" ಲಾಲ್‌ಬಾಗ್, ಬೆಂಗಳೂರು ಇವರ ಹೆಸರಿನಲ್ಲಿ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದು ಸಲ್ಲಿಸಬೇಕು.
2. ನಿಗದಿಯಾದ ಸಮಯದೊಳಗೆ ನಿಮ್ಮ ಟೆಂಡರ್‌ಗಳನ್ನು ಈ ಕಛೇರಿಗೆ ತಲುಪಿಸಬೇಕು. ಅವಧಿ ಮೀರಿದ ನಂತರ ಬಂದ ಟೆಂಡರ್‌ಗಳನ್ನು ಅಂಗೀಕರಿಸಲಾಗುವುದಿಲ್ಲ.
3. ಟೆಂಡರ್‌ಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಪೂರ್ಣ ಅಧಿಕಾರ ತೋಟಗಾರಿಕೆ ನಿರ್ದೇಶಕರು ಲಾಲ್‌ಬಾಗ್, ಬೆಂಗಳೂರು ರವರು ಪಡೆದಿರುತ್ತಾರೆ.
4. ನಿಯಮಾನುಸಾರ ಬಿಲ್ಲಿನ ಮೂಲದಲ್ಲಿ ಅನ್ವಯವಾಗುವ ತೆರಿಗೆಗಳನ್ನು ಕಟಾಯಿಸಲಾಗುವುದು.
5. ಟೆಂಡರ್ ಫಾರಂಗಳನ್ನು ಈ ಕಛೇರಿಯಿಂದ ದಿನಾಂಕ:08-10-09 ರಿಂದ 12-10-09 ರವರೆಗೆ ರೂ.500-00 ಪಾವತಿಸಿ ಪಡೆಯಬಹುದು.
6. ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 13-10-2009 ರಂದು ಬೆಳಿಗ್ಗೆ 11.00 ಗಂಟೆಯವರೆಗೆ ಹಾಗೂ ಅಂದೇ ಮಧ್ಯಾಹ್ನ 12.00 ಗಂಟೆಗೆ ಹಾಜರಿರುವ ಟೆಂಡರ್‌ದಾರರ ಸಮ್ಮುಖದಲ್ಲಿ ತೆರೆಯಲಾಗುವುದು.
7. ಹೆಚ್ಚಿನ ಮಾಹಿತಿಯನ್ನು ತೋಟಗಾರಿಕೆ ಉಪ ನಿರ್ದೇಶಕರು, ಕಬ್ಬನ್ ಉದ್ಯಾನವನ, ಬೆಂಗಳೂರು, ರವರ ಕಛೇರಿ ವೇಳೆಯಲ್ಲಿ ಪಡೆಯಬಹುದು.

ತೋಟಗಾರಿಕೆ ಉಪ ನಿರ್ದೇಶಕರು,
ಕಬ್ಬನ್ ಉದ್ಯಾನವನ, ಬೆಂಗಳೂರು.

ಪಿ.ಆರ್. 789

ತೋಟಗಾರಿಕೆ ಇಲಾಖೆ

ತೋಟಗಾರಿಕೆ ನಿರ್ದೇಶನಾಲಯ, ಬಯೋಟೆಕ್ನಾಲಜಿ ಕೇಂದ್ರ, ಹುಳಿಮಾವು, ಅಂಚೆಪೆಟ್ಟಿಗೆ ಸಂ:7648, ಬೆಂಗಳೂರು

ಟೆಂಡರ್ ಪ್ರಕಟಣೆ

ಸಂ:ತೋಇ:ಜೀವತ:ಸತೋನಿ:ಹುತೋ:2009-10, ಬೆಂಗಳೂರು, ದಿನಾಂಕ: 10ನೇ ಸೆಪ್ಟೆಂಬರ್ 2009

ಈ ಮೂಲಕ ಸಾರ್ವಜನಿಕರಿಗೆ ಮತ್ತು ಹಣ್ಣಿನ ವ್ಯಾಪಾರಿಗಳಿಗೆ ತಿಳಿಸುವುದೇನೆಂದರೆ, ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕು ಹುಳಿಮಾವು ತೋಟಗಾರಿಕೆ ಕ್ಷೇತ್ರದಲ್ಲಿ ಬೆಳೆದಿರುವ ಸಪೋಟ ಹಣ್ಣಿನ 2008ನೇ ಸಾಲಿನ ಎರಡನೇ ಅವಧಿಯ ಫಸಲನ್ನು (01.07.2009 ರಿಂದ 31.12.2009) ಅದೇ ಕ್ಷೇತ್ರದಲ್ಲಿ ದಿನಾಂಕ: 14.10.2009 ರಂದು ಬೆಳಿಗ್ಗೆ 2.30ಕ್ಕೆ ಸಾರ್ವಜನಿಕರ ಸಮಕ್ಷಮದಲ್ಲಿ ಟೆಂಡರ್ ಮೂಲಕ ವಿಲೇವಾರಿ ಮಾಡಲಾಗುವುದು.

ಕ್ರ. ಸಂ.	ತೋಟಗಾರಿಕೆ ಕ್ಷೇತ್ರ ಮತ್ತು ಹರಾಜು ನಡೆಯುವ ಸ್ಥಳ	ವಿಲೇವಾರಿ ಮಾಡುವ ಹಣ್ಣಿನ ಫಸಲು	ಮರಗಳ ಸಂಖ್ಯೆ	ಠೇವಣಿ ಹಣ ರೂ.ಗಳಲ್ಲಿ	ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ ಮತ್ತು ವೇಳೆ	ಟೆಂಡರ್ ತೆರೆಯುವ ದಿನಾಂಕ ಮತ್ತು ವೇಳೆ
1.	ಹುಳಿಮಾವು ತೋಟಗಾರಿಕೆ ಕ್ಷೇತ್ರ ಬನ್ನೇರುಘಟ್ಟ ರಸ್ತೆ, ಬೆಂಗಳೂರು-76	ಸಪೋಟ	731	10,000/-	14.10.2009 ಮಧ್ಯಾಹ್ನ 1.00 ಗಂಟೆಯವರೆಗೆ	14.10.2009 ಮಧ್ಯಾಹ್ನ 2.30 ಗಂಟೆಗೆ

ಟೆಂಡರ್ ಹಾಕುವವರು ಟೆಂಡರ್ ಫಾರಂನ್ನು ರೂ.25-00 ಪಾವತಿ ಮಾಡಿ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯಿಂದ ಪಡೆಯಬೇಕು. ಟೆಂಡರ್‌ದಾರರು ನಿಗದಿಪಡಿಸಿದ ಠೇವಣಿ ಮೊತ್ತ ಮತ್ತು ಫಸಲಿಗೆ ಟೆಂಡರ್‌ದಾರರು ನಮೂದಿಸಿರುವ ಟೆಂಡರ್ ಮೊತ್ತದ ಶೇ.50 ಭಾಗದ ಮೊತ್ತವನ್ನು ಡಿ.ಡಿ.ರೂಪದಲ್ಲಿ KSHDA, Bangalore ಇವರ ಹೆಸರಿನಲ್ಲಿ ಪಡೆದು ಭರ್ತಿ ಮಾಡಿದ ಟೆಂಡರ್ ಫಾರಂಗೆ ಕಡ್ಡಾಯವಾಗಿ ಲಗತ್ತಿಸಬೇಕು. ಟೆಂಡರ್ ಫಾರಂನಲ್ಲಿ ಹೆಸರು, ವಿಳಾಸ, ಟೆಂಡರ್

ಮೊತ್ತ ಇತ್ಯಾದಿಗಳನ್ನು ಸರಿಯಾಗಿ ದಾಖಲಿಸಬೇಕು. ಇಲ್ಲದಿದ್ದರೆ, ಅಪೂರ್ಣ ಟೆಂಡರ್ ಎಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಭರ್ತಿ ಮಾಡಿದ ಟೆಂಡರ್ ಫಾರಂ ಮತ್ತು ಡಿ.ಡಿ.ಗಳನ್ನು ಮೊಹರಾದ ಲಕೋಟೆಯಲ್ಲಿ ನಿಗದಿತ ದಿನಾಂಕ ಮತ್ತು ವೇಳೆಯೊಳಗೆ ಸಲ್ಲಿಸಬೇಕು.

ಟೆಂಡರ್ ಅನುಮೋದನೆಯಾದ ದಿನಾಂಕದಿಂದ 10 ದಿನಗಳೊಳಗೆ ಪೂರ್ತಿ ಹಣವನ್ನು ಡಿ.ಡಿ. ರೂಪದಲ್ಲಿ ಪಾವತಿಸಿ ಫಸಲನ್ನು 31.12.2009 ರವರೆಗೆ ರೂಢಿಸಿಕೊಳ್ಳಬಹುದು. ಟೆಂಡರ್‌ನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರವನ್ನು ತೋಟಗಾರಿಕೆ ನಿರ್ದೇಶಕರು ಪಡೆದಿರುತ್ತಾರೆ. ಇಲಾಖಾ ಅಧಿಕಾರಿಗಳ ತೀರ್ಮಾನವೇ ಅಂತಿಮವಾಗಿರುತ್ತದೆ.

ಹೆಚ್ಚಿನ ವಿವರಗಳನ್ನು ಸಹಾಯಕ ತೋಟಗಾರಿಕೆ ನಿರ್ದೇಶಕರು, ಹುಳಿಮಾವು ಇವರನ್ನು ಸಂಪರ್ಕಿಸಿ ಪಡೆದುಕೊಳ್ಳಬಹುದು.

ಪಿ.ಆರ್. 786 ಸಹಾಯಕ ತೋಟಗಾರಿಕೆ ನಿರ್ದೇಶಕರು, (ಹುಳಿಮಾವು ತೋಟಗಾರಿಕೆ ಕ್ಷೇತ್ರ)

ನೋಂದಣಿ ಮತ್ತು ಮುದ್ರಾಂಕ ಇಲಾಖೆ

ಜಿಲ್ಲಾ ನೋಂದಣಾಧಿಕಾರಿಗಳ ಕಾರ್ಯಾಲಯ, ತುಮಕೂರು

ಅಧಿಕೃತ ಜ್ಞಾಪನ ನಂ. ಇ.ಎಸ್.ಟಿ.17/09-10, (ನೇರ ನೇಮಕಾತಿ), ದಿನಾಂಕ: 14ನೇ ಸೆಪ್ಟೆಂಬರ್ 2009

ವಿಷಯ: ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾದ ಅಭ್ಯರ್ಥಿಗಳನ್ನು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ನೇಮಕ ಮಾಡುವ ಕುರಿತು.

ಉಲ್ಲೇಖ: 1. ಕಾರ್ಯದರ್ಶಿಯವರು ಕರ್ನಾಟಕ ಲೋಕಸೇವಾ ಆಯೋಗ ಬೆಂಗಳೂರು ಅವರ ಪತ್ರ ಸಂಖ್ಯೆ : ಇ(3) 764-823/2009-10/ಪಿಎಸ್‌ಸಿ ದಿನಾಂಕ: 25.07.2009/3.8.09.

2. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ಬೆಂಗಳೂರು ಇವರ ಅಲಾಟ್‌ಮೆಂಟ್ ಪತ್ರ ಸಂಖ್ಯೆ: ಸಿಬ್ಬಂದಿ 2-144/05-06, ದಿನಾಂಕ: 24.08.2009.

ಕರ್ನಾಟಕ ಲೋಕಸೇವಾ ಆಯೋಗದಿಂದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆಯಾಗಿ ಉಲ್ಲೇಖ (2) ರನ್ವಯ ಈ ಜಿಲ್ಲೆಗೆ ಹಂಚಿಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 4(1) ರನ್ವಯ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾತ್ಕಾಲಿಕವಾಗಿ ದ್ವಿತೀಯ ದರ್ಜೆ ಸಹಾಯಕರಾಗಿ ವೇತನ ಶ್ರೇಣಿ ರೂ. 5800-10500 ರಲ್ಲಿ ಈ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ನೇಮಕ ಮಾಡಿ ಇವರುಗಳನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಕಛೇರಿಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡಿರುವುದು ಸರಿಯಷ್ಟೆ. ಸದರಿ ಆದೇಶವನ್ನು ಈ ಕೆಳಕಂಡ ದಾಖಲಾತಿಗಳನ್ನು ಒದಗಿಸುವ ತನಕ ತಾತ್ಕಾಲಿಕವಾಗಿ ತಡೆಹಿಡಿಯಲಾಗಿದೆ ಎಂಬುದನ್ನು ಈ ಕೆಳಕಂಡವರಿಗೆ ಸೂಚಿಸಲಾಗಿದೆ.

ಒದಗಿಸಬೇಕಾದ ದಾಖಲಾತಿಗಳು:

1) ಅಭ್ಯರ್ಥಿಯು Reservation Quota ದಲ್ಲಿ ಆಯ್ಕೆ ಹೊಂದಿದ್ದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ ಸಿಂಧುತ್ವ ಪ್ರಮಾಣ ಪತ್ರವನ್ನು ತರತಕ್ಕದ್ದು.
2) ಅಭ್ಯರ್ಥಿಯ ಪೂರ್ವ ಚರಿತ್ರೆಯ ಬಗ್ಗೆ ಪೊಲೀಸ್ ಇಲಾಖೆಯಿಂದ ವರದಿ ತರತಕ್ಕದ್ದು.
3) ಅಭ್ಯರ್ಥಿಯ ವಿದ್ಯಾರ್ಹತೆ ಕುರಿತಂತೆ ಮೂಲ ದಾಖಲೆಗಳನ್ನು ಪರಿಶೀಲಿಸಲು ತರತಕ್ಕದ್ದು.
4) ಆಯ್ಕೆ ಪಟ್ಟಿಯಲ್ಲಿ ಮಹಿಳಾ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಎಲ್ಲಾ ಅಭ್ಯರ್ಥಿಗಳ ಆಯ್ಕೆಯು ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ : ಸಮಿತಿ-232/99ರ ಅಂತಿಮ ನಿರ್ಣಯಕ್ಕೆ ಬದ್ಧರಾಗಿರುವ ಕುರಿತು ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಪತ್ರಕ್ಕೆ ಲಗತ್ತಿಸಿರುವ ಮಾದರಿಯಲ್ಲಿ ಪ್ರಮಾಣ ಪತ್ರವನ್ನು ರೂ. 20/- ಛಾಪಾ ಕಾಗದದ ಮೇಲೆ ಬೆರಳಚ್ಚು ಮಾಡಿಸಿ ತರತಕ್ಕದ್ದು.

ಕ್ರ. ಸಂ.	ಹೆಸರು ಮತ್ತು ವಿಳಾಸ ಶ್ರೀ/ಶ್ರೀಮತಿ	ಕೆಪಿಎಸ್‌ಸಿ ಆಯ್ಕೆಪಟ್ಟಿಯ ಕ್ರಮ ಸಂಖ್ಯೆ	ದ್ವಿತೀಯ ದರ್ಜೆ ಸಹಾಯಕರೆಂದು ನೇಮಕಾತಿ ಮಾಡಿದ ಕಛೇರಿ
1	2	3	4
1	ಅರ್ಮೀಸ್ ಮೊಂಟೇರೋ ಪಿಸಿಜೆ (ಜೆಡಿ) ಮತ್ತು ಜೆ.ಎಂ.ಎಫ್.ಸಿ. ಕೋರ್ಟ್, ಹೊಸಪೇಟೆ-583 201.	61	ಉಪನೋಂದಣಿ ಕಛೇರಿ, ತಿಪಟೂರು
2	ನಾಗರಾಜು. ಡಿ. ಬಿನ್ ದೊಡ್ಡೀರಣ್ಣ ವೀರಳಗೊಂಡಿ ಗ್ರಾಮ, ಕನ್ನಮೇಡಿ ಅಂಚೆ ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ	62	ಜಿಲ್ಲಾ ನೋಂದಣಿ ಕಛೇರಿ ತುಮಕೂರು
3	ಶ್ಯಾಮಲ. ಡಿ.ಆರ್. ಶಿವಪ್ರಸಾದ್ ನಿಲಯ ಮೇಲೆ ಮಹಡಿ 7ನೇ ಕ್ರಾಸ್, ಗಂಗೋತ್ರಿನಗರ ತುಮಕೂರು – 572 103	76	ಉಪನೋಂದಣಿ ಕಛೇರಿ, ಗುಬ್ಬಿ

1	2	3	4
4	ದೇವರಾಜ ಬಿ.ಕೆ. ಕೇರಾಫ್ ಜಯಪ್ಪ ಟಿ. ಎಂ.ಜಿ.ದಿಬ್ಬ ಅಂಚೆ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ 577 527	64	ಉಪನೋಂದಣಿ ಕಛೇರಿ, ಹುಲಿಯೂರುದುರ್ಗ
5	ಪುಣ್ಯವತಿ. ಟಿ.ಸಿ., ಬಿನ್ ಚಂದ್ರಶೇಖರ ಟಿ.ಬಿ., ಫಾರ್ಮ್‌ಹೌಸ್ ಅರಣ್ಯ ಕಛೇರಿ ಹತ್ತಿರ ತುರುವೇಕೆರೆ, ತುಮಕೂರು ತಾಲ್ಲೂಕು 572 227	78	ಉಪನೋಂದಣಿ ಕಛೇರಿ, ತುರುವೇಕೆರೆ
6	ಮಂಜಪ್ಪ ವೈ.ಹೆಚ್. ಬಿನ್ ದೊಡ್ಡಹನುಮಂತಪ್ಪ ಯರಗುಂಟೆ ಗ್ರಾಮ, ದೇವರಾಜ ಅರಸ್ ಲೇಔಟ್, ದಾವಣಗೆರೆ–577 006	69	ಉಪನೋಂದಣಿ ಕಛೇರಿ, ಪಾವಗಡ

ಪಿ.ಆರ್. 784 ಜಿಲ್ಲಾ ನೋಂದಣಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.

ಉಪ ಕೃಷಿ ನಿರ್ದೇಶಕರವರ ಕಛೇರಿ, ಶ್ರೀ ಉಗ್ರೇ ಗೌಡ ಸ್ಮಾರಕ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ

ಸಂ:ಉಕೃನಿ:ಶ್ರೀಉಸ್ಮಾ:ಜಕೃತಕೇಂ:ವಾಹನ:ವಿಲೇವಾರಿ:2009–10, ದಿನಾಂಕ: 29ನೇ ಆಗಸ್ಟ್ 2009

ವಿಷಯ: ಅನುಪಯುಕ್ತ ವಾಹನಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವ ಬಗ್ಗೆ.

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಉಪ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ, ಶಿರಾ ತಾಲ್ಲೂಕು, ಇವರ ವ್ಯಾಪ್ತಿಯಲ್ಲಿರುವ ಈ ಕೆಳಕಂಡ ಅನುಪಯುಕ್ತ ವಾಹನಗಳನ್ನು ದಿನಾಂಕ: 23.10.2009 ರಂದು ಬೆಳಿಗ್ಗೆ 11.30 ಗಂಟೆಗೆ ಸದರಿ ಕಛೇರಿಯ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಆಸಕ್ತಿಯುಳ್ಳವರು ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ.

ಕ್ರ. ಸಂ.	ಅನುಪಯುಕ್ತ ವಾಹನ ನೋಂದಣಿ ಸಂಖ್ಯೆ	ಮಾದರಿ	ಖರೀದಿಸಿದ ವರ್ಷ
1	ಕೆ.ಎ. –01–ಜಿ–662	(ಸ್ವರಾಜ್ ಮಜ್ದ ಮಿನಿ ಬಸ್) (ಡೀಸೆಲ್) 1992	1992
2	ಸಿವಿಜೆ.9112	(ಮಹೇಂದ್ರ ಮತ್ತು ಮಹೇಂದ್ರ ಜೀಪು) (ಡೀಸೆಲ್) 1981	1981

ಹರಾಜಿನ ಷರತ್ತು ಮತ್ತು ನಿಬಂಧನೆಗಳು:–

1. ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವವರು ರೂ.5000–00 (ರೂ. ಐದು ಸಾವಿರ)ಗಳನ್ನು ಹರಾಜಿಗೆ ಮುಂಚೆ ಠೇವಣಿಯಾಗಿ ನಗದಾಗಿ ಪಾವತಿಸಿ ರಶೀತಿ ಪಡೆಯತಕ್ಕದ್ದು. ಮತ್ತು ರಶೀತಿ ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸತಕ್ಕದ್ದು.
2. ಹರಾಜಿನ ನಂತರ ಯಾರ ಹೆಸರಿನಲ್ಲಿ ಬಿಡ್ ನಿಲ್ಲುತ್ತದೆಯೋ ಅವರು ಬಿಡ್‌ನ ಶೇ.50 ಭಾಗ ಹಣವನ್ನು ಸ್ಥಳದಲ್ಲಿಯೇ ಕೂಡಲೇ ಪಾವತಿಸಿ ರಶೀತಿ ಪಡೆಯತಕ್ಕದ್ದು.
3. ಅಧಿಕೃತ ಬಿಡ್‌ದಾರರು ಶೇ.50 ಭಾಗ ಹಣ ಪಾವತಿ ಮಾಡದೇ ಇದ್ದಲ್ಲಿ ವಾಹನವನ್ನು ಪುನಃ ಮರು ಹರಾಜು ಮಾಡಲಾಗುವುದು ಮತ್ತು ಠೇವಣಿ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
4. ವಾಹನದ ಅಂತಿಮ ಬಿಡ್‌ನ್ನು ನಿರ್ಣಯಿಸುವುದರಲ್ಲಿ ಉಪ ಕೃಷಿ ನಿರ್ದೇಶಕರ ತೀರ್ಮಾನವೇ ಅಂತಿಮವಾಗಿರುತ್ತದೆ.
5. ವಾಹನವನ್ನು ಹರಾಜು ಮಾಡಿದ ನಂತರ ಜಿಲ್ಲಾಧಿಕಾರಿಗಳು ತುಮಕೂರು, ಇವರಿಂದ ಹೆಚ್ಚಿನ ಬಿಡ್‌ದಾರರ ಹೆಸರಿಗೆ ಹರಾಜನ್ನು ಸ್ಥಿರೀಕರಿಸಿದ ನಂತರ ಉಳಿಕೆ ಶೇ.50 ಭಾಗದ ಹಣವನ್ನು ಪಾವತಿಸಿದ ನಂತರ ವಾಹನವನ್ನು ನೀಡಲಾಗುವುದು.
6. ಪೂರಾ ಹಣವನ್ನು ಪಾವತಿಸಿದ ನಂತರ ಉಪ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ ಇವರು ಆದೇಶ ನೀಡಿದ ನಂತರ 7 ದಿನಗಳಲ್ಲಿ ಬಿಡ್‌ದಾರರು ಸ್ವಂತ ಖರ್ಚಿನಲ್ಲಿ ವಾಹನವನ್ನು ತೆಗೆದುಕೊಂಡು ಹೋಗತಕ್ಕದ್ದು. ತಪ್ಪಿದಲ್ಲಿ ನೆಲಬಾಡಿಗೆಯನ್ನು ದಿನಕ್ಕೆ ರೂ.50.00 ರಂತೆ ವಿಧಿಸಲಾಗುವುದು ಮತ್ತು 15 ದಿನಗಳು ಮೀರಿದಲ್ಲಿ ವಾಹನವನ್ನು ಮರು ಹರಾಜು ಮಾಡಲಾಗುವುದು.
7. ಅಂತಿಮ ಬಿಡ್‌ದಾರರು ವಾಹನವನ್ನು ತೆಗೆಯುವ ಮುನ್ನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತುಮಕೂರು ಇವರ ಕಾರ್ಯಾಲಯದಿಂದ ಬದಲಾವಣೆ ಫಾರಂ ತಂದು ತಾವೇ ಸಹಿ ಮಾಡಿಸತಕ್ಕದ್ದು.
8. ವಾಹನಕ್ಕೆ ಸಂಬಂಧಿಸಿದ ದಾಖಲೆ ಪತ್ರಗಳನ್ನು ಈ ಕಛೇರಿಯಿಂದ ಪಡೆಯತಕ್ಕದ್ದು. ಹರಾಜಿನ ಹಣದ ಮೇಲೆ ಶೇ.4 ಮಾರಾಟ ತೆರಿಗೆ ಮತ್ತು ಮಾರಾಟ ತೆರಿಗೆಯ ಮೇಲೆ ಶೇ.5 ಸರ್ ಚಾರ್ಜ್ ತೆರಿಗೆ ಪಾವತಿ ಮಾಡತಕ್ಕದ್ದು.
9. ವಾಹನವನ್ನು ಪರೀಕ್ಷಿಸಲು ಇಷ್ಟವುಳ್ಳವರು ಸದರಿ ವಾಹನಗಳನ್ನು ಉಪ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಚಿಕ್ಕನಹಳ್ಳಿ ಕಛೇರಿ ಆವರಣದಲ್ಲಿ ಕಛೇರಿ ವೇಳೆಯಲ್ಲಿ ಅಧಿಕೃತ ಸಿಬ್ಬಂದಿ ಸಮ್ಮುಖದಲ್ಲಿ ಪರೀಕ್ಷಿಸಬಹುದು.
10. ಈ ಬಹಿರಂಗ ಹರಾಜಿನ ಬಗ್ಗೆ ಎಲ್ಲಾ ಹಂತಯಲ್ಲಿ ಅಂತಿಮ ತೀರ್ಮಾನವು ಉಪ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ, ಇವರ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಹಾಗೂ ಯಾವುದೇ ವಿವಾದವನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುವಂತಿಲ್ಲ.

ಉಪ ಕೃಷಿ ನಿರ್ದೇಶಕರು,

ಪಿ.ಆರ್. 785 ಶ್ರೀ ಉಗ್ರೇಗೌಡ ಸ್ಮಾರಕ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ

ಅರಣ್ಯ ಸಂರಕ್ಷಣಾಧಿಕಾರಿಗಳು, ಚಾಮರಾಜನಗರ ವೃತ್ತ, ಚಾಮರಾಜನಗರ ರವರ ಕಚೇರಿಯ ಅಧಿಸೂಚನೆ ಪತ್ರ ಸಂಖ್ಯೆ: ಎ2 ಸಿಬ್ಬಂದಿ.ನೇ.ನೇ (ಆ.ಕವಾಡಿ) ಎವ 15/2009-10 ದಿನಾಂಕ: 01.08.2009ರ ಪ್ರಕಾರ ಆನೆ ಕವಾಡಿ ನೇರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅಂತಿಮ ಪಟ್ಟಿ

ಕ್ರ. ಸಂ.	ಹೆಸರು ಶ್ರೀಯುತ:	ವಿಭಾಗ	100 ಅಂಕಗಳಿಗೆ ಪಡೆದಿರುವ ಅಂಕ	ಮೀಸಲಾತಿ	ಷರಾ
1	[illegible] ಬಿನ್ ಕರಿಯ	ಹುಲಿಯೋಜನೆ ವಿಭಾಗ ಬಂಡೀಪುರ	94.00	ಸಾಮಾನ್ಯ ಅಭ್ಯರ್ಥಿ	ಚಾಮರಾಜನಗರ ವನ್ಯಜೀವಿ ವಿಭಾಗದಲ್ಲಿನ 02 ಹುದ್ದೆಗಳ ಪೈಕಿ ಸಾಮಾನ್ಯ ಅರ್ಹತೆಯ 01 ಹುದ್ದೆಯು ಭರ್ತಿಯಾಗಿರುತ್ತದೆ. ಉಳಿದ 01 ಪರಿಶಿಷ್ಟಜಾತಿಯ ಬ್ಯಾಕ್‌ಲಾಗ್ ಹುದ್ದೆಗೆ ಪರಿಶಿಷ್ಟ ಜಾತಿಯ ಅಭ್ಯರ್ಥಿಯು ಲಭ್ಯವಾಗದೇ ಇರುವುದರಿಂದ ಈ 01 ಹುದ್ದೆಯನ್ನು ನಿಯಮಾನುಸಾರ ಮುಂದಿನ ನೇರ ನೇಮಕಾತಿಯಲ್ಲಿ ಸರಿದೂಗಿಸಿಕೊಳ್ಳಲಾಗುವುದು. ಹುಲಿ ಯೋಜನೆ ವಿಭಾಗ, ಬಂಡೀಪುರದಲ್ಲಿನ ಪರಿಶಿಷ್ಟ ಜಾತಿಗೆ ಮೀಸಲಿರಿಸಿದ 02 ಹುದ್ದೆಗಳಲ್ಲಿ (01 ಬ್ಯಾಕ್‌ಲಾಗ್ ಹುದ್ದೆ ಮತ್ತು 01 ನೇರನೇಮಕಾತಿ ಹುದ್ದೆ) ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಲಭ್ಯವಾಗದೇ ಇರುವುದರಿಂದ ಈ 02 ಹುದ್ದೆಗಳನ್ನು ನಿಯಮಾನುಸಾರ ಮುಂದಿನ ನೇರನೇಮಕಾತಿಯಲ್ಲಿ ಸರಿದೂಗಿಸಿಕೊಳ್ಳಲಾಗುವುದು. ಬಂಡೀಪುರ ವಿಭಾಗದ 03 ಸಾಮಾನ್ಯ ಅರ್ಹತೆಯ ಹುದೆಗಳಲ್ಲಿ 01 ಹುದ್ದೆ ಮಹಿಳಾ ಅಭ್ಯರ್ಥಿಗಾಗಿ ಮೀಸಲಿದ್ದು, ಮಹಿಳಾ ಅಭ್ಯರ್ಥಿಯು ಲಭ್ಯವಾಗದೇ ಇರುವುದರಿಂದ ಈ ಎಲ್ಲಾ 03 ಹುದೆಗಳನ್ನು ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗಿದೆ. ಬಂಡೀಪುರ ವಿಭಾಗದ ಪ್ರವರ್ಗ Iರ 01 ಹುದ್ದೆಗೆ ಹಾಗೂ ಪ್ರವರ್ಗ II(ಎ) ರ 02 ಹುದ್ದೆಗಳಿಗೆ ಆ ವರ್ಗದ ಅಭ್ಯರ್ಥಿಗಳು ಲಭ್ಯವಾಗದೇ ಇರುವುದರಿಂದ ಈ 03 ಹುದ್ದೆಗಳನ್ನು ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗಿದೆ. ಬಂಡೀಪುರ ವಿಭಾಗದ ಪ್ರವರ್ಗ II (ಬಿ)ಯ 01 ಹುದ್ದೆಯನ್ನು ಆ ಪ್ರವರ್ಗದ ಅಭ್ಯರ್ಥಿಯಿಂದಲೇ ಭರ್ತಿಮಾಡಲಾಗಿರುತ್ತದೆ.
2	[illegible] ಬಿನ್ ಕರಿಯ	ಹುಲಿಯೋಜನೆ ಬಂಡೀಪುರ	91.30	ಸಾಮಾನ್ಯ ಅಭ್ಯರ್ಥಿ	
3	ಚಂದ್ರಶೇಖರ್ ಬಿನ್ ಮಾದ	ಹುಲಿಯೋಜನೆ ವಿಭಾಗ ಬಂಡೀಪುರ	91.00	ಸಾಮಾನ್ಯ ಅಭ್ಯರ್ಥಿ	
4	ಜೆ.ಕೆ. ಸುನೀಲ್‌ಕುಮಾರ್ ಬಿನ್ ಜೆ.ಕೆ. ಕುಮಾರ	ವನ್ಯಜೀವಿ ವಿಭಾಗ ಚಾಮರಾಜನಗರ	89.33	ಸಾಮಾನ್ಯ ಅಭ್ಯರ್ಥಿ	
5	ಜೆ.ಎಂ. ಗೋಪಾಲ ಬಿನ್ ಮಾಗಡಿ	ಹುಲಿಯೋಜನೆ ವಿಭಾಗ ಬಂಡೀಪುರ	88.33	ಪ್ರವರ್ಗ I	
6	ಜೆ.ಕೆ. ಸುರೇಶ ಬಿನ್ ಕೆಂಚ	ಹುಲಿಯೋಜನೆ ವಿಭಾಗ ಬಂಡೀಪುರ	86.00	ಪ್ರವರ್ಗ II (ಎ)	
7	ಮಾದ ಬಿನ್ [illegible]	ಹುಲಿಯೋಜನೆ ವಿಭಾಗ ಬಂಡೀಪುರ	85.66	ಪ್ರವರ್ಗ II (ಎ)	
8	ಮೊಹಮ್ಮದ್ ಬಿನ್ ಸೈಯದ್ ಅಹಮದ್	ಹುಲಿಯೋಜನೆ ವಿಭಾಗ ಬಂಡೀಪುರ	84.00	ಪ್ರವರ್ಗ II (ಬಿ)	

ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಆಯ್ಕೆ ಪ್ರಾಧಿಕಾರ,
ಆನೆ ಕವಾಡಿಗಳ ನೇರ ನೇಮಕಾತಿ ಪ್ರಕ್ರಿಯೆ, ಚಾಮರಾಜನಗರ ವೃತ್ತ, ಚಾಮರಾಜನಗರ.

ಪಿ.ಆರ್. 787

ಕರ್ನಾಟಕ ಲೋಕಸೇವಾ ಆಯೋಗ

ಲೋಕಸೇವಾ ಆಯೋಗದ ಕಛೇರಿ, "ಉದ್ಯೋಗ ಸೌಧ" ಬೆಂಗಳೂರು

ತಿದ್ದುಪಡಿ

ಸಂಖ್ಯೆ: ಇ.ಪ.(2)312/2009–10/ಪಿಎಸ್‌ಸಿ, ದಿನಾಂಕ: 18/20ನೇ ಜುಲೈ 2009

ಆಯೋಗವು 2008ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ಅಧಿಸೂಚನೆ ಸಂ.ಖ್ಯೆ:ಇಪ(1)905/2008–09/ಪಿಎಸ್‌ಸಿ, ದಿನಾಂಕ:10.06.2009ರಲ್ಲಿ ಪ್ರಕಟಿಸಿದ್ದು, ಅದರಲ್ಲಿ ಕೆಲವು ಅಭ್ಯರ್ಥಿಗಳು 2007ನೇ ದ್ವಿತೀಯ ಮತ್ತು 2008ನೇ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಲ್ಲಿ ವಿನಾಯಿತಿಯನ್ನು ಹೊಂದಿದ್ದು, ಹಾಗೂ ಕೆಲವು ಅಭ್ಯರ್ಥಿಗಳು ವಿನಾಯಿತಿ ಬಗ್ಗೆ ಮನವಿಗಳನ್ನು ಸಲ್ಲಿಸಿ ವಿನಾಯಿತಿ ಪರಿಗಣಿಸಲು ಕೋರಿರುವ ಹಿನ್ನೆಲೆಯಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಅಭ್ಯರ್ಥಿಗಳ ಫಲಿತಾಂಶವನ್ನು ತಿದ್ದುಪಡಿ ಮೂಲಕ ಪ್ರಕಟಿಸಿದೆ.

ಅಪೆಂಡಿಕ್ಸ್–'ಎ'

ಬೆಂಗಳೂರು ಕೇಂದ್ರ

ಅಕೌಂಟ್ಸ್ ಹೈಯರ್

ನೋ.ಸಂ–25673 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–27402 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಕೋ–ಆಪರೇಷನ್

ನೋ.ಸಂ–25653 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಎಸ್.ಎ.ಎಸ್. ಭಾಗ–3

ನೋ.ಸಂ–26417 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–26392 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಬೆಳಗಾಂ ಕೇಂದ್ರ

ಅಕೌಂಟ್ಸ್ ಹೈಯರ್

ನೋ.ಸಂ–35810 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–34111 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಬಿಜಾಪೂರ ಕೇಂದ್ರ

ಅಕೌಂಟ್ಸ್ ಹೈಯರ್

ನೋ.ಸಂ–39753 ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–39205 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಚಿಕ್ಕಮಗಳೂರು

ಅಕೌಂಟ್ಸ್ ಹೈಯರ್

ನೋ.ಸಂ–43230 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–43206 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಉಡುಪಿ ಕೇಂದ್ರ

ಅಕೌಂಟ್ಸ್ ಹೈಯರ್

ನೋ.ಸಂ–66507 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–66504 ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ನೋ.ಸಂ–66558 ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ಅಪೆಂಡಿಕ್ಸ್ ಬಿ

ಬೆಂಗಳೂರು ಕೇಂದ್ರ

ಎಸ್.ಎ.ಎಸ್. ಭಾಗ–3

ನೋ.ಸಂ–32283 ಪತ್ರಿಕೆ–2 ರಿಂದ 5ರವರೆಗೆ ಉತ್ತೀರ್ಣರಾಗಿರುತ್ತಾರೆ.

ವಿ.ಬಿ. ಪಾಟೀಲ್

ಪಿ.ಆರ್. 694

ಕಾರ್ಯದರ್ಶಿ, ಹಾಗೂ ಇಲಾಖಾ ಪರೀಕ್ಷೆಗಳ ನಿಯಂತ್ರಕರು,
ಕರ್ನಾಟಕ ಲೋಕಸೇವಾ ಆಯೋಗ.

ಕಂದಾಯ ಇಲಾಖೆ

ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಾಧಿಕಾರ, ತುಮಕೂರು ಜಿಲ್ಲೆ, ತುಮಕೂರು

ಅಧಿಸೂಚನೆ

ಸಂಖ್ಯೆ:ಗ್ರಾ.ಲೆ.ಸಿಬ್ಬಂದಿ. ಸಿಆರ್. 305 /08-09, ದಿನಾಂಕ: 26ನೇ ಸೆಪ್ಟೆಂಬರ್ 2009

ತುಮಕೂರು ಜಿಲ್ಲೆಯ ಕಂದಾಯ ಘಟಕದಲ್ಲಿ ದಿನಾಂಕ 28.02.2009 ಕ್ಕೆ ಖಾಲಿ ಇದ್ದ 64 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಉದ್ದೇಶದಿಂದ ದಿನಾಂಕ 28.02.2009 ರಂದು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಕರೆಯಲಾಗಿತ್ತು. ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಸರ್ಕಾರದ ಸೂಚನೆ ಮೇರೆಗೆ ಸ್ಥಗಿತಗೊಳಿಸಲಾಯಿತು. ಸರ್ಕಾರದಿಂದ ದಿನಾಂಕ 08.09.2009 ರ ಅಧಿಸೂಚನೆ ಸಂಖ್ಯೆ ಕಂಇ 299 ಬಿಎಸ್‌ಸಿ 2006 ರಲ್ಲಿ ತಿಳಿಸಿರುವಂತೆ ಈ ಹಿಂದೆ ನೇರ ನೇಮಕಾತಿ ಮಾಡಲು ಅರ್ಜಿಗಳನ್ನು ಕರೆದಿರುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ರದ್ದು ಪಡಿಸಿದೆ. ಪರಿಷ್ಕೃತ ನಿಯಮಗಳಂತೆ ನೇರ ನೇಮಕಾತಿ ಮಾಡಲು ಸರ್ಕಾರವು ಸೂಚಿಸಿ ನಿರ್ದೇಶನ ನೀಡಿರುವ ವೇಳಾ ಪಟ್ಟಿಯಂತೆ ಹಾಲಿ ತುಮಕೂರು ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ 80 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರಿಕ ಸೇವೆಗಳು (Revenue subordinate Branch) (Cadre & Recruitment) (Amendment) ನಿಯಮಗಳು 2008 ನಿಯಮ 2 ರ ಅನ್ವಯ ನೇಮಕಾತಿಯನ್ನು ಮಾಡಲು ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಈ ನೇಮಕಾತಿಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳನ್ನು ಆಧರಿಸಿ ಅರ್ಹತಾನುಸಾರ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗಳಿಗೆ ಅನುಗುಣವಾಗಿ ಆಯ್ಕೆ ಮಾಡಲಾಗುತ್ತದೆ. **ಅಭ್ಯರ್ಥಿಗಳಿಗೆ ನಿಗದಿತ ಅರ್ಜಿಯನ್ನು ದಿನಾಂಕ 01.10.2009 ರಿಂದ ದಿನಾಂಕ 28.10.2009 ರ ವರೆಗೆ ಜಿಲ್ಲಾ ಕೇಂದ್ರದಲ್ಲಿ ವಿತರಣೆ ಮಾಡಲಾಗುತ್ತದೆ. ಅರ್ಜಿ ಪಡೆದ ಅಭ್ಯರ್ಥಿಗಳು ಅರ್ಜಿ ಜೊತೆಯಲ್ಲಿರುವ ನಿಬಂಧನೆಗಳಂತೆ ದಿನಾಂಕ 30.10.2009 ರ ಸಂಜೆ 5-30 ರ ಒಳಗೆ ತುಮಕೂರು ಜಿಲ್ಲಾಧಿಕಾರಿಗಳ ಕಛೇರಿಯ ಅರ್ಜಿ ಸ್ವೀಕೃತಿ ಕೌಂಟರ್ ನಲ್ಲಿ ಸಲ್ಲಿಸಿ ಸ್ವೀಕೃತಿಯನ್ನು ಪಡೆಯತಕ್ಕದ್ದು.**

ನಿಬಂಧನೆಗಳು

1 ಈ ನೇಮಕಾತಿಯು ಗ್ರಾಮ ಲೆಕ್ಕಿಗರ ಹುದ್ದೆಗೆ ಮಾತ್ರ ಅನ್ವಯಿಸುತ್ತದೆ.

2 ಅರ್ಜಿ ಶುಲ್ಕವನ್ನು ಪ.ಜಾ/ಪ.ಪಂ/ಮಾಜಸೈನಿಕರು/ಪ್ರವರ್ಗ1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ 100/- ರೂ ಹಾಗೂ ಇತರೆ ಅಭ್ಯರ್ಥಿಗಳಿಗೆ 200/- ರೂಪಾಯಿಗಳು. ಅಭ್ಯರ್ಥಿಗಳು ಅರ್ಜಿಯನ್ನು ಪಡೆಯುವ ವೇಳೆ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ತುಮಕೂರು ಮುಖ್ಯ ಶಾಖೆಯಿಂದ ಜಿಲ್ಲಾಧಿಕಾರಿಗಳು ತುಮಕೂರು ಜಿಲ್ಲೆ , ತುಮಕೂರು ಇವರ ಹೆಸರಿಗೆ ಅಧಿಸೂಚನೆ ಹೊರಡಿಸಿದ ದಿನಾಂಕದ ನಂತರ ಖರೀದಿಸಲಾದ ಡಿ.ಡಿ ಯನ್ನು ಸಲ್ಲಿಸಿ ಅರ್ಜಿಯನ್ನು ಪಡೆಯಬಹುದು.

3 ಅರ್ಜಿ ಮಾರಾಟದ ಕೊನೆಯ ದಿನಾಂಕ 28.10.2009. ಭರ್ತಿ ಮಾಡಿರುವ ಅರ್ಜಿಗಳನ್ನು ನೇರವಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ತೆರೆಯಲಾದ ಸ್ವೀಕೃತಿ ಕೌಂಟರ್ ನಲ್ಲಿ ಸಲ್ಲಿಸಿ ಸ್ವೀಕೃತಿಯನ್ನು ಪಡೆಯತಕ್ಕದ್ದು.

4 ಈ ಕಛೇರಿಯಿಂದ ವಿತರಿಸಿದ ಕ್ರಮ ಸಂಖ್ಯೆ ಆಧಾರಿತ ಅರ್ಜಿ ನಮೂನೆಯು ಮೂಲ ಪ್ರತಿಯಲ್ಲಿಯೇ ಇರಬೇಕು. ಜಿಲ್ಲಾಧಿಕಾರಿಗಳು, ತುಮಕೂರು ಇವರ ಕಛೇರಿಯಿಂದಲೇ ಪಡೆಯಬೇಕು. (ಜೆರಾಕ್ಸ್ ಅರ್ಜಿ ಸಲ್ಲಿಸುವಂತಿಲ್ಲ)

5 ಆಯ್ಕೆ ದಿನಾಂಕದಂದು ತುಮಕೂರು ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳಿಗೆ, ರೋಸ್ಟರ್ ಮತ್ತು ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದು.

6 ನೇಮಕಾತಿ ಸಮಿತಿಯ ಮೂಲಕ ಮಾತ್ರ ಈ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಯಾವುದೇ ವ್ಯಕ್ತಿ ಗಳ ಅಥವಾ ಸಂಸ್ಥೆಗಳ ಆಸೆ ಆಮಿಷಗಳಿಗೆ ಒಳಗಾಗದಿರಲು ತಿಳುವಳಿಕೆ ನೀಡಿದೆ.

7 ಸರ್ಕಾರಿ ರಜಾ ದಿನಗಳಂದು ಅರ್ಜಿ ನೀಡಲಾಗುವುದಿಲ್ಲ ಮತ್ತು ಸ್ವೀಕರಿಸಲಾಗುವುದಿಲ್ಲ.

8 ನಿಬಂಧನೆಗಳಂತೆ ಭರ್ತಿ ಮಾಡಿದ ನಿಗದಿತ ಅರ್ಜಿಗಳನ್ನು ಲಕೋಟೆಯಲ್ಲಿ ಇರಿಸಿ, ಲಕೋಟೆಯ ಮೇಲೆ **"ಗ್ರಾಮಲೆಕ್ಕಾಧಿಕಾರಿಗಳ ನೇರ ನೇಮಕಾತಿಗಾಗಿ ಅರ್ಜಿ"** ಎಂಬುದಾಗಿ ಬರೆದು ನೋಂದಣಿ ಅಂಚೆ ಮೂಲಕವಾಗಲಿ ಅಥವಾ ಕೊರಿಯರ್ ಮೂಲಕವಾಗಲಿ ದಿನಾಂಕ 30.10.2009 ರ ಸಂಜೆ 5-30 ರ ಒಳಗೆ ಈ ಕಾರ್ಯಾಲಯಕ್ಕೆ ತಲುಪುವಂತೆ

ಕಳುಹಿಸಬಹುದು. ಅಂತಿಮ ದಿನಾಂಕದ ನಂತರ ನೋಂದಣಿ ಅಂಚೆ ಅಥವಾ ಕೊರಿಯರ್ ಮೂಲಕ ಬರುವಂತಹ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

9 ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ.

10 ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯನ್ನು ಹೊಂದಿರಬೇಕು. (ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.)

11 ಹುದ್ದೆಗಳ ವರ್ಗೀಕರಣ ಈ ರೀತಿ ಇರುತ್ತವೆ.

ಕ್ರ. ಸಂ	ಮೀಸಲಾತಿ	ಸಾಮಾನ್ಯ	ಕನ್ನಡ ಮಾಧ್ಯಮ	ಮಹಿಳೆ	ಯೋಜನಾ ನಿರಾಶ್ರಿತರು	ಗ್ರಾಮೀಣ	ಮಾಜಿ ಸೈನಿಕ	ಅಂಗವಿಕಲ	ಒಟ್ಟು
1	2	3	4	5	6	7	8	9	10
1	ಪ.ಜಾ	3	0	4	0	3	1	1	12
2	ಪ.ಪಂ	1	0	1	0	1	0	0	3
3	ಪ್ರ.1	1	0	1	0	1	0	1	4
4	ಪ್ರ-2(ಎ)	3	0	4	0	3	1	1	12
5	ಪ್ರ-2(ಬಿ)	1	0	1	0	1	0	0	3
6	ಪ್ರ-3(ಎ)	1	0	1	0	1	0	0	3
7	ಪ್ರ-3(ಬಿ)	1	0	1	0	1	0	0	3
8	ಸಾಮಾನ್ಯ	8	2	12	2	10	4	2	40
	ಒಟ್ಟು	**19**	**2**	**25**	**2**	**21**	**6**	**5**	**80**

12 **ವೇತನ ಶ್ರೇಣಿ: ಗ್ರಾಮಲೆಕ್ಕಿಗರು**

ರೂ. 5800-100-6000-125-6500-150-7100-175-7800-200-8600-225-9500-250-10500

13 **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ) ಗರಿಷ್ಟ ವಯೋಮಿತಿ.

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾತಿ/ಪ.ಪಂಗಡ ಪ್ರ-1	40 ವರ್ಷ
ವಿಧವೆಯರು, ಅಂಗವಿಕಲರು	ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು.
ಮಾಜಿ ಸೈನಿಕರು	ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

14 ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು/ಚಾಲ್ತಿಯಲ್ಲಿರಬೇಕು. ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

15 ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಸಂಬಂಧ ಪಟ್ಟ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

16 ಗ್ರಾಮೀಣ ಮೀಸಲಾತಿಯನ್ನು ಕೋರಿರುವ ಪ.ಜಾತಿ/ಪ.ಪಂ/ಪ್ರವರ್ಗ1, 2ಎ, 2ಬಿ, 3ಎ, 3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ -2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

17 ಯೋಜನೆಗಳಿಂದ ನಿರ್ವಸತಿಗರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು.

18 ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ವರ್ಗಾವಣೆಯ ಪ್ರಮಾಣ ಪತ್ರದ ಉಧೃತಭಾಗವನ್ನು (Extract of Cummulative record) ಲಗತ್ತಿಸತಕ್ಕದ್ದು. ಈ ದಾಖಲೆಗಳಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ನೇಮಕಾತಿ ಪ್ರಾಧಿಕಾರ ಪರಿಗಣಿಸುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

19 ಪ.ಜಾತಿ/ಪ.ಪಂ./ ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ 3ಎ, ಪ್ರವರ್ಗ-3ಬಿ, ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್/ ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರದ ಪ್ರತಿ ಲಗತ್ತಿಸತಕ್ಕದ್ದು. ಜಾತಿ ಅಡಿಯಲ್ಲಿ ಆಯ್ಕೆಯಾಗುವ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು(ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

20 ನೇಮಕಾತಿ ಪ್ರಾಧಿಕಾರದ ತೀರ್ಮಾನವೇ ಅಂತಿಮ. ಇದರಿಂದ ಅಭ್ಯರ್ಥಿಗಳಿಗೆ ಅನಾನುಕೂಲವಾದಲ್ಲಿ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

21 ನೇಮಕಾತಿ ಪ್ರಕ್ರಿಯೆ ಬಗ್ಗೆ ಯಾವುದೇ ರೀತಿಯ ವಾದ ವಿವಾದಗಳಿಗೆ ಆಸ್ಪದವಿರುವುದಿಲ್ಲ. ಎಲ್ಲಾ ರೀತಿಯ ನಿಯಂತ್ರಣಾಧಿಕಾರವನ್ನು ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ.

22 ಅಭ್ಯರ್ಥಿಗಳು ಪಡೆದಿರುವ ಶೇಕಡವಾರು ಅಂಕಗಳ ಆಧಾರದ ಹಾಗೂ ಮೀಸಲಾತಿ ಆಧಾರದ ಮೇಲೆ ಆಯ್ಕೆಯನ್ನು ಮಾಡಲಾಗುವುದು ಮತ್ತು ಸರ್ಕಾರದ ಆದೇಶದ ಸಂಖ್ಯೆ ಡಿಪಿಎಆರ್26ಎಸ್‌ಬಿಸಿ 2002 ದಿನಾಂಕ 11.04.2003 ಮತ್ತು ಕಾಲಕಾಲಕ್ಕೆ ಆಗಿರುವ ತಿದ್ದುಪಡಿಗಳನ್ವಯ ಆಯ್ಕೆ ಮಾಡಲಾಗುವ ಸಂಖ್ಯೆಗೆ ಶೇ10 ರ ಅನುಪಾತದಲ್ಲಿ ಅಧಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು. ಮತ್ತು ಆಯ್ಕೆ ಹೊಂದಿದ ಅಭ್ಯರ್ಥಿಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಛೇರಿ, ಎಲ್ಲಾ ಉಪವಿಭಾಗಾಧಿಕಾರಿಗಳ ಕಛೇರಿಗಳು ಹಾಗೂ ಎಲ್ಲಾ ತಾಲ್ಲೂಕು ಕಛೇರಿಗಳ ಸೂಚನಾ ಫಲಕದಲ್ಲಿ ಪ್ರಚುರ ಪಡಿಸಲಾಗುವುದು .

23 ಆಯ್ಕೆ ಪಟ್ಟಿಯಲ್ಲಿ ಕಂಡುಬರುವ ಅಭ್ಯರ್ಥಿಗಳು ನೇಮಕಾತಿಯನ್ನು ಹಕ್ಕು ಎಂದು ಪರಿಗಣಿಸುವಂತಿಲ್ಲ.

24 ನೇಮಕಾತಿ ಆದೇಶವನ್ನು ಪಡೆದ ಅಭ್ಯರ್ಥಿಗಳು ನೇಮಕಾತಿ ಆದೇಶದಲ್ಲಿ ತಿಳಿಸಿದ ನಿಗದಿತ ಅವಧಿಯ ಒಳಗೆ ಕರ್ತವ್ಯದ ಮೇಲೆ ಹಾಜರಾಗದಿದ್ದಲ್ಲಿ ಸದರಿ ಹುದ್ದೆಗಳನ್ನು ಅಧಿಕ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಂದ ತುಂಬಲಾಗುವುದು.

25 ಅಭ್ಯರ್ಥಿಗಳು ಕಂಪ್ಯೂಟರ್ ಜ್ಞಾನ ಹೊಂದಿದ್ದು ಅರ್ಹ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಜರ್ಪಡಿಸಿದಲ್ಲಿ ಹೆಚ್ಚುವರಿ ಅರ್ಹತೆ ಎಂದು ಆದ್ಯತೆ ನೀಡಲಾಗುವುದು.

26 **ಈ ಕೆಳಕಂಡ ದಾಖಲಾತಿಗಳನ್ನು ಅರ್ಜಿಯ ಜೊತೆ ಲಗತ್ತಿಸಿರತಕ್ಕದ್ದು. (ಅಭ್ಯರ್ಥಿ ಸ್ವತಹ ದೃಢೀಕರಿಸಿದ ಜೆರಾಕ್ಸ್ ಲಗತ್ತಿಸತಕ್ಕದ್ದು.)**

a) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಾದ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಾದ ಕೇಂದ್ರೀಯ ವಿದ್ಯಾಲಯದ 12ನೇ ತರಗತಿ ಅಂಕಪಟ್ಟಿ.

b) ಜನ್ಮದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ (12ನೇ ತರಗತಿ) ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ(ಟಿ.ಸಿ)/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)

ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು

c) ಸೈನಿಕ ಸೇವೆಯಿಂದ ಬಿಡುಗಡೆಯಾದ /ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ

ಟಿಪ್ಪಣಿ: ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯ ಅರ್ಜಿ ಸಲ್ಲಿಸುವುದು ಸೂಕ್ತ .

d) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ

e) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಭರ್ತಿ ಮಾಡಿ ನಿಗದಿತ ದಿನಾಂಕದೊಳಗೆ ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

f) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಭರ್ತಿ ಮಾಡಿ ನಿಗದಿತ ದಿನಾಂಕದೊಳಗೆ ಸಲ್ಲಿಸತಕ್ಕದ್ದು.

g) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯವರ್ಗದ ಅಭ್ಯರ್ಥಿಗಳು ನಮೂನೆ-2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿರತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.)

h) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ

i) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

j) ನೇಮಕಾತಿ ಕೋರಿ ಅರ್ಜಿಸಲ್ಲಿಸುವ ಅರ್ಜಿದಾರರಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

(ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ನೇಮಕಾತಿ ಪ್ರಾಧಿಕಾರ ಕೂಲಂಕಷವಾಗಿ ಪರಿಶೀಲಿಸಿದ ನಂತರವೇ ಅಭ್ಯರ್ಥಿಗಳನ್ನು ಜೇಷ್ಠತೆ ಮತ್ತು ಮೀಸಲಾತಿ ಹಾಗೂ ಮೆರಿಟ್ ಆಧಾರದ ಮೇಲೆ ಪರಿಗಣಿಸಲಾಗುವುದು.)

27 **ಪ್ರಮುಖ ಸೂಚನೆಗಳು**

a) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

b) ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ಕ್ಯಾನ್ ಮಾಡುವುದರಿಂದ ಅರ್ಜಿಗಳನ್ನು ಮಡಿಚಬಾರದು ಹಾಗೂ ಪಿನ್ ಮಾಡಬಾರದು ಮತ್ತು ಯಾವುದೇ ರೀತಿ ಹಾಳು ಮಾಡಬಾರದು

c) ಒಬ್ಬನೇ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ (ಕ್ರಮಬದ್ಧವಾಗಿದ್ದಲ್ಲಿ) ಪರಿಗಣಿಸಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಪ್ರಾಧಿಕಾರದ ತೀರ್ಮಾನವೇ ಅಂತಿಮ. ಇದರಿಂದ ಅಭ್ಯರ್ಥಿಗಳಿಗೆ ಅನಾನುಕೂಲವಾದಲ್ಲಿ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ.

d) ಅಭ್ಯರ್ಥಿಗಳು ಅರ್ಜಿಯೊಂದಿಗೆ ಪಡೆದಿರುವ ಮಾಹಿತಿ ವಿವರವನ್ನು ಅಂತಿಮ ಆಯ್ಕೆ ಪಟ್ಟಿ ಪ್ರಕಟವಾಗುವವರೆಗೂ ಸುರಕ್ಷಿತವಾಗಿಟ್ಟುಕೊಳ್ಳತಕ್ಕದ್ದು. ಈ ಪುಸ್ತಕದಲ್ಲಿ ಅರ್ಜಿಯನ್ನು ಭರ್ತಿ ಮಾಡುವ ವಿಧಾನ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆ, ಮೀಸಲಾತಿಯ(Horizontal & Vertical Reservations) ವಿಶ್ಲೇಷಣೆ ಇತ್ಯಾದಿ ವಿಷಯಗಳ ಬಗ್ಗೆ ಕೂಲಂಕುಷವಾಗಿ ವಿವರಿಸಿದ್ದು, ಅವುಗಳನ್ನು ಅಭ್ಯರ್ಥಿಗಳು ಗಮನವಿಟ್ಟು ಓದಿಕೊಳ್ಳತಕ್ಕದ್ದು.

e) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ಸಮೂದಿಸುವ ಮೀಸಲಾತಿ, ಜನ್ಮದಿನಾಂಕ, ವಿದ್ಯಾರ್ಹತೆ, ಹಾಗೂ ವಯೋಮಿತಿ ಸಡಿಲಿಕೆ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆಯನ್ನು ಪುರಸ್ಕರಿಸಲಾಗುವುದಿಲ್ಲ.

f) ನೇಮಕಾತಿ ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.

g) **ದುರ್ನಡತೆ**:- ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜು ಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು/ಸುಳ್ಳು ಹೇಳಿಕೆ ನೀಡಿರುವನೆಂದು ತಿಳಿದು ಬಂದಲ್ಲಿ ಕ್ರಿಮಿನಲ್ ವ್ಯವಹಾರಗಳಿಗೆ ಒಳಪಡಿಸಲಾಗುತ್ತದೆ.

ಡಾ|| ಸಿ. ಸೋಮಶೇಖರ

ಪಿ.ಆರ್. 804

ಜಿಲ್ಲಾಧಿಕಾರಿಗಳು, ಹಾಗೂ ಅಧ್ಯಕ್ಷರು ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ
ತುಮಕೂರು ಜಿಲ್ಲೆ, ತುಮಕೂರು .

ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಿಗರ ಆಯ್ಕೆ ಪ್ರಾಧಿಕಾರ, ಕೋಲಾರ ಜಿಲ್ಲೆ, ಕೋಲಾರ

ಅಧಿಸೂಚನೆ

ಅಧಿಸೂಚನೆ ಸಂಖ್ಯೆ: ಸಿಬ್ಬಂದಿ (2) ಸಿಆರ್/88/08-09, ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ: ಕೋಲಾರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ : ಕಂ ಇ 299 ಬಿಎಸ್‌ಸಿ 2006 ದಿನಾಂಕ.3-2-2009

2) ಸರ್ಕಾರದ ಅಧಿಸೂಚನೆ ಸಂ : ಕಂ ಇ 299 ಬಿಎಸ್‌ಸಿ 2006 ದಿನಾಂಕ.8-9-2009

ಕೋಲಾರ ಜಿಲ್ಲಾ ಘಟಕ, ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ(1) ರಂತೆ ಸರ್ಕಾರ ಆದೇಶಿಸಿರುತ್ತೆ ಅದರಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಪೂರ್ಣ ವಿವರಗಳೊಂದಿಗೆ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಕೋಲಾರ ಜಿಲ್ಲೆ ಇವರಿಗೆ **ದಿನಾಂಕ 30-10-2009 ರಂದು ಸಂಜೆ 5-00** ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ರಿಜಿಸ್ಟರ್ ಅಂಚೆ / ಕೊರಿಯರ್ ಮೂಲಕ ಕಳುಹಿಸತಕ್ಕದ್ದು. ಅದರಂತೆ ಕಳುಹಿಸಿದ ಅರ್ಜಿಗಳು ಕೊನೆಯ ದಿನಾಂಕದಂದು 5-00 ಗಂಟೆಯೊಳಗೆ ಕಛೇರಿಗೆ ತಲುಪತಕ್ಕದ್ದು. ನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗೂ ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಈ ಹಿಂದೆ ಹೊರಡಿಸಿರುವ ಅಧಿಸೂಚನೆ ಸಂಖ್ಯೆಸಿಬ್ಬಂದಿ (2) ಸಿಆರ್ 88/2008-09 ದಿನಾಂಕ 29/05/2009 ರಂತೆ ಕರೆದಿರುವ ಅರ್ಜಿಗಳನ್ನು ಉಲ್ಲೇಖ (2) ರ ಅಧಿಸೂಚನೆಯಲ್ಲಿ ಸರ್ಕಾರವು ತಿಳಿಸಿರುವಂತೆ ಸಂಪೂರ್ಣವಾಗಿ ರದ್ದು ಮಾಡಿರುತ್ತೆ. ಈಗಾಗಲೇ ಸಲ್ಲಿಸಿರುವ ಅರ್ಜಿಗಳನ್ನು ಸರ್ಕಾರವು ಉಲ್ಲೇಖಿತ ಅಧಿಸೂಚನೆಯಲ್ಲಿ ಸಂಪೂರ್ಣವಾಗಿ ರದ್ದು ಪಡಿಸಿರುವುದರಿಂದ ಅಂತಹವರು ಹೊಸದಾಗಿ ಅರ್ಜಿಗಳನ್ನು ಹಾಕಿಕೊಳ್ಳಬೇಕಾಗಿದೆ. ರದ್ದು ಪಡಿಸಲಾಗಿರುವ ಅರ್ಜಿ ಶುಲ್ಕವನ್ನು ಸಂಬಂಧಪಟ್ಟ ಅರ್ಜಿದಾರರಿಗೆ ಹಿಂತಿರುಗಿಸಲು ಕ್ರಮಕೈಗೊಳ್ಳಲಾಗಿದೆ.

ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಹುದ್ದೆಗಳ ವಿವರ

ಕ್ರ ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ	ವೇತನ ಶ್ರೇಣಿ
1	ಗ್ರಾಮ ಲೆಕ್ಕಿಗ	47	P.U.C or 12^{th} Standard Examination conducted by C B S E or I C S E	5800-100-6000-125-6500-150-7100-175-7800-200-8600-225-9500-250-10500

ಷರಾ : PUC or 12^{th} Standard Examination conducted by Central Board of Secondary Education of I C S E (Notification No.RD 299 BSC 2006 Dated : 24/07/2009)

ಮೀಸಲಾತಿ ವರ್ಗೀಕರಣ

ಕ್ರ ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ		ಇತರೆ	ಮಹಿಳೆ	ಗ್ರಾಮೀಣ	ಅಂಗ ವಿಕಲ	ಮಾಜ ಸೈನಿಕರು	ಕನ್ನಡ ಮಾಧ್ಯಮ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತ ಗೊಂಡ ಅಭ್ಯರ್ಥಿ	ಒಟ್ಟು
1	ಗ್ರಾಮ ಲೆಕ್ಕಿಗ	47	ಪರಿಶಿಷ್ಟ ಜಾತಿ	2	2	2	1	-	-	-	7
			ಪರಿಶಿಷ್ಟ ಪಂಗಡ	1	1	-	-	-	-	-	2
			ಪ್ರವರ್ಗ 1	1	1	-	-	-	-	-	2
			ಪ್ರವರ್ಗ 2(ಎ)	2	2	2	1	-	-	-	7

ಕ್ರ ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ		ಇತರೆ	ಮಹಿಳೆ	ಗ್ರಾಮೀಣ	ಅಂಗ ವಿಕಲ	ಮಾಜಿ ಸೈನಿಕರು	ಕನ್ನಡ ಮಾಧ್ಯಮ ಅಭ್ಯರ್ಥಿ	ಯೋಜನೆ ಗಳಿಂದ ನಿರಾಶ್ರಿತ ಗೊಂಡ ಅಭ್ಯರ್ಥಿ	ಒಟ್ಟು
			ಪ್ರವರ್ಗ 2(ಬಿ)	1	1	-	-	-	-	-	2
			ಪ್ರವರ್ಗ 3(ಎ)	1	1	-	-	-	-	-	2
			ಪ್ರವರ್ಗ 3(ಬಿ)	1	1	-	-	-	-	-	2
			ಸಾಮಾನ್ಯ ಅಭ್ಯರ್ಥಿ.	5	7	6	1	2	1	1	23
			ಒಟ್ಟು	**14**	**16**	**10**	**3**	**2**	**1**	**1**	**47**

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಅರ್ಜಿಗಳನ್ನು ರಿಜಿಸ್ಟರ್ ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಹಾಗೂ ಅರ್ಜಿಗಳನ್ನು ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. **ವಯೋಮಿತಿ** : ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

   ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

   ಆ) ಗರಿಷ್ಟ ವಯೋಮಿತಿ ಈ ಕೆಳಕಂಡಂತಿರತಕ್ಕದ್ದು.

ಸಾಮಾನ್ಯ ವರ್ಗ	35 ವರ್ಷ
2ಎ , 2ಬಿ , 3ಎ, 3ಬಿ	38 ವರ್ಷ
ಪ.ಜಾತಿ / ಪ. ಪಂಗಡ/ ಪ್ರ - 1	40 ವರ್ಷ
ವಿಧವೆಯರು / ಅಂಗವಿಕಲ/	ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು.

ಎಸ್ ಎಸ್ ಎಲ್ ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ ಸಿ) ಕ್ಯುಮುಲೇಟಿವ್ . ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿದಷ್ಟು ಮಟ್ಟಿಗೆ ಹೆಚ್ಚಿಸಲಾಗುವುದು :

*** ಮಾಜಿ ಸೈನಿಕರು :** ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಸಶಸ್ತ್ರದಳದಲ್ಲಿ ಎಷ್ಟು ವರ್ಷಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ವಿವರಣೆ : (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಮತ್ತು ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ ಅಂದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು ಕೇಂದ್ರ ಸಶಸ್ತ್ರದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು)ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಗಳಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಮತ್ತು ಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವನು ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ. ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲೆಂಟ್ರ ಪ್ರಶಸ್ತಿ ವಿಜೇತರು.

ವಿವರಣೆ : ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆಮುನ್ನ ಉದ್ಯೋಗಕ್ಕೆ ಅರ್ಜಿ ಬಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ, ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

- * ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- * ಅಭ್ಯರ್ಥಿಯು ರಾಜ್ಯಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ, ಅಥವಾ ಹಿಂದೆಯಿದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- * ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು
- * ಅಭ್ಯರ್ಥಿಯು ಜೀತಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು
- * ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ದತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟು ಕೊಂಡಿರತಕ್ಕದ್ದು.
- ● ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ ಐದು ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು

ಸರ್ಕಾರಿ ನೌಕರ : ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ
   ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್‌ಸೈಟ್ www.kolar.nic.in ನಿಂದ ಡೌನ್ ಲೋಡ್ ಮಾಡಿಕೊಳುವುದು. ಅರ್ಜಿಯನ್ನು ಜಿಲ್ಲಾಧಿಕಾರಿ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಾಗಿ ಅರ್ಜಿ ಎಂದು ದಪ್ಪ ಅಕ್ಷರದಲ್ಲಿ ಬರೆದು, ಅಧ್ಯಕ್ಷರು, ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಕೋಲಾರ ಇವರಿಗೆ ಅಂಚೆ / ಕೊರಿಯರ್ ಮೂಲಕ ನಿಗದಿಪಡಿಸಿದ ದಿನಾಂಕದೊಳಗಾಗಿ ಕಾರ್ಯಾಲಯದ ವೇಳೆಯಲ್ಲಿ ತಲುಪುವಂತೆ ಸಲ್ಲಿಸಬೇಕು.
4. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಇಲಾಖಾ ಮುಖ್ಯಸ್ಥರ ಮೂಲಕ ಸಲ್ಲಿಸುವುದು.

5. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವ ಚಿತ್ರವನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
6. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಯಾವುದೇ ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
7. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
8. ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
9. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಕೋಲಾರ ರವರು ಕಾಯ್ದಿರಿಸಿ ಕೊಂಡಿರುತ್ತಾರೆ.
10. **ಅರ್ಜಿ ಶುಲ್ಕದ ವಿವರ**: ಪ.ಜಾತಿ/ ಪ. ಪಂಗಡ, ಪ್ರವರ್ಗ-1 ಅಭ್ಯರ್ಥಿಗಳು ರೂ.50-00 ಹಾಗೂ ಇತರರಿಗೆ ರೂ.100-00ಗಳ ಡಿ.ಡಿ. ಯನ್ನು ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಮಾತ್ರ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಾಧಿಕಾರಿಗಳ ಆಯ್ಕೆ ಪ್ರಾಧಿಕಾರ, ಕೋಲಾರ ಜಿಲ್ಲೆ ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಾಗೂ ಡಿ ಡಿ. ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ ಡಿ.ಯನ್ನು ಲಗತ್ತಿಸದ ಅರ್ಜಿಯನ್ನು ತಿರಸ್ಕರಿಸಲಾಗುವುದು. ಯಾವುದೇ ಕಾರಣಕ್ಕೂ ಡಿ.ಡಿ. ಮೊಬಲಗು ಹಿಂತಿರುಗಿಸಲಾಗುವುದಿಲ್ಲ.
ಸಹಿ ಮಾಡದ ಅರ್ಜಿಗಳನ್ನು ಹಾಗೂ ಅಂಕಣಗಳನ್ನು ಪೂರ್ಣ ಭರ್ತಿ ಮಾಡದ ಅರ್ಜಿಗಳನ್ನು ಹಾಗೂ ಸಂಬಂಧಿಸಿದ ದಾಖಲೆಗಳನ್ನು ಲಗತ್ತಿಸದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
12. ಆಯ್ಕೆಯನ್ನು **ಅಭ್ಯರ್ಥಿಯ ಮೆರಿಟ್** ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.
13. ಕಾಲೇಜಿನ ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹಾಗೂ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳೊಳಗಿನ ಇತ್ತೀಚಿನ ನಡತೆ ಪ್ರಮಾಣ ಪತ್ರ ಲಗತ್ತಿಸಿರಬೇಕು.
14. ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯು ಜವಾಬ್ದಾರರಾಗುವುದಿಲ್ಲ.
15. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಜಾತಿ ಮೀಸಲಾತಿ ಕೋರ ಬಯಸುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ ಡಿ ರಲ್ಲಿ / ಪ್ರವರ್ಗ -1 ಅಭ್ಯಥಿಗಳು ನಮೂನೆ ಇ ನಲ್ಲಿ ಹಾಗೂ 2ಎ, 2ಬಿ,3ಎ,3ಬಿ ಅಭ್ಯರ್ಥಿಗಳು ನಮೂನೆ ಎಫ್ ನಲ್ಲಿ ಸಂಬಂಧಿತ ತಹಸೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು, ಈ ಪ್ರಮಾಣ ಪತ್ರವು ಈ ಹುದ್ದೆಗೆ ಅರ್ಜಿಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು /ಚಾಲ್ತಿಯಲ್ಲಿರಬೇಕು ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

16 ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರರವರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 23 ಎಸ್‌ಆರ್‌ಆರ್ 99 ದಿನಾಂಕ 23/11/2000 ರನ್ವಯ ಈ ಮೀಸಲಾತಿಯಡಿಯಲ್ಲಿ ಕ್ಲೇಮು ಮಾಡುವ ಅಭ್ಯರ್ಥಿಗಳು ಸರ್ಕಾರದ ಆದೇಶದ ಸಂಖ್ಯೆ ಸಿಆಸುಇ 44 ಸೆಸೆನಿ 2001 ದಿನಾಂಕ 27/07/2001 ರಲ್ಲಿ ತಿಳಿಸಿರುವಂತೆ ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

17.ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ / ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

18.ಅಂಗವಿಕಲ ಅಭ್ಯರ್ಥಿಗಳು:

ಅ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿರುವವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

ಆ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸದ ಅಥವಾ ಅರ್ಥವಾಗದ ಅಥವಾ ಎರಡು ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ

ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರಿಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಇ) ಮೂಳೆಗಳು, ಮಾಂಸ ಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯ ನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

ಈ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅರ್ಹರಾಗಿರುತ್ತಾರೆ.

ಉ) ದೈಹಿಕ ಅಂಗವಿಕಲತೆಗೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಆಲ್ಮಕೋ ಕಾನ್‌ಪೂರ್ (ಡಬ್ಲ್ಯೂ ಎಚ್ ಓ ಸ್ಟಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 07 ಸೇಸೇಆ 94 ದಿನಾಂಕ 13-09-1995 ರಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಕನಿಷ್ಟ ಶೇ. 40 ರಿಂದ ಗರಿಷ್ಟ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

19. ಗ್ರಾಮೀಣ ಅಭ್ಯರ್ಥಿಗಳು:

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ. ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿವರೆಗೆ ಗ್ರಾಮಾಂತರ ಪ್ರದೇಶದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ಪಡೆದು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ 2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ 1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದು ಅದರ ಒಂದೊಂದು ಪೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ , ಪರಿಶಿಷ್ಟ ಪಂಗಡ, ಪ್ರವರ್ಗ-1 , ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವು ನಮೂನೆ 2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

20. ಕನ್ನಡ ಮಾಧ್ಯಮ ಅಭ್ಯರ್ಥಿಗಳು :

ಸರ್ಕಾರದ ಅಧಿಸೂಚನೆ ಸಂ. ಡಿಪಿಎಆರ್ 71 ಎಸ್‌ಆರ್‌ಆರ್ 2001 ದಿ.24-10-02 ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10 ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ. ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

21. ಅರ್ಹತಾ ಷರತ್ತುಗಳು :

ಅ) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು . ಅಥವಾ ನೇಪಾಳದ ಪ್ರಜೆ ಅಥವಾ ಭೂತಾನಿನ ಪ್ರಜೆ, ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1ನೇ ಜನವರಿ 1962 ಕ್ಕಿಂತ ಮುಂಚೆ ಭಾರತಕ್ಕೆ ಬಂದ ಟಿಬೆಟ್‌ನ ನಿರಾಶ್ರಿತ ಅಥವಾ ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ ಪಾಕಿಸ್ತಾನ, ಬರ್ಮಾ, ಶ್ರೀಲಂಕಾ ಮತ್ತು ಪೂರ್ವ ಆಫ್ರಿಕಾದ ರಾಷ್ಟ್ರಗಳಾದ ಕೀನ್ಯಾ , ಉಗಾಂಡ, ಟಾಂಝಾನಿಯಾ ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗನಿಕಾ ಮತ್ತು ಜಾಂಜಿಬಾರ್) ಝಾಂಬಿಯಾ, ಮಲಾವಿ (ಝೈರೆ, ಇಥಿಯೋಪಿಯಾ ಮತ್ತು ವಿಯಟ್ನಾಂ) ಗಳಿಂದ ವಲಸೆ ಬಂದಿರುವ ಭಾರತೀಯ ಸಂಜಾತ ಆಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

೯) ದೈಹಿಕವಾಗಿ / ಮಾನಸಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಹುದ್ದೆಗೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

22. ಈ ಕೆಳಕಂಡ ದಾಖಲೆಗಳನ್ನು ನಿಗದಿತ ನಮೂನೆಯ ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂಬುದಾಗಿ ಅಭ್ಯರ್ಥಿಗಳು ಖಚಿತ ಪಡಿಸಿಕೊಳ್ಳುವುದು.

* ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ
* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್ ಎಸ್ ಎಲ್ ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರವನ್ನು ಸಂಚಿತ ದಾಖಲೆಯ ಉದ್ಧೃತ ಭಾಗ (Commulative Record)
* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ , ಪ್ರವರ್ಗ 1, ಪ್ರವರ್ಗ 2ಎ , ಪ್ರವರ್ಗ 2ಬಿ , ಪ್ರವರ್ಗ 3ಎ , ಪ್ರವರ್ಗ 3ಬಿ ಯ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ 1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
* ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ

ಮೇಲ್ಕಂಡ ದಾಖಲೆಗಳ ಫೋಟೋ ಪ್ರತಿಗಳನ್ನು ರಾಜ್ಯ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ಪ್ರತಿಗಳನ್ನು ಮಾತ್ರ ಲಗತ್ತಿಸಬೇಕು ಹಾಗೂ ಸಂಬಂಧಪಟ್ಟ ದಾಖಲೆಗಳು ಅರ್ಜಿ ಸಲ್ಲಿಸುವ ದಿನಾಂಕದಂದಿಗೆ ಚಾಲ್ತಿಯಲ್ಲಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರತಕ್ಕದ್ದು.

ಮೇಲ್ಕಂಡ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

23. ಇತರೆ ಸೂಚನೆಗಳು :

(1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ (ಜೆರಾಕ್ಸ್) ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

(2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

ಎನ್. ಪ್ರಭಾಕರ್

ಅಧ್ಯಕ್ಷರು, ಗ್ರಾಮಲೆಕ್ಕಾಧಿಕಾರಿಗಳ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರ

ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು ಗ್ರಾಮಲೆಕ್ಕಿಗರ ಆಯ್ಕೆ ಪ್ರಾಧಿಕಾರ
ಕೋಲಾರ ಜಿಲ್ಲೆ, ಕೋಲಾರ
ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಅರ್ಜಿ ನಮೂನೆ

ಅರ್ಜಿದಾರರ ಭಾವಚಿತ್ರ (ಭಾವಚಿತ್ರಕ್ಕೆ ಅರ್ಜಿದಾರರು ಸಹಿ ಮಾಡಿರಬೇಕು)

ರವರಿಗೆ :
ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು
ಗ್ರಾಮಲೆಕ್ಕಿಗರ ಆಯ್ಕೆ ಪ್ರಾಧಿಕಾರ
ಕೋಲಾರ ಜಿಲ್ಲೆ, ಕೋಲಾರ.

ಕೋಲಾರ ಜಿಲ್ಲೆಯಲ್ಲಿ ಖಾಲಿಯಿರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಯನ್ನು ನೇರನೇಮಕಾತಿ ಮುಖಾಂತರ ಭರ್ತಿ ಮಾಡಲು ತಾವು ಪ್ರಕಟಿಸಿದ ಅಧಿಸೂಚನೆ ಸಂಖ್ಯೆ ಸಿಬ್ಬಂದಿ (2) ಸಿಆರ್ 88/2008-09 ದಿನಾಂಕ 26/09/2009 ರನ್ವಯ ನಾನು ಈ ಕೆಳಕಂಡ ವಿವರಣೆಗಳೊಂದಿಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

ಡಿ.ಡಿ. ಪಡೆದ .ಬ್ಯಾಂಕ್ ಹೆಸರು	ಸಂದಾಯ ಮಾಡಿದ ಮೊತ್ತ	ಡಿ.ಡಿ. ಸಂಖ್ಯೆ ಮತ್ತು ದಿನಾಂಕ

1	ಅರ್ಜಿದಾರನ/ಳ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)	
2	ತಂದೆ /ಗಂಡ/ ಪೋಷಕರ ಹೆಸರು (ಸೂಕ್ತವಲ್ಲದ್ದನ್ನು ಹೊಡೆದು ಹಾಕಿ)	
3	ಖಾಯಂ ವಿಳಾಸ	
4	ಅಂಚೆ ವಿಳಾಸ	
5	ಸಂಪರ್ಕಿಸಬಹುದಾದ ದೂರವಾಣಿ /ಮೊಬೈಲ್ ಸಂಖ್ಯೆ	
6	ಲಿಂಗ : ಪುರುಷ / ಮಹಿಳೆ	
7	ಜನ್ಮ ದಿನಾಂಕ (ಎಸ್ಎಸ್ಎಲ್‌ಸಿ ಅಂಕಪಟ್ಟಿಯಲ್ಲಿರುವಂತೆ)	
8	ಕುಟುಂಬದ ಒಟ್ಟು ವಾರ್ಷಿಕ ಆದಾಯ	

8 ಮೀಸಲಾತಿ ಕೋರಿದ್ದಲ್ಲಿ ಅನ್ವಯಿಸುವ ಬಾಕ್ಸ್‌ನಲ್ಲಿ ☑ ಗುರುತು ಹಾಕಿ (ದೃಢೀಕರಣ ಪತ್ರ ಕಡ್ಡಾಯವಾಗಿ ಲಗತ್ತಿಸಬೇಕು)

9	ಅ. ಪ.ಜಾ/ ಪ.ಪಂ.ದವರೇ / ಪ್ರವರ್ಗ–1	ಪ.ಜಾತಿ	ಪ.ಪಂಗಡ	ಪ್ರವರ್ಗ–1

	ಆ. ಇತರೆ ಹಿಂದುಳಿದ ವರ್ಗದವರೇ	2ಎ	2ಬಿ	3ಎ	3ಬಿ

	ಇ. ಸಾಮಾನ್ಯ ವರ್ಗದವರೇ	ಹೌದು	ಇಲ್ಲ	

	ಈ. ಇತರೆ ಒಳ ಮೀಸಲಾತಿ	ಗ್ರಾಮೀಣ	ಕ.ಮಾ.ಅ	ಅಂ.ವಿ	ಯೋ. ನಿರಾ	ಮಾ.ಸೈ.	ಮಹಿಳೆ
	ವಿಧವೆಯರೇ	ಹೌದು	ಇಲ್ಲ				
	ಅಂಗವಿಕಲರೇ	ಹೌದು	ಇಲ್ಲ				

9	ವಿದ್ಯಾರ್ಹತೆ	P U C / 12th Standard Examination Conducted by CBSE of ICSE.			
		ತೇರ್ಗಡೆಯಾದ ವರ್ಷ	ಒಟ್ಟು ಅಂಕಗಳು	ಗಳಿಸಿದ ಅಂಕ	ಶೇಕಡ

10	ಕಂಪ್ಯೂಟರ್ ತರಬೇತಿ ಹೊಂದಿದಲ್ಲಿ ಮಾಹಿತಿ ಒದಗಿಸುವುದು (ಸಂಬಂಧಪಟ್ಟ ವಿದ್ಯಾಸಂಸ್ಥೆಯ ದಾಖಲೆಗಳನ್ನು ಲಗತ್ತಿಸುವುದು)	
11	ಲಗತ್ತಿಸಿರುವ ದಾಖಲೆಗಳ ವಿವರ	1. 2. 3. . .

ಈ ಮೇಲ್ಕಂಡ ಎಲ್ಲಾ ವಿವರಗಳು ಸತ್ಯವೆಂದು ಮತ್ತು ನನಗೆ ತಿಳಿದ ಮಟ್ಟಿಗೆ ಸರಿಯಾಗಿದೆಯೆಂದು ಪ್ರಮಾಣೀಕರಿಸುತ್ತೇನೆ. ಮತ್ತು ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದೆಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ.

ಸ್ಥಳ :

ದಿನಾಂಕ : ಅರ್ಜಿದಾರನ/ಳ ಸಹಿ

ಪ್ರಪತ್ರ – 1

(ಸರ್ಕಾರಿ ನೌಕರರ ಉಪಯೋಗಕ್ಕೆ ಮಾತ್ರ)

ಮೇಲಾಧಿಕಾರಿಯ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________ ರವರು ರಾಜ್ಯ ಸರ್ಕಾರಿ ಸೇವೆಯಲ್ಲಿ ____________ ದಿನಾಂಕ __________ ರಿಂದ __________ ರವರೆಗೆ ನೇಮಕಾತಿ ನಿಯಮಗಳ ಮೇರೆಗೆ ಕ್ರಮಬದ್ಧವಾಗಿ ಖಾಯಂ/ತಾತ್ಕಾಲಿಕವಾದ ಹುದ್ದೆಯಲ್ಲಿದ್ದಾರೆ. ನನಗೆ ತಿಳಿದ ಮಟ್ಟಿಗೆ ಸದರಿಯವರ ನಡತೆ ಚೆನ್ನಾಗಿದ್ದು, ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆಂದು ಪ್ರಮಾಣೀಕರಿಸುತ್ತೇನೆ. ಸದರಿಯವರು ಅಪೇಕ್ಷಿಸಿದ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಅನುಮತಿ ನೀಡಲಾಗಿದೆ.

ಸ್ಥಳ : ಸಹಿ :

ದಿನಾಂಕ : ಹುದ್ದೆ :

ಇಲಾಖೆ :

ಪ್ರಪತ್ರ – 2

(ಗುಣ ಮತ್ತು ನಡತೆ ಪ್ರಮಾಣ ಪತ್ರ)

ಶ್ರೀ/ಶ್ರೀಮತಿ ______________________ ರವರ ಮಗ/ಮಗಳಾದ ಶ್ರೀ/ಶ್ರೀಮತಿ/ಕುಮಾರಿ ______________ ರವರು ನನಗೆ ______ ವರ್ಷಗಳು ______ ತಿಂಗಳುಗಳಿಂದ ಪರಿಚಯವಿದೆ ಎಂದು ಪ್ರಮಾಣೀಕರಿಸುತ್ತೇನೆ. ಮತ್ತು ನನಗೆ ತಿಳಿದಿರುವಂತೆ ಸದರಿಯವರು ಒಳ್ಳೆಯ ನಡತೆಯುಳ್ಳವರಾಗಿದ್ದಾರೆ ಮತ್ತು ಸರ್ಕಾರಿ ಉದ್ಯೋಗಕ್ಕೆ ಅನರ್ಹರಾಗುವಂತ ಯಾವ ಪೂರ್ವೋತ್ತರಗಳು ಇಲ್ಲ. ಸದರಿಯವರು ನನ್ನ ಸಂಬಂಧಿಕರಾಗಿರುವುದಿಲ್ಲ.

ಸ್ಥಳ : ಸಹಿ :

ದಿನಾಂಕ : ಹುದ್ದೆ :

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ 115 ಸೆನೆನಿ 2005, ದಿನಾಂಕ 19–11–2005

Certificate For the Persons with Disabilities

This is to certify that Sri/Smt/Kum ______________________ Son/wife/daughter/ of Sri ______________________ Age ______ old, male/ female. Registration No. ______________ is a case of ______________________ He/She is physically disabled / visual disabled /speech & hearing disabled and has _____ % (__________ Percent) permanent (Physical impairment/visual impairment speech and hearing impairment) in relation to his/her ______________

Note :

1. This condition is progressive/non-progressive/likely to improve//not likely to improve*
2. Re-assessment is not recommended/ is recommended after a period of ________ months/years. *

* Strike out which is not applicable.

(Recent Attested Photograph showing the disability Affixed here)

sd/- (DOCTOR) (Seal)	sd/- (DOCTOR) (Seal)	sd/- (DOCTOR) (Seal)

Countersigned by the
Medical superintendent CMO/Head
of Hospital (with seal)

Signature / Thumb impression
of the disabled person.

P.R. 805

ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ

ಅಧಿಸೂಚನೆ ಸಂ. ಇಎಸ್‌ಟಿ(1) 177/2008–09 ದಿನಾಂಕ: 26ನೇ ಸೆಪ್ಟೆಂಬರ್ 2009

ಉಲ್ಲೇಖ: (1) ಸರ್ಕಾರದ ಅಧಿಸೂಚನೆ ಸಂ: ಕಂಇ 299 ಬಿಎಸ್ ಸಿ 2006 ದಿನಾಂಕ: 3–2–2009 ಮತ್ತು 8–9–2009.

(2) ಸರ್ಕಾರದ ಅಧಿಸೂಚನೆ ಸಂ: ಕಂಇ 299 ಬಿಎಸ್ ಸಿ 2006 ದಿನಾಂಕ : 24–7–2009.

ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ದ್ವಿಪ್ರತಿ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ಮಂಡ್ಯ ಇವರಿಗೆ **ದಿನಾಂಕ 30–10–2009 ರಂದು ಸಂಜೆ 5.30 ಗಂಟೆಯೊಳಗೆ** ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೊರಿಯರ್ ಮೂಲಕ ಕಳುಹಿಸುವುದು. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸುವುದಿಲ್ಲ. ಹುದ್ದೆಗಳ ಸಂಖ್ಯೆಯನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರಿವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಹೊಂದಿರುತ್ತಾರೆ.

ಕ್ರ. ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ	ವೇತನ ಶ್ರೇಣಿ
1	ಗ್ರಾಮ ಲೆಕ್ಕಿಗ	59	ದ್ವಿತೀಯ ಪಿ.ಯು.ಸಿ. ಅಥವಾ 12 ನೇ ತರಗತಿ (12th Standard Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು	5800–10500

ವರ್ಗೀಕರಣ

ಕ್ರ. ಸಂ.	ಹುದ್ದೆಯ ಹೆಸರು	ಒಟ್ಟು ಹುದ್ದೆ	ವರ್ಗೀಕರಣ								
1	ಗ್ರಾಮ ಲೆಕ್ಕಿಗ	59		ಇತರೆ	ಮಹಿಳೆ	ಗ್ರಾಮೀಣ	ಅಂ.ವಿ	ಮಾ.ಸೈ	ಕ.ಮಾ.ಅ	ಯೋ.ನಿ.ರಾ	ಒಟ್ಟು
			ಪ.ಜಾ	02	03	03	01	0	0	0	09
			ಪ.ಪಂ	01	01	0	0	0	0	0	02
			ಪ್ರ.1	01	01	0	0	0	0	0	02
			ಪ್ರ.2(ಎ)	02	03	03	01	0	0	0	09
			ಪ್ರ.2(ಬಿ)	01	01	0	0	0	0	0	02
			ಪ್ರ.3(ಎ)	01	01	0	0	0	0	0	02
			ಪ್ರ.3(ಬಿ)	01	01	01	0	0	0	0	03
			ಸಾ.ಅ	06	09	08	02	03	01	01	30
			ಒಟ್ಟು	**15**	**20**	**15**	**04**	**03**	**01**	**01**	**59**

1) ಮಾ.ಸೈ– ಮಾಜಿ ಸೈನಿಕರು
2) ಕ.ಮಾ.ಅ– ಕನ್ನಡ ಮಾಧ್ಯಮ ಅಭ್ಯರ್ಥಿ
2) ಯೋ.ನಿರಾ – ಯೋಜನಾ ನಿರಾಶ್ರಿತರು
4) ಅಂ.ವಿ.– ಅಂಗವಿಕಲರು

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಅರ್ಜಿಗಳನ್ನು ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು;ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. ವಯೋಮಿತಿ: ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

ಪ.ಜಾ / ಪ.ಪಂ., ಪ್ರವರ್ಗ–1	:	ಕನಿಷ್ಠ–18	ಗರಿಷ್ಠ – 40
ಹಿಂದುಳಿದ ವರ್ಗ	:	ಕನಿಷ್ಠ–18	ಗರಿಷ್ಠ – 38
ಸಾಮಾನ್ಯ ವರ್ಗ	:	ಕನಿಷ್ಠ–18	ಗರಿಷ್ಠ – 35

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಂತೆ ವಿನಾಯಿತಿ ನೀಡಲಾಗುವುದು.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್ ಸೈಟ್ mandya.nic.in ಯಿಂದ Download ಮಾಡಿಕೊಳ್ಳುವುದು. ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
5. ನಿಗದಿತ ದಿನಾಂಕದ ನಂತರ ಸಲ್ಲಿಸಿದ /ತಲುಪಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
6. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
7. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್ ಪೋರ್ಟ್ ಸೈಜಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
8. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸ ಲಾಗುವುದು.
9. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
10. ಜಾತಿ /ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
11. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಮಂಡ್ಯ ರವರು ಕಾಯ್ದಿರಿಸಿಕೊಂಡಿರುತ್ತಾರೆ.
12. ಪ.ಜಾತಿ / ಪ.ಪಂ ಮತ್ತು ಪ್ರವರ್ಗ–1 /ಮಾಜಿ ಸೈನಿಕರು / ಅಂಗವಿಕಲ ಅಭ್ಯರ್ಥಿಗಳು ರೂ 100 /– ಹಾಗೂ ಇತರರಿಗೆ ರೂ 200 /– ಗಳಿಗೆ ಬ್ಯಾಂಕ್ ಡಿ.ಡಿ/ಪೋಸ್ಟಲ್ ಆರ್ಡರ್/ ಬ್ಯಾಂಕರ್ಸ್ ಚೆಕ್ ಅನ್ನು ಜಿಲ್ಲಾಧಿಕಾರಿಗಳು, ಮಂಡ್ಯ ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಡಿ.ಡಿ ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಖರೀದಿಸತಕ್ಕದ್ದು ಹಾಗೂ ಡಿ.ಡಿ.ಯ ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು.ಡಿ.ಡಿ. ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
13. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
14. ಅಭ್ಯರ್ಥಿಯ ಆಯ್ಕೆಯನ್ನು ಪೂರ್ಣವಾಗಿ ಮೆರಿಟ್ ಆಧಾರದ ಮೇಲೆ ಮಾತ್ರ ಮಾಡಲಾಗುವುದು.
15. ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿ ಜವಾಬ್ದಾರರಾಗುವುದಿಲ್ಲ.
16. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು: – ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆ ಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಸೀಲ್ದಾರ್ ರಿಂದ)ಪಡೆದು ಲಗತ್ತಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ/ಪ.ಪಂ. * ನಮೂನೆ–ಡಿ ಯಲ್ಲಿ ಪ್ರವರ್ಗ–1: * ನಮೂನೆ– ಇ ಯಲ್ಲಿ

ಪ್ರವರ್ಗ 2ಎ, 2ಬಿ, 3ಎ, 3ಬಿ : * ನಮೂನೆ– ಎಫ್ ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ಪ್ರಮಾಣಪತ್ರ ವನ್ನು ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

17. ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಸರ್ಕಾರಿ ಆದೇಶ ಸಂ. ಸಿಆಸುಇ 128 ಸೇನೆನಿ 2006 ದಿ: 1.8.2002 ರನ್ವಯ ಶೇಕಡ 5 ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿಡಲಾಗಿದೆ. ಈ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು.

18. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು :

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮೃತಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಾಮಾಣ ಪತ್ರವನ್ನು ಪಡೆದಿರಬೇಕು.

19. ಅಂಗವಿಕಲ ಅಭ್ಯರ್ಥಿಗಳು :

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9 (1ಎ)ರನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಅಧಿಕೃತ ಜ್ಞಾಪನ ಸಂ.ಸಿ.ಆ.ಸು.ಇ.115/ಸೇನೆನಿ 2005/ 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಅದರ ದೃಢೀಕೃತ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರಗಳ ನಮೂನೆಯನ್ನು ಅರ್ಜಿಯೊಡನೆ ಲಗತ್ತಿಸಿದೆ.

20. ಗ್ರಾಮೀಣ ಅಭ್ಯರ್ಥಿಗಳು :

1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ದೃಢೀಕೃತ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ. ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಸೀಲ್ದಾರ್ ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೆ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

21. ಕನ್ನಡ ಮಾಧ್ಯಮ ಅಭ್ಯರ್ಥಿಗಳು.

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1) (ಸಿ) ರನ್ವಯ ಅಭ್ಯರ್ಥಿಯು 1ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

22. ಅರ್ಹತಾ ಷರತ್ತುಗಳು :

ಅ). ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿ ವರದಿಯ ಮೇಲೆ ಅನರ್ಹರೆಂಬುಗಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಪ್ರಾಧಿಕಾರದ /ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ಈ ಮೇಲ್ಕಂಡ ಅರ್ಹತೆಗಳೊಂದಿಗೆ ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗಾಗಿ ಅರ್ಜಿ ಸಲ್ಲಿಸತಕ್ಕದ್ದು.

23. ಅರ್ಜಿಯ ಜೊತೆಗೆ ಕೆಳಕಂಡ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸತಕ್ಕದ್ದು.

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉದೃತ ಭಾಗ
- ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, ಪ್ರವರ್ಗ -2ಬಿ, ಪ್ರವರ್ಗ- 3ಎ, 3ಬಿ, ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಿಗಧಿತ ನಮೂನೆ ಯಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಮೇಲ್ಕಂಡಂತೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಯಾವುದೇ ಕಾರಣಕ್ಕೂ ಮೇಲ್ಕಂಡ ದಾಖಲೆಗಳನ್ನು ಹಿಂದಿರುಗಿಸಲಾಗುವುದಿಲ್ಲ.

24. ಇತರೆ ಸೂಚನೆಗಳು :

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

25. ಸರ್ಕಾರವು ಸಂದರ್ಭಾನುಸಾರ ಮುಂದೆ ಹೊರಡಿಸಬಹುದಾದ ಆದೇಶಗಳಿಗೆ ಒಳಪಟ್ಟಿರುತ್ತದೆ.

ಅಧ್ಯಕ್ಷರು,
ಆಯ್ಕೆ ಪಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ

ಗ್ರಾಮ ಲೆಕ್ಕಿಗರ ಹುದ್ದೆಯ ನೇರ ನೇಮಕಾತಿಗಾಗಿ ಅರ್ಜಿ ನಮೂನೆ

ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ,
ಪ್ರಕಟಣೆ ಸಂ:
ಜಾಹಿರಾತು ಹೊರಡಿಸಿದ ದಿನಾಂಕ :
ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಹೆಸರು :

ಇತ್ತೀಚಿನ ಪಾಸ್ ಪೋರ್ಟ್ ಸೈಜಿನ ಭಾವಚಿತ್ರ

ಡಿ.ಡಿ./ಪೋಸ್ಟಲ್ ಆರ್ಡರ್ /ಬ್ಯಾಂಕರ್ ಚೆಕ್ ಪಡೆದ ಬ್ಯಾಂಕ್ ಹೆಸರು	ಸಂದಾಯ ಮಾಡಿದ ಮಾತ್ತ	ಡಿ.ಡಿ/ಪೋಸ್ಟಲ್ ಆರ್ಡರ್/ಬ್ಯಾಂಕರ್ ಚೆಕ್ ಪಡೆದ ಸಂಖ್ಯೆ ಮತ್ತು ದಿನಾಂಕ

1	ಅರ್ಜಿದಾರನ/ಳ ಪೂರ್ಣ ಹೆಸರು	
2	ತಂದೆ / ಪೋಷಕರ ಹೆಸರು	
3	ಖಾಯಂ ವಿಳಾಸ	
4	ಅಂಚೆ ವಿಳಾಸ	
5	ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ	
6	ಲಿಂಗ : ಪುರುಷ / ಮಹಿಳೆ	

7	ಜನ್ಮದಿನಾಂಕ (ಎಸ್.ಎಸ್.ಎಲ್.ಸಿ ಅಂಕ ಪಟ್ಟಿ ಯಲ್ಲಿರುವಂತೆ)						
8	ಮೀಸಲಾತಿ ಕೋರಿದ್ದಲ್ಲಿ ಅನ್ವಯಿಸುವ ಬಾಕ್ಸ್‌ನಲ್ಲಿ (( ) ಗುರುತು ಹಾಕಿ (ದೃಢೀಕರಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು)						
	ಅ) ಪ.ಜಾ / ಪ.ಪಂ . ದವರೇ (✓)	ಪ.ಜಾ		ಪ.ಪಂ			ಉಪಜಾತಿ ನಮೂದಿಸಬೇಕು
	ಆ) ಹಿಂದುಳಿದ ವರ್ಗದವರೇ (✓)	ಪ್ರ–1	2ಎ	2ಬಿ	3ಎ	3ಬಿ	ಉಪಜಾತಿ ನಮೂದಿಸಬೇಕು
	ಇ) ಸಾಮಾನ್ಯ ವರ್ಗದವರೇ	ಹೌದು / ಇಲ್ಲ					
	ಈ) ಇತರೆ ಮೀಸಲಾತಿ(✓)	ಗ್ರಾ.ಅ.	ಕ.ಮಾ.ಅ	ಯೋ.ನಿರಾ	ಮಾ .ಸೈ	ವಿಧವೆಯೇ?	ಅಂ.ವಿ
9	ವಿದ್ಯಾರ್ಹತೆ	ದ್ವಿತೀಯ ಪಿ.ಯು.ಸಿ. ಅಥವಾ 12 ನೇ ತರಗತಿ (12th **Standard Examination conducted by Central Board of Secondary Education or ICSE**) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು					
		ಒಟ್ಟು ಅಂಕಗಳು	ಗಳಿಸಿದ ಅಂಕಗಳು		ಶೇಕಡ		
10	ಈ ಅರ್ಜಿಗೆ ಲಗತ್ತಿಸಿದ ದಾಖಲೆಗಳ ಪಟ್ಟಿ	1) 2) 3)					

ಈ ಮೇಲ್ಕಂಡ ಎಲ್ಲಾ ವಿವರಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಸತ್ಯವಲ್ಲವೆಂದು ತಿಳಿದು ಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸಬಹುದು. ಇಲ್ಲವೇ ನನ್ನ ವಿರುದ್ಧ ಸಿವಿಲ್ / ಕ್ರಿಮಿನಲ್ ಮೊಕದ್ದಮೆ ಹೂಡಬಹುದು..

ಅರ್ಜಿದಾರನ/ಳ ಸಹಿ

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ :ಸಿಆಸುಇ 115 ಸೆನೆನಿ 2005, ದಿನಾಂಕ: 19–11–2005

CERTIFICATE FOR THE PERSONS WITH DISABILITIES

This is to certify that Sri/Smt/Kumari ______________________ son/wife/daughter of Shri ______________________ age ________old, male/female, Registration No ______________________ is a case of ______________________ He/She is physically disabled/visual disabled speech & hearing disabled and has ________% (______________________percent) permanent (Physical impairment/ visual impairment speech & hearing impairment) in relation to his/her______________________

Note:

1. This condition is progressive/non-progressive/likely to improve/not likely to improve.
2. Re-assessment is not recommended/is recommended . after a period of ________________ months/years.

Strike out which is not applicable.

(Recent Attested Photograph showing the disability Affixed here)	Sd/- (Doctor) (Seal)	Sd/- (Doctor) (Seal)	sd/- (Doctor) (Seal)

Countersigned by the
Medical Superintendent
CMO/Head of Hospital (with seal)

Signature/Thumb impression
Of the disabled person.

V-F-35 (0)

ನಮೂನೆ-1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ,

ತಹಸೀಲ್ದಾರರು,

------------- ತಾಲ್ಲೂಕು,

------------- ಜಿಲ್ಲೆ.

ಮಾನ್ಯರೆ,

ಶ್ರೀ/ಶ್ರೀಮತಿ--ಎಂಬುವವರ ಮಗ/ಮಗಳು/ ಪತಿ/ಪತ್ನಿ -- ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ:
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ:
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ:
7. ಅಭ್ಯರ್ಥಿಯು ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ /ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ/ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ--------------------------- ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ --- ---------------ಎಂಬುವವರು ಕರ್ನಾಟಕ ರಾಜ್ಯದ--------- ಜಿಲ್ಲೆಯ ವಿಭಾಗ---------------- ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ------------------- ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 84, ಬೆಂಗಳೂರು, ದಿನಾಂಕ: 31-01-1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಸೀಲ್ದಾರ್

ದಿನಾಂಕ: ----------- ತಾಲ್ಲೂಕು

ಕಛೇರಿಯ ಮೊಹರು

ಸೂಚನೆ-1 : ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ-2 : ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು ದಿನಾಂಕ: 31-10-1995ರನ್ವಯ ಮೇಲುಸ್ತರ (Creamy Layer)ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ನಮೂನೆ-2

ಗ್ರಾಮೀಣ ಮೀಸಲಾತಿ ಸೌಲಭ್ಯಕ್ಕಾಗಿ ಪ್ರಮಾಣ ಪತ್ರ

ಶ್ರೀ...ರವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಯುತ/ಕುಮಾರಿ .... ಜಿಲ್ಲೆ.............................. ತಾಲ್ಲೂಕು .... ಗ್ರಾಮದಲ್ಲಿ .... ವಾಸವಾಗಿರುವ ಇವರು ಒಂದನೇ ತರಗತಿಯಿಂದ .... ತರಗತಿವರೆಗೆ....................................ಜಿಲ್ಲೆ .... ತಾಲ್ಲೂಕು .... ಪಟ್ಟಣ .... ಶಾಲೆಯಲ್ಲಿ ವ್ಯಾಸಂಗ ಮಾಡಿ .... ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲುರುಜು ಮುಖ್ಯೋಪಾಧ್ಯಾಯ ಸಹಿ

ಕ್ಷೇತ್ರ ಶಿಕ್ಷಣ ಅಧಿಕಾರಿ ಮತ್ತು ಸಂಸ್ಥೆಯ ಮೊಹರು

ಕಛೇರಿಯ ಮೊಹರು

ಸ್ಥಳ:

ದಿನಾಂಕ:

ಪಿ.ಆರ್. 806

ಜಿಲ್ಲಾಧಿಕಾರಿಯವರ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

ಕಛೇರಿ: 0821-2422302, ಫ್ಯಾಕ್ಸ್: 0821-2429012

ಇ-ಮೇಲ್ : deo.mysore@gmail.com and dcmysore-ka@nic.in

ಅಧ್ಯಕ್ಷರು, ಆಯ್ಕೆ ಪ್ರಾಧಿಕಾರ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು

ಅಧಿಸೂಚನೆ

ಸಂ:ಗ್ರಾಲೆಸಿ/101/2008-09, ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ ಮೈಸೂರು ಜಿಲ್ಲಾ, ಕಂದಾಯ ಘಟಕದ, ಭೂಮಿ ಕೇಂದ್ರಗಳಲ್ಲಿ ಖಾಲಿಯಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ 1 ಸರ್ಕಾರದ ಆದೇಶ ಸಂ: ಆರ್.ಡಿ.130.ಬಿಎಸ್‌ಸಿ.2007 ದಿ: 4-12-2008

2 ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್‌ಡಿ.299.ಬಿಎಸ್‌ಸಿ.2006 ದಿನಾಂಕ 3-2-2009

3 ಸರ್ಕಾರದ ಆದೇಶ ಸಂ:ಆರ್‌ಡಿ.130.ಬಿಎಸ್‌ಸಿ.2007 ದಿನಾಂಕ 19-2-2009

4 ಸರ್ಕಾರದ ಅಧಿಸೂಚನೆ ಸಂ:ಕಂಇ.299.ಬಿಎಸ್‌ಸಿ.2009 ದಿ. 24-7-2009 ಹಾಗೂ 8-9-2009

ಮೈಸೂರು ಜಿಲ್ಲಾ, ಕಂದಾಯ ಘಟಕದ, ಭೂಮಿ ಕೇಂದ್ರಗಳಲ್ಲಿ ಖಾಲಿಯಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಖಾಲಿ ಹುದ್ದೆಗಳ ವಿವರ

ಹುದ್ದೆಯ ಹೆಸರು: ಗ್ರಾಮಲೆಕ್ಕಿಗರು(ಭೂಮಿ ಕೇಂದ್ರ) ಒಟ್ಟು ಖಾಲಿ ಹುದ್ದೆ: 35(ಮುವ್ವತ್ತೈದು)

ಕ್ರಮ ಸಂಖ್ಯೆ	ವರ್ಗೀಕರಣ	ಪ.ಜಾ	ಪ.ಪಂ	ವ-1	ವ-2ಎ	ವ-2ಬಿ	ವ-3ಎ	ವ-3ಬಿ	ಸಾ.ಅ	ಒಟ್ಟು
1	ಸಾಮಾನ್ಯ	1	1	1	1	1	1	1	3	10
2	ಮಹಿಳೆ	2	-	1	2	1	-	-	5	11
3	ಗ್ರಾಮೀಣ	2	-	-	1	-	-	-	5	08
4	ಮಾಜಿ ಸೈನಿಕ	-	-	-	-	-	-	-	1	01
5	ಕನ್ನಡ ಮಾಧ್ಯಮ	-	-	-	-	-	-	-	1	01
6	ಯೋಜನಾ ನಿರಾಶ್ರಿತ	-	-	-	--	-	-	-	1	01
7	ಅಂಗವಿಕಲರು	1	-	-	1	-	-	-	1	03
	ಒಟ್ಟು:	**06**	**01**	**02**	**05**	**02**	**01**	**01**	**17**	**35**

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-10-2009

ಸಂ:1 ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ:

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣ ಅಥವಾ ಸಿ.ಬಿ.ಎಸ್.ಇ./ಐ.ಸಿ.ಎಸ್.ಇ. ರವರು ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರತಕ್ಕದ್ದು.. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.

ಸಂ:2 ಹುದ್ದೆಗೆ ನಿಗದಿಪಡಿಸಿರುವ ವೇತನಶ್ರೇಣಿ: ರೂ:5800-10500

ಸಂ:3 ಹುದ್ದೆಗೆ ನಿಗದಿಪಡಿಸಿರುವ ವಯೋಮಿತಿ:

ಕ್ರಮ ಸಂಖ್ಯೆ	ವರ್ಗ	ವಯೋಮಿತಿ
1	ಸಾಮಾನ್ಯ	18-35 ವರ್ಷ
2	ಪ್ರವರ್ಗ-2ಎ/2ಬಿ/3ಎ/3ಬಿ	18-38 ವರ್ಷ
3	ಪ್ರವರ್ಗ-1 ಪ.ಜಾ/ಪ.ವರ್ಗ	18-40 ವರ್ಷ

ಸಂ:3 ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಶುಲ್ಕ:

ಕ್ರಮ ಸಂಖ್ಯೆ	ವರ್ಗ	ಶುಲ್ಕ	ಪಾವತಿಸುವ ವಿಧಾನ
1	ಸಾಮಾನ್ಯ	ರೂ:200.00	ಚಲನ್ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಯೂನಿವರ್ಸಿಟಿ ಬ್ರಾಂಚಿನ ಎಸ್.ಬಿ. ಖಾತೆ ಸಂ: 5400759114-2 ಕ್ಕೆ ಜಮಾ ಮಾಡತಕ್ಕದ್ದು.
2	ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಪ್ರ.ವ-1, ಮಾಜಿ ಸೈನಿಕ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ	ರೂ:100-00	

ಸಂ:4 ಹುದ್ದೆಯ ಆಯ್ಕೆ ವಿಧಾನ:

ಅಭ್ಯರ್ಥಿಯು ದ್ವಿತೀಯ ಪಿ.ಯು.ಸಿ./ಸಿ.ಬಿ.ಎಸ್.ಇ/ಐ.ಸಿ.ಎಸ್.ಇ. ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡವಾರು ಮೆರಿಟ್ ಆಧಾರದಲ್ಲಿ ಮೀಸಲಾತಿಗೆ ಅನುಗುಣವಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: RD.299 BSC 2009 ದಿ: 3-2-2009 ರನ್ವಯ ಆಯ್ಕೆ ಮಾಡಲಾಗುವುದು

ನಿಬಂಧನೆಗಳು:

1 ಅಭ್ಯರ್ಥಿಯು ಎಲ್ಲಾ ಪ್ರಮಾಣಪತ್ರಗಳನ್ನು ಮತ್ತು ಅಂಕಪಟ್ಟಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.

2 ನೇಮಕಾತಿ ಹೊಂದಿದ ಅಭ್ಯರ್ಥಿಗಳು, ಎರಡು (02)ವರ್ಷಗಳ ಪರಿವೀಕ್ಷಣಾವಧಿ ಪೂರೈಸುವುದು ಕಡ್ಡಾಯವಾಗಿರುತ್ತದೆ.

3 ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಇಲಾಖಾ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.

4 ಜನ್ಮ ದಿನಾಂಕವನ್ನು ಎಸ್.ಎಸ್.ಎಲ್.ಸಿ. ಅಂಕಪಟ್ಟಿಯ ಆಧಾರದ ಮೇಲೆಯೇ ಸಲ್ಲಿಸತಕ್ಕದ್ದು.

5 ಮಾಜಿ ಸೈನಿಕ ಮೀಸಲಾತಿ ಹುದ್ದೆಗೆ ಸಂಬಂಧಿಸಿದಂತೆ, ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿರುವ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.

6 ಅಂಗವಿಕಲ ಮೀಸಲಾತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂ: ಸಿಆಸುಇ.115 ನೇನೆನಿ.2005 ದಿ: 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

7 ಅಭ್ಯರ್ಥಿಯು ಜಾತಿ ಪ್ರಮಾಣ ಪತ್ರವನ್ನು ಸರ್ಕಾರದ ಅದೇಶ ಸಂ: ಸಕಇ/132/ಎಸ್ಎಡಿ/97 ದಿ: 8-2-2000 ರಲ್ಲಿ ನಿಗದಿಪಡಿಸಿರುವಂತೆ ನಮೂನೆಯಲ್ಲಿ ತಾಲ್ಲೂಕು ತಹಸೀಲ್ದಾರರಿಂದ ಪಡೆದಿರತಕ್ಕದ್ದು.

8 ಗ್ರಾಮೀಣ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿ: 13-2-2001ರ ಸರ್ಕಾರದ ಆದೇಶ ಸಂ: ಸಿಆಸುಇ8/ಸೇನೆನಿ/2001 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲುರುಜುವನ್ನು ಪಡೆದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

9 ಇಬ್ಬರು ಗಣ್ಯ ವ್ಯಕ್ತಿಗಳಿಂದ ಅಥವಾ ಪತ್ರಾಂಕಿತ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣಪತ್ರ ಹೊಂದಿರತಕ್ಕದ್ದು.

10 ಕನ್ನಡ ಮಾಧ್ಯಮ ಮೀಸಲಾತಿ ಪಡೆಯಲಿಚ್ಛಿಸುವವರು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ದೃಢೀಕರಣ ಪತ್ರ ಹೊಂದಿರತಕ್ಕದ್ದು. ಅನುಬಂಧ-III

11 ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಅಭ್ಯರ್ಥಿಯು ಹೊಂದಿರಬೇಕು.

12 ಯೋಜನೆಗಳಿಂದ ನಿರಾಶ್ರಿತಗೊಂಡ ಬಗ್ಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ದಿನಾಂಕ 27-7-2001ರ ಅದೇಶ ಸಂಖ್ಯೆ. ಡಿಪಿಎಆರ್.44.ನೇನನಿ/2001 ರಲ್ಲಿ ಸೂಚಿಸಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು. ಅನುಬಂಧ-II

13 ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಮಾಡುವ ಅಥವಾ ಕಡಿಮೆ ಮಾಡುವ ಹಕ್ಕು ನೇಮಕಾತಿ ಪ್ರಾಧಿಕಾರಕ್ಕೆ ದತ್ತವಾಗಿರುತ್ತದೆ.

14 ತಪ್ಪು ಮಾಹಿತಿ ಒದಗಿಸಿದ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು

15 ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆ ದಿನವು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

16 ಈ ಅಧಿಸೂಚನೆ ಅನ್ವಯ ನೇಮಕಾತಿ ಹೊಂದುವ ಅಭ್ಯರ್ಥಿಗಳು ಜಿಲ್ಲೆಯ ಯಾವುದೇ ತಾಲ್ಲೂಕುಗಳಲ್ಲಾದರೂ ಸೇವೆ ಸಲ್ಲಿಸಲು ಬದ್ಧರಾಗಿರಬೇಕು ಹಾಗೂ ತಾಲ್ಲೂಕು ಕಛೇರಿಯ ಭೂಮಿ ಕೇಂದ್ರದಲ್ಲಿ ಸೇವೆ ಸಲ್ಲಿಸಲು ಬದ್ಧರಾಗಿರಬೇಕು.

17 ಅರ್ಜಿಯನ್ನು ONLINE ಮೂಲಕ ಸಲ್ಲಿಸತಕ್ಕದ್ದು. ಆನ್‌ಲೈನ್ ವಿಳಾಸ http://recruitment,kar.nic.in/mysore-va. ಆನ್‌ಲೈನ್ ಅರ್ಜಿ ದಿ: 1-10-2009 ರಿಂದ ಲಭ್ಯವಿರುತ್ತದೆ ಹಾಗೂ ದಿ: 30-10-2009ರ ಸಂಜೆ 5-30 ರವರೆಗೆ ಮಾತ್ರ ಲಭ್ಯವಾಗುವುದು. ONLINE ಹೊರತುಪಡಿಸಿ ಇತರೆ ಯಾವುದೇ ವಿಧದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

18 ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ಇಲ್ಲದೇ ತಿರಸ್ಕರಿಸಲಾಗುವುದು.

ಅಧ್ಯಕ್ಷರು,
ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್. 807

ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ಅಧಿಸೂಚನೆ

ಅಧಿಸೂಚನೆ ಸಂಖ್ಯೆ : ಆರ್.ಆರ್.ಟಿ. ಸಿಆರ್/142/07-08 ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ: ಚಿಕ್ಕಬಳ್ಳಾಪುರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ : ಕಂ ಇ 299 ಬಿಎಸ್‌ಸಿ 2006 ದಿನಾಂಕ.03-02-2009
2) ಸರ್ಕಾರದ ಅಧಿಸೂಚನೆ ಸಂ : ಕಂ ಇ 299 ಬಿಎಸ್‌ಸಿ 2006 ದಿನಾಂಕ.08-09-2009

ಚಿಕ್ಕಬಳ್ಳಾಪುರ ಜಿಲ್ಲಾ ಘಟಕ, ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಭೂಮಿ ಕೇಂದ್ರಕ್ಕೆ ಹಾಗೂ ಕಂದಾಯ ವೃತ್ತಗಳಿಗೆ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ(1) ರಂತೆ ಸರ್ಕಾರ ಆದೇಶಿಸಿರುತ್ತೆ ಆದರಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಪೂರ್ಣ ವಿವರಗಳೊಂದಿಗೆ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ **ದಿನಾಂಕ 30-10-2009 ರಂದು ಸಂಜೆ 5-00 ಗಂಟೆಯೊಳಗೆ** ಅಥವಾ ಅದಕ್ಕೂ ಮುಂಚಿತವಾಗಿ ರಿಜಿಸ್ಟರ್ ಅಂಚೆ / ಕೊರಿಯರ್ ಮೂಲಕ ಕಳುಹಿಸತಕ್ಕದ್ದು. ಅದರಂತೆ ಕಳುಹಿಸಿದ ಅರ್ಜಿಗಳು ಕೊನೆಯ ದಿನಾಂಕದಂದು 5-00 ಗಂಟೆಯೊಳಗೆ ಕಛೇರಿಗೆ ತಲುಪತಕ್ಕದ್ದು. ನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗೂ ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಹುದ್ದೆಗಳ ವಿವರ

ಕ್ರ ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ	ವೇತನ ಶ್ರೇಣಿ
1	ಗ್ರಾಮ ಲೆಕ್ಕಿಗ	33	ಪಿ ಯು. ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.	5800-100-6000-125-6500-150-7100-175-7800-200-8600-225-9500-250-10500

*** ಷರಾ: ತತ್ಸಮಾನ ಪರೀಕ್ಷೆ - 12^{th} Standard Examination conducted by Central Board of Secondary Education or I C S E (ಸರ್ಕಾರದ ಅಧಿಸೂಚನೆ ಸಂಖ್ಯೆ RD 299 BSC 2006 ದಿನಾಂಕ 24/07/2009)

ಮೀಸಲಾತಿ ವರ್ಗೀಕರಣ

ಕ್ರ ಸಂ	ಹುದ್ದೆಯ ಹೆಸರು	ಒಟ್ಟು ಹುದ್ದೆ		ಇತರೆ	ಮಹಿಳೆ	ಗ್ರಾಮೀಣ	ಅಂಗ ವಿಕಲ	ಮಾಜಿ ಸೈನಿಕರು	ಕನ್ನಡ ಮಾಧ್ಯಮ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಒಟ್ಟು
1	ಗ್ರಾಮ ಲೆಕ್ಕಿಗ	33	ಪರಿಶಿಷ್ಟ ಜಾತಿ	-	2	1	1	-	-	1	5
			ಪರಿಶಿಷ್ಟ ಪಂಗಡ	-	-	1	-	-	-	-	1
			ಪ್ರವರ್ಗ 1	-	-	-	-	1	-	-	1
			ಪ್ರವರ್ಗ 2(ಎ)	-	2	1	-	1	1	-	5
			ಪ್ರವರ್ಗ 2(ಬ)	-	1	1	-	-	-	-	2
			ಪ್ರವರ್ಗ 3(ಎ)	1	-	-	-	-	-	-	1
			ಪ್ರವರ್ಗ 3(ಬ)	1	-	1	-	-	-	-	2
			ಸಾಮಾನ್ಯ ಅಭ್ಯರ್ಥಿ.	3	5	3	1	2	1	1	16
			ಒಟ್ಟು	5	10	8	2	4	2	2	33

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :

11. ಅರ್ಜಿಗಳನ್ನು ರಿಜಿಸ್ಟರ್ ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಹಾಗೂ ಅರ್ಜಿಗಳನ್ನು ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
12. **ವಯೋಮಿತಿ** : ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು

ಆ) ಗರಿಷ್ಟ ವಯೋಮಿತಿ ಈ ಕೆಳಕಂಡಂತಿರತಕ್ಕದ್ದು.

ಸಾಮಾನ್ಯ ವರ್ಗ	35 ವರ್ಷ
2ಎ , 2ಬಿ , 3ಎ, 3ಬಿ	38 ವರ್ಷ
ಪ.ಜಾತಿ / ಪ. ಪಂಗಡ/ ಪ್ರ - 1	40 ವರ್ಷ
ವಿಧವೆಯರು / ಅಂಗವಿಕಲ/	ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು.

ಎಸ್ ಎಸ್ ಎಲ್ ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ ಸಿ) ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿದಷ್ಟು ಮಟ್ಟಿಗೆ ಹೆಚ್ಚಿಸಲಾಗುವುದು :

* **ಮಾಜಿ ಸೈನಿಕರು :** ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವರು ಸಶಸ್ತ್ರದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೊ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಎ) ಮಾಜಿ ಸೈನಿಕ ಎಂದರೆ ಸಶಸ್ತ್ರದಳಗಳಾದ ನಿಯಮಿತ ಭೂದಳ,ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೆ) ಸೇವೆ ಸಲ್ಲಿಸಿದ ವ್ಯಕ್ತಿ ಎಂದು ಅರ್ಥ. ಅಂದರೆ ಡಿಫೆನ್ಸ್ ಸೆಕ್ಯುರಿಟಿಕೋರ್, ಜನರಲ್ ರಿಸರ್ವ್ ಇಂಜಿನೀಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

ಮತ್ತು (ಬಿ) ಕೇಂದ್ರ ಸಶಸ್ತ್ರದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

ಆ) ಸೈನಿಕ ಸೇವೆಯಿಂದ ಉಂಟಾದ ವೈದ್ಯಕೀಯ ಕಾರಣಗಳು ಅಥವಾ ಆತನ ನಿಯಂತ್ರಣ ಮೀರಿದ ಪರಿಸ್ಥಿತಿಗಳ ಮೇಲೆ ಅಂಥ ಸೇವೆಯಿಂದ ಬಿಡುಗಡೆ ಮಾಡಿರುವ ಮತ್ತು ವೈದ್ಯಕೀಯ ಅಥವಾ ಇತರ ಅಸಮರ್ಥತಾ ನಿವೃತ್ತಿ ವೇತನವನ್ನು ನೀಡಲಾಗಿರುವ ವ್ಯಕ್ತಿಯನ್ನು : ಅಥವಾ

ಇ) ಆತನ ವೈಯಕ್ತಿಕ ಕೋರಿಕೆಯ ಮೇಲಲ್ಲದೆ ಸಿಬ್ಬಂದಿ ಸಂಖ್ಯೆಯ ಕಡಿತದ ಪ್ರತಿಫಲವಾಗಿ ಅಂಥ ಸೇವೆಯಿಂದ ಆತನನ್ನು ಬಿಡುಗಡೆಗೊಳಿಸಿರುವ ವ್ಯಕ್ತಿಯನ್ನು : ಅಥವಾ

ಈ) ಆತನ ವೈಯಕ್ತಿಕ ಕೋರಿಕೆ ಮೇಲಲ್ಲದೆ ಅಥವಾ ದುರ್ವರ್ತನೆ ಅಥವಾ ಅದಕ್ಷತೆಯ ಕಾರಣದಿಂದಾಗಿ ವಜಾಗೊಳಿಸುವ ಅಥವಾ ತೆಗೆದುಹಾಕುವ ಮೂಲಕವಲ್ಲದೆ. ಅನ್ಯಥಾ ನಿಯೋಜಿಸಲಾದ ನಿರ್ಧಿಷ್ಟ ಅವಧಿ ಮುಕ್ತಾಯವಾದ ತರುವಾಯ ಅಂಥ ಸೇವೆಯಿಂದ ಬಿಡುಗಡೆಗೊಳಿಸಿರುವ ಮತ್ತು ಉಪದಾನ ನೀಡಿರುವ ವ್ಯಕ್ತಿಯನ್ನು ಮತ್ತು ಗ್ರಾಚುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾದೇಶಿಕ ಸೇನೆಯ ಮುಂದಿನ ಪ್ರವರ್ಗಗಳ ಸಿಬ್ಬಂದಿ ಎಂದರೆ.

1. ನಿರಂತರ ಸಂಚಿತ ಸೇವೆ ಸಂಬಂಧಿಸಿದ ನಿವೃತ್ತಿ ವೇತನದಾರ.
2. ಸೈನಿಕ ಸೇವೆಯ ಕಾರಣದಿಂದ ಅಂಗವಿಕಲರಾದ ವ್ಯಕ್ತಿಗಳನ್ನು : ಮತ್ತು
3. ಶೌರ್ಯ ಪ್ರಶಸ್ತಿ ವಿಜೇತರು - ಒಳಗೊಳ್ಳುತ್ತದೆ.

ವಿವರಣೆ:

ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

* ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

* ಅಭ್ಯರ್ಥಿಯು ರಾಜ್ಯಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ, ಅಥವಾ ಹಿಂದೆಯಿದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
* ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು
* ಅಭ್ಯರ್ಥಿಯು ಜೀತಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು
* ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ದತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟು ಕೊಂಡಿರತಕ್ಕದ್ದು.

- ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ ಐದು ವರ್ಷಗಳ ಅವಧಿ ಆದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು

ಸರ್ಕಾರಿ ನೌಕರ: ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಆದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
   ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್‌ಸೈಟ್ http://www.chikballapur.nic.in ನಿಂದ ಡೌನ್ ಲೋಡ್ ಮಾಡಿಕೊಳ್ಳುವುದು. ಅರ್ಜಿಯನ್ನು ಜಿಲ್ಲಾಧಿಕಾರಿ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಾಗಿ ಅರ್ಜಿ ಎಂದು ದಪ್ಪ ಅಕ್ಷರದಲ್ಲಿ ಬರೆದು, ಅಧ್ಯಕ್ಷರು, ಆಯ್ಕೆ ಪ್ರಾದಿಕಾರ ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಇವರಿಗೆ ಅಂಚೆ / ಕೊರಿಯರ್ ಮೂಲಕ ನಿಗದಿಪಡಿಸಿದ ದಿನಾಂಕದೊಳಗಾಗಿ ಕಾರ್ಯಾಲಯದ ವೇಳೆಯಲ್ಲಿ ತಲುಪುವಂತೆ ಸಲ್ಲಿಸಬೇಕು.
4. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಇಲಾಖಾ ಮುಖ್ಯಸ್ಥರ ಮೂಲಕ ಸಲ್ಲಿಸುವುದು.
5. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವ ಚಿತ್ರವನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
6. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಯಾವುದೇ ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
7. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
8. ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು , ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
9. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಚಿಕ್ಕಬಳ್ಳಾಪುರ ರವರು ಕಾಯ್ದಿರಿಸಿ ಕೊಂಡಿರುತ್ತಾರೆ.
10. **ಅರ್ಜಿ ಶುಲ್ಕದ ವಿವರ:** ಪ.ಜಾತಿ/ ಪ. ಪಂಗಡ, ಪ್ರವರ್ಗ-1 ಅಭ್ಯರ್ಥಿಗಳು ರೂ.50-00 ಹಾಗೂ ಇತರರಿಗೆ ರೂ.100-00 ಗಳ ಡಿ ಡಿ. ಯನ್ನು **ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ** ಮಾತ್ರ **ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಾಧಿಕಾರಿಗಳ ಆಯ್ಕೆ ಪ್ರಾಧಿಕಾರ, ಚಿಕ್ಕಬಳ್ಳಾಪುರ ಜಿಲ್ಲೆ** ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಾಗೂ ಡಿ ಡಿ. ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ ಡಿ.ಯನ್ನು ಲಗತ್ತಿಸದ ಅರ್ಜಿಯನ್ನು ತಿರಸ್ಕರಿಸಲಾಗುವುದು. ಯಾವುದೇ ಕಾರಣಕ್ಕೂ ಡಿ.ಡಿ. ಮೊಬಲಗು ಹಿಂತಿರುಗಿಸಲಾಗುವುದಿಲ್ಲ.

ಸಹಿ ಮಾಡದ ಅರ್ಜಿಗಳನ್ನು ಹಾಗೂ ಅಂಕಣಗಳನ್ನು ಪೂರ್ಣ ಭರ್ತಿ ಮಾಡದ ಅರ್ಜಿಗಳನ್ನು ಹಾಗೂ ಸಂಬಂಧಿಸಿದ ದಾಖಲೆಗಳನ್ನು ಲಗತ್ತಿಸದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

11. ಆಯ್ಕೆಯನ್ನು **ಅಭ್ಯರ್ಥಿಯ ಮೆರಿಟ್** ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

12. ಕಾಲೇಜಿನ ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹಾಗೂ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳೊಳಗಿನ ಇತ್ತೀಚಿನ ನಡತೆ ಪ್ರಮಾಣ ಪತ್ರ ಲಗತ್ತಿಸಿರಬೇಕು.

13. ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯು ಜವಾಬ್ದಾರರಾಗುವುದಿಲ್ಲ.

14. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರಬಯಸುವ ಪ.ಜಾತಿ/ಪ.ಪಂಗಡ ಅಭ್ಯರ್ಥಿಗಳು ನಮೂನೆ -ಡಿ ರಲ್ಲಿ , ಪ್ರವರ್ಗ -1 ಅಭ್ಯರ್ಥಿಗಳು ನಮೂನೆ- ಇ ನಲ್ಲಿ ಹಾಗೂ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿತ ತಹಸೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು/ ಚಾಲ್ತಿಯಲ್ಲಿರಬೇಕು, ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

15. ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್.23.ಎಸ್ಆರ್ಆರ್.99 ದಿನಾಂಕ:23.11.2000 ರನ್ವಯ ಈ ಮೀಸಲಾತಿಯಡಿಯಲ್ಲಿ ಕ್ಲೈಮು ಮಾಡುವ ಅಭ್ಯರ್ಥಿಗಳು ಸರ್ಕಾರದ ಆದೇಶದ ಸಂಖ್ಯೆ:ಸಿಆಸುಇ.44.ಸೆಸೇನಿ.2001 ದಿನಾಂಕ:27.07.2001 ರಲ್ಲಿ ತಿಳಿಸಿರುವಂತೆ ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

16. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ/ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

17. ಅಂಗವಿಕಲ ಅಭ್ಯರ್ಥಿಗಳು:

ಅ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿರುವವನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

ಆ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು, ಕೇಳಿಸದ ಅಥವಾ ಅರ್ಥವಾಗದ ಅಥವಾ ಎರಡು ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್ ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರಿಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಇ) ಮೂಳೆಗಳು,ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

ಈ) ರಾಜ್ಯ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅರ್ಹರಾಗಿರುತ್ತಾರೆ.

ಉ) ದೈಹಿಕ ಅಂಗವಿಕಲತೆಗೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಆಲ್ಮಕೋ ಕಾನ್ ಪೂರ್ (ಡಬ್ಲ್ಯೂ ಎಚ್ ಒ ಸ್ಟಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್.7.ಸೇಸೇಆ 94 ದಿನಾಂಕ:13.09.1995 ರಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಕನಿಷ್ಟ ಶೇ: 40 ರಿಂದ ಗರಿಷ್ಟ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

18. ಗ್ರಾಮೀಣ ಅಭ್ಯರ್ಥಿಗಳು:

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ. ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10 ನೇ ತರಗತಿವರೆಗೆ ಗ್ರಾಮಾಂತರ ಪ್ರದೇಶದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ಪಡೆದು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ 2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ 1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದು ಅದರ ಒಂದೊಂದು ಪೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ , ಪರಿಶಿಷ್ಟ ಪಂಗಡ, ಪ್ರವರ್ಗ-1 , ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವು ನಮೂನೆ 2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

19. ಕನ್ನಡ ಮಾಧ್ಯಮ ಅಭ್ಯರ್ಥಿಗಳು:

ಸರ್ಕಾರದ ಅಧಿಸೂಚನೆ ಸಂ. ಡಿಪಿಎಆರ್ 71 ಎಸ್ಆರ್ಆರ್ 2001 ದಿ.24-10-02 ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10 ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

20. ಅರ್ಹತಾ ಷರತ್ತುಗಳು :

ಅ) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು. ಅಥವಾ ನೇಪಾಳದ ಪ್ರಜೆ ಅಥವಾ ಭೂತಾನಿನ ಪ್ರಜೆ, ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1ನೇ ಜನವರಿ 1962 ಕ್ಕಿಂತ ಮುಂಚೆ ಭಾರತಕ್ಕೆ ಬಂದ ಟಿಬೆಟ್‌ನ ನಿರಾಶ್ರಿತ ಅಥವಾ ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ ಪಾಕಿಸ್ತಾನ, ಬರ್ಮಾ, ಶ್ರೀಲಂಕಾ ಮತ್ತು ಪೂರ್ವ ಆಫ್ರಿಕಾದ ರಾಷ್ಟ್ರಗಳಾದ ಕೀನ್ಯಾ, ಉಗಾಂಡ, ಟಾಂಝಾನಿಯಾ ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗನಿಕಾ ಮತ್ತು ಜಾಂಜಬಾರ್) ಝಾಂಬಿಯಾ, ಮಲಾವಿ (ಝೈರೆ, ಇಥಿಯೋಪಿಯಾ ಮತ್ತು ವಿಯಟ್ನಾಂ) ಗಳಿಂದ ವಲಸೆ ಬಂದಿರುವ ಭಾರತೀಯ ಸಂಜಾತ ಆಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ / ಮಾನಸಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಹುದ್ದೆಗೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

21. ಈ ಕೆಳಕಂಡ ದಾಖಲೆಗಳನ್ನು ನಿಗದಿತ ನಮೂನೆಯ ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂಬುದಾಗಿ ಅಭ್ಯರ್ಥಿಗಳು ಖಚಿತ ಪಡಿಸಿಕೊಳ್ಳುವುದು.

* ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ
* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್ ಎಸ್ ಎಲ್ ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರವನ್ನು ಸಂಚಿತ ದಾಖಲೆಯ ಉದ್ಧೃತ ಭಾಗ (Commulative Record)
* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ , ಪ್ರವರ್ಗ 1, ಪ್ರವರ್ಗ 2ಎ , ಪ್ರವರ್ಗ 2ಬಿ , ಪ್ರವರ್ಗ 3ಎ , ಪ್ರವರ್ಗ 3ಬಿ ಯ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)

* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ 1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
* ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ

ಮೇಲ್ಕಂಡ ದಾಖಲೆಗಳ ಫೋಟೋ ಪ್ರತಿಗಳನ್ನು ರಾಜ್ಯ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ಪ್ರತಿಗಳನ್ನು ಮಾತ್ರ ಲಗತ್ತಿಸಬೇಕು ಹಾಗೂ ಸಂಬಂಧಪಟ್ಟ ದಾಖಲೆಗಳು ಅರ್ಜಿ ಸಲ್ಲಿಸುವ ದಿನಾಂಕದಂದಿಗೆ ಚಾಲ್ತಿಯಲ್ಲಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರತಕ್ಕದ್ದು.

ಮೇಲ್ಕಂಡ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

22. ಇತರೆ ಸೂಚನೆಗಳು :

(1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ (ಜೆರಾಕ್ಸ್) ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

(2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

ಅನ್ವರ್ ಪಾಷ, ಭಾ.ಆ.ಸೇ.,
ಅಧ್ಯಕ್ಷರು, ಗ್ರಾಮಲೆಕ್ಕಾಧಿಕಾರಿಗಳ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಅರ್ಜಿ ನಮೂನೆ

ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ
ಪ್ರಕಟಣೆ ಸಂಖ್ಯೆ:
ಜಾಹಿರಾತು ಹೊರಡಿಸಿದ ದಿನಾಂಕ:
ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಹೆಸರು:

ಡಿ.ಡಿ. ಪಡೆದ ಬ್ಯಾಂಕ್ ಹೆಸರು		ಸಂದಾಯ ಮಾಡಿದ ಮೊತ್ತ	ಡಿ.ಡಿ. ಸಂಖ್ಯೆ ಮತ್ತು ದಿನಾಂಕ
1	ಅರ್ಜಿದಾರನ/ಳ ಪೂರ್ಣ ಹೆಸರು		
2	ತಂದೆ/ಪೋಷಕರ ಹೆಸರು		
3	ಖಾಯಂ ವಿಳಾಸ		
4	ಅಂಚೆ ವಿಳಾಸ		
5	ಸಂಪರ್ಕಿಸಬಹುದಾದ ದೂರವಾಣಿ/ ಮೊಬೈಲ್ ಸಂಖ್ಯೆ		
6	ಲಿಂಗ:ಪುರುಷ/ಮಹಿಳೆ		
7	ಜನ್ಮ ದಿನಾಂಕ(ಎಸ್‌ಎಸ್‌ಎಲ್‌ಸಿ ಅಂಕಪಟ್ಟಿಯಲ್ಲಿರುವಂತೆ)		

8	ಮೀಸಲಾತಿ ಕೋರಿದ್ದಲ್ಲಿ ಅನ್ವಯಿಸುವ ಬಾಕ್ಸ್‌ನಲ್ಲಿ [/] ಗುರುತು ಹಾಕಿ(ದೃಢೀಕರಣ ಪತ್ರ ಕಡ್ಡಾಯವಾಗಿ ಲಗತ್ತಿಸಬೇಕು)						
	ಅ.ಪ.ಜಾ/ಪ.ಪಂ.ದವರೇ	ಪ.ಜಾತಿ		ಪ.ಪಂಗಡ		ಉಪಜಾತಿ ನಮೂದಿಸಬೇಕು	
	ಆ.ಹಿಂದುಳಿದ ವರ್ಗದವರೇ	ಪ್ರ-1	2ಎ	2ಬಿ	3ಎ	3ಬಿ	ಉಪಜಾತಿ ನಮೂದಿಸಬೇಕು
	ಇ.ಸಾಮಾನ್ಯ ವರ್ಗದವರೇ	ಹೌದು		ಇಲ್ಲ			
	ಈ.ಇತರೆ ಮೀಸಲಾತಿ	ಗ್ರಾಮೀಣ		ಕ.ಮಾ.ಅ		ಅಂ.ವಿ	ಯೋ.ನಿರಾ / ಮಾ.ಸೈ.
9	ವಿದ್ಯಾರ್ಹತೆ	ಪಿ.ಯು.ಸಿ.ಅಥವಾ ತತ್ಸಮಾನ ಪರೀಕ್ಷೆ					
		ತೇರ್ಗಡೆಯಾದ ವರ್ಷ		ಒಟ್ಟು ಅಂಕಗಳು		ಗಳಿಸಿದ ಅಂಕ	ಶೇಕಡ
10	ಕಂಪ್ಯೂಟರ್ ಜ್ಞಾನದ ಬಗ್ಗೆ ಮಾಹಿತಿ ಒದಗಿಸುವುದು(ಸಂಬಂಧಪಟ್ಟ ವಿದ್ಯಾಸಂಸ್ಥೆಯ ದಾಖಲೆಗಳನ್ನು ಲಗತ್ತಿಸುವುದು)						

ಈ ಮೇಲ್ಕಂಡ ಎಲ್ಲಾ ವಿವರಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಸತ್ಯವಲ್ಲವೆಂದು ತಿಳಿದುಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸಬಹುದು. ನನ್ನ ವಿರುದ್ಧ ಸಿವಿಲ್/ಕ್ರಿಮಿನಲ್ ಮೊಕದ್ದಮೆ ಹೂಡಬಹುದು.

ಸ್ಥಳ:

ದಿನಾಂಕ: ಅರ್ಜಿದಾರನ/ಳ ಸಹಿ

ಪ್ರಪತ್ರ -1

(ಸರ್ಕಾರಿ ನೌಕರರ ಉಪಯೋಗಕ್ಕೆ ಮಾತ್ರ)

ಮೇಲಾಧಿಕಾರಿಯ ಪ್ರಮಾಣ ಪತ್ರ

ಶ್ರೀ:ಶ್ರೀಮತಿ ______________________________ ರವರು ರಾಜ್ಯ ಸರ್ಕಾರಿ ಸೇವೆಯಲ್ಲಿ______________ ದಿನಾಂಕ:____________ ರಿಂದ ____________ ರವರೆಗೆ ನೇಮಕಾತಿ ನಿಯಮಗಳ ಮೇರೆಗೆ ಕ್ರಮಬದ್ಧವಾಗಿ ಖಾಯಂ/ತಾತ್ಕಾಲಿಕವಾದ ಹುದ್ದೆಯಲ್ಲಿದ್ದಾರೆ. ನನಗೆ ತಿಳಿದ ಮಟ್ಟಿಗೆ ಸದರಿಯವರ ನಡತೆ ಚೆನ್ನಾಗಿದ್ದು, ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆಂದು ಪ್ರಮಾಣೀಕರಿಸುತ್ತೇನೆ. ಸದರಿಯವರು ಅಪೇಕ್ಷಿಸಿದ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಅನುಮತಿ ನೀಡಲಾಗಿದೆ.

ಸ್ಥಳ: ಸಹಿ:

ದಿನಾಂಕ: ಹುದ್ದೆ:

ಇಲಾಖೆ:

ಪ್ರಪತ್ರ -1

(ಗುಣ ಮತ್ತು ನಡತೆ ಪ್ರಮಾಣ ಪತ್ರ)

ಶ್ರೀ:ಶ್ರೀಮತಿ______________________________ರವರ ಮಗ/ಮಗಳಾದ ಶ್ರೀ/ಶ್ರೀಮತಿ/ಕುಮಾರಿ______________________ ರವರು ನನಗೆ ____________ವರ್ಷಗಳು ________ ತಿಂಗಳುಗಳಿಂದ ಪರಿಚಯವಿದೆ ಎಂದು ಪ್ರಮಾಣೀಕರಿಸುತ್ತೇನೆ. ಮತ್ತು ನನಗೆ ತಿಳಿದಿರುವಂತೆ ಸದರಿಯವರು ಒಳ್ಳೆಯ ನಡತೆಯುಳ್ಳವರಾಗಿದ್ದಾರೆ ಮತ್ತು ಸರ್ಕಾರಿ ಉದ್ಯೋಗಕ್ಕೆ ಅನರ್ಹರಾಗುವಂತ ಯಾವ ಪೂರ್ವೋತ್ತರಗಳು ಇಲ್ಲ. ಸದರಿಯವರು ನನ್ನ ಸಂಬಂಧಿಕರಾಗಿರುವುದಿಲ್ಲ.

ಸ್ಥಳ: ಸಹಿ:

ದಿನಾಂಕ: ಹುದ್ದೆ:

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೇನೆನಿ 2005, ದಿನಾಂಕ:19.11.2005

Certificate For the Persons with Disabilities

This is to certify that Sri/Smt/Kum ______________________________ Son/wife/daughter/ of Sri ______________________ Age ______old, male/ female. Registration No.________________ is a case of ______________________ He/She is physically disabled/visual disabled /speech & hearing disabled and has ______% (____________percent) permanent (Physical impairment/visual impairment speech and hearing impairment) in relation to his/her__________.

Note:

1. This condition is progressive/non-progressive/likely to improve/not likely to improve*
2. Re-assessment is not recommended/is recommended after a period of _____________months/years.*

* Strike out which is not applicable.

(Recent Attested Photograph showing the disability Affixed here)

Sd/-	Sd/-	Sd/-
(Doctor)	(Doctor)	(Doctor)
(Seal)	(Seal)	(Seal)

Countersigned by the
Medical Superintendent CMO/Head
Of Hospital(with seal)

Signature/Thumb impression
of the disable person.

P.R. 809

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಅಧಿಸೂಚನೆ

ಸಂಖ್ಯೆ: ಸಿಆಸುಇ 18 ಡಿಟಿಎಂ 2009, ಬೆಂಗಳೂರು, ದಿನಾಂಕ: 15ನೇ ಸೆಪ್ಟೆಂಬರ್ 2009

ಮ್ಯಾನ್ಯುಯಲ್ ಕಮ್ ಇ–ಟೆಂಡರ್ ಅಧಿಸೂಚನೆ

ಕರ್ನಟಕ ಸರ್ಕಾರ ಸಚಿವಾಲಯದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಯಲ್ಲಿರುವ 24 ಸಂಖ್ಯೆಯ ಶಾರ್ಪ್ ಯಂತ್ರ ಮಾದರಿ ಎಆರ್ ಎಂ 205 ಮತ್ತು 1 ಸಂಖ್ಯೆಯ ಶಾರ್ಪ್ ಎಂಎಕ್ಸ್ ಎಂ 450 ಎನ್ ಮಾದರಿಯ ಕಾಪಿಯರ್ ಯಂತ್ರಗಳಿಗೆ ವಿಸ್ತಾರವಾದ (Comprehensive) ವಾರ್ಷಿಕ ಸೇವಾ ನಿರ್ವಹಣೆಯನ್ನು ವಹಿಸಲು ಸರ್ಕಾರವು ಉದ್ದೇಶಿಸಿ ಇ–ಟೆಂಡರ್ ಕಮ್ ಮ್ಯಾನ್ಯುಯಲ್ ಮೂಲಕ ಟೆಂಡರ್‌ಗಳನ್ನು ಆಹ್ವಾನಿಸಿದೆ.

ಕ್ರ. ಸಂ.	ಯಂತ್ರದ ಮಾದರಿ	ಸಂಖ್ಯೆ
1.	ಶಾರ್ಪ್ ಎಆರ್ ಎಂ 205	24
2.	ಶಾರ್ಪ್ ಎಂಎಕ್ಸ್ ಎಂ 450 ಎನ್	1

1. ಶಾರ್ಪ್ ಯಂತ್ರ ಮಾದರಿ ಎಆರ್ ಎಂ 205 ಮತ್ತು ಶಾರ್ಪ್ ಎಂಎಕ್ಸ್ ಎಂ 450 ಎನ್ ಮಾದರಿಯ ಕಾಪಿಯರ್ ಯಂತ್ರಗಳ ವಾಷಿಕ ಸೇವಾ ನಿರ್ವಹಣೆಯನ್ನು ನಿರ್ವಹಿಸಲು ಇಚ್ಛೆಯುಳ್ಳ ಮಾರಾಟಗಾರರು/ಸಂಸ್ಥೆಯವರು/ವ್ಯಕ್ತಿಗಳು ಮ್ಯಾನ್ಯುಯಲ್ ಮೂಲಕ ಟೆಂಡರ್ ಅರ್ಜಿ ಸಲ್ಲಿಸಲು ಬಯಸುವವರು "ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) ಕೊಠಡಿ ಸಂಖ್ಯೆ: 25, ನೆಲಮಹಡಿ, ವಿಧಾನಸೌಧ" ಇಲ್ಲಿ ರೂ.100.00 + ಶೇಕಡ 12.5 ರಂತೆ ಮಾರಾಟ ತೆರಿಗೆ ಒಟ್ಟು ರೂ.114/– (ರೂಪಾಯಿ ನೂರ ಹದಿನಾಲ್ಕು ಮಾತ್ರ)ನ್ನು ನಗದು ಅಥವಾ ಡಿಮ್ಯಾಂಡ್ ಡ್ರಾಫ್ಟ್ ರೂಪದಲ್ಲಿ ಸಲ್ಲಿಸಿ ನಂತರ ಟೆಂಡರ್ ನಮೂನೆಯನ್ನು "ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ), ಕೊಠಡಿ ಸಂಖ್ಯೆ: 23, ನೆಲಮಹಡಿ, ವಿಧಾನಸೌಧ", ಇಲ್ಲಿ ಪಡೆದುಕೊಳ್ಳಬಹುದು. ದಿನಾಂಕ: 09.10.2009ರಂದು 4.00ಗಂಟೆಯವರೆಗೆ ಟೆಂಡರ್ ಅರ್ಜಿಗಳನ್ನು ನೀಡಲಾಗುವುದು. ಈ ಟೆಂಡರ್ ನಮೂನೆಗೆ ನೀಡಿದ ಮೊತ್ತವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.
2. ಇ–ವಿಭಾಗದ ಮೂಲಕ ಭಾಗವಹಿಸಲು ಇಚ್ಛಿಸುವ ಮಾರಾಟಗಾರರು/ಸಂಸ್ಥೆಯವರು/ವ್ಯಕ್ತಿಗಳು ಪ್ರೊಸೆಸಿಂಗ್ ವೆಚ್ಚವನ್ನು ಇ–ವಿಧಾನದ ಮೂಲಕ ಇ–ಪ್ರೊಕ್ಯೂರ್‌ಮೆಂಟ್‌ನಲ್ಲಿ ಪಾವತಿಸಿ ಇ–ಟೆಂಡರ್‌ನಲ್ಲಿ ಭಾಗವಹಿಸಬಹುದು.

3. ಶಾರ್ಪ್ ಯಂತ್ರ ಮಾದರಿ ಎಆರ್ ಎಂ 205 ಮತ್ತು ಶಾರ್ಪ್ ಎಂಎಕ್ಸ್ ಎಂ 450 ಎನ್ ಮಾದರಿಯ ಕಾಪಿಯರ್ ಯಂತ್ರಗಳ ವಾರ್ಷಿಕ ಸೇವಾ ನಿರ್ವಹಣೆಯನ್ನು ನಿರ್ವಹಿಸುವ ಸಂಬಂಧ ಮ್ಯಾನ್ಯುಯಲ್ ಟೆಂಡರ್ ಮೂಲಕ ಭಾಗವಹಿಸಲು ಇಚ್ಛಿಸುವವರು ಮುಂಗಡ ಠೇವಣಿ (ಇ.ಎಂ.ಡಿ) ಮೊತ್ತ ರೂ.5000/– ಗಳ ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟ್‌ನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ), ವಿಧಾನಸೌಧ, ಬೆಂಗಳೂರು – 560001 ಇವರ ಹೆಸರಿನಲ್ಲಿ ಪಡೆದು ಟೆಂಡರ್‌ನಲ್ಲಿ ಲಗತ್ತಿಸತಕ್ಕದ್ದು. ಇ–ವಿಧಾನದ ಮೂಲಕ ಭಾಗವಹಿಸುವವರು ಇ.ಎಂ.ಡಿ. ಮೊತ್ತ ರೂ.5,000ಗಳನ್ನು ಇ–ವಿಧಾನದ ಮೂಲಕ ಇ–ಪ್ರೊಕ್ಯೂರ್‌ಮೆಂಟ್‌ನಲ್ಲಿ ಪಾವತಿಸತಕ್ಕದ್ದು.
4. ಯಶಸ್ವಿ ಟೆಂಡರ್‌ದಾರರ ಇ.ಎಂ.ಡಿ. ಮೊತ್ತವನ್ನು ಬಡ್ಡಿ ರಹಿತ ಭದ್ರತಾ ಠೇವಣಿಯಾಗಿ ಪರಿಗಣಿಸಲಾಗುವುದು. ವಾರ್ಷಿಕ ಸೇವಾ ನಿರ್ವಹಣೆಯ ನಂತರ ಷರತ್ತುಗಳ ಉಲ್ಲಂಘನೆ ಆಗಿರದಿದ್ದರೆ ಮಾತ್ರ ವಾಪಸ್ಸು ಮಾಡಲಾಗುವುದು. ಇದಕ್ಕೆ ಯಾವುದೇ ರೀತಿಯ ಬಡ್ಡಿಯನ್ನು ನೀಡಲಾಗುವುದಿಲ್ಲ.
5. ಗುತ್ತಿಗೆದಾರರು ಒಂದು ವರ್ಷದ ಪೂರ್ಣ ಅವಧಿಗೆ ವಿವಿಧ ಮಾದರಿಗೆ ಪ್ರತ್ಯೇಕವಾಗಿ ದರ ನಮೂದಿಸತಕ್ಕದ್ದು. ನಮೂದಿಸುವ ದರವು ತೆರಿಗೆಗಳನ್ನು ಒಳಗೊಂಡಿರಬೇಕು.
6. ಮ್ಯಾನ್ಯುಯಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವವರು ಟೆಂಡರ್‌ಗಳನ್ನು ದಿನಾಂಕ:12.10.2009 ರಂದು 5.00 ಗಂಟೆಯ ಒಳಗಾಗಿ ಸಲ್ಲಿಸಬೇಕು. ತದನಂತರ ಬಂದ ಟೆಂಡರ್ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
7. ಟೆಂಡರ್‌ಗಳನ್ನು ದಿನಾಂಕ:15.10.2009 ರಂದು 3.30 ಗಂಟೆಗೆ ಟೆಂಡರ್ ಬುಲೆಟಿನ್ ಅಧಿಕಾರಿ ಅವರ ಕೊಠಡಿ ಸಂಖ್ಯೆ: 23, ವಿಧಾನಸೌಧ, ಬೆಂಗಳೂರು – 560 001 ಇಲ್ಲಿ ಟೆಂಡರ್‌ದಾರರ ಸಮ್ಮುಖದಲ್ಲಿ ತೆರೆಯಲಾಗುವುದು. ಟೆಂಡರ್ ತೆರೆಯುವ ದಿನಾಂಕವು ಯಾವುದಾದರೂ ಸಾರ್ವತ್ರಿಕ ರಜೆ ದಿನವಾದಲ್ಲಿ ಮಾರನೆಯ ಕೆಲಸದ ದಿನ ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ತೆರೆಯಲಾಗುವುದು.
8. ಮ್ಯಾನ್ಯುಯಲ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಬಯಸುವವರು ಟೆಂಡರ್ ಅರ್ಜಿಗಳನ್ನು ಈ ಕಚೇರಿಯಿಂದಲೇ ಖರೀದಿಸಿ ನಿಗದಿತ ನಮೂನೆಯಲ್ಲಿಯೇ ಸಲ್ಲಿಸತಕ್ಕದ್ದು.
9. ಮ್ಯಾನ್ಯುಯಲ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸಬಯಸುವವರು ಮೊಹರಾದ ಟೆಂಡರ್ ಲಕೋಟೆಯ ಮೇಲೆ "ಕಾಪಿಯರ್ ಯಂತ್ರಗಳ ವಾರ್ಷಿಕ ಸೇವಾ ನಿರ್ವಹಣೆಗೆ ದರಪಟ್ಟಿ" ಎಂದು ಬರೆಯತಕ್ಕದ್ದು.
10. ಬೆಂಗಳೂರಿನಲ್ಲಿರುವ ವ್ಯಕ್ತಿ/ಸಂಸ್ಥೆ/ಮಾರಾಟಗಾರರು ಮಾತ್ರ ಟೆಂಡರ್‌ನಲ್ಲಿ ಭಾಗವಹಿಸಬಹುದು.
11. ಕಾಪಿಯರ್ ಯಂತ್ರಗಳ ವಾರ್ಷಿಕ ಸೇವಾ ನಿರ್ವಹಣೆಯನ್ನು ನಿರ್ವಹಿಸಲು ಟೆಂಡರ್‌ನಲ್ಲಿ ಭಾಗವಹಿಸಲು ಇಚ್ಛಿಸುವ ಸಂಸ್ಥೆ/ವ್ಯಕ್ತಿಗಳು ಸದರಿ ಕ್ಷೇತ್ರದಲ್ಲಿ 5 ವರ್ಷಗಳ ಅನುಭವ ಹೊಂದಿರಬೇಕು.
12. ಟೆಂಡರ್‌ದಾರರು ತಮ್ಮ ಕಚೇರಿಯ ಮತ್ತು ಅಂಚೆ ವಿಳಾಸದ ಬಗ್ಗೆ ನಿರ್ದಿಷ್ಟವಾಗಿ ದಾಖಲೆ ಒದಗಿಸಬೇಕು.
13. ಟೆಂಡರ್‌ದಾರರಿಗೆ ವಾರ್ಷಿಕ ಗುತ್ತಿಗೆ ಮೊತ್ತವನ್ನು ಸೇವಾ ದೃಢೀಕರಣವನ್ನು ಪಡೆದ ನಂತರ ವಾರ್ಷಿಕವಾಗಿ 4 ಕಂತುಗಳಲ್ಲಿ 3 ತಿಂಗಳಿಗೊಮ್ಮೆ ಪಾವತಿಸಲಾಗುವುದು.
14. ಟೆಂಡರ್‌ದಾರರು ಟೆಂಡರ್ ಅರ್ಜಿಯಲ್ಲಿ ಪೂರ್ಣ ಹೆಸರು ಬರೆದು ಸಹಿ ಹಾಕಿರಬೇಕು, ಕಂಪನಿಯು ಟೆಂಡರ್‌ನಲ್ಲಿ ಭಾಗವಹಿಸಿದ್ದಲ್ಲಿ ಕಂಪನಿಯ ಮುಖ್ಯಸ್ಥ ಅಥವಾ ಕಂಪನಿಯ ನಾಮನಿರ್ದೇಶಿತ ವ್ಯಕ್ತಿ ಪೂರ್ಣ ಹೆಸರು ಬರೆದು ಸಹಿ ಹಾಕಿರಬೇಕು.
15. ಇತ್ತೀಚೆಗೆ ಪಾವತಿಸಿರುವ ಸೇವಾ ತೆರಿಗೆ ಬಗ್ಗೆ ದಾಖಲೆಯನ್ನು ಸಲ್ಲಿಸತಕ್ಕದ್ದು.
16. ಇತ್ತೀಚೆಗೆ ಪಾವತಿಸಿದ ಆದಾಯ ತೆರಿಗೆ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.
17. ಟೆಂಡರ್‌ನ್ನು ಅನುಮೋದಿಸಿದಲ್ಲಿ ಟೆಂಡರ್‌ದಾರರು ಗೊತ್ತು ಪಡಿಸಿರುವ ದರದಲ್ಲಿಯೇ ಆದೇಶ ಹೊರಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ವಾರ್ಷಿಕ ಸೇವಾ ನಿರ್ವಹಣೆಯನ್ನು ಒದಗಿಸಲು ಬದ್ಧರಿರಬೇಕು.
18. ಗುತ್ತಿಗೆ ಅವಧಿಗೆ ಸಂಬಂಧಿಸಿದ ಯಾವುದೇ ತಕರಾರುಗಳನ್ನು ಬೆಂಗಳೂರು ನಗರದ ನ್ಯಾಯಾಲಯಗಳಲ್ಲಿ ಮಾತ್ರ ಬಗೆಹರಿಸಿಕೊಳ್ಳಬೇಕು.
19. ಮೇಲಿನ ಅಂಶಗಳ ಬಗ್ಗೆ ಪೂರ್ಣ ವಿವರ ನೀಡತಕ್ಕದ್ದು. ಅಪೂರ್ಣ ವಿವರ ಇರುವ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.
20. ಯಾವುದೇ ಕಾರಣವನ್ನು ನೀಡದೆ ಟೆಂಡರ್‌ಗಳನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಸರ್ಕಾರದ ಕಾರ್ಯದರ್ಶಿ, ಸಿಆಸುಇ ಅವರು ಕಾಯ್ದಿರಿಸಿಕೊಂಡಿದ್ದಾರೆ. ಅವರ ನಿರ್ಣಯವೇ ಅಂತಿಮವಾದದ್ದು.

ಇನ್ನೂ ಹೆಚ್ಚಿನ ವಿವರಗಳಿಗೆ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ), ಇವರನ್ನು ಕಛೇರಿ ವೇಳೆಯಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 22033440 ಅಥವಾ 22033971 ರಲ್ಲಿ ಸಂಪರ್ಕಿಸಬಹುದು.

ಕೆ.ಎಸ್. ಮಂಜುನಾಥ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

ಅನುಬಂಧ

ಟೆಂಡರ್ ಪ್ರಕಟಣೆ ಸಂಖ್ಯೆ:

ಕಾಪಿಯರ್ : ಡಿಜಿಟಲ್ ಕಾಪಿಯರ್
ಯಂತ್ರಗಳ ವಾರ್ಷಿಕ ಸೇವಾ ನಿರ್ವಹಣೆಗೆ ದರ

ಸಿಆಸುಇ 18 ಡಿಟಿಎಂ 2009

ಕ್ರ. ಸಂ.	ಯಂತ್ರದ ಮಾದರಿ	ದರಗಳು ಒಂದಕ್ಕೆ	ತೆರಿಗೆ (%)	ಒಟ್ಟು
1	ಶಾರ್ಪ್ ಎಆರ್ ಎಂ 205			
2	ಶಾರ್ಪ್ ಎಂಎಕ್ಸ್ ಎಂ 450 ಎನ್			

ಟೆಂಡರ್‌ದಾರರ ಸಹಿ
(ಪೂರ್ಣ ಹೆಸರು ವಿಳಾಸ ಮೊಹರಿನೊಂದಿಗೆ)

ಕೆ.ಎಸ್. ಮಂಜುನಾಥ್
ಪಿ.ಆರ್. 802 ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ,
ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಮೈಸೂರು ವಿಭಾಗ, ಮೈಸೂರು
ಅಲ್ಪಾವಧಿ ಟೆಂಡರು ಅಧಿಸೂಚನೆ ಸಂ. 3: 2009-10, ದಿನಾಂಕ: 25ನೇ ಮೇ 2009
4ನೇ ಕರೆ

ಕರ್ನಾಟಕ ರಾಜ್ಯಪಾಲರ ಪರವಾಗಿ ಮೈಸೂರು ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ರವರಿಂದ ಈ ಮೇಲ್ಕಂಡ ಅಲ್ಪಾವಧಿ ಅಧಿಸೂಚನೆಯಡಿ ಆಹ್ವಾನಿಸಲಾಗಿದ್ದ, ಅಲ್ಪಾವಧಿ ಐಟಂವಾರು ಟೆಂಡರ್ ಅಧಿಸೂಚನೆಗೆ 2ನೇ ಕರೆಯನ್ನು ಆಹ್ವಾನಿಸಲಾಗಿದ್ದು, ಈ ಕೆಳಕಂಡ ಕಾಮಗಾರಿಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ (http://eproc.karnataka.gov.in) ದಿ: 03.10.2009 ರಿಂದ ದಿ: 09.10.2009ರ ಸಂಜೆ 4.00 ಗಂಟೆವರೆಗೆ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.

(1) ಟಿ.ನರಸೀಪುರ ತಾಲ್ಲೂಕು ತಲಕಾಡು-ವಿಜಯಪುರ-ಹೊಳೆಸಾಲು ರಸ್ತೆಯ ಸ. 0.00 ರಿಂದ 17.15 ಕಿ.ಮಿ. ರಸ್ತೆ ಅಭಿವೃದ್ಧಿ ಕಾಮಗಾರಿ (ಬೆಳಕವಾಡಿ ವರೆಗೆ) ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರಿಗಿಟ್ಟ ಮೊತ್ತ ರೂ. 3110.00 ಲಕ್ಷ, ಇ.ಎಂ.ಡಿ. 31.10 ಲಕ್ಷ, ಮೇಲಿನ ಕಾಮಗಾರಿಗಳ ಟೆಂಡರ್ ಫಾರಂ ಬೆಲೆ ರೂ. 7500 + ಶೇ. 10 ರಷ್ಟು ತೆರಿಗೆ (ಪ್ರತ್ಯೇಕ) ಮತ್ತು ಮೇಲಿನ ಎಲ್ಲಾ ಕಾಮಗಾರಿಗಳಿಗೆ 1ನೇ ದರ್ಜೆ ಗುತ್ತಿಗೆದಾರರು ಭಾಗವಹಿಸಬಹುದು. (2) ಟಿ.ನರಸೀಪುರ ತಾಲ್ಲೂಕು ಮಾದಾಪುರ-ತಲಕಾಡು-ಸರಗೂರು ಹ್ಯಾಂಡ್ ಪೋಸ್ಟ್ ರಸ್ತೆಯ ಸ. 4.70 ರಿಂದ 16.60 ಕಿಮೀ. ವರೆಗೆ ಅಭಿವೃದ್ಧಿ ಕಾಮಗಾರಿ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರಿಗಿಟ್ಟ ಮೊತ್ತ ರೂ. 1917.00 ಲಕ್ಷ, ಇ.ಎಂ.ಡಿ. 19.17 ಲಕ್ಷ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸಲು ದಿನಾಂಕ: 09.10.2009ರಂದು ಸಂಜೆ 4.00 ಗಂಟೆಗೆ ಟೆಂಡರ್ ಸಲ್ಲಿಸಲು ಕಡೆ ದಿನವಾಗಿರುತ್ತದೆ. ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಬೇಕಾದ್ದಲ್ಲಿ ಕೆಳಗೆ ಸಹಿ ಮಾಡಿರುವವರ ಕಛೇರಿಯಲ್ಲಿ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಕಾರ್ಯಪಾಲಕ ಇಂಜಿನಿಯರ್,
ಪಿ.ಆರ್. 800 ಲೋ. ಬಂ. ಮತ್ತು ಒ. ಜ. ಸಾರಿಗೆ ಇಲಾಖೆ, ಮೈಸೂರು ವಿಭಾಗ, ಮೈಸೂರು

FORM - IV
(See Rule 12)
NOTICE

It is hereby notified that the undersigned has changed his/her name from **SMT. T. ROOPA to SMT. SHREEROOPA**

P.D. 158 **SMT. T. ROOPA**

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಟೆಂಡರ್ ಪ್ರಕಟಣೆ

(ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆಡಬ್ಲ್ಯೂ-2 ರ ಅನ್ವಯ ಗುತ್ತಿಗೆ ಆಹ್ವಾನ)

ಕಾರ್ಯನಿರ್ವಾಹಕ ಇಂಜನೀಯರರ ಕಛೇರಿ, ಸಣ್ಣ ನೀರಾವರಿ ವಿಭಾಗ, ಬೆಳಗಾವಿ.

ಕ್ರ.ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್/2009-10/3088, ದಿನಾಂಕ: 14ನೇ ಸೆಪ್ಟೆಂಬರ್ 2009

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ-2000ರ ಅಡಿಯಲ್ಲಿ ಈ ಕೆಳಗೆ ನಮೂದಿಸಿರುವ ಕಾಮಗಾರಿಗಳಿಗಾಗಿ ಅರ್ಹ ಗುತ್ತಿಗೆದಾರರಿಂದ ಗುತ್ತಿಗೆಯನ್ನು "ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ" ಇವರಿಂದ ಆಹ್ವಾನಿಸಲಾಗಿದೆ. ಗುತ್ತಿಗೆ ಪಡೆಯಲು ಕನಿಷ್ಠ ಅವಶ್ಯಕ ಅರ್ಹತೆಗಳಿಗಾಗಿ ಗುತ್ತಿಗೆದಾರರು ಸೂಚನೆಗಳಲ್ಲಿ ಕಲಂ-3ನ್ನು ಸೂಕ್ಷ್ಮವಾಗಿ ಗಮನಿಸುವಂತೆ ಸೂಚಿಸಲಾಗಿದೆ.
2. ದಿನಾಂಕ:12.10.09 ರಿಂದ 15.10.09ರ ಒಳಗಿನ ಅವಧಿಯಲ್ಲಿ (ಕಛೇರಿ ಕಾರ್ಯಾವಧಿಯಲ್ಲಿ) ಈ ಕೆಳಗೆ ಕಾಣಿಸಿದ ಶುಲ್ಕವನ್ನು (ಹಿಂದಿರುಗಿಸಲಾಗದ) ಯಾವುದಾದರೂ ರಾಷ್ಟ್ರೀಕೃತ ಅಥವಾ ಶೆಡ್ಯೂಲ್ಡ್ ಬ್ಯಾಂಕಿನಿಂದ ಪಡೆದ, ಬೆಳಗಾವಿಯಲ್ಲಿ ನಗದೀಕರಣ ಮಾಡಬಹುದಾದ ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಹೆಸರಿನಲ್ಲಿ ಪಡೆಯಲಾದ ಡಿ.ಡಿ., ಪೇ ಆರ್ಡರ್ ಅಥವಾ ನಗದು ರೂಪದಲ್ಲಿ ತುಂಬಿ ಖಾಲಿ ಗುತ್ತಿಗೆ ಪತ್ರಗಳನ್ನು ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಕಛೇರಿಯಿಂದ ಪಡೆದುಕೊಳ್ಳಬೇಕು. ಗುತ್ತಿಗೆಗೆ ಸಂಬಂಧಿಸಿದ ಎಲ್ಲ ವಿವರಗಳನ್ನು ಆಸಕ್ತ ಗುತ್ತಿಗೆದಾರರು ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಕಛೇರಿಯಲ್ಲಿ ಪಡೆದುಕೊಳ್ಳಬೇಕು. ಗುತ್ತಿಗೆ ಪತ್ರಗಳನ್ನು ನೊಂದಾಯಿತ ಅಂಚೆ/ವೇಗದ ಅಂಚೆ ಮೂಲಕ ಪಡೆಯಲು ಇಚ್ಛಿಸಿದಲ್ಲಿ ರೂ.200.00ಗಳ ಹೆಚ್ಚುವರಿ ಶುಲ್ಕವನ್ನು ಭರಿಸಬೇಕಾಗುತ್ತದೆ. ಗುತ್ತಿಗೆ ಪತ್ರಗಳನ್ನು ಅಂಚೆ ಮೂಲಕ ಪಡೆಯುವಾಗ ವಿಳಂಬವಾದಲ್ಲಿ ಅಥವಾ ಗುತ್ತಿಗೆ ಪತ್ರಗಳು ಸ್ವೀಕೃತವಾಗದಿದ್ದಲ್ಲಿ ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರು ಹೊಣೆಗಾರರಾಗುವುದಿಲ್ಲ.
3. ಕಾಮಗಾರಿಗಾಗಿ ನಿರ್ದಿಷ್ಟಪಡಿಸಿದ ಈ ಕೆಳಗೆ ನಮೂದಿಸಿದ ಮುಂಗಡ ಠೇವಣಿಯನ್ನು ಗುತ್ತಿಗೆ ಪತ್ರಗಳೊಂದಿಗೆ ಸಲ್ಲಿಸತಕ್ಕದ್ದು. ಗುತ್ತಿಗೆ ಪತ್ರಗಳಲ್ಲಿ ನಿರ್ದಿಷ್ಟಪಡಿಸಿರುವ ಯಾವುದಾದರೊಂದು ರೂಪದಲ್ಲಿ ಗುತ್ತಿಗೆ ಅರ್ಹತಾ ಅವಧಿಗಿಂತ 45 ದಿನಗಳ ಹೆಚ್ಚುವರಿ ಅವಧಿಯನ್ನು (ಒಟ್ಟಾರೆ 135 ದಿನಗಳ ಅವಧಿ) ಅರ್ಹತಾ ಅವಧಿಯಾಗಿ ಹೊಂದಿರುವ ಹಾಗೂ ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಹೆಸರಿನಲ್ಲಿ ಪಡೆದ ಮತ್ತು ಬೆಳಗಾವಿಯಲ್ಲಿ ನಗದೀಕರಣವಾಗುವ ಮುಂಗಡ ಠೇವಣಿಯನ್ನು ಸಲ್ಲಿಸಬೇಕು.
4. ಭರ್ತಿ ಮಾಡಿದ ಗುತ್ತಿಗೆ ಪತ್ರಗಳನ್ನು ದಿನಾಂಕ: 22.10.09ರ ಸಂಜೆ 16.00 ಘಂಟೆಯೊಳಗಾಗಿ (ಕಛೇರಿ ಕಾರ್ಯಾವಧಿಯಲ್ಲಿ) ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಕಾರ್ಯಾಲಯದಲ್ಲಿ ಸ್ವೀಕರಿಸಲಾಗುವುದು. ಮತ್ತು ಸಾಧ್ಯವಾದಲ್ಲಿ ಅಂದೇ 16.30 ಘಂಟೆಗೆ ಅಥವಾ ಬೇರೆ ಸೂಕ್ತ ದಿನಾಂಕದಂದು ಆಸಕ್ತರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ಗುತ್ತಿಗೆ ಪತ್ರಗಳನ್ನು ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ ಇವರ ಕಾರ್ಯಾಲಯದಲ್ಲಿ ತೆರೆಯಲಾಗುವುದು. ಮೇಲೆ ನಮೂದಿಸಿದ ದಿನಾಂಕಗಳು ಸಾರ್ವತ್ರಿಕ ರಜಾ ಅಥವಾ ಘೋಷಿತ ರಜಾ ದಿನವಾದಲ್ಲಿ ಮುಂದಿನ ಕೆಲಸದ ದಿನವನ್ನು ಪರಿಗಣಿಸಲಾಗುವುದು.
5. ಇನ್ನುಳಿದ ವಿವರಗಳನ್ನು ಹಾಗೂ ನಿಯಮಗಳನ್ನು ಮಾದರಿ ಗುತ್ತಿಗೆ ದಾಖಲೆ (ಕೆಡಬ್ಲ್ಯೂ-2)ದಲ್ಲಿ ವಿವರಿಸಲಾಗಿದ್ದು ಗುತ್ತಿಗೆದಾರರು ನಿಯಮಾವಳಿಗಳನ್ನು ಸಂಪೂರ್ಣ ಅಭ್ಯಸಿಸಿ ಅರ್ಥೈಸಿಕೊಳ್ಳಲು ಸೂಚಿಸಲಾಗಿದೆ.

ಕ್ರಮ ಸಂ.	ಕೆಲಸದ ಹೆಸರು	ಟೆಂಡರಿಗಿಟ್ಟ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಡುಗಂಟು ಮೊತ್ತ (ರೂ.ಗಳಲ್ಲಿ)	ಟೆಂಡರ್ ಫಾರಂ ಬೆಲೆ ರೂ.+ತೆರಿಗೆ ಪ್ರತ್ಯೇಕ ಹಿಂದಿರುಗಿ ಸಲಾಗದು	ಕೆಲಸವನ್ನು ಮುಗಿಸುವ ಕಾಲಮಿತಿ ಮಳೆಗಾಲ ಸೇರಿ
1	ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕಿನ ಭೈರಾಪುರ ಕೆರೆ ಅಭಿವೃದ್ಧಿ	45.73	91500/-	4600 + Tax	6 ತಿಂಗಳು (ಮಳೆಗಾಲ ಸೇರಿ)

ವ್ಹಿ.ಬಿ. ಕುಲಕರ್ಣಿ

ಪಿ.ಆರ್. 796 ಕಾರ್ಯನಿರ್ವಾಹಕ ಇಂಜನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ

ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.

ಅಧಿಸೂಚನೆ

ಸಂಖ್ಯೆ:ಸಿಬ್ಬಂದಿ[4] ಗ್ರಾಲೆ ಸಿಆರ್:37/2008-09, ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 299 ಬಿಎಸ್‌ಸಿ 2006, ದಿನಾಂಕ: 08-09-2009.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಂದಾಯ ಇಲಾಖಾ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನೇಮಕಾತಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 299 ಬಿಎಸ್‌ಸಿ 2006, ದಿನಾಂಕ 08-09-2009ರನ್ವಯ ನೇಮಕಾತಿ ಮಾಡಲಾಗುವುದು ಈ ಬಗ್ಗೆ ಹೆಚ್ಚಿನ ಮಾಹಿತಿಯನ್ನು http://revdept.kar.nic.in & prs://rev at Karnataka gov.in ವೆಬ್‌ಸೈಟ್‌ನ ಮೂಲಕ ಪಡೆಯಬಹುದು.

ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳನ್ನು ಭರ್ತಿ ಮಾಡಿ ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು ಇವರಿಗೆ ದಿನಾಂಕ: 30.10.2009ರಂದು ಸಂಜೆ 5.00 ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ RPAD **ಅಂಚೆ ಮೂಲಕ ಮಾತ್ರ ಕಳುಹಿಸುವುದು.** ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಯವರಿಗೆ ಮಾತ್ರ ಅಧಿಕಾರವಿರುತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಹುದ್ದೆಗಳ ವಿವರ.

ಕ್ರಮ ಸಂಖ್ಯೆ	ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ	ವೇತನ ಶ್ರೇಣಿ (ರೂ.ಗಳಲ್ಲಿ)
1	ಗ್ರಾಮಲೆಕ್ಕಿಗ	25	ಪಿ.ಯು.ಸಿ ಅಥವಾ 12ನೇ ತರಗತಿ (CBSE/ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.	5800-10500

ವರ್ಗೀಕರಣ :

ಕ್ರ.ಸಂ.	ಹುದ್ದೆಯ ಹೆಸರು	ಒಟ್ಟು ಹುದ್ದೆ		ಸಾಮಾನ್ಯ	ಮಹಿಳೆ	ಗ್ರಾಮೀಣ	ಅಂ.ವಿ.ಅ	ಮಾಸೈ	ಒಟ್ಟು
1	ಗ್ರಾಮಲೆಕ್ಕಿಗ	25	ಪ.ಜಾ	02	01	01	–	–	04
2			ಪ.ಪಂ	01	–	–	–	–	01
3			ಪ್ರ-1	01	–	–	–	–	01
4			ಪ್ರ-2[ಎ]	02	01	01	–	–	04
5			ಪ್ರ-2[ಬಿ]	01	–	–	–	–	01
6			ಪ್ರ-3[ಎ]	01	–	–	–	–	01
7			ಪ್ರ-3[ಬಿ]	01	–	–	–	–	01
8			ಸಾಮಾನ್ಯ	04	04	03	–	01	12
			ಒಟ್ಟು	**13**	**06**	**05**	**–**	**01**	**25**

1. ಕ.ಮಾ.ಅ : ಕನ್ನಡ ಮಾಧ್ಯಮ ಅಭ್ಯರ್ಥಿ
2. ಅಂ.ವಿ.ಅ : ಅಂಗವಿಕಲ ಅಭ್ಯರ್ಥಿ

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :

1. ಅರ್ಜಿಗಳನ್ನು ಅಂಚೆ ಮೂಲಕ ಮಾತ್ರ ಕಳುಹಿಸತಕ್ಕದ್ದು ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. ವಯೋಮಿತಿ : ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಾಣಿಸಿದ ವಯೋಮಿತಿ ಹೊಂದಿರತಕ್ಕದ್ದು.

ಪ.ಜಾ. / ಪ.ಪಂ. ಪ್ರ ವರ್ಗ-1	:	ಕನಿಷ್ಟ 18 ವರ್ಷ ಗರಿಷ್ಠ 40 ವರ್ಷ
ಹಿಂದುಳಿದ ವರ್ಗ	:	ಕನಿಷ್ಟ 18 ವರ್ಷ ಗರಿಷ್ಠ 38 ವರ್ಷ
ಸಾಮಾನ್ಯ ವರ್ಗ	:	ಕನಿಷ್ಟ 18 ವರ್ಷ ಗರಿಷ್ಠ 35 ವರ್ಷ

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು
2. ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು
3. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು
4. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
5. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್‌ಸೈಟ್ http:// Bangalore Rural.nic.in / http://www.kar.nic.in ಯಿಂದ Download ಮಾಡಿಕೊಳ್ಳುವುದು. ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
6. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
7. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
8. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
9. ಅಭ್ಯರ್ಥಿಗಳು ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
11. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು [ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದು ನಂತರ ನೇಮಕಾತಿ ಆದೇಶ ನೀಡಲಾಗುವುದು.
12. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರುರವರು ಕಾಯ್ದಿರಿಸಿಕೊಂಡಿರುತ್ತಾರೆ.
13. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 / ಮಾಜಿ ಸೈನಿಕ ರೂ.100/– ಹಾಗೂ ಇತರರಿಗೆ ರೂ. 300/–ಗಳಿಗೆ ಬ್ಯಾಂಕ್ ಡಿ.ಡಿ.ಯನ್ನು ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಡಿ.ಡಿ.ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಖರೀದಿಸತಕ್ಕದ್ದು ಹಾಗೂ ಡಿ.ಡಿಯ ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ.ಡಿ.ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
14. ಅಭ್ಯರ್ಥಿ ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
15. ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.
16. ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯು ಜವಾಬ್ದಾರರಾಗುವುದಿಲ್ಲ.
17. ಮೀಸಲಾತಿ ಕೋರುವ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ–1 [ನಮೂನೆ–ಡಿ] [ನಮೂನೆ–ಇ]	:	ಸರ್ಕಾರದ ಅಧಿಸೂಚನೆ ಸಂಖ್ಯೆ : ಎಸ್‌ಡಬ್ಲ್ಯೂಡಿ 132 ಎಸ್‌ಎಡಿ 1997, ದಿನಾಂಕ : 08–02–2000 ಕ್ರಮವಾಗಿ ನಮೂನೆ 1 & 2
ಪ್ರವರ್ಗ 2ಎ / 2ಬಿ / 3ಎ / 3ಬಿ [ನಮೂನೆ–ಎಫ್]	:	ಸರ್ಕಾರದ ಅಧಿಸೂಚನೆ ಸಂಖ್ಯೆ : ಎಸ್‌ಡಬ್ಲ್ಯೂಡಿ 126 ಬಿಸಿಎ, ದಿನಾಂಕ : 13–12–2000 [ಕರ್ನಾಟಕ ಅನುಸೂಚಿತ ಜಾತಿಗಳು / ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ [ನೇಮಕಾತಿ ಮುಂತಾದ ಮೀಸಲಾತಿ ತಿದ್ದುಪಡಿ] ನಿಯಮಗಳು 2000ರನ್ವಯ ನಮೂನೆ–3]

ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.

18. **ಅಂಗವಿಕಲ ಕುಟುಂಬದ ಅಭ್ಯರ್ಥಿಗಳು** : ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 07 ಸೇಸ್ಥೆಅ 94, ದಿನಾಂಕ: 13–09–1995ರಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದು ಕೊಂಡಿರಬೇಕು.
19. **ಗ್ರಾಮೀಣ ಅಭ್ಯರ್ಥಿಗಳು** : ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ಮೀಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ

ಗ್ರಾಮೀಣ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಪ್ರಮಾಣ ಪತ್ರವನ್ನು ಪಡೆದು ಅರ್ಜಿಗೆ ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು. ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್‌ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

20. **ಕನ್ನಡ ಮಾಧ್ಯಮ ಅಭ್ಯರ್ಥಿಗಳು :** ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 71 ಎಸ್‌ಆರ್‌ಆರ್ 2001. ದಿನಾಂಕ 24-10-2002ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977ರ ನಿಯಮ [9] [1] [ಸಿ] ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಹಾಕಿರುವ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

21. **ಅರ್ಹತಾ ಷರತ್ತುಗಳು :**
    1. ಭಾರತೀಯ ನಾಗರೀಕನಾಗಿರತಕ್ಕದ್ದು.
    2. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
    3. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.
    4. ನಿಗದಿತ ಶೈಕ್ಷಣಿಕ ಅರ್ಹತೆಯಲ್ಲಿ ಅರ್ಜಿ ಸಲ್ಲಿಸುವ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

22. ಕೆಳಕಾಣಿಸಿದ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂದು ಖಚಿತಪಡಿಸಿಕೊಳ್ಳುವುದು.
    - ♦ ಹುದ್ದೆಗಳಿಗೆ ನಿಗದಿ ಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ.
    - ♦ ನಿಗದಿ ಪಡಿಸಿದ ಶುಲ್ಕದ ಬಾಬ್ತು ಡಿಮ್ಯಾಂಡ್ ಡ್ರಾಫ್ಟ್
    - ♦ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ದೃಢೀಕೃತ ಪತ್ರ.
    - ♦ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ-1. ಪ್ರವರ್ಗ-2ಎ. ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿಗಳ ಪ್ರಮಾಣ ಪತ್ರಗಳು [ಮೀಸಲಾತಿ ಕೋರಿದ್ದಲ್ಲಿ]
    - ♦ ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಾಲ್ಲೂಕಿನ ತಹಶೀಲ್ದಾರ್‌ರವರಿಂದ ಪಡೆದಿರತಕ್ಕದ್ದು.
    - ♦ ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.
    - ♦ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ [ಮೀಸಲಾತಿ ಕೋರಿದ್ದಲ್ಲಿ]
    - ♦ ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ [ಮೀಸಲಾತಿ ಕೋರಿದ್ದಲ್ಲಿ]

23. **ಇತರೆ ಸೂಚನೆಗಳು:**
    1. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
    2. ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇಯ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

24. ಅಧಿಸೂಚನೆ ಹೊರಡಿಸಿದ ಹುದ್ದೆಗಳ ಸಂಖ್ಯೆ ಹೆಚ್ಚು ಅಥವಾ ಕಡಿಮೆ ವ್ಯತ್ಯಾಸಕ್ಕೆ ಒಳಪಟ್ಟಿರುತ್ತದೆ.
25. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 52 ಎಸಿಆರ್ 99, ದಿನಾಂಕ 29-11-2002ರನ್ವಯ ಅಂಗವಿಕಲರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು Leprosy cured [ಕುಷ್ಟರೋಗ ದಿಂದ ಗುಣಮುಖರಾದವರು] ಹಾಗೂ Hearing Impaired Mentally Ill ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು] ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಜಿಲ್ಲಾಧಿಕಾರಿ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಗ್ರಾಮಲೆಕ್ಕಿಗರ ನೇರ ನೇಮಕಾತಿಯ ಅರ್ಜಿ ನಮೂನೆ

ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ,
ಹಾಗೂ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,
ಪೋಡಿಯಂ ಬ್ಲಾಕ್, ವಿ.ವಿ.ಟವರ್ಸ್, ಡಾ. ಅಂಬೇಡ್ಕರ್ ವೀಧಿ,
ಬೆಂಗಳೂರು – 560001

ಫೋಟೋ

ಪ್ರಕಟಣೆ ಸಂಖ್ಯೆ : ಸಿಬ್ಬಂದಿ(4)ಗ್ರಾಲೆ.ಸಿಆರ್.37/08-09
ಜಾಹೀರಾತು ಹೊರಡಿಸಿದ ದಿನಾಂಕ: 26.09.2009 .
ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಹೆಸರು : ಗ್ರಾಮಲೆಕ್ಕಿಗರು

ಡಿ.ಡಿ.ಪಡೆದ ಬ್ಯಾಂಕ್‌ನ ಹೆಸರು	ಸಂದಾಯ ಮಾಡಿದ ಮೊತ್ತ	ಡಿ.ಡಿ.ಸಂಖ್ಯೆ ಮತ್ತು ದಿನಾಂಕ

1	ಅರ್ಜಿದಾರನ/ಳ ಪೂರ್ಣ ಹೆಸರು	:	
2	ತಂದೆ/ಗಂಡ/ಪೋಷಕರ ಹೆಸರು	:	
3	ಖಾಯಂ ವಿಳಾಸ	:	
4	ಅಂಚೆ ವಿಳಾಸ	:	
5	ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ	:	
6	ಲಿಂಗ : ಪುರುಷ / ಮಹಿಳೆ ಅನ್ವಯಿಸುವ ವೃತ್ತವನ್ನು ತುಂಬಿ	:	ಪುರುಷ : O ಮಹಿಳೆ : O
7	ಜನ್ಮ ದಿನಾಂಕ : (ಎಸ್.ಎಸ್.ಎಲ್.ಸಿ. ಅಂಕ ಪಟ್ಟಿಯಲ್ಲಿರುವಂತೆ)	:	

8	1. ಮೀಸಲಾತಿ ಕೋರಿದ್ದಲ್ಲಿ ಅನ್ವಯಿಸುವ ವೃತ್ತವನ್ನು ತುಂಬಿ (ದೃಢೀಕರಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು)								
	ಸಾ.ಅ.	ಪ.ಜಾ.	ಪ.ಪಂ.	ಪ್ರ-1	2ಎ	2ಬಿ	3ಎ	3ಬಿ	ಉಪಜಾತಿ ನಮೂದಿಸಬೇಕು
	O	O	O	O	O	O	O	O	
	2. ಇತರೆ ಮೀಸಲಾತಿ				ಮಹಿಳಾ ಅಭ್ಯರ್ಥಿ		ಗ್ರಾಮೀಣ	ಮಾ.ಸೈ.	ಅಂ.ವಿ.

9	ವಿದ್ಯಾರ್ಹತೆ	:	ಪಿ.ಯು.ಸಿ./12ನೇ ತರಗತಿ (ಸಿ.ಬಿ.ಎಸ್.ಸಿ. ಅಥವಾ ಐ.ಸಿ.ಎಸ್.ಸಿ.) ಪರೀಕ್ಷೆ				
			ಒಟ್ಟು ಅಂಕಗಳು	ಗಳಿಸಿದ ಅಂಕಗಳು	ಶೇಕಡ	ಪಾಸಾದ ವರ್ಷ	ಬೋರ್ಡ್ ಅಥವಾ ಸಂಸ್ಥೆಯ ಹೆಸರು

10.	ನೀವು ಸರ್ಕಾರಿ ಸೇವೆಯಲ್ಲಿ ಇರುವಿರಾ (ಅನ್ವಯಿಸುವ ವೃತ್ತವನ್ನು ತುಂಬಿ): ಹೌದು: O ಇಲ್ಲ: O
11.	**ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ** ಶ್ರೀ / ಶ್ರೀಮತಿ--ರವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ----------------------(ಪದನಾಮ)----------------------------- ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ------------------------------------ ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಗಾಗಿ ಗ್ರಾಮಲೆಕ್ಕಿಗ ಹುದ್ದೆಗೆ ಅರ್ಜಿ ಸಲ್ಲಿಸುವ ಸದರಿ ನೌಕರನಿಗೆ ಅನುಮತಿ ನೀಡಲಾಗಿದೆ. ಸ್ಥಳ: ನೇಮಕಾತಿ ಪ್ರಾಧಿಕಾರದ ಸಹಿ ದಿನಾಂಕ: ಇಲಾಖೆಯ ಹೆಸರು ಮತ್ತು ಮೊಹರಿನೊಂದಿಗೆ

ಈ ಮೇಲ್ಕಂಡ ಎಲ್ಲಾ ವಿವರಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಸತ್ಯವಲ್ಲವೆಂದು ತಿಳಿದು ಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸಬಹುದು. ನನ್ನ ವಿರುದ್ಧ ಸಿವಿಲ್ / ಕ್ರಿಮಿನಲ್ ಮೊಕದ್ದಮೆ ಹೂಡಬಹುದು.

ಸ್ಥಳ:

ದಿನಾಂಕ:

ಅರ್ಜಿದಾರರ / ಳ ಸಹಿ

ಪಿ.ಆರ್. 808

ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಆರ್.ಆರ್.ಟಿ. ಸಿಆರ್/142/07-08 ದಿನಾಂಕ: 28ನೇ ಸೆಪ್ಟೆಂಬರ್ 2009

ವಿಷಯ: ಚಿಕ್ಕಬಳ್ಳಾಪುರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ: ಕಂ ಇ 299 ಬಿಎಸ್‌ಸಿ 2006 ದಿನಾಂಕ.03-02-2009 ಮತ್ತು 08/09/2009

2) ಸರ್ಕಾರದ ಸುತ್ತೋಲೆ ಸಂ: ಕಂ ಇ 34 ಪ್ರ.ಕ. 2009 ದಿನಾಂಕ.26-09-2009 .

3) ಈ ಕಛೇರಿಯ ಅಧಿಸೂಚನೆ ಸಮ ಸಂಖ್ಯೆ ದಿನಾಂಕ: 26.09.2009.

ಚಿಕ್ಕಬಳ್ಳಾಪುರ ಜಿಲ್ಲಾ ಘಟಕ, ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಭೂಮಿ ಕೇಂದ್ರಕ್ಕೆ ಹಾಗೂ ಕಂದಾಯ ವೃತ್ತಗಳಿಗೆ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ (1)ರ ಸರ್ಕಾರದ ನಿರ್ದೇಶನದಂತೆ ಅರ್ಹ ಅಭ್ಯರ್ಥಿಗಳಿಂದ ಉಲ್ಲೇಖ (3)ರಲ್ಲಿ ಅರ್ಜಿಗಳನ್ನು ಈ ಕಛೇರಿಯಿಂದ ಆಹ್ವಾನಿಸಲಾಗಿತ್ತು ಉಲ್ಲೇಖ 2ರ ಸರ್ಕಾರದ ನಿರ್ದೇಶನದಂತೆ ಈ ಕೆಳಕಂಡ ಸೂಚನೆಗಳನ್ನು ಅಭ್ಯರ್ಥಿಗಳಿಗೆ ತಿಳಿಯಪಡಿಸುವ ಸಲುವಾಗಿ ಈ ಅಧಿಸೂಚನೆಯನ್ನು ಹೊರಡಿಸಲಾಗಿದೆ.

1) ಅಭ್ಯರ್ಥಿಗಳು online ಮೂಲಕ ಸಹ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.
2) online ಮೂಲಕ ಅರ್ಜಿ ಸಲ್ಲಿಸುವವರು ಕೋರ್ ಬ್ಯಾಂಕ್ ಸೌಲಭ್ಯವಿರುವ ಸ್ಟೇಟ್ ಬ್ಯಾಂಕ್ ಆಫ್ ಮೈಸೂರ್ ಮತ್ತು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಚಿಕ್ಕಬಳ್ಳಾಪುರ ನಲ್ಲಿ ಪಾವತಿ ಮಾಡಿ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಸ್ವೀಕೃತಿಯನ್ನು ಪಡೆದುಕೊಂಡು. ನಿಗದಿಪಡಿಸಿದ ದಿನಾಂಕದಂದು ಉಳಿದ ದಾಖಲೆಗಳೊಂದಿಗೆ ಈ ಕಛೇರಿಯಲ್ಲಿ ಹಾಜರುಪಡಿಸುವುದು
3) online ಮೂಲಕ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳ ದೃಢೀಕೃತ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ.
4) Online ಮೂಲಕ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳು http://recruitment.kar.nic.in/va ವೆಬ್ ಸೈಟ್‌ನಲ್ಲಿ ವಿವರಗಳನ್ನು ಪಡೆಯಬಹುದಾಗಿರುತ್ತದೆ.
5) ಅಭ್ಯರ್ಥಿಗಳು ತಮಗೆ ಬೇಕಾದ ಜಿಲ್ಲೆಯನ್ನು website ಮೂಲಕ ಆಯ್ಕೆ ಮಾಡಿಕೊಳ್ಳುವ ಅವಕಾಶವಿರುತ್ತದೆ. ಈ ಸೌಲಭ್ಯವು ದಿನಾಂಕ: 01/10/2009 ರಿಂದ ಲಭ್ಯವಾಗುತ್ತದೆ.
6) ಈ ಹಿಂದಿನ ಅಧಿಸೂಚನೆಯಲ್ಲಿ ನಿಗದಿಪಡಿಸಿದ್ದ ಶುಲ್ಕವನ್ನು ಈ ಕೆಳಕಂಡಂತೆ ಪಾವತಿಸಲು ಮಾರ್ಪಡಿಸಿರುತ್ತೆ ಅದರಂತೆ ಅಭ್ಯರ್ಥಿಗಳು ಶುಲ್ಕವನ್ನು ಪಾವತಿಸತಕ್ಕದ್ದು.

ಸಾಮಾನ್ಯ ಅಭ್ಯರ್ಥಿಗಳು ರೂ: 200/-, ಪ.ಜಾ/ಪ.ವರ್ಗ ಹಾಗೂ ಮಹಿಳಾ ಅಭ್ಯರ್ಥಿಗಳು ರೂ 100/-

ಅನ್ವರ್ ಪಾಷ, ಭಾ.ಆ.ಸೇ.,
ಅಧ್ಯಕ್ಷರು, ಗ್ರಾಮಲೆಕ್ಕಾಧಿಕಾರಿಗಳ ನೇಮಕಾತಿ
ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಪಿ.ಆರ್. 810

ನೋಂದಣಿ ಮತ್ತು ಮುದ್ರಾಂಕ ಇಲಾಖೆ
ಜಿಲ್ಲಾ ನೋಂದಣಾಧಿಕಾರಿಗಳು, ಗದಗ ಇವರ ನಡವಳಿಗಳು
ನೇಮಕಾತಿ ಆದೇಶ

ವಿಷಯ: ನೋಂದಣಿ ಮತ್ತು ಮುದ್ರಾಂಕ ಇಲಾಖೆ ಗದಗ ಜಿಲ್ಲೆಯಲ್ಲಿ ದ್ವಿತೀಯ ದರ್ಜೆ ಸಹಾಯಕರ ವೃಂದದಲ್ಲಿ ಗುರುತಿಸಲ್ಪಟ್ಟ ಬ್ಯಾಕ್‌ಲಾಗ್ ಹುದ್ದೆಗಳಲ್ಲಿ ದ್ವಿತೀಯ ದರ್ಜೆ ಸಹಾಯಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರಿಗೆ ಈ ಕಛೇರಿಯಿಂದ ಬರೆದಿರುವ ಪತ್ರ ಸಂಖ್ಯೆ:ಸಿಬ್ಬಂದಿ:42/02–03 ದಿನಾಂಕ:20.09.2002.

2. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್:13:ಎಸ್‌ಬಿಸಿ:2001 ದಿನಾಂಕ:21.11.2001 ರನ್ವಯ ಪ್ರಕಟಿಸಿರುವ ಕೆ.ಸಿ.ಎಸ್. (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಿಟ್ಟು ತುಂಬದೇ ಇರುವ ಹುದ್ದೆಗಳ) ವಿಶೇಷ ನೇಮಕಾತಿ ನಿಯಮಗಳು 2001.
3. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರ ಅಧಿಸೂಚನೆ ಸಂಖ್ಯೆ:EST:1–273/01–02, ದಿನಾಂಕ:01.08.2002 (ದಿನಾಂಕ:8.8.2002ರ ರಾಜ್ಯಪತ್ರದಲ್ಲಿ ಪ್ರಕಟವಾಗಿದೆ.)
4. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರ ಬ್ಯಾಕ್‌ಲಾಗ್ ಅಂತಿಮ ಆಯ್ಕೆ ಪಟ್ಟಿ ಸಂಖ್ಯೆ: EST:1-273/01-02 ದಿನಾಂಕ: 23.11.2004.
5. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರ ಅಲಾಟ್‌ಮೆಂಟ್ ಆದೇಶ ಸಂಖ್ಯೆ: EST:1-273/01-02 ದಿನಾಂಕ: 24.03.2008.
6. ಈ ಕಛೇರಿಯ ನೇಮಕಾತಿ ಆದೇಶ ಸಂಖ್ಯೆ:ಸಿಬ್ಬಂದಿ–39/07–08 ದಿನಾಂಕ: 31.03.08.
7. ಈ ಕಛೇರಿಯ ರದ್ದತಿ ಆದೇಶ ಸಂಖ್ಯೆ: ಜಿನೋಗ ಸಿಬ್ಬಂದಿ–39/07–08 ದಿನಾಂಕ:18.11.08.
8. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರ ರೀ–ಅಲಾಟ್‌ಮೆಂಟ್ ಆದೇಶ ಸಂಖ್ಯೆ: EST:1-273/01-02 ದಿನಾಂಕ: 28.08.2009.
9. ಸರ್ಕಾರದ ಆದೇಶ ಸಂಖ್ಯೆ: FD (SPL) 04 PET 2005 ದಿನಾಂಕ: 31.3.2006.

ಪ್ರಸ್ತಾವನೆ:

ಈ ಇಲಾಖೆಯ ಗದಗ ಜಿಲ್ಲೆಯಲ್ಲಿ ದ್ವಿತೀಯ ದರ್ಜೆ ಸಹಾಯಕರ ವೃಂದದಲ್ಲಿ ಕೆಳಕಂಡಂತೆ ಬ್ಯಾಕ್‌ಲಾಗ್ ಹುದ್ದೆಗಳು ಇರುತ್ತವೆಂದು ಈ ಕಛೇರಿಯಿಂದ ಉಲ್ಲೇಖ (1)ರನ್ವಯ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರಿಗೆ ವರದಿ ಮಾಡಲಾಗಿತ್ತು.

ಕ್ರ. ಸಂ.	ಜಿಲ್ಲೆ	ನಿಮ್ಮ ಜಿಲ್ಲೆಯಲ್ಲಿ ಗುರುತಿಸಲ್ಪಟ್ಟ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ		
		ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಒಟ್ಟು
1	ಗದಗ ಜಿಲ್ಲೆ	ಇಲ್ಲ	ಒಂದು	ಒಂದು

ಈ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಉಲ್ಲೇಖ (2)ರ ಬ್ಯಾಕ್‌ಲಾಗ್ ನಿಯಮಗಳ ಪ್ರಕಾರ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಉಲ್ಲೇಖ (3)ರ ಅಧಿಸೂಚನೆ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಈ ಬಗ್ಗೆ ಸ್ವೀಕೃತವಾದ ಎಲ್ಲಾ ಅರ್ಜಿಗಳು ಪರಿಶೀಲನೆಗೊಂಡ ನಂತರ ಉಲ್ಲೇಖ (2)ರ ಬ್ಯಾಕ್‌ಲಾಗ್ ನಿಯಮಗಳ ಪ್ರಕಾರ 29 ರಿಂದ 40 ವರ್ಷ ವಯೋಮಿತಿಯಲ್ಲಿರುವ ಅರ್ಹ ಅಭ್ಯರ್ಥಿಗಳನ್ನು Merit ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಿ ಅರ್ಹ ಅಭ್ಯರ್ಥಿಗಳ ಬ್ಯಾಕ್‌ಲಾಗ್ ಅಂತಿಮ ಆಯ್ಕೆ ಪಟ್ಟಿಯನ್ನು ನಿಯಮಾನುಸಾರ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರು ಉಲ್ಲೇಖ (4)ರನ್ವಯ ದಿನಾಂಕ: 23.11.2004 ರಂದು ಪ್ರಕಟಿಸಿರುತ್ತಾರೆ.

ತದನಂತರ ಈ ಕಛೇರಿಯಿಂದ ಉಲ್ಲೇಖ (1)ರ ಪತ್ರದಲ್ಲಿ ಮೇಲ್ಕಂಡಂತೆ ವರದಿ ಮಾಡಿದ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅನುಗುಣವಾಗಿ ಕೆಳಕಂಡ ಬ್ಯಾಕ್‌ಲಾಗ್ ಅಭ್ಯರ್ಥಿಯನ್ನು ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರವರು ಉಲ್ಲೇಖ (5)ರ ಅವರ ಅಲಾಟ್‌ಮೆಂಟ್ ಆದೇಶದಲ್ಲಿ ಈ ಜಿಲ್ಲೆಗೆ ನೇಮಕಾತಿಗಾಗಿ ಅಲಾಟ್ ಮಾಡಿದ್ದರ ಮೇರೆ ಕೆಳಕಂಡ ಬ್ಯಾಕ್‌ಲಾಗ್ ಅಭ್ಯರ್ಥಿಯನ್ನು ಉಪ ನೋಂದಣಿ ಕಛೇರಿ, ಶಿರಹಟ್ಟಿ ಇಲ್ಲಿಗೆ ಉಲ್ಲೇಖ (6)ರನ್ವಯ ದ್ವಿತೀಯ ದರ್ಜೆ ಸಹಾಯಕರೆಂದು ನೇಮಕಾತಿ ಮಾಡಿದ್ದರೂ ಸಹ ಸದರಿ ಅಭ್ಯರ್ಥಿಯು ನೇಮಕ ಮಾಡಿದ ಕಛೇರಿಯಲ್ಲಿ ಕೆಲಸಕ್ಕೆ ಹಾಜರಾಗದೇ ಇದ್ದ ಕಾರಣ ಇವರಿಗೆ ನೀಡಿದ ಉಲ್ಲೇಖ (6)ರ ನೇಮಕಾತಿ ಆದೇಶವನ್ನು ಉಲ್ಲೇಖ (7)ರನ್ವಯ ರದ್ದುಪಡಿಸಲಾಯಿತು ಹಾಗೂ ಈ ವಿಷಯವನ್ನು ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರಿಗೂ ಹಾಗೂ ಸದರಿ ಅಭ್ಯರ್ಥಿಗೂ ತಿಳಿಸಲಾಯಿತು.

1	ನಾಗಪ್ಪ ಯಲ್ಲಪ್ಪ ವಣ್ಣೂರ S/o ಯಲ್ಲಪ್ಪ C/o ಸಿ.ಎಸ್. ಶಾಸ್ತ್ರಿ ಮಠ, ಮಿಷನ್ ಕೌಂಪೌಂಡ್ 2ನೇ ಕ್ರಾಸ್, ಧಾರವಾಡ	ಪರಿಶಿಷ್ಟ ಪಂಗಡ ಮಾಜಿ ಸೈನಿಕ ಅಭ್ಯರ್ಥಿ ಮುಖ್ಯ ಪಟ್ಟಿ

ಈ ರೀತಿ ಮೇಲ್ಕಂಡ ಬ್ಯಾಕ್‌ಲಾಗ್ ಅಭ್ಯರ್ಥಿಯು ಈ ಜಿಲ್ಲೆಯ ಬ್ಯಾಕ್‌ಲಾಗ್ ಹುದ್ದೆಯಲ್ಲಿ ಕೆಲಸಕ್ಕೆ ಹಾಜರಾಗದೇ ಇದ್ದ ಕಾರಣ ಹಾಗೂ ಇವರು ತಮ್ಮ ನೇಮಕಾತಿ ಹಕ್ಕನ್ನು ಕಳೆದುಕೊಂಡ ಕಾರಣ ಮೇಲ್ಕಂಡ ನಾಗಪ್ಪ ಯಲ್ಲಪ್ಪ ವಣ್ಣೂರ ಎಂಬ ಅಭ್ಯರ್ಥಿಯ ಬದಲಿಗೆ ಕೆಳಕಂಡ ಬ್ಯಾಕ್‌ಲಾಗ್ ಅಭ್ಯರ್ಥಿಯನ್ನು ನೋಂಧಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ

ಆಯುಕ್ತರವರು ಉಲ್ಲೇಖ (8)ರ ಅವರ ರೀ–ಅಲಾಟ್‌ಮೆಂಟ್ ಆದೇಶದಲ್ಲಿ ಈ ಜಿಲ್ಲೆಗೆ ನೇಮಕಾತಿಗಾಗಿ ಅಲಾಟ್ ಮಾಡಿ ಈ ಕೆಳಕಂಡ ಬ್ಯಾಕ್‌ಲಾಗ್ ಅಭ್ಯರ್ಥಿಯನ್ನು ಈ ಜಿಲ್ಲೆಯಲ್ಲಿ ದ್ವಿತೀಯ ದರ್ಜೆ ಸಹಾಯಕರೆಂದು ನೇಮಕ ಮಾಡಿಕೊಳ್ಳುವಂತೆ ನಿರ್ದೇಶಿಸಿದ್ದರ ಮೇರೆ ಕೆಳಕಂಡ ಅಭ್ಯರ್ಥಿಯನ್ನು ಸದರಿ ಬ್ಯಾಕ್‌ಲಾಗ್ ಹುದ್ದೆಯಲ್ಲಿ ನೇಮಕ ಮಾಡಿಕೊಳ್ಳುವ ಸಲುವಾಗಿ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಆದೇಶ ಸಂಖ್ಯೆ:ಜಿ.ನೊ.ಗ. ಸಿಬ್ಬಂದಿ 15/2009–10, ದಿನಾಂಕ: 7ನೇ ಸೆಪ್ಟೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಹಾಗೂ ಉಲ್ಲೇಖ (2)ರ ಬ್ಯಾಕ್‌ಲಾಗ್ ನಿಯಮಗಳನ್ವಯ ಪ್ರದತ್ತವಾದ ಅಧಿಕಾರದ ಮೇರೆಗೆ ಉಲ್ಲೇಖ (8)ರಲ್ಲಿನ ರೀ–ಅಲಾಟ್‌ಮೆಂಟ್ ಆದೇಶದಲ್ಲಿ ಕಂಡು ಬಂದ ಕೆಳಕಂಡ ಪರಿಶಿಷ್ಟ ಪಂಗಡದ ಬ್ಯಾಕ್‌ಲಾಗ್ ಅಭ್ಯರ್ಥಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ರೂ. 5800–100–6000–125–6500–150–7100–175–7800–200–8600–225–9500–250–10500 ರ ವೇತನ ಶ್ರೇಣಿಯಲ್ಲಿ ಇತರೆ ಭತ್ಯೆಗಳು ಸೇರಿದಂತೆ ತಾತ್ಕಾಲಿಕವಾಗಿ ದ್ವಿತೀಯ ದರ್ಜೆ ಸಹಾಯಕರೆಂದು ನೇಮಕ ಮಾಡಲಾಗಿದೆ. ಹಾಗೂ ಸದರಿ ಅಭ್ಯರ್ಥಿಯನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಕಛೇರಿಗೆ ದ್ವಿತೀಯ ದರ್ಜೆ ಸಹಾಯಕರೆಂದು ಸ್ಥಳ ನಿಯುಕ್ತಿಗೊಳಿಸಿದೆ.

ಕ್ರ. ಸಂ.	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	SC/ ST	ಜನ್ಮ ದಿನಾಂಕ	7.9.2002 ರ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು ವ–ತಿಂ–ದಿ	ವಿದ್ಯಾರ್ಹತೆ ಮತ್ತು ಶೇಕಡಾವಾರು ಅಂಕಗಳು	ಅಭ್ಯರ್ಥಿಯನ್ನು ದ್ವಿತೀಯ ದರ್ಜೆ ಸಹಾಯಕರೆಂದು ನೇಮಕ ಮಾಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ ಹೆಸರು	ಯಾವ ಮೀಸಲಾತಿ ಅಡಿಯಲ್ಲಿ ಮತ್ತು ಯಾವ ವರ್ಗೀಕರಣದ ಅಡಿಯಲ್ಲಿ ನೇಮಕ ಮಾಡಲಾಗಿದೆಯೋ ಅದರ ವಿವರ
1	ಬಸಪ್ಪ ಸೈದಾಪುರ S/o ಸಿದ್ದಪ್ಪ ಮನೆ ನಂ. EWS – 145, ಹುಡ್ಕೋ ಕಾಲೋನಿ, ಸಿದ್ದಲಿಂಗ ನಗರ, ಗದಗ–582101	SC	01.06.1963	39.03.06	SSLC: 45.000	ಉಪ ನೋಂದಣಿ ಕಛೇರಿ, ಶಿರಹಟ್ಟಿ ಗದಗ ಜಿಲ್ಲೆ	ಪರಿಶಿಷ್ಟ ಪಂಗಡ ಮಾಜಿ ಸೈನಿಕ ಅಭ್ಯರ್ಥಿ ಹೆಚ್ಚುವರಿ ಪಟ್ಟಿ

S.S.L.C. ಅಂಕಪಟ್ಟಿಯ ನೋಂದಣಿ ಸಂಖ್ಯೆ: 089551/September 1983 ರ ಪ್ರಕಾರ ಮೇಲ್ಕಂಡ ಅಭ್ಯರ್ಥಿಯ ಜನ್ಮ ದಿನಾಂಕವು 01.06.1963 ಆಗಿರುತ್ತದೆ.

ಈ ನೇಮಕಾತಿ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ. ಮತ್ತು ಅಭ್ಯರ್ಥಿಗಳು ಈ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

ಷರತ್ತುಗಳು:

1. ಈ ನೇಮಕಾತಿಯು ತಾತ್ಕಾಲಿಕವಾಗಿದ್ದು, ಸದರಿ ಅಭ್ಯರ್ಥಿಯನ್ನು ಯಾವುದೇ ನೋಟೀಸ್ ಅಥವಾ ಕಾರಣ ನೀಡದೇ ಯಾವುದೇ ಘಳಿಗೆಯಲ್ಲಾದರೂ ಕೆಲಸದಿಂದ ತೆಗೆದು ಹಾಕುವ ಷರತ್ತಿಗೆ ಒಳಪಟ್ಟು ನೇಮಕಾತಿ ಮಾಡಲಾಗಿದೆ.
2. ಸದರಿ ಅಭ್ಯರ್ಥಿಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರಲ್ಲಿನ ನಿಬಂಧನೆಗಳಿಗೆ ಒಳಪಡಿಸಿ ಮತ್ತು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷದ ಅರ್ಹತಾ ಪರೀಕ್ಷಾ ಅವಧಿಗೆ ಒಳಪಡಿಸಿ ತಾತ್ಕಾಲಿಕವಾಗಿ ನೇಮಕ ಮಾಡಲಾಗಿದೆ.
3. ಈ ನೇಮಕಾತಿಯು ಆಗಿಂದಾಗ್ಗೆ ಜಾರಿಯಲ್ಲಿರುವ ಸೇವಾ ಷರತ್ತುಗಳು, ನಿಯಮ ಮತ್ತು ಆದೇಶಗಳಿಗೆ ಒಳಪಡುತ್ತದೆ. ಹಾಗೂ ಸದರಿ ಅಭ್ಯರ್ಥಿಗಳು ಕೆ.ಸಿ.ಎಸ್.ಆರ್ ಮತ್ತು ಕೆ.ಸಿ.ಎಸ್ (ನಡತೆ) ನಿಯಮಗಳು 1966 ರಲ್ಲಿನ ಮತ್ತು ಕೆ.ಸಿ.ಎಸ್ (ಸಿ.ಸಿ.ಎ) ನಿಯಮಗಳು 1957ರಲ್ಲಿನ ಹಾಗೂ ಆಗಿಂದಾಗ್ಗೆ ಜಾರಿಗೆ ಬರುವ ಹಾಗೂ ಜಾರಿಯಲ್ಲಿರುವ ಇತರೆ ಸೇವಾ ಷರತ್ತುಗಳಿಗೆ ಮತ್ತು ನಿಬಂಧನೆಗಳಿಗೆ ಒಳಪಡುತ್ತಾರೆ.
4. ಈ ಆದೇಶ ಮುಟ್ಟಿದ 15 (ಹದಿನೈದು) ದಿನಗಳ ಅವಧಿಯೊಳಗೆ ಅಭ್ಯರ್ಥಿಯು ಕೆಲಸಕ್ಕೆ ಹಾಜರಾಗತಕ್ಕದ್ದು. ಒಂದು ವೇಳೆ ನಿಗದಿತ ಅವಧಿಯೊಳಗೆ ಕೆಲಸಕ್ಕೆ ಹಾಜರಾಗದಿದ್ದಲ್ಲಿ ಈ ನೇಮಕಾತಿ ರದ್ದಾಗುವುದು ಹಾಗೂ ನೇಮಕಾತಿ ಬಗ್ಗೆ ಅಭ್ಯರ್ಥಿಯು ಯಾವ ಹಕ್ಕನ್ನೂ ಹೊಂದಿರುವುದಿಲ್ಲವೆಂದು ತಿಳಿಯತಕ್ಕದ್ದು.
5. ಅರ್ಹತಾ ಪರೀಕ್ಷೆ ಅವಧಿಯು ಎರಡು ವರ್ಷಗಳೆಂದು ನಿಗದಿಪಡಿಸಿದೆ. ಈ ಅವಧಿಯೊಳಗೆ 1974ರ ಕರ್ನಾಟಕ ನಾಗರೀಕ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಾವಳಿಯಲ್ಲಿ ಈ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಅಭ್ಯರ್ಥಿಯು ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದ್ದು. ಇದಕ್ಕೆ ತಪ್ಪಿದಲ್ಲಿ ಕೆ.ಸಿ.ಎಸ್ (ಪ್ರೊಬೇಷನ್) ರೂಲ್ಸ್ 1977ರ ಅಡಿಯಲ್ಲಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು.
6. ಅಭ್ಯರ್ಥಿಯು ತಮಗೆ ವಹಿಸಿದ ಕೆಲಸ ಕಾರ್ಯಗಳನ್ನು ತೃಪ್ತಿಕರವಾಗಿ ಮಾಡತಕ್ಕದ್ದು.
7. ಅಭ್ಯರ್ಥಿಯು ತಮ್ಮ Pass Port Size ನ ಎರಡು ಇತ್ತೀಚಿನ ಫೋಟೋಗಳನ್ನು ತಾವು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿನ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.
8. ವಿದ್ಯಾರ್ಹತೆಯ ಬಗ್ಗೆ ಇರುವ ಮೂಲ ಪ್ರಮಾಣ ಪತ್ರಗಳನ್ನು ಹಾಗೂ SSLC ಮೂಲ ಅಂಕಪಟ್ಟಿಯನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.

9. ಜನ್ಮ ದಿನಾಂಕದ ಬಗ್ಗೆ ಮೂಲ ಪ್ರಮಾಣ ಪತ್ರವನ್ನು ಮತ್ತು ಶಾಲೆಯಿಂದ ನೀಡಿದ ಮೂಲ TC ಯನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.
10. ಅಭ್ಯರ್ಥಿಯು ಮಾಜಿ ಸೈನಿಕ ಅಭ್ಯರ್ಥಿಯಾಗಿರುವುದರಿಂದ ಸೇನಾ ಬಿಡುಗಡೆ ಮೂಲ ಪ್ರಮಾಣ ಪತ್ರವನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.
11. ಕೆಲಸಕ್ಕೆ ಹಾಜರಾಗುವ ಮುನ್ನ ಅಭ್ಯರ್ಥಿಯು ಸಂಬಂಧಪಟ್ಟ ಜಿಲ್ಲಾ ಸರ್ಜನ್‌ನಿಂದ ದೈಹಿಕ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಪಡೆದು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.
12. ಭಾರತದ ಸಂವಿಧಾನಕ್ಕೆ ಬದ್ಧರಾಗಿರುವ ಬಗ್ಗೆ ನಿಷ್ಠೆ ಪ್ರಮಾಣ ಪತ್ರವನ್ನು (ಪ್ರತಿಜ್ಞಾ ವಿಧಿ) ಇದಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರಿಗೆ ಬರೆದುಕೊಡತಕ್ಕದ್ದು.
13. ಅಭ್ಯರ್ಥಿಯು ಕಡೆಯದಾಗಿ ಹಾಜರಾಗಿದ್ದ ಶಾಲೆಯ ಮುಖ್ಯೋಪಾಧ್ಯಾಯರು ನೀಡಿರುವ ನಡತೆ ಪ್ರಮಾಣ ಪತ್ರವನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರ ಮುಂದೆ ಹಾಜರುಪಡಿಸತಕ್ಕದ್ದು.
14. ಅಭ್ಯರ್ಥಿಯು ಮದುವೆಯಾಗಿದ್ದಲ್ಲಿ, ಒಬ್ಬರೆ ಪತಿ ಅಥವಾ ಪತ್ನಿ ಹೊಂದಿರುವ ಬಗ್ಗೆ ಕೆ.ಸಿ.ಎಸ್ (ನಡತೆ) ನಿಯಮಗಳು, 1966ರಲ್ಲಿನ ನಿಯಮ 28ರ ರೀತ್ಯ ಇದಕ್ಕೆ ಲಗತ್ತಿಸಿರುವ ನಮೂನೆಯಲ್ಲಿರುವ ಘೋಷಣಾ ಪತ್ರವನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರಿಗೆ ಬರೆದುಕೊಡತಕ್ಕದ್ದು.
15. ಅಭ್ಯರ್ಥಿಯು ತಮ್ಮ ಜಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಇತ್ಯಾದಿಯಾಗಿ ಯಾವುದೇ ವಿಚಾರದಲ್ಲಿ ಅಭ್ಯರ್ಥಿಯು ನೀಡಿರುವ ವಿವರಗಳು ಸುಳ್ಳೆಂದಾಗಲೀ ಅಥವಾ ತಪ್ಪೆಂದಾಗಲೀ ತಿಳಿದು ಬಂದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ಭಾರತೀಯ ದಂಡ ಸಂಹಿತೆಯಲ್ಲಿನ ಸೂಕ್ತ ಕಲಂಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಹಾಗೂ ಕೆ.ಸಿ.ಎಸ್. (ಸಿ.ಸಿ.ಎ) ನಿಯಮಗಳು 1957ರ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು.
16. ಅಭ್ಯರ್ಥಿಗಳು ಸಲ್ಲಿಸಿರುವ ಅಂಕಪಟ್ಟಿಗಳು ಮತ್ತು ಮೀಸಲಾತಿ ಪ್ರಮಾಣ ಪತ್ರಗಳು ಹಾಗೂ ಜಾತಿ ಪ್ರಮಾಣ ಪತ್ರಗಳು ಸಕ್ಷಮ ಪ್ರಾಧಿಕಾರದಿಂದ ಸತ್ಯಾಪನೆಗೆ ಒಳಪಡುತ್ತವೆ.
17. ಒಂದು ವೇಳೆ ಅಭ್ಯರ್ಥಿಯು ಸಲ್ಲಿಸಿರುವ ಅಂಕಪಟ್ಟಿಗಳು ಮತ್ತು ಮೀಸಲಾತಿ ಪ್ರಮಾಣ ಪತ್ರಗಳು ಹಾಗೂ ಜಾತಿ ಪ್ರಮಾಣ ಪತ್ರಗಳು ಸುಳ್ಳು ಅಥವಾ ನಕಲಿ ಎಂದು ದೃಢಪಟ್ಟಲ್ಲಿ ಅಂತಹ ಅಭ್ಯರ್ಥಿಗಳ ಆಯ್ಕೆಯನ್ನು ಮತ್ತು ನೇಮಕಾತಿಯನ್ನು ಶಾಶ್ವತವಾಗಿ ರದ್ದುಪಡಿಸಲಾಗುವುದು ಹಾಗೂ ಅಭ್ಯರ್ಥಿಯ ವಿರುದ್ಧ ಭಾರತೀಯ ದಂಡ ಸಂಹಿತೆಯಲ್ಲಿನ ಸೂಕ್ತ ಕಲಂಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಹಾಗೂ KCS (CCA) ನಿಯಮಗಳು 1957ರ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಇದಕ್ಕೆ ಬದ್ಧನಾಗಿರುತ್ತೇನೆ ಎಂಬ ಬಗ್ಗೆ ಅಭ್ಯರ್ಥಿಯು 20/– ರೂ., ಗಳ ಛಾಪಾ ಕಾಗದದಲ್ಲಿ ಇದಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ಮುಚ್ಚಳಿಕೆ ನಮೂನೆ–1 ಅನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರಿಗೆ ಬರೆದುಕೊಡತಕ್ಕದ್ದು.
18. ಅಭ್ಯರ್ಥಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಲ್ಲವೆಂದು ಸತ್ಯಾಪನೆಯಿಂದ ದೃಢಪಟ್ಟಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ಶಾಶ್ವತವಾಗಿ ಯಾವುದೇ ಸೂಚನೆ ಇಲ್ಲದೆ ರದ್ದುಪಡಿಸಲಾಗುವುದು.
19. ಮಾಜಿ ಸೈನಿಕರ ಮೀಸಲಾತಿಯಲ್ಲಿ ಆಯ್ಕೆಗೊಂಡವರು ಮಾಜಿ ಸೈನಿಕರಲ್ಲವೆಂದು ದೃಢಪಟ್ಟಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ಶಾಶ್ವತವಾಗಿ ಯಾವುದೇ ಸೂಚನೆ ಇಲ್ಲದೆ ರದ್ದುಪಡಿಸಲಾಗುವುದು.
20. ಈ ನೇಮಕಾತಿ ಆದೇಶವು ಯಾವುದೇ ಸಂದರ್ಭದಲ್ಲಾದರೂ ತಿದ್ದೋಲೆ ಮತ್ತು ಮಾರ್ಪಾಡಿಗೆ ಒಳಪಟ್ಟಿರುತ್ತದೆ.
21. ನೇಮಕಾತಿ ಮಾಡಿರುವ ಸ್ಥಳದ ಅಥವಾ ಕಛೇರಿಯ ಮಾರ್ಪಾಡಿಗಾಗಿ ಯಾವುದೇ ಮನವಿಗಳನ್ನು ಯಾವುದೇ ಕಾರಣಕ್ಕಾಗಲೀ ಪುರಸ್ಕರಿಸಲಾಗುವುದಿಲ್ಲ.
22. ಅಭ್ಯರ್ಥಿಯು KGID ಯಲ್ಲಿ ಸರ್ಕಾರಿ ವಿಮೆಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.
23. ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪೈಕಿ ಬೇರೆ ಇನ್ಯಾವುದೇ ಅಭ್ಯರ್ಥಿಯು ಅವರ ಆಯ್ಕೆಯನ್ನು ದಾಖಲೆ ಸಹಿತ establish ಮಾಡಿದಲ್ಲಿ ಅಥವಾ ನನ್ನ ನೇಮಕಾತಿಯು ಅಸಿಂಧುವೆಂದು ದಾಖಲೆಗಳ ಸಹಿತ ಸಾಬೀತು ಪಡಿಸಿದಲ್ಲಿ ನನ್ನ ನೇಮಕಾತಿಯನ್ನು ಯಾವುದೇ ಸೂಚನೆ ಇಲ್ಲದೇ ಶಾಶ್ವತವಾಗಿ ರದ್ದುಗೊಳಿಸಿ ನನ್ನ ಬದಲಿಗೆ ಬೇರೊಬ್ಬರನ್ನು ಆಯ್ಕೆ ಮಾಡಬಹುದು ಎಂಬ ಬಗ್ಗೆ ಅಭ್ಯರ್ಥಿಯು 20/– ರೂ. ಛಾಪಾ ಕಾಗದದಲ್ಲಿ ಇದಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ಮುಚ್ಚಳಿಕೆ ನಮೂನೆ–2 ಅನ್ನು ಕೆಲಸಕ್ಕೆ ಹಾಜರಾಗುವ ಕಛೇರಿಯಲ್ಲಿ ಆ ಕಛೇರಿಯ ಮುಖ್ಯಸ್ಥರಿಗೆ ಬರೆದುಕೊಡತಕ್ಕದ್ದು.
24. ಎರಡು ವರ್ಷದ ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳು ತಮ್ಮ ವರ್ಗಾವಣೆಗಾಗಿ ರಾಜಕೀಯ ಅಥವಾ ಇನ್ನಾವುದೇ ರೀತಿಯ ಒತ್ತಡ ತಂದಲ್ಲಿ ಅಂತಹವರ ವಿರುದ್ಧ ಕಾನೂನು ರೀತ್ಯಾ ಶಿಸ್ತು ಕ್ರಮ ಜರುಗಿಸಲಾಗುವುದು.
25. ಈ ಹಿಂದೆ ಜಾರಿಯಲ್ಲಿದ್ದ ನಿವೃತ್ತಿ ಪಿಂಚಣಿ ಸೌಲಭ್ಯ ಯೋಜನೆಗೆ ಬದಲಾಗಿ ಸರ್ಕಾರದವರು ದಿನಾಂಕ: 1.4.2006 ರಿಂದ ಜಾರಿಗೆ ಬರುವಂತೆ ಉಲ್ಲೇಖ (9) ರ ಸರ್ಕಾರದ ಆದೇಶದಲ್ಲಿ ಹೊಸದಾಗಿ New Defined contributory Pension Scheme ಎಂಬ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುತ್ತಾರೆ. ಈ ಹೊಸ ಪಿಂಚಣಿ ಯೋಜನೆಯು ದಿನಾಂಕ: 01.04.2006 ರಿಂದ ಅಥವಾ ತದನಂತರ ನೇಮಕಾತಿ ಹೊಂದಿದ ಎಲ್ಲಾ ರಾಜ್ಯ ಸರ್ಕಾರಿ ನೌಕರರಿಗೆ ಅನ್ವಯಿಸುತ್ತದೆ ಎಂದು ಆದೇಶ ಮಾಡಿರುತ್ತಾರೆ. ಆದ್ದರಿಂದ ಈ ಜಿಲ್ಲೆಯಲ್ಲಿ ನೇಮಕ ಹೊಂದಿದ ಸದರಿ ನೌಕರರು ಸರ್ಕಾರದ ಉಲ್ಲೇಖ (9)ರ ಆದೇಶದನ್ವಯ ಹೊಸ ಪಿಂಚಣಿ ಯೋಜನೆಗೆ ಒಳಪಡುತ್ತಾರೆಂದು ಈ ಮೂಲಕ ಆದೇಶಿಸಿದೆ ಹಾಗೂ ಉಲ್ಲೇಖ (9)ರ ನಿರ್ದೇಶನಕ್ಕೆ ಸದರಿ ನೌಕರರು ಬದ್ಧರಾಗಿರತಕ್ಕದ್ದು.

ನೇಮಕಾತಿ ಪ್ರಾಧಿಕಾರಿ ಹಾಗೂ ಜಿಲ್ಲಾ ನೋಂದಣಾಧಿಕಾರಿಗಳು,
ಗದಗ ಜಿಲ್ಲೆ, ಗದಗ.

ಪಿ.ಆರ್. 778

ಜಿಲ್ಲಾಧಿಕಾರಿಯವರ ಕಾರ್ಯಾಲಯ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ

ಕಛೇರಿ: 08226-223460,223170 ಫ್ಯಾಕ್ಸ್: 08226-223180

ಇ-ಮೇಲ್ : (deo.cnagar@gmail.com, dccnagar--ka@nic.in and dccnagar@hotmail.com)

ಅಧ್ಯಕ್ಷರು,ಆಯ್ಕೆ ಪ್ರಾಧಿಕಾರ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.

ಅಧಿಸೂಚನೆ

ಸಂ:ಸಿಬ್ಬಂದಿ(3)ಸಿಆರ್/222/2008-09, ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ: ಚಾಮರಾಜನಗರ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಸರ್ಕಾರವು ಅಧಿಸೂಚನೆ ಸಂಖ್ಯೆ:ಕಂಇ/299/ಬಿಎಸ್‌ಸಿ/2006 ದಿನಾಂಕ:08-09-2009 ರ ಮೇರೆಗೆ ಕರ್ನಾಟಕ ನಾಗರೀಕ ಸೇವೆಗಳು (Revenue Subordinate Branch) ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮಗಳು 2008ರ ರೀತ್ಯಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಮಾಡಲು ಅವಕಾಶ ಕಲ್ಪಿಸಿದೆ.

ಚಾಮರಾಜನಗರ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು ಅರ್ಹ ಅಭ್ಯರ್ಥಿಗಳಿಂದ ಈ ಕೆಳಗಿನ ಷರತ್ತುಗಳಿಗೆ ಒಳಪಟ್ಟು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಖಾಲಿ ಹುದ್ದೆಗಳ ವಿವರ

ಹುದ್ದೆಯ ಹೆಸರು: ಗ್ರಾಮಲೆಕ್ಕಿಗರು **ಒಟ್ಟು ಖಾಲಿ ಹುದ್ದೆ: 44(ನಲವತ್ತ ನಾಲ್ಕು)**

ಕ್ರಮ ಸಂಖ್ಯೆ	ವರ್ಗೀಕರಣ	ಪ.ಜಾ	ಪ.ಪಂ	ವ-1	ವ-2ಎ	ವ-2ಬಿ	ವ-3ಎ	ವ-3ಬಿ	ಸಾ.ಅ	ಒಟ್ಟು
1	ಸಾಮಾನ್ಯ	2	1	1	2	1	1	1	5	14
2	ಮಹಿಳೆ	2	–	1	2	1	1	1	6	14
3	ಗ್ರಾಮೀಣ	2	–	–	2	–	–	–	5	09
4	ಮಾಜಿ ಸೈನಿಕ	–	–	–	–	–	–	–	2	02
5	ಕನ್ನಡ ಮಾಧ್ಯಮ	–	–	–	–	–	–	–	1	01
6	ಯೋಜನಾ ನಿರಾಶ್ರಿತ	–	–	–	–	–	–	–	1	01
7	ಅಂಗವಿಕಲರು	1	–	–	1	–	–	–	1	03
	ಒಟ್ಟು:	**07**	**01**	**02**	**07**	**02**	**02**	**02**	**21**	**44**

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-10-2009

ಸಂ:1 ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ:

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣ ಅಥವಾ ಸಿ.ಬಿ.ಎಸ್.ಇ./ಐ.ಸಿ.ಎಸ್.ಇ. ರವರು ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರತಕ್ಕದ್ದು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.

ಸಂ:2 ಹುದ್ದೆಗೆ ನಿಗದಿಪಡಿಸಿರುವ ವೇತನ ಶ್ರೇಣಿ: ರೂ:5800-10500

ಸಂ:3 ಹುದ್ದೆಗೆ ನಿಗದಿಪಡಿಸಿರುವ ವಯೋಮಿತಿ:

ಕ್ರಮ ಸಂಖ್ಯೆ	ವರ್ಗ	ವಯೋಮಿತಿ
1	ಪ್ರವರ್ಗ-1 ಪ.ಜಾ/ಪ.ವರ್ಗ	18-40 ವರ್ಷ
2	ಪ್ರವರ್ಗ-2ಎ/2ಬಿ/3ಎ/3ಬಿ	18-38 ವರ್ಷ
3	ಸಾಮಾನ್ಯ	18-35 ವರ್ಷ

ಸಂ:3 ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಶುಲ್ಕ:

ಕ್ರಮ ಸಂಖ್ಯೆ	ವರ್ಗ	ಶುಲ್ಕ	ಪಾವತಿಸುವ ವಿಧಾನ
1	ಸಾಮಾನ್ಯ	ರೂ:200–00	ಚಾಮರಾಜನಗರ ಜಿಲ್ಲಾಡಳಿತ ಭವನ ಸಂಕೀರ್ಣದಲ್ಲಿರುವ ಎಸ್.ಬಿ.ಎಂ.ಬ್ಯಾಂಕಿನ ಖಾತೆ ಸಂಖ್ಯೆ 64050010864 ಗೆ ಜಮಾ ಮಾಡತಕ್ಕದ್ದು.
2	ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗ, ಪ್ರ.ವ–1, ಮಾಜಿ ಸೈನಿಕ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ	ರೂ:100–00	

ಸಂ:4 ಹುದ್ದೆಯ ಆಯ್ಕೆ ವಿಧಾನ:

ಅಭ್ಯರ್ಥಿಯು ದ್ವಿತೀಯ ಪಿ.ಯು.ಸಿ./ಸಿ.ಬಿ.ಎಸ್.ಇ/ಐ.ಸಿ.ಎಸ್.ಇ. ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡವಾರು ಮೆರಿಟ್ ಆಧಾರದಲ್ಲಿ ಮೀಸಲಾತಿಗೆ ಅನುಗುಣವಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: RD.299 BSC 2009 ದಿನಾಂಕ: 03–02–2009 ರನ್ವಯ ಆಯ್ಕೆ ಮಾಡಲಾಗುವುದು

ನಿಬಂಧನೆಗಳು:

1 ಅಭ್ಯರ್ಥಿಯು ಆನ್‌ಲೈನ್ ವೆಬ್‌ಸೈಟ್ http://recruitment.kar.nic.in/va-chanagar ಮುಖಾಂತರ ಅರ್ಜಿಗಳನ್ನು ನಿಗದಿಪಡಿಸಿದ ದಿನಾಂಕದೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ಸಲ್ಲಿಸಬೇಕು. ನಿಗದಿಪಡಿಸಿದ ಅವಧಿ ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

2 ನೇಮಕಾತಿ ಹೊಂದಿದ ಅಭ್ಯರ್ಥಿಗಳು, ಎರಡು (02)ವರ್ಷಗಳ ಪರಿವೀಕ್ಷಣಾವಧಿ ಪೂರೈಸುವುದು ಕಡ್ಡಾಯವಾಗಿರುತ್ತದೆ.

3 ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಮಾಡುವ ಅಥವಾ ಕಡಿಮೆ ಮಾಡುವ ಹಕ್ಕು ನೇಮಕಾತಿ ಪ್ರಾಧಿಕಾರವು ಹೊಂದಿರುತ್ತದೆ.

4 ತಪ್ಪು ಮಾಹಿತಿ ಒದಗಿಸಿದ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.

5 ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

6 ಈ ಅಧಿಸೂಚನೆ ಅನ್ವಯ ನೇಮಕಾತಿ ಹೊಂದುವ ಅಭ್ಯರ್ಥಿಗಳು ಜಿಲ್ಲೆಯ ಯಾವುದೇ ತಾಲ್ಲೂಕುಗಳಲ್ಲಾದರೂ ಸೇವೆ ಸಲ್ಲಿಸಲು ಬದ್ಧರಾಗಿರಬೇಕು ಹಾಗೂ ತಾಲ್ಲೂಕು ಕಛೇರಿಯ ಭೂಮಿ ಕೇಂದ್ರದಲ್ಲಿ ಸೇವೆ ಸಲ್ಲಿಸಲು ಬದ್ಧರಾಗಿರಬೇಕು.

7 ಅರ್ಜಿಯನ್ನು ಆನ್‌ಲೈನ್ ವೆಬ್‌ಸೈಟ್ ವಿಳಾಸ http://recruitment.kar.nic.in/va-chanagar ರಲ್ಲಿ ತುಂಬಿ ಆನ್‌ಲೈನ್ ಚಲನ್ ಪ್ರಿಂಟ್ ತೆಗೆದುಕೊಂಡು, ಹಣವನ್ನು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಚಾಮರಾಜನಗರ ಖಾತೆ ಸಂಖ್ಯೆ 64050010864 ಗೆ ಜಮಾ ಮಾಡಿ ಅಭ್ಯರ್ಥಿ ಚಲನ್ ಕಾಪಿಯನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಅಭ್ಯರ್ಥಿಗಳು ಸಂರಕ್ಷಿಸಬೇಕು.

8 ಪೂರ್ಣ ಮಾಹಿತಿಯನ್ನು/ಅಗತ್ಯವಿರುವ ಪ್ರಮಾಣಪತ್ರಗಳನ್ನು ಪರಿಶೀಲನಾ ಸಂಧರ್ಭದಲ್ಲಿ ಹಾಜರುಪಡಿಸದೇ ಇದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ತಿರಸ್ಕರಿಸಲಾಗುವುದು.

9 ಅಭ್ಯರ್ಥಿಗಳಿಗೆ ಕನ್ನಡ ಬಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

10 ಆಯ್ಕೆ ಪ್ರಾಧಿಕಾರವು ಗ್ರಾಮಲೆಕ್ಕಿಗರ ಹುದ್ದೆಗಳ ಭರ್ತಿ ಮಾಡುವ ವಿಚಾರ ಕುರಿತು ಪೂರ್ಣ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.

11 ಮೇಲಿನ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಆಯ್ಕೆ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಚಾಮರಾಜನಗರ ಇವರು ಕಾಯ್ದಿರಿಸಿಕೊಂಡಿದ್ದಾರೆ.

12 ಅರ್ಜಿದಾರರೊಡನೆ ಪತ್ರ ವ್ಯವಹಾರಗಳಿಗೆ ಅವಕಾಶವಿರುವುದಿಲ್ಲ.

13 ಯಾವುದೇ ರೀತಿಯ ಒತ್ತಡಗಳನ್ನು ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

14 ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಮತ್ತು
15 ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

16 ಆಯ್ಕೆಯು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗೆ ಒಳಪಟ್ಟಿರುತ್ತದೆ.

17 ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅರ್ಜಿದಾರರು ಪರಿಶೀಲನಾ ದಿನಾಂಕದಂದು ಈ ಕೆಳಕಂಡ ಮೂಲ ದಾಖಲಾತಿಗಳನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು

1. ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಇಲಾಖಾ ಮುಖ್ಯಸ್ಥರ ಮುಖಾಂತರ ನಿರಾಕ್ಷೇಪಣಾ ಪತ್ರವನ್ನು ಹಾಜರುಪಡಿಸಬೇಕು
2. ಜನ್ಮ ದಿನಾಂಕವನ್ನು ಖಚಿತಪಡಿಸುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯನ್ನು ಪರಿಶೀಲನಾ ದಿನಾಂಕದಂದು ಹಾಜರ್‌ಪಡಿಸಬೇಕು.
3. ಮಾಜಿ ಸೈನಿಕ ಮೀಸಲಾತಿ ಹುದ್ದೆಗೆ ಸಂಬಂಧಿಸಿದಂತೆ, ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ಮುಕ್ತಿ ಹೊಂದಿದ ಪ್ರಪತ್ರ. ಲಗತ್ತಿಸತಕ್ಕದ್ದು.
4. ಅಂಗವಿಕಲ ಮೀಸಲಾತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂ: ಸಿಆಸುಇ.115 ನೇನನಿ. 2005 ದಿ: 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
5. ಅಭ್ಯರ್ಥಿಯು ಜಾತಿ ಪ್ರಮಾಣ ಪತ್ರವನ್ನು ಸರ್ಕಾರದ ಅದೇಶ ಸಂ:ಸಕಇ/132/ಎಸ್‌ಎಡಿ/97 ದಿ:8–2–2000 ರಲ್ಲಿ ನಿಗದಿಪಡಿಸಿರುವಂತೆ ನಮೂನೆಯಲ್ಲಿ ತಾಲ್ಲೂಕು ತಹಸೀಲ್ದಾರರಿಂದ ಪಡೆದು ಹಾಜರು ಪಡಿಸಬೇಕು.
6. ಗ್ರಾಮೀಣ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿ: 13–2–2001ರ ಸರ್ಕಾರದ ಆದೇಶ ಸಂ: ಸಿಆಸುಇ8/ಸೇನನಿ/2001 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲುರುಜು ವನ್ನು ಪಡೆದ ಪ್ರಮಾಣಪತ್ರಗಳನ್ನು ಸಲ್ಲಿಸತಕ್ಕದ್ದು. (ಅನುಬಂಧ– I)
7. ಇಬ್ಬರು ಗಣ್ಯ ವ್ಯಕ್ತಿಗಳಿಂದ ಅಥವಾ ಪತ್ರಾಂಕಿತ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣಪತ್ರ ಸಲ್ಲಿಸತಕ್ಕದ್ದು.
8. ಕನ್ನಡ ಮಾಧ್ಯಮ ಮೀಸಲಾತಿ ಪಡೆಯಲಿಚ್ಛಿಸುವವರು ಕನ್ನಡ ಮಾದ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ದೃಢೀಕರಣ ಪತ್ರವನ್ನು ಸಲ್ಲಿಸತಕ್ಕದ್ದು. (ಅನುಬಂಧ–III)
9. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
10. ಯೋಜನೆಗಳಿಂದ ನಿರಾಶ್ರಿತಗೊಂಡ ಬಗ್ಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ದಿನಾಂಕ:27–7–2001ರ ಅದೇಶ ಸಂ:ಡಿಪಿಎಆರ್.44.ನೇನನಿ/2001 ರಲ್ಲಿ ಸೂಚಿಸಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. (ಅನುಬಂಧ–II)
11. ಅಭ್ಯರ್ಥಿಯ ಭಾವ ಚಿತ್ರವಿರುವ ಗುರುತಿನ ಚೀಟಿಯನ್ನು (ಮತದಾರರ ಗುರುತಿನ ಚೀಟಿ, ಡ್ರೈವಿಂಗ್ ಲೈಸೆನ್ಸ್ ಇತ್ಯಾದಿ) ಹಾಜರ್‌ಪಡಿಸಬೇಕು.
12. ಅಭ್ಯರ್ಥಿಯ ವಾಸಸ್ಥಳ ದೃಢೀಕರಣ ಪತ್ರ ಹಾಜರ್‌ಪಡಿಸಬೇಕು.

ಅಧ್ಯಕ್ಷರು,

ಪಿ.ಆರ್. 815

ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ

ಮತ್ತು ಜಿಲ್ಲಾಧಿಕಾರಿ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ

ಅಧಿಸೂಚನೆ ಸಂ:ಗ್ರಾ.ಲೆ ಸಿಬ್ಬಂದಿ/71/09–10 ದಿನಾಂಕ: 26ನೇ ಸೆಪ್ಟೆಂಬರ್ 2009

ವಿಷಯ: ಹಾಸನ ಜಿಲ್ಲಾ ಗ್ರಾಮಲೆಕ್ಕಿಗರ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಕುರಿತು.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್‌ಡಿ 299 ಬಿಎಸ್ ಸಿ/06 ದಿನಾಂಕ: 03/02/2009 ಮತ್ತು 26/02/2009.

2) ಈ ಕಛೇರಿಯ ಅಧಿಸೂಚನೆ ಸಂ:ಗ್ರಾ.ಲೆ.ಸಿಬ್ಬಂದಿ 94/08–09, ದಿನಾಂಕ:28/02/2009.

3) ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್ ಡಿ 299 ಬಿಎಸ್ ಸಿ/06 ದಿನಾಂಕ: 08/09/2009.

ಹಾಸನ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇಮಕಾತಿ ಮಾಡುವ ಸಲುವಾಗಿ ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಂತೆ ಈ ಕಛೇರಿಯ ಉಲ್ಲೇಖ(2)ರ ಅಧಿಸೂಚನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಆದರೆ ಉಲ್ಲೇಖ(3)ರ ಸರ್ಕಾರದ ಅಧಿಸೂಚನೆಯಲ್ಲಿ ನಿರ್ದೇಶಿಸಿರುವಂತೆ ಈ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ರದ್ದುಪಡಿಸಿರುತ್ತದೆ. ಹಾಗೂ ಹೊಸದಾಗಿ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ನಿರ್ದೇಶಿಸಿರುವುದರಿಂದ ಪ್ರಸ್ತುತ ಖಾಲಿ ಇರುವ ಗ್ರಾಮ ಲೆಕ್ಕಿಗರುಗಳ ಕೆಳಕಂಡ ಹುದ್ದೆಗಳಿಗೆ ನೇಮಕಾತಿಯನ್ನು ಕರ್ನಾಟಕ ನಾಗರೀಕ ಸೇವೆಗಳು

(Revenue subordinate branch)(Cadre & Recruitment)(ತಿದ್ದುಪಡಿ) ನಿಯಮಗಳು 2008 ರನ್ವಯ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ:

1. **ಹುದ್ದೆ ಹಾಗೂ ಸಂಖ್ಯೆ** **ಗ್ರಾಮಲೆಕ್ಕಿಗರ ಹುದ್ದೆಗಳು ಒಟ್ಟು : 123**
2. **ಹುದ್ದೆಗಳ ವರ್ಗೀಕರಣ**

ಕ್ರ. ಸಂ.	ವರ್ಗೀಕರಣದ ವಿವರ	ಶೇಕಡಾ ಪ್ರಮಾಣ	ಸಾಮಾನ್ಯ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ ಅಭ್ಯರ್ಥಿ	ಯೋಜನಾ ನಿರಾಶ್ರಿತರು	ಒಟ್ಟು
1	ಸಾಮಾನ್ಯ	50%	13	18	15	3	6	3	3	61
2	ಪರಿಶಿಷ್ಟ ಜಾತಿ	15%	4	6	5	1	1	1	1	19
3	ಪರಿಶಿಷ್ಟ ಪಂಗಡ	3%	1	1	1	1	0	0	0	4
4	ಪ್ರವರ್ಗ–I	4%	1	2	1	1	0	0	0	5
5	ಪ್ರವರ್ಗ–IIA	15%	3	6	5	1	1	1	1	18
6	ಪ್ರವರ್ಗ–IIB	4%	1	2	1	1	0	0	0	5
7	ಪ್ರವರ್ಗ–IIIA	4%	1	2	1	1	0	0	0	5
8	ಪ್ರವರ್ಗ–IIIB	5%	1	2	2	1	0	0	0	6
	ಒಟ್ಟು		**25**	**39**	**31**	**10**	**8**	**5**	**5**	**123**

3. **ವೇತನ ಶ್ರೇಣಿ** 5800–100–6000–125–6500–150–7100–175–7800–200–8600–225–9500–250–10500
4. **ಶೈಕ್ಷಣಿಕ ವಿದ್ಯಾರ್ಹತೆ:** ದ್ವಿತೀಯ ಪಿ.ಯು.ಸಿ. ಅಥವಾ 12ನೇ ತರಗತಿ (12th Standard Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.
5. **ಅಂತರ್ಜಾಲದ ಮೂಲಕ (On Line) ಅರ್ಜಿಗಳನ್ನು ದಿನಾಂಕ 01/10/2009 ರಿಂದ ಸಲ್ಲಿಸಬಹುದಾಗಿದ್ದು ಕೊನೆಯ ದಿನಾಂಕ 30/10/2009 ಆಗಿರುತ್ತದೆ.**
6. **ನಿಗದಿತ ಶುಲ್ಕ :**

   ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಅಭ್ಯರ್ಥಿಗಳು ರೂ.50–00 ಅರ್ಜಿ ಶುಲ್ಕ ಹಾಗೂ ಇತರೆ ಅಭ್ಯರ್ಥಿಗಳು ರೂ.200.00 (ಎರಡುನೂರು ರೂಪಾಯಿ)
7. **ವಯೋಮಿತಿ:**

   ಅರ್ಜಿಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಈ ಕೆಳಗಿನ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾ/ಪ.ಪಂ/ಪ್ರ–1	40 ವರ್ಷ

8. 1977ರ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.
9. **ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

   ಜಾತಿ ಮೀಸಲಾತಿ ಕೋರಬಯಸುವ

   * ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ ' ಡಿ ' ಯಲ್ಲಿ
   * ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ ' ಇ ' ಯಲ್ಲಿ ಹಾಗೂ

* 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ' ಎಫ್ ' ನಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಿತ ತಹಸೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

* ಜನನ ಪ್ರಮಾಣ ಪತ್ರ, ಎಸ್ ಎಸ್ ಎಲ್ ಸಿ ಮೂಲ ಅಂಕಪಟ್ಟಿಯನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

10. **ಗ್ರಾಮೀಣ ಅಭ್ಯರ್ಥಿ:**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ **1 ರಿಂದ 10ನೇ** ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಸೀಲ್ದಾರ್ ರವರಿಂದ ಪಡೆದು ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

11) **ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು **1ನೇ ತರಗತಿಯಿಂದ 10ನೇ** ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

12) **ಅಂಗವಿಕಲ ಅಭ್ಯರ್ಥಿ :**

ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

13) **ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

14) **ಅರ್ಹತಾ ಷರತ್ತುಗಳು:**

ಅ) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಸಮಿತಿ ಕಾಯ್ದಿರಿಸಿಕೊಂಡಿದೆ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

ಅಂತರ್ಜಾಲ (On Line) ಮೂಲಕ ಅರ್ಜಿ ಸಲ್ಲಿಸುವ ವಿಧಾನ:

ಅರ್ಜಿಗಳನ್ನು ಆನ್ ಲೈನ್ (On Line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು

ಇಲಾಖೆಯ ಅಧಿಕೃತ ವೆಬ್ ಸೈಟ್. http//recruitment.kar.nic.in/va-hassan ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement Slip) ಮತ್ತು ದ್ವಿಪ್ರತಿ ಚಲನ್ ತೆಗೆದುಕೊಳ್ಳತಕ್ಕದ್ದು. ಈ ಚಲನ್ ಅನ್ನು ಅರ್ಜಿ ಶುಲ್ಕದೊಂದಿಗೆ ಕಾರ್ಪೊರೇಷನ್ ಬ್ಯಾಂಕ್ ನಲ್ಲಿರುವ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನರವರ ಉಳಿತಾಯ ಖಾತೆ ಸಂಖ್ಯೆ: **0020/SB/01/043265** ರಲ್ಲಿಗೆ ಸಂದಾಯವಾಗುವಂತೆ ಯಾವುದಾದರೂ ಕಾರ್ಪೊರೇಷನ್ ಬ್ಯಾಂಕ್ ಶಾಖೆಯಲ್ಲಿ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ಅನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲಾತಿಗಳನ್ನು ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸತಕ್ಕದ್ದು.

15) **ಪ್ರಮುಖವಾದ ಸೂಚನೆಗಳು:**

1) ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅರ್ಹತೆಯನ್ನು ಪಡೆದಿರಬೇಕು.

2) ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರ ಪರಿಶೀಲಿಸುವ ಸಂದರ್ಭದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು. ಇದಕ್ಕೆ ಹೆಚ್ಚಿನ ಕಾಲಾವಕಾಶ ನೀಡಲಾಗುವುದಿಲ್ಲ. ಅರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯುಕ್ತಿಕ ಜವಾಬ್ದಾರಿಯಾಗಿರುತ್ತದೆ.

3) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

16) **ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ಅಸಿಂಧು ಪಡಿಸಲಾಗುವುದು.

17) **ಆಯ್ಕೆ ವಿಧಾನ:**

ಕರ್ನಾಟಕ ಜನರಲ್ ಸರ್ವೀಸಸ್ (Revenue subordinate branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಭ್ಯರ್ಥಿಯು ಅವರು ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳ (ON Merit) ಆಧಾರದ ಮೇಲೆ ಆಯಾಯ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುತ್ತದೆ.

ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು,

ಪಿ.ಆರ್. 817

ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ, ಹಾಸನ ಜಿಲ್ಲೆ, ಹಾಸನ.

ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

ಕಾರ್ಯಪಾಲಕ ಅಭಿಯಂತರರವರ ಕಛೇರಿ, ಲೋ.ಇ. ವಿಶೇಷ ವಿಭಾಗ, ಶಿವಮೊಗ್ಗ

ಅಲ್ಪಾವಧಿ ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ

ಕ್ರ.ಸಂ:ಕಾ.ಇಂ/ಲೋ.ಇ/ವಿ.ವಿ.ಶಿ/ಸ.ಇಂ.–3/ಹರಾಜು–1/09–10, ದಿನಾಂಕ: 17ನೇ ಸೆಪ್ಟೆಂಬರ್ 2009

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಕಾರ್ಯಪಾಲಕ ಅಭಿಯಂತರು, ಲೋಕೋಪಯೋಗಿ ಇಲಾಖೆ ವಿಶೇಷ ವಿಭಾಗ, ಶಿವಮೊಗ್ಗ ಅಥವಾ ಇವರಿಂದ ನಿಯೋಜಿಸಲ್ಪಟ್ಟ ಅಧಿಕಾರಿಗಳಾದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ನಂ.2 ಉಪವಿಭಾಗ, ತೀರ್ಥಹಳ್ಳಿ ಇವರಿಂದ ತೀರ್ಥಹಳ್ಳಿಯಲ್ಲಿರುವ ಕೆಳಗೆ ಕಾಣಿಸಿರುವ ಹಳೆಯ ಕಟ್ಟಡವನ್ನು ಹೇಗಿದೆಯೋ ಹಾಗೆಯೇ ಯಥಾಸ್ಥಿತಿಯಲ್ಲಿ ಟೆಂಡರ್ ಕಂ ಬಹಿರಂಗ ಹರಾಜು ಹಾಕಲಾಗುವುದು. ಟೆಂಡರ್–ಕಂ–ಹರಾಜಿನಲ್ಲಿ ಭಾಗವಹಿಸಲಿಚ್ಚಿಸುವರು ದಿನಾಂಕ: 30.09.2009 ಸಾಯಂಕಾಲ 5.30 ಗಂಟೆಯೊಳಗೆ ಠೇವಣಿ ಹಣ ರೂ. 10,000/– (ರೂಪಾಯಿ ಹತ್ತು ಸಾವಿರ ಮಾತ್ರ) ಮುಂಗಡವಾಗಿ ಕಾರ್ಯಪಾಲಕ ಅಭಿಯಂತರು, ಲೋಕೋಪಯೋಗಿ ಇಲಾಖೆ, ವಿಶೇಷ ವಿಭಾಗ, ಶಿವಮೊಗ್ಗ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದ ಡಿಮ್ಯಾಂಡ್ ಡ್ರಾಫ್ಟ್ ಅನ್ನು ಹಾಗೂ ಟೆಂಡರ್ ಫಾರಂ ಬೆಲೆ ರೂ. 300+12.50% ತೆರಿಗೆ ಬೆಲೆಯನ್ನು ಪಾವತಿಸಿ ಖಾಲಿ

ಟೆಂಡರ್ ಫಾರಂನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು. ಹಾಗೂ ಟೆಂಡರ್ ಫಾರಂ ಪಡೆಯದೇ ದಿನಾಂಕ: 06.10.2009 ರಂದು ನೇರವಾಗಿ ಬಹಿರಂಗ ಹರಾಜಿನಲ್ಲಿ ಭಾಗವಹಿಸುವವರೂ ಕೂಡಾ ನೊಂದಣಿ ಶುಲ್ಕ ರೂ. 300+12.50% ತೆರಿಗೆ ಹಾಗೂ ಮುಂಗಡ ಹಣ ರೂ. 10,000/– ಗಳಿಗೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ವಿಶೇಷ ವಿಭಾಗ, ಶಿವಮೊಗ್ಗ ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದ ಡಿಮ್ಯಾಂಡ್ ಡ್ರಾಫ್ಟ್ ಅನ್ನು ಪ್ರತ್ಯೇಕವಾಗಿ ದಿನಾಂಕ: 06.10.2009 ರ ಬೆಳಿಗ್ಗೆ 10.00 ರಿಂದ 12.00 ರೊಳಗೆ ನೀಡಿ ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದು.

ಕ್ರ. ಸಂ.	ಹರಾಜಿಗಿಟ್ಟಿರುವ ಕಟ್ಟಡಗಳು	ಮುಂಗಡ ಠೇವಣಿ ಮೊತ್ತ	ಖಾಲಿ ಟೆಂಡರ್ ಫಾರಂ ನೀಡುವ ದಿನಾಂಕ	ಮೊಹರು ಮಾಡಿದ ಟೆಂಡರ್ ಸ್ವೀಕರಿಸುವ ದಿನಾಂಕ
1.	ತೀರ್ಥಹಳ್ಳಿ ತಾ॥ ಮಿನಿ ವಿಧಾನಸೌಧದ (ತಾಲ್ಲೂಕ್ ಕಛೇರಿ) ಮುಂಭಾಗದಲ್ಲಿರುವ ಹಳೆಯ ಆರ್.ಆರ್. ಶಾಖೆಯ ಶಿಥಿಲವಾಗಿರುವ ಕಟ್ಟಡವನ್ನು ಬೇಸ್‌ಮೆಂಟ್‌ವರೆಗೆ ಕೆಡವುವುದು.	ರೂ. 10,000/–	30.09.2009	05.10.2009

ಹರಾಜು ದಿನಾಂಕ: : 06.10.2009
ವೇಳೆ : ಮಧ್ಯಾಹ್ನ 3.00 ಗಂಟೆ
ಸ್ಥಳ : ತೀರ್ಥಹಳ್ಳಿ ಪಟ್ಟಣದಲ್ಲಿನ ಲೋಕೋಪಯೋಗಿ ಉಪವಿಭಾಗ ಕಛೇರಿಯ ಆವರಣ

ಕಾರ್ಯಪಾಲಕ ಅಭಿಯಂತರು,
ಲೋ.ಬಂ ಮತ್ತು ಒ.ಜ.ಸಾ. ಇಲಾಖೆ, ವಿಶೇಷ ವಿಭಾಗ, ಶಿವಮೊಗ್ಗ

ನಿಬಂಧನೆಗಳು ಮತ್ತು ಷರತ್ತುಗಳು:

1. ಭರ್ತಿ ಮಾಡಿದ ಟೆಂಡರ್‌ಗಳನ್ನು ಮೊಹರು ಮಾಡಿದ ಲಕೋಟೆಯಲ್ಲಿ ದಿನಾಂಕ: 05.10.09 ರಂದು ಸಂಜೆ 4.00 ಗಂಟೆಯೊಳಗಾಗಿ ವಿಭಾಗ ಕಛೇರಿ ಶಿವಮೊಗ್ಗದಲ್ಲಿ ಸ್ವೀಕರಿಸಲಾಗುವುದು.
2. ಟೆಂಡರ್ ಫಾರಂ ಪಡೆಯದೇ ನೇರವಾಗಿ ಬಹಿರಂಗ ಹರಾಜಿನಲ್ಲಿ ಭಾಗವಹಿಸುವವರು ದಿನಾಂಕ: 06.10.2009 ರಂದು ಬೆಳಿಗ್ಗೆ 12.00 ಗಂಟೆ ಒಳಗೆ ಮುಂಗಡವಾಗಿ, ಇಡುಗಂಟು ಹಣ ರೂ. 10,000–00 ಮತ್ತು ನೋಂದಣಿ ಶುಲ್ಕ ರೂ. 300+12.50% ತೆರಿಗೆಯನ್ನು ಕಾರ್ಯಪಾಲಕ ಅಭಿಯಂತರು, ಲೋಕೋಪಯೋಗಿ ಇಲಾಖೆ, ವಿಶೇಷ ವಿಭಾಗ, ಶಿವಮೊಗ್ಗ ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದ ಡಿಮ್ಯಾಂಡ್ ಡ್ರಾಫ್ಟ್ ಅನ್ನು ಪ್ರತ್ಯೇಕವಾಗಿ ನೀಡಬೇಕು. ನೊಂದಣಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.
3. ಬಹಿರಂಗ ಹರಾಜು ಪ್ರಕ್ರಿಯೆ ಪೂರ್ಣಗೊಂಡ ನಂತರ ಸ್ವೀಕರಿಸಲಾದ ಟೆಂಡರ್‌ನ್ನು ತೆರೆಯಲಾಗುವುದು. ಎರಡೂ ಪ್ರಕ್ರಿಯೆಯಲ್ಲಿನ ಅತೀ ಹೆಚ್ಚಿನ ಮೊತ್ತದ ಬಿಡ್ಡನ್ನು ಪರಿಗಣಿಸಲಾಗುವುದು. ಅತೀ ಹೆಚ್ಚಿನ ಮೊತ್ತ ಬಿಡ್‌ದಾರರು ಸ್ಥಳದಲ್ಲೇ ಬಿಡ್ ಮೊತ್ತದ 1/3 ಭಾಗವನ್ನು +12.50% ತೆರಿಗೆಯನ್ನು ಡಿ.ಡಿ. ಅಥವಾ ನಗದು ರೂಪದಲ್ಲಿ ಪಾವತಿಸಬೇಕು. ಪಾವತಿಸಲು ವಿಫಲರಾದಲ್ಲಿ ಅವರ ಮುಂಗಡ ಹಣ ರೂ. 10,000–00 ವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಹಾಗೂ 2ನೇ ಅತೀ ಹೆಚ್ಚಿನ ಮೊತ್ತದ ಬಿಡ್‌ದಾರರಿಗೆ ಅವಕಾಶ ಮಾಡಿಕೊಡಲಾಗುವುದು. ಬಿಡ್ ಅನುಮೋದನೆ ಆದ ನಂತರ ಬಾಕಿ 2/3 ಮೊತ್ತ +12.50% ತೆರಿಗೆ ಹಣ ಪಾವತಿಸಿ ಕಾರ್ಯಾದೇಶ ಪಡೆದು 30 ದಿನದೊಳಗೆ ಕಟ್ಟಡದ ಉಪಯುಕ್ತ ಮತ್ತು ಅನುಪಯುಕ್ತ ಸಾಮಾಗ್ರಿಗಳನ್ನು ಸ್ಥಳಾಂತರಿಸಿ ತೆರವುಗೊಳಿಸಿ ನಿವೇಶನವನ್ನು ಸಮತಟ್ಟು ಮಾಡತಕ್ಕದ್ದು. ತಪ್ಪಿದಲ್ಲಿ ಮುಂಗಡ ಹಣ ಹಾಗೂ 1/3 ಬಿಡ್ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
4. ಕಾರ್ಯಾದೇಶ ಪಡೆದ 30 ದಿನಗಳೊಳಗಾಗಿ ಕಾಮಗಾರಿಯನ್ನು ಎಲ್ಲಾ ವಿಧದಲ್ಲಿ ಪೂರ್ಣಗೊಳಿಸದಿದ್ದಲ್ಲಿ ಅವಧಿ ಮುಗಿದ ನಂತರ ದಿನ ಒಂದಕ್ಕೆ ರೂ. 200/– ರಂತೆ ದಂಡ ವಿಧಿಸಲಾಗುವುದು.
5. ಕಟ್ಟಡವನ್ನು ಬೇಸ್‌ಮೆಂಟ್‌ವರೆಗೆ ಮಾತ್ರ ಕೆಡವಿ, ಬೇಸ್‌ಮೆಂಟ್‌ಗೆ ಯಾವುದೇ ಧಕ್ಕೆಯಾಗದಂತೆ ಉಳಿಸತಕ್ಕದ್ದು.
6. ಟೆಂಡರುದಾರರು ಬೆಲೆಯನ್ನು ಅಂಕಿಯಲ್ಲಿ ಮತ್ತು ಅಕ್ಷರದಲ್ಲಿಯೂ ಸ್ಪಷ್ಟವಾಗಿ ಬರೆಯತಕ್ಕದ್ದು.
7. ಟೆಂಡರ್ ಪ್ರಸ್ತಾವನೆಗೆ ಮೇಲಾಧಿಕಾರಿಗಳಿಂದ ಅನುಮೋದನೆ ಆದ ನಂತರ ಸದರಿ ವಿಷಯವನ್ನು ಪತ್ರಮುಖೇನ ಪ್ರತ್ಯೇಕವಾಗಿ ತಿಳಿಸಲಾಗುವುದು ಹಾಗೂ ಪತ್ರ ತಲುಪಿದ 7 ದಿನಗಳೊಳಗಾಗಿ ಬಾಕಿ ಹಣವನ್ನು ಪಾವತಿಸಬೇಕು.
8. ಕೆಡವಿದ ನಂತರ ಕಟ್ಟಡಕ್ಕಾಗಿ ಬಳಸಿರುವ ಎಲ್ಲಾ ಸಾಮಗ್ರಿಗಳನ್ನು ನಿಯೋಜಿಸಿದ ಅಧಿಕಾರಿಗಳಿಗೆ ತೋರಿಸಿ ತೆಗೆದುಕೊಂಡು ಹೋಗತಕ್ಕದ್ದು.
9. ವಿವರಗಳಿಗೆ ಕಾರ್ಯಪಾಲಕ ಅಭಿಯಂತರು, ಲೋಕೋಪಯೋಗಿ ಇಲಾಖೆ ವಿಶೇಷ ವಿಭಾಗ, ಶಿವಮೊಗ್ಗ ಬಾಲರಾಜ್ ಅರಸು ರಸ್ತೆ ಶಿವಮೊಗ್ಗ ಇವರ ಕಛೇರಿಯಲ್ಲಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
10. ಟೆಂಡರ್ ಕಂ ಹರಾಜನ್ನು ಯಾವುದೇ ಕಾರಣ ನೀಡದೇ ಅಂಗೀಕರಿಸುವ ಹಾಗೂ ತಿರಸ್ಕರಿಸುವ ಹಕ್ಕನ್ನು ಕಾಯ್ದಿರಿಸಿಕೊಳ್ಳಲಾಗಿದೆ.

11. ಕಟ್ಟಡವನ್ನು ಕೆಡವುವಾಗ ನಿಧಿ, ಹಣ ವಗೈರೆ ದೊರೆತಲ್ಲಿ ಸದರಿ ವಿಷಯವನ್ನು ಅಧಿಕಾರಿಗಳ ಗಮನಕ್ಕೆ ಕೂಡಲೇ ತರುವುದು.
12. ಟೆಂಡರ್ ಕಂ ಹರಾಜಿನಲ್ಲಿ ಅಯಶಸ್ವಿಯಾದ ಬಿಡ್‌ದಾರರಿಗೆ/ಟೆಂಡರ್‌ದಾರರಿಗೆ ಮುಂಗಡ ಹಣವನ್ನು ಹಿಂದಿರುಗಿಸಲಾಗುವುದು. ಟೆಂಡರ್ ಫಾರಂ ಬೆಲೆಯನ್ನು ಹಿಂದಿರುಗಿಸಲಾಗುವುದಿಲ್ಲ.
13. ಅಂಗೀಕೃತ ಬಿಡ್‌ದಾರರು/ಟೆಂಡರ್‌ದಾರರು ಬಿಡ್ ಮೊತ್ತ / ಟೆಂಡರ್ ಮೊತ್ತದ ಮೇಲೆ ನಿಯಮದ ಪ್ರಕಾರ ವಿಧಿಸುವ ತೆರಿಗೆ (ವ್ಯಾಟ್) ಯನ್ನು ಭರಿಸಬೇಕು.
14. ಹರಾಜಿನಲ್ಲಿ ಉದ್ಭವವಾಗುವ ಯಾವುದೇ ವಿವಾದಗಳಿಗೆ ಅಧೀಕ್ಷಕ ಅಭಿಯಂತರರು, ಶಿವಮೊಗ್ಗ ಇವರ ತೀರ್ಮಾನವೇ ಅಂತಿಮವಾಗಿರುತ್ತದೆ. ಹಾಗೂ ಈ ತೀರ್ಪಿನ ಮೇಲೆ ಯಾವುದೇ ಮೇಲ್ಮನವಿಯನ್ನು ಮಾನ್ಯ ಮಾಡುವುದಿಲ್ಲ.
15. ಕಾರ್ಯಪಾಲಕ ಅಭಿಯಂತರು, ಲೋ.ಇ. ವಿಶೇಷ ವಿಭಾಗ, ಶಿವಮೊಗ್ಗ ಇವರು ಟೆಂಡರ್ ಕಂ ಬಹಿರಂಗ ಹರಾಜನ್ನು ಯಾವುದೇ ಕಾರಣ ನೀಡದೇ ಮುಂದೂಡುವ ಅಥವಾ ನಿಲ್ಲಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತಾರೆ.

ಕಾರ್ಯಪಾಲಕ ಅಭಿಯಂತರು,

ಪಿ.ಆರ್. 811 ಲೋ.ಬಂ ಮತ್ತು ಒ.ಜ.ಸಾ. ಇಲಾಖೆ, ವಿಶೇಷ ವಿಭಾಗ, ಶಿವಮೊಗ್ಗ

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು

ಪರಿಷ್ಕೃತ ಅಧಿಸೂಚನೆ

ಸಂ.ಎ7.ನಾಟಾ ಹರಾಜು:ಸಿಆರ್:1:2009–10, ದಿನಾಂಕ: 25ನೇ ಸೆಪ್ಟೆಂಬರ್ 2009

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ನಮೂದಿಸಿರುವ ನಾಟಾ ಸಂಗ್ರಹಾಲಯಗಳಲ್ಲಿ ಲಭ್ಯವಿರುವ ಬೀಟೆ, ಸಾಗುವಾನಿ, ಇತರೆ ಜಾತಿಯ ನಾಟಾ ಹಾಗೂ ಸೌದೆಗಳನ್ನು ಡಿಪೋಗಳ ಮುಂದೆ ಸೂಚಿಸಿದ ದಿನಾಂಕದಂದು ಬಹಿರಂಗ ಹರಾಜು ಮಾರಾಟದಲ್ಲಿ ವಿಕ್ರಯಿಸಲು ಸಾಮಾನ್ಯ ಅವಗಾಹನೆಗಾಗಿ ದಿನಾಂಕ: 10.09.2009ರಂದು ನೀಡಿದ ಅಧಿಸೂಚನೆಯನ್ನು ಭಾಗಶಃ ಬದಲಾಯಿಸಿ, ಪರಿಷ್ಕರಿಸಿ ಪ್ರಕಟಿಸಿದೆ.

ಕ್ರ ಸಂ.	ಡಿಪೋವಿನ ಹೆಸರು	ಹರಾಜು ದಿನಾಂಕ	ಹರಾಜಿಗಿಟ್ಟ ನಾಟಾ / ಸೌದೆಯ ಅಂದಾಜು ಪ್ರಮಾಣ (ಘ.ಮೀ. ಗಳಲ್ಲಿ)			
			ಬೀಟೆ ನಾಟಾ	ಸಾಗುವಾನಿ ನಾಟಾ	ಕಾಡು / ಮನ್ನಾ ಜಾತಿ ಮತ್ತು ಇತರೆ ಜಾತಿಯ ನಾಟಾ	ಸೌದೆ
1.	ಸರ್ಕಾರಿ ನಾಟಾ ಸಂಗ್ರಹಾಲಯ, ಕಡೂರು	13–10–2009	92.000	8.648	ತಾರಿ – 3.598 ಕಾಡು ಜಾತಿ – 9.452 ಅಕೇಶಿಯಾ – 2.641	ಬೀಟೆ – 71.507

ಉಪ ಅರಣ್ಯ ಸಂರಕ್ಷಣಾಧಿಕಾರಿ,
ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು.

OFFICE OF THE DEPUTY CONSERVATOR OF FORESTS, CHIKMAGALUR DIVISION, CHIKMAGALUR

REVISED NOTIFICATION

No.A7.Timber Auction/CR/1/2009-10, dated: 25th September 2009

It is hereby notified for the information of general public that Rosewood, Teak and other kind timber poles, firewood available in the following Government Timber Depots of Chikmagalur Division will be sold in public auction on the date shown against each depots. This is the Revised Notification dated : 10-09-2009.

Sl. No.	Name of the Depot	Date of Sale	Approximate quantity of timber, firewood, etc., exposed for Sale (in M3)			
			Rosewod (Beete)	Teak	Other kind	Firewood
1.	Govt. Timber Depot, Kadur	13-10-2009	92.000	8.648	Thaari – 3.598 Junglewood – 9.452 Acacia – 2.641	Rosewod (Beete) – 71.507

Deputy Conservator of Forests,
Chikmagalur Division, CHIKMAGALUR.

P.R. 813